ಸಂಪುಟ: 05 ಸಂಚಿಕೆ: 217 ಪುಟಗಳು: 08 ಮಂಗಳವಾರ 21 ಅಕ್ಟೋಬರ್ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ನಾಡಿನ ಸಮಸ್ತ ಜನತೆಗೆ ದೀಪಾವಳಿ ಹಬ್ಬದ ಹಾರ್ದಿಕ ಶುಭಾಶಯಗಳು

**ಸೂಚನೆ:** ಹಬ್ಬದ ನಿಮಿತ್ತ ಮಂಗಳವಾರ ಕಚೇರಿಗೆ ಬಿಡುವು ಇರುವ ಕಾರಣದಿಂದ ಬುಧವಾರ ಪತ್ರಿಕೆ ಮುದ್ರಣವಾಗುವುದಿಲ್ಲ.

-ಸಂಪಾದಕರು, ಉದಯವಾಹಿನಿ

# ನಮೋ ದೀಪಾವಳಿ ಪಾಕ್ ವಿರುದ್ಧ ವಾಗ್ದಾಳಿ



• ಉದಯವಾಹಿನಿ, ಪಣಜಿ

ಪ್ರಧಾನಿ ಮೋದಿ ಅವರು ಗೋವಾದಲ್ಲಿರುವ ಐಎನ್‌ಎಸ್ ವಿಕ್ರಾಂತ್ ಯುದ್ಧ ನೌಕೆಯಲ್ಲಿ ಸೈನಿಕರೊಂದಿಗೆ ದೀಪಾವಳಿ ಹಬ್ಬದ ಆಚರಿಸಿದ್ದಾರೆ. ಇದೇ ವೇಳೆ, ವಿಕ್ರಾಂತ್, ಬ್ರಹ್ಮಸ್ ಕ್ಷಿಪಣಿ, ಬಲಿಷ್ಠ ಮೆಚ್ಚುಗೆಯ ಮಾತುಗಳನ್ನಾಡಿದ್ದಾರೆ. ಸರ್ಕಾರವು ಭಾರತವನ್ನು ಜಗತ್ತಿನ ಅತಿದೊಡ್ಡ ರಕ್ಷಣಾ ಸಲಕರಣೆ ರಫ್ತು ದೇಶವನ್ನಾಗಿಸುವ ಗುರಿಯನ್ನು ಹೊಂದಿದೆ. 2014ರಿಂದ 40ಕ್ಕೂ ಅಧಿಕ ಯುದ್ಧ ನೌಕೆ ಹಾಗೂ ಜಲಾಂತರ್ಗಾಮಿ ನೌಕೆಗಳನ್ನು ನಿರ್ಮಿಸಲಾಗಿದೆ. ಸ್ವದೇಶಿ ನಿರ್ಮಿತ ಬ್ರಹ್ಮಸ್ ಕ್ಷಿಪಣಿ ಬಗ್ಗೆ ಜಗತ್ತಿನಾದ್ಯಂತ ಭಾರೀ ಬೇಡಿಕೆ ಬಂದಿದೆ ಎಂದು ಹೇಳಿದ್ದಾರೆ.

ಪ್ರತಿಯೊಬ್ಬರು ತಮ್ಮ ಕುಟುಂಬದೊಂದಿಗೆ ದೀಪಾವಳಿ ಹಬ್ಬವನ್ನು ಆಚರಿಸಲು ಬಯಸುತ್ತಾರೆ. ನೀವು ನನ್ನ ಕುಟುಂಬವಿದ್ದಂತೆ. ನಿಮ್ಮೊಂದಿಗೆ ಈ ಹಬ್ಬವನ್ನು ಆಚರಿಸುತ್ತಿರುವುದು ಅತೀವ ಸಂತಸ ತಂದಿದೆ ಎಂದು ಹೇಳಿದ ಮೋದಿ, ಭಾರತದ ಮೊದಲ ಸ್ಥಳೀಯ ವಿಮಾನವಾಹಕ ನೌಕೆಯಾದ ಐಎನ್ ಎಸ್ ವಿಕ್ರಾಂತ್ ಭಾರತದ ಸಶಸ್ತ್ರ ಪಡೆಗಳ ಸಾಮರ್ಥ್ಯವನ್ನು ಪ್ರತಿಬಿಂಬಿಸುತ್ತದೆ. ಇದು ಕೇವಲ ಯುದ್ಧನೌಕೆಯಲ್ಲ, 21ನೇ ಶತಮಾನದಲ್ಲಿ ಭಾರತದ ಕಠಿಣ ಪರಿಶ್ರಮ, ಪ್ರತಿಭೆ, ಸಾಮರ್ಥ್ಯ ಮತ್ತು ಬದ್ಧತೆಗೆ ಸಾಕ್ಷಿಯಾಗಿದೆ ಎಂದಿದ್ದಾರೆ.

ಕೆಲವೇ ತಿಂಗಳ ಹಿಂದೆ, ವಿಕ್ರಾಂತ್ ಹೇಗೆ ಪಾಕಿಸ್ತಾನವನ್ನು ನಿದ್ದೆಗೆಡಿಸುವಂತೆ ಮಾಡಿತ್ತು ಎಂದು ನಾವು ನೋಡಿದ್ದೇವೆ. ಭಾರತದ ನೌಕಾಪಡೆ ಹುಟ್ಟುಹಾಕಿದ ಭಯ, ವಾಯುಪಡೆಯು ಪ್ರದರ್ಶಿಸಿದ ಅಸಾಧಾರಣ ಕೌಶಲ್ಯ' ಮತ್ತು ಭೂಸೇನೆಯ ಶೌರ್ಯ, ಮೂರೂ ಸೇನಾಪಡೆಗಳ ಅಸಾಧಾರಣ ಸಮನ್ವಯ ಆಪರೇಷನ್ ಸಿಂಧೂರ ಸಮಯದಲ್ಲಿ ಕೆಲವೇ ದಿನಗಳಲ್ಲಿ ಪಾಕಿಸ್ತಾನವನ್ನು ಮಂಡಿಯೂರುವಂತೆ ಮಾಡಿತ್ತು ಎಂದು ಸ್ಮರಿಸಿದರು. ಆಪರೇಷನ್ ಸಿಂಧೂರ್ ಸಮಯದಲ್ಲಿ ಬ್ರಹ್ಮಸ್ ಮತ್ತು ಆಕಾಶ್‌ನಂತಹ ಕ್ಷಿಪಣಿಗಳು ತಮ್ಮ ಸಾಮರ್ಥ್ಯವನ್ನು ಸಾಬೀತುಪಡಿಸಿವೆ.

ಇದರಿಂದಾಗಿ ಪ್ರಪಂಚದ ಹಲವು ದೇಶಗಳು ಈಗ ಈ ಕ್ಷಿಪಣಿಗಳನ್ನು ಖರೀದಿಸಲು ಆಸಕ್ತಿ ಹೊಂದಿವೆ ಎಂದರು. ನಾನು ಮಿಲಿಟರಿ ಉಪಕರಣಗಳ ಗಮನಿಸುತ್ತಿದ್ದೆ. ಈ ದೊಡ್ಡ ಹಡಗುಗಳು, ಗಾಳಿಗಿಂತ ವೇಗವಾಗಿ ಚಲಿಸುವ ವಿಮಾನಗಳು, ಜಲಾಂತರ್ಗಾಮಿ ನೌಕೆಗಳು ಪ್ರಭಾವಶಾಲಿಯಾಗಿವೆ, ಆದರೆ ಅವುಗಳನ್ನು ನಿಜವಾಗಿಯೂ ಪ್ರಭಾವಶಾಲಿಯಾಗಿಸಿದ್ದು ನಮ್ಮ ಯೋಧರ ಧೈರ್ಯ ಎಂದಿದ್ದಾರೆ.

**1** ಭಾರತೀಯ ನೌಕಾಸೇನೆ ಸಿಬ್ಬಂದಿ ಜೊತೆ ಪ್ರಧಾನಿ ಮೋದಿ ದೀಪಾವಳಿ

**2** ಐಎನ್‌ಎಸ್ ವಿಕ್ರಾಂತ್‌ನಲ್ಲಿ ನೌಕಾಸೇನೆ ಸಿಬ್ಬಂದಿ ಜೊತೆ ಮೋದಿ ಬಡಾ ಖಾನಾ

**3** ಭಾರತೀಯ ರಕ್ಷಣಾ ಪಡೆಗಳಲ್ಲಿ ಆಚರಿಸುವ ಬಡಾ ಖಾನಾ ಎಂದರೇನು..? ಏನಿದರ ವಿಶೇಷತೆ..?

### ಬದಲಾದ ಆಚರಣೆ

ಕಾಲಾನಂತರದಲ್ಲಿ ಅಂದರೆ ಭಾರತಕ್ಕೆ ಸ್ವಾತಂತ್ರ್ಯ ಸಿಕ್ಕ ಬಳಿಕ, ಭಾರತೀಯ ಸಶಸ್ತ್ರ ಪಡೆಗಳು ಬಡಾ ಖಾನಾ ಸಂಪ್ರದಾಯದಲ್ಲಿ ಹಲವು ಬದಲಾವಣೆಗಳನ್ನು ಜಾರಿಗೆ ತಂದಿತು. ಬಡಾ ಖಾನಾ ಆಚರಣೆಯು ಹೆಚ್ಚು ಭಾರತೀಯಕರಣಗೊಂಡಿದ್ದು, ಇದನ್ನು ರೆಜಿಮೆಂಟಲ್ ಹೆಮ್ಮೆ ಮತ್ತು ರಾಷ್ಟ್ರೀಯ ವೈವಿಧ್ಯತೆ ಎರಡನ್ನೂ ಪ್ರತಿಬಿಂಬಿಸುವ ಆಚರಣೆಯಾಗಿ ಪರಿವರ್ತಿಸಲಾಗಿದೆ. ಭಾರತೀಯ ಸೇನೆತ ಪ್ರತಿಯೊಂದು ಘಟಕ ಅಥವಾ ರೆಜಿಮೆಂಟ್, ತನ್ನದೇ ಆದ ಬಡಾ ಖಾನಾವನ್ನು ವಿಭಿನ್ನವಾಗಿ ಆಯೋಜಿಸುತ್ತದೆ. ಆಗಾಗ್ಗೆ ಭಾರತದ ಶ್ರೀಮಂತ ಪ್ರಾದೇಶಿಕ ಪಾಕ್ ಪದ್ಧತಿಗಳನ್ನು ಪ್ರತಿನಿಧಿಸುವ ಬಡಾ ಖಾನಾವನ್ನು ಆಯೋಜಿಸಲಾಗುತ್ತದೆ. ಸಿದ್ಧತೆಗಳು ವ್ಯಾಪಕ ಸಮನ್ವಯವನ್ನು ಒಳಗೊಂಡಿರುತ್ತವೆ. ಭಾರತದ ವಿವಿಧ ರಾಜ್ಯಗಳ ಜನಪ್ರಿಯ ಸಾಂಪ್ರದಾಯಿಕ ಭಕ್ಷ್ಯಗಳು ಮತ್ತು ವಿವಿಧ ರೀತಿಯ ಸಿಹಿ ತಿಂಡಿಗಳು ಬಡಾ ಖಾನಾದ ಮೆನುವಿನ ಭಾಗವಾಗಿರುತ್ತದೆ.ಬಡಾ ಖಾನಾ ಆಯೋಜನೆ ಸಂದರ್ಭದಲ್ಲಿ ಭಾರತೀಯ ಸಶಸ್ತ್ರ ಪಡೆಗಳ ಶ್ರೇಣಿ ವ್ಯವಸ್ಥೆಯನ್ನು ಬದಿಗಿಡಲಾಗುತ್ತದೆ. ಹಿರಿಯ ಅಧಿಕಾರಿಗಳು ಸಾಮಾನ್ಯ ಯೋಧ ಪಕ್ಕಪಕ್ಕದಲ್ಲಿ ಕುಳಿತು ಊಟ ಮಾಡುತ್ತಾರೆ.

### ಪಾಪಿ'ಸ್ತಾನಕ್ಕೆ ದುಃಸ್ವಪ್ನವಾಗಿರುವ ಬ್ರಹ್ಮೋಸ್

ಭಾರತ ಮತ್ತು ರಷ್ಯಾ ಜಂಟಿಯಾಗಿ ಅಭಿವೃದ್ಧಿಪಡಿಸಿರುವ ಬ್ರಹೋಸ್ ಸೂಪರ್ ಸಾನಿಕ್ ಕ್ಷಿಪಣಿ ಪಾಕಿಸ್ತಾನದ ನಿದ್ದೆಗೆಡಿಸಿದೆ. ಈಗಾಗಲೇ ಆಪರೇಷನ್ ಸಿಂಧೂರ್‌ನಲ್ಲಿ ಬಳಸಲಾಗಿದ್ದ ಬ್ರಹೋಸ್ ಕ್ಷಿಪಣಿ ಇಡೀ ವಿಶ್ವವೇ ಭಾರತದ ಸೇನಾ ಬತ್ತಳಿಕೆಯ ಹೊಸ ಅಸ್ತ್ರದ ಬಗ್ಗೆ ಚಕಿತಗೊಂಡಿತ್ತು. ಕಡಿಮೆ ಅಂತರದ ನಿರ್ದಿಷ್ಟ ಗುರಿಯನ್ನು ತಲುಪಬಹುದಾದ ಬ್ರಹೋಸ್ ಸೂಪರ್ ಸಾನಿಕ್ ಕ್ಷಿಪಣಿ ಅಭಿವೃದ್ಧಿಗೆ (450 ಕಿ.ಮೀ.) ಭಾರತದ ವಿಜ್ಞಾನಿಗಳು ಸತತ ಪ್ರಯತ್ನ ನಡೆಸಿ ಯಶಸ್ವಿಯಾಗಿದ್ದರು.ಈಗ 800 ಕಿಲೋಮೀಟರ್ ದೂರ ಕ್ರಮಿಸಬಹುದಾದ ಕ್ಷಿಪಣಿ ಪರೀಕ್ಷೆಯನ್ನು ಆರಂಭಿಸಿದೆ. ಎರಡೇ ವರ್ಷದಲ್ಲಿ ಹೊಸ ಆವೃತ್ತಿಯ ಬ್ರಹೋಸ್ ಕ್ಷೀಪಣಿಗಳ ಸರಣಿಯನ್ನು ಅಭಿವೃದ್ಧಿಪಡಿಗೊಳ್ಳಲಿದೆ ಎಂದು ಹೇಳಲಾಗುತ್ತಿದೆ. ವಾಯುಪಡೆಯಲ್ಲಿ ಬಳಸಬಹುದಾದ 200 ಕಿಮೀ. ರೇಂಜಿನ ಅಸ್ತ್ರಕ್ಷಿಪಣಿಯನ್ನು ಕೂಡ ಮುಂದಿನ 2026-27ರ ನಡುವೆ ಸಿದ್ದಗೊಳ್ಳಲಿದೆ ಎಂದು ಮೂಲಗಳು ತಿಳಿಸಿವೆ. ಮುಂದಿನ 2027ರ ವೇಳೆಗ ಬ್ರಹೋಸ್ ಸೂಪರ್ ಸಾನಿಕ್ ಸರಣಿ ಕ್ಷಿಪಣಿಗಳು ಸಿದ್ದಗೊಳ್ಳಲಿದ್ದು, ನೆರೆಯ ಪಾಕಿಸ್ತಾನಕ್ಕೆ ನಡುಕ ಹುಟ್ಟಿಸಿದೆ.

### ಸಿಂಧೂರಕ್ಕೆ ಪಾಕ್ ತತ್ತರ

### ರಕ್ಷಣಾ ರಫ್ತಿನಲ್ಲಿ ಅಗ್ರಸ್ಥಾನಕ್ಕೇರಲು ಮೋದಿ ಸಂಕಲ್ಪ

**ಬೆಳಕಿನ ಹಬ್ಬವು ಜನರ ಜೀವನವನ್ನು ಸಾಮರಸ್ಯ, ಸಂತೋಷ ಮತ್ತು ಸಮೃದ್ಧಿಯಿಂದ ಬೆಳಗಲಿ. ಈ ಕುರಿತು ಎಕ್ಸ್ ಖಾತೆಯಲ್ಲಿ ಶುಭಕೋರಿರುವ ಅವರು, ದೇಶದ ಜನರಿಗೆ ಹಬ್ಬದ ಸಮಯದಲ್ಲಿ ಸ್ವದೇಶಿ ಉತ್ಪನ್ನಗಳನ್ನು ಖರೀದಿಸುವಂತೆ ಕರೆ ನೀಡಿ, ದೇಶಿಯ ಸರಕುಗಳ ಖರೀದಿಯನ್ನು ಪ್ರೋತ್ಸಾಹಿಸಿ, ಸ್ಥಳೀಯ ಕುಶಲಕರ್ಮಿಗಳನ್ನು ಬೆಂಬಲಿಸಿದರು. 140 ಕೋಟಿ ಭಾರತೀಯರ ಕಠಿಣ ಪರಿಶ್ರಮ, ಸೃಜನಶೀಲತೆ ಮತ್ತು ನಾವೀನ್ಯತೆಯನ್ನು ಆಚರಿಸುವ ಮೂಲಕ ಈ ಹಬ್ಬವನ್ನು ಸಂಭ್ರಮಿಸೋಣ.**

-ನರೇಂದ್ರ ಮೋದಿ, ಪ್ರಧಾನಿ

ಬ್ರಹ್ಮಸ್ ಕ್ಷಿಪಣಿಗೆ ಭಾರೀ ಬೇಡಿಕೆ | ಎಲ್ಲಾ ಶಕ್ತಿಗಿಂತ ಧೈರ್ಯಶಾಲಿ ಯೋಧರೇ ಮಿಗಿಲು! | ಐಎನ್‌ಎಸ್ ವಿಕ್ರಾಂತ್‌ನಲ್ಲಿ ಪ್ರಧಾನಿ

### ನಕ್ಸಲ್ ಮುಕ್ತ ಭಾರತ

ಸೇನಾಪಡೆಗಳ ಶೌರ್ಯ ಮತ್ತು ದೃಢಸಂಕಲ್ಪದಿಂದ ದೇಶವನ್ನು ನಕ್ಸಲ್ ಮುಕ್ತಗೊಳಿಸಲು ದಾಪುಗಾಲು ಇಟ್ಟಿದ್ದೇವೆ. ನಕ್ಸಲ್ ಹಿಂಸಾಚಾರವನ್ನು ನಿರ್ಮೂಲನೆ ಮಾಡುವಲ್ಲಿ ಮಹತ್ವದ ಮೈಲಿಗಲ್ಲನ್ನು ದೇಶ ಸಾಧಿಸಿದೆ ಎಂದು ಪ್ರಧಾನಿ ಮೋದಿ ಹೇಳಿದರು.ದೇಶದಲ್ಲಿ 125 ಜಿಲ್ಲೆಗಳು ನಕ್ಸಲರ ಕಪಿಮುಷ್ಠಿಯಲ್ಲಿದ್ದವು. ನಕ್ಸಲ್ ನಿಗ್ರಹ ಕಾರ್ಯಾಚರಣೆಯಿಂದ ಈ ಸಂಖ್ಯೆ ಈಗ 11 ಜಿಲ್ಲೆಗಳಿಗೆ ಇಳಿದಿದೆ. ಶೇ. 90 ರಷ್ಟು ಯಶಸ್ಸು ಸಾಧಿಸಲಾಗಿದೆ. ಮುಂದಿನ ದಿನಗಳಲ್ಲಿ ನಕ್ಸಲ್ ಹಿಂಸಾಚಾರವನ್ನು ಸಂಪೂರ್ಣ ನಿರ್ಮೂಲನೆ ಮಾಡುವ ವಿಶ್ವಾಸ ತಮ್ಮದಾಗಿದೆ ಎಂದರು.

### ಸ್ವದೇಶಿ ಉತ್ಪಾದನೆಗೆ ಒತ್ತು

ಕಳೆದ ದಶಕದಲ್ಲಿ, ಭಾರತದ ರಕ್ಷಣಾ ವಲಯ ಸ್ವದೇಶಿ ನಿರ್ಮಾಣಕ್ಕೆ ಹೆಚ್ಚಿನ ಒತ್ತು ನೀಡಿದೆ. ಕಳೆದ 11 ವರ್ಷಗಳಲ್ಲಿ ಉತ್ಪಾದನೆ ಮೂರು ಪಟ್ಟು ಹೆಚ್ಚಾಗಿದೆ, ಸರಿಸುಮಾರು ಪ್ರತಿ 40 ದಿನಗಳಿಗೊಮ್ಮೆ ನೌಕಾಪಡೆಗೆ ಹೊಸ ಯುದ್ಧನೌಕೆ ಅಥವಾ ಜಲಾಂತರ್ಗಾಮಿ ಸೇರಿವೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ. ಬ್ರಹ್ಮೋಸ್ ಕ್ಷಿಪಣಿಗೆ ಜಾಗತಿಕ ಬೇಡಿಕೆ ಹೆಚ್ಚಿಸಿದೆ, ಭಾರತವು ಶೀಘ್ರದಲ್ಲೇ ವಿಶ್ವದ ಅಗ್ರ ರಕ್ಷಣಾ ರಫ್ತುದಾರರಲ್ಲಿ ಸ್ಥಾನ ಪಡೆಯಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ರೂಪಾಂತರದಲ್ಲಿ ನಿರ್ಣಾಯಕ ಪಾತ್ರ ವಹಿಸಿದ್ದಕ್ಕಾಗಿ ಅವರು ಸ್ಟಾರ್ಟ್‌ಅಪ್‌ಗಳು ಮತ್ತು ಸ್ಥಳೀಯ ರಕ್ಷಣಾ ಘಟಕಗಳನ್ನು ಶ್ಲಾಘಿಸಿದ ಅವರು ಹೊಸ ಪೀಳಿಗೆಯ ಭರವಸೆಯನ್ನು ದೇಶದ ಶಕ್ತಿ ಎಂದಿದ್ದಾರೆ.

## ಬಯೋಗ್ಯಾಸ್ ಘಟಕಕ್ಕೆ ಡಿ.ಕೆ. ಶಿವಕುಮಾರ್ ಭೇಟಿ

• ಉದಯವಾಹಿನಿ, ಬೆಂಗಳೂರು

ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹಾಗೂ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಎಸ್.ಇ. ಸುಧೀಂದ್ರ ಅವರು ಕೋರಮಂಗಲದ ಮುನಿಸಿಪಲ್ ಸಾಲಿಡ್ ವೇಸ್ಟ್, ಹಸಿರು, ಆಹಾರ ಪದಾರ್ಥಗಳ ಸಂಸ್ಕರಣೆಯಿಂದ ಕಂಪ್ರೆಸ್ ಬಯೋಗ್ಯಾಸ್ ಉತ್ಪಾದನಾ ಘಟಕಕ್ಕೆ ಭೇಟಿ ನೀಡಿದರು. 'ಘಟಕದಲ್ಲಿ ತ್ಯಾಜ್ಯವನ್ನು ಸಂಗ್ರಹಿಸಿ, ವಿಂಗಡಿಸಿ, ಶೇಖರಣೆ ಮಾಡಿ ಸಂಸ್ಕರಿಸ ಲಾಗುತ್ತದೆ. ಘನ, ದ್ರವ, ಆಹಾರ, ಹಸಿರು ತ್ಯಾಜ್ಯಗಳನ್ನು ವಿಂಗಡಿಸಿ. ನಿಗದಿತ ಸ್ಥಳಗಳಲ್ಲಿ ಶೇಖರಣೆ ಮಾಡಲಾಗುತ್ತದೆ. ಘಟಕವನ್ನು ಜಿಬಿಎ ಹಾಗೂ ಕಾರ್ಬನ್ ಮಾಸ್ಟರ್ ಸಹಯೋಗದಲ್ಲಿ ನಿರ್ವಹಣೆ ಮಾಡಲಾಗುತ್ತದೆ' ಎಂದು ಸುಧೀಂದ್ರ ಅವರು ಉಪ ಮುಖ್ಯಮಂತ್ರಿಗೆ ತಿಳಿಸಿದರು.

## ದಲಿತ ಸಾಹಿತಿಯೆಂಬ 'ಕ್ರೆಡಿಟ್' ಅಗತ್ಯವಿಲ್ಲ

• ಉದಯವಾಹಿನಿ, ಬೆಂಗಳೂರು

'ಸಾಹಿತ್ಯ ಕ್ಷೇತ್ರದಲ್ಲಿ ದಲಿತ ಎಂಬ 'ಕ್ರೆಡಿಟ್' ಅಗತ್ಯವಿಲ್ಲ. ಸಾಹಿತಿ ಎನ್ನುವುದು ಹೆಮ್ಮೆಯ ವಿಚಾರವಾಗಬೇಕೆ ಹೊರತು, ದಲಿತ ಸಾಹಿತಿ ಎನ್ನುವುದು ಮುಖ್ಯವಾಗಬಾರದು' ಎಂದು ಕವಿ ಎಲ್. ಹನುಮಂತಯ್ಯ ಹೇಳಿದರು.

ಶೂದ್ರ ಪ್ರತಿಷ್ಠಾನ ಮತ್ತು ಅನ್ನಪೂರ್ಣ ಪಬ್ಲಿಷಿಂಗ್ ಹೌಸ್ ಜಂಟಿಯಾಗಿ ನಗರದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಎಚ್. ಲಕ್ಷ್ಮೀನಾರಾಯಣಸ್ವಾಮಿ ಅವರ 'ಒಳಮೀಸಲಾತಿ ಮತ್ತು ಇತರೆ ಲೇಖನಗಳು', 'ತೊಗಲ ಚೀಲದ ಕರ್ಣ' ಹಾಗೂ 'ನೂಲ ಏಣಿಯ ನಡಿಗೆ' ಪುಸ್ತಕಗಳನ್ನು ಜನಾರ್ಪಣೆ ಮಾಡಿ, ಮಾತನಾಡಿದರು.

'ಸಾಹಿತ್ಯ ಕ್ಷೇತ್ರದಲ್ಲಿ ದಲಿತ ಎಂದು ಗುರುತಿಸಿಕೊಳ್ಳುವುದು ಹೆಮ್ಮೆಯಾಗಬಾರದು. ಆ ಮೀಸಲಾತಿಯನ್ನು ನಾವು ಕೇಳಿದವರಲ್ಲ, ಅಗತ್ಯವೂ ಇಲ್ಲ. ಮೊದಲು ನಾವು ಸಾಹಿತಿ ಅಥವಾ ಕವಿಯಾದರೆ, ಅಮೇಲೆ ಯಾವ ಸಾಹಿತಿ, ಕವಿ ಎನ್ನುವ ಪ್ರಶ್ನೆ ಬರಲಿದೆ. ಕವಿಯೇ ಅಲ್ಲದಿದ್ದರೂ ದಲಿತನಾದ್ದರಿಂದ ಮೀಸಲಾತಿ ನೀಡಿ ಎನ್ನುವುದು ಯೋಗ್ಯವಲ್ಲ' ಎಂದು ಅಭಿಪ್ರಾಯಪಟ್ಟರು. 'ದಲಿತರಲ್ಲದವರೂ ದಲಿತ ಬದುಕಿನ ಚಿತ್ರಣವನ್ನು ಅತ್ಯಂತ ಪರಿಣಾಮಕಾರಿಯಾಗಿ ಬರೆದಿದ್ದಾರೆ.

## ವಿದ್ಯಾರ್ಥಿಗಳ ಮೂಲ ದಾಖಲೆ ನೀಡಲು ಸಮಿತಿ ಆದೇಶ

• ಉದಯವಾಹಿನಿ, ಬೆಂಗಳೂರು

ವೈದ್ಯಕೀಯ, ಎಂಜನಿಯರಿಂಗ್ ಸೇರಿದಂತೆ ವಿವಿಧ ವೃತ್ತಿ ಶಿಕ್ಷಣ ಕೋರ್ಸ್‌ಗಳಿಗೆ ಪ್ರವೇಶ ಪಡೆದು, ಅನಿವಾರ್ಯ ಕಾರಣಗಳಿಂದ ಮಧ್ಯಂತರದಲ್ಲೇ ಕಾಲೇಜು ತೊರೆಯುವ ವಿದ್ಯಾರ್ಥಿಗಳಿಗೆ ಅಂಕಪಟ್ಟಿ ಸೇರಿದಂತೆ ಮೂಲ ದಾಖಲೆಗಳನ್ನು ನೀಡುವಂತೆ ಶುಲ್ಕ ನಿಯಂತ್ರಣ ಸಮಿತಿ ಆದೇಶಿಸಿದೆ.

ದೂರುಗಳ ವಿಚಾರಣೆ ನಡೆಸಿದ ಶುಲ್ಕ ನಿಯಂತ್ರಣ ಸಮಿತಿಯ ಅಧ್ಯಕ್ಷರೂ ಆಗಿರುವ ನ್ಯಾಯಮೂರ್ತಿ ಬಿ. ಶ್ರೀನಿವಾಸ ಗೌಡ ಅವರು, ವಿದ್ಯಾರ್ಥಿಗಳ ಮೂಲ ದಾಖಲೆಗಳನ್ನು ವಾಪಸ್ ನೀಡುವಂತೆ ಸೂಚಿಸಿದ್ದಾರೆ. ದಾಖಲೆಗಳನ್ನು ಹಿಂದಿರುಗಿಸಲು ಕೆಎಲ್‌ಇ ಸಂಸ್ಥೆ ರೂ.4 ಲಕ್ಷ ನೀಡುವಂತೆ ಒತ್ತಾಯಿಸುತ್ತಿದೆ ಎಂದು ಸ್ನಾತಕೋತ್ತರ ದಂತ ವೈದ್ಯಕೀಯ (ಎಂಡಿಎಸ್) ವಿದ್ಯಾರ್ಥಿಯೊಬ್ಬರು ದೂರು ನೀಡಿದ್ದರು.

ದೂರಿನ ವಿಚಾರಣೆಗೆ ಹಾಜರಾದ ಸಂಸ್ಥೆಯ ಪ್ರತಿನಿಧಿ, 'ವಿದ್ಯಾರ್ಥಿಗಳು ಮಧ್ಯದಲ್ಲೇ ಕೋರ್ಸ್ ತೊರೆದರೆ ಸೀಟು ಖಾಲಿ ಉಳಿಯುತ್ತದೆ.


## ಆರ್‌ಎಸ್‌ಎಸ್‌ಗೆ ಅಂಕುಶ: ಅಂದಿನ ಬಿಜೆಪಿ ಸರ್ಕಾರದ ಸುತ್ತೋಲೆ?

• ಉದಯವಾಹಿನಿ, ಬೆಂಗಳೂರು

ಜಾತಿ ಸಮೀಕ್ಷೆಗೆ ಮಾಹಿತಿ ನೀಡದವರಿಗೆ ಕಾಂಗ್ರೆಸ್ ಸರ್ಕಾರ ಧಮಕಿ ಹಾಕುತ್ತಿದೆ. ಇದು ರೌಡಿಸಂ ಮಾಡುವ ಸರ್ಕಾರ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು. ಕಾಂಗ್ರೆಸ್ ಸರ್ಕಾರ ನಡೆಸುತ್ತಿರುವ ಜಾತಿ ಸಮೀಕ್ಷೆಯಲ್ಲಿ ಎಲ್ಲರೂ ಭಾಗವಹಿಸಿಲ್ಲ. ಇನ್ಫೋಸಿಸ್ ಸುಧಾಮೂರ್ತಿ ಜಾತಿ ಸಮೀಕ್ಷೆಗೆ ಮಾಹಿತಿ ನೀಡಿಲ್ಲವೆಂದಾಕ್ಷಣ ಸಿಎಂ ಸಿದ್ದರಾಮಯ್ಯ ಹಾಗೂ ಸಚಿವ ಶಿವರಾಜ್ ತಂಗಡಗಿ ಧಮಕಿ ಹಾಕಿದ್ದಾರೆ ಎಂದು ಅವರು ಆಪಾದಿಸಿದರು.

ಸರ್ಕಾರವೇ ಇಲ್ಲಿ ರೌಡಿಸಂ ಮಾಡುತ್ತಿದೆ.

**ಪ್ರಶ್ನೆ ಕೇಳುವ ಅಧಿಕಾರವೂ ಇದೆ**



ಮಾಹಿತಿ ನೀಡುವುದು ಜನರ ಇಚ್ಛೆ ಎಂದು ಹೈಕೋರ್ಟ್ ಹೇಳಿದ್ದರೂ ಸರ್ಕಾರ ಅದನ್ನು ಉಲ್ಲಂಘಿಸಿ ಗೂಂಡಾಗಿರಿ ತೋರುತ್ತಿದೆ. ಜಾತಿ ಸಮೀಕ್ಷೆ ಮಾಡುವುದೇ ಅಕ್ರಮವಾಗಿದ್ದು, ಈ ರೀತಿ ಬೆದರಿಕೆ ಹಾಕುವುದು ಮತ್ತೊಂದು ಅಕ್ರಮವಾಗಿದೆ ಎಂದು ಆರ್. ಅಶೋಕ ಹೇಳಿದರು.

**ಬಿಜೆಪಿ ಸರ್ಕಾರ ಆದೇಶ ಮಾಡಿಲ್ಲ :** ಶಾಲಾ ಆವರಣದಲ್ಲಿ ಹೊರಗಿನ ಸಂಘಟನೆಗಳಿಂದ ಕಾರ್ಯಕ್ರಮ ಮಾಡುವುದನ್ನು ನಿಷೇಧಿಸುವ ಬಗ್ಗೆ ಆಗಿನ ಸಿಎಂ ಜಗದೀಶ್ ಶೆಟ್ಟರ್ ಆದೇಶ ಮಾಡಿರುವುದಕ್ಕೆ ಸಾಕ್ಷಿ ಇಲ್ಲ. ಇದು ಅಂದಿನ ಬಿಜೆಪಿ ಸರ್ಕಾರದ ಸಚಿವ ಸಂಪುಟದಲ್ಲಿ ಚರ್ಚೆಯಾಗಿರಲಿಲ್ಲ ಎಂದು ಆರ್.ಅಶೋಕ ಮಾಹಿತಿಯನ್ನು ನೀಡಿದರು.

ಚಾಮರಾಜಪೇಟೆಯ ಒಂದು ಶಾಲೆಗೆ ಸಂಬಂಧಿಸಿದಂತೆ ಒಂದು ಆದೇಶವಾಗಿದೆ. ಇದನ್ನು ಎಲ್ಲಕ್ಕೂ ಅನ್ವಯಿಸಿ ಈಗಿನ ಸರ್ಕಾರ ಆದೇಶ ಮಾಡಿದೆ. ಜಗದೀಶ್ ಶೆಟ್ಟರ್ ಅಥವಾ ಅಂದಿನ ಸಚಿವರ ಸಹಿ ಇರುವ ಆದೇಶವಿದ್ದರೆ ಅದನ್ನು ಬಹಿರಂಗ ಮಾಡಲಿ ಎಂದು, ಆರ್.ಅಶೋಕ ಹೇಳಿದರು.

# ಬಡವರ ಮಕ್ಕಳನ್ನು ಸಾಯಿಸೋ ಕೆಲಸ ಮಾಡಬೇಡಿ!

• ದ್ವೇಷ ಬೇಡ, ನಾವೆಲ್ಲಾ ಮನುಷ್ಯರೇ: ಸಿದ್ದರಾಮಯ್ಯ ಕರೆ • ಅಶೋಕ ಜನ-ಮನ 2025 ಕಾರ್ಯಕ್ರಮವನ್ನು ಉದ್ಘಾಟನೆ

• ಉದಯವಾಹಿನಿ ಬೆಂಗಳೂರು

ಸಮ ಸಮಾಜ ನಿರ್ಮಾಣವಾಗಲು ಉಳ್ಳವರು ಇಲ್ಲದವರಿಗೆ ಕೊಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ರೈ ಎಸ್ಟೇಟ್ ಎಜುಕೇಷನಲ್ ಮತ್ತು ಚಾರಿಟೇಬಲ್ ಟ್ರಸ್ಟ್ ಪುತ್ತೂರು ಇವರ ವತಿಯಿಂದ ತಾಲೂಕು ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ ಅಶೋಕ ಜನ-ಮನ 2025 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಅಶೋಕ್ ಅವರು ಕಾಂಗ್ರೆಸ್ ಶಾಸಕರಾಗಿ ಕೆಲಸ ಮಾಡುತ್ತಿದ್ದಾರೆ. ಟ್ರಸ್ಟ್ ವತಿಯಿಂದ ಪ್ರತಿ ವರ್ಷ ವಸ್ತ್ರದಾನ ಮಾಡುವ ಕಾರ್ಯವನ್ನು 13 ವರ್ಷಗಳಿಂದ ಮಾಡ್ತಾ ಬರುತ್ತಿದ್ದಾರೆ. ಒಂದು ಲಕ್ಷ ಜನರಿಗೆ ವಸ್ತ್ರದಾನ ಮಾಡುತ್ತಿದ್ದಾರೆ. ಇತರರಿಗೆ ಅವರು ಸ್ಫೂರ್ತಿಯಾಗಲಿ ಎಂದರು. ಸಮಾಜದಲ್ಲಿನ ದುರ್ಬಲರಿಗೆ ತಮ್ಮ ಗಳಿಕೆಯ ಒಂದು ಭಾಗವನ್ನು ನೀಡುವುದು ಒಳ್ಳೆಯ ಕೆಲಸ ಎಂದರು. ಸಮ ಸಮಾಜ ನಿರ್ಮಾಣ ಸಂವಿಧಾನದ ಉದ್ದೇಶ. ಕಾಯಕ ಮತ್ತು ದಾಸೋಹ ತತ್ವವನ್ನು ಬಸವಣ್ಣ ನಮಗೆ ನೀಡಿದ್ದಾರೆ ಎಂದರು.

**ಸಹಿಷ್ಣುತೆ, ಸಹಬಾಳ್ವೆ ಅಗತ್ಯ:** ನಮ್ಮ ನಾಡು ವೈವಿಧ್ಯತೆಯಲ್ಲಿ ಏಕತೆಯನ್ನು ಕಾಣಬೇಕು. ಸರ್ವಜನಾಂಗದ ಶಾಂತಿಯ ತೋಟವಾಗಬೇಕು. ಪರಸ್ಪರ ಕಚ್ಚಾಡುವ, ಅಸಮಾನತೆವುಳ್ಳ ಸಮಾಜ ನಿರ್ಮಾಣವಾಗಬಾರದು. ಇತರೆ ಧರ್ಮಗಳ ಬಗ್ಗೆ ಸಹಿಷ್ಣುತೆ ಅಗತ್ಯ. ಸಹಬಾಳ್ವೆ ಇರಬೇಕು.



ಇದನ್ನು ಎಲ್ಲರೂ ಪಾಲಿಸಿದಾಗ ಸಂವಿಧಾನದ ಧ್ಯೇಯೋದ್ದೇಶಗಳನ್ನು ಪಾಲಿಸಿದಂತಾಗುತ್ತದೆ ಎಂದರು.

**ತಲಾ ಆದಾಯದಲ್ಲಿ ಕರ್ನಾಟಕ ಮೊದಲನೇ ಸ್ಥಾನದಲ್ಲಿದೆ:** ರಾಜ್ಯ ಹಸಿವು ಮುಕ್ತವಾಗಬೇಕೆಂದು ಅನ್ನಭಾಗ್ಯದ ಯೋಜನೆಯನ್ನು ಜಾರಿಗೆ ತರಲಾಗಿದೆ. ಶಕ್ತಿ ಯೋಜನೆ ಜಾರಿಯಾದ ನಂತರ ತಲಾ ಆದಾಯದಲ್ಲಿ ಕರ್ನಾಟಕ ಮೊದಲನೇ ಸ್ಥಾನದಲ್ಲಿದೆ. ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ಸರ್ಕಾರ ದಿವಾಳಿಯಾಗಿದೆ ಎಂದು ಟೀಕಿಸುತ್ತಾರೆ. ಸರ್ಕಾರದ ಬಳಿ ಹಣವಿಲ್ಲದಿದ್ದರೆ ಕಾಂಗ್ರೆಸ್ ಸರ್ಕಾರ ಪುತ್ತೂರು ವಿಧಾನಸಭಾ ಕ್ಷೇತ್ರಕ್ಕೆ 2500 ಕೋಟಿ ರೂ. ಅನುದಾನ ಕೊಡಲು ಸಾಧ್ಯವಾಗುತ್ತಿತ್ತೆ ಎಂದು ಪ್ರಶ್ನಿಸಿದರು.

### ಧರ್ಮದ ಹೆಸರಿನಲ್ಲಿ ಜಗಳ ಉಂಟು ಮಾಡುವುದಕ್ಕೆ ಕಡಿವಾಣ

ಟೀಕೆ ಮಾಡುವವರು ಸುಮ್ಮನೆ ಟೀಕೆ ಮಾಡುತ್ತಾರೆ. ಏಕೆಂದರೆ ಜಾತಿ ಧರ್ಮದ ಹೆಸರಿನಲ್ಲಿ ಜಗಳ ತರುವುದರಲ್ಲಿ ಜಿಲ್ಲೆ ನಂಬರ್ ಒನ್ ಸ್ಥಾನದಲ್ಲಿತ್ತು. ಅದಕ್ಕೆಲ್ಲಾ ನಮ್ಮ ಸರ್ಕಾರ ಕಡಿವಾಣ ಹಾಕಿದೆ ಎಂದರು. ಜಾತಿ ಧರ್ಮ ಎಂದು ಜಗಳ ತರುವವರ ಮಕ್ಕಳನ್ನು ಇದಕ್ಕೆ ಕಳಿಸುವುದಿಲ್ಲ. ಬಡವರ ಮಕ್ಕಳನ್ನು, ಅಮಾಯಕರನ್ನು ಕಳಿಸುತ್ತಾರೆ. ದಕ್ಷ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ.ಈಗ ಸುಧಾರಣೆಯಾಗಿದೆಯಲ್ಲವೆ ಎಂದು ಕೇಳಿದರು. ಪೋಲಿಸ್ ಅಧಿಕಾರಿಗಳು ದಕ್ಷರಾಗಿದ್ದರೆ ಬದಲಾವಣೆ ತರಲು ಸಾಧ್ಯ. ಅಧಿಕಾರಿಗಳು ಮತ್ತು ಜನ ಪ್ರತಿನಿಧಿಗಳು ಅನ್ಯೋನ್ಯತೆಯಿಂದ ಕೆಲಸ ಮಾಡಬೇಕು ಎಂದರು.

**ಪುತ್ತೂರಿನಲ್ಲಿಯೇ ವೈದ್ಯಕೀಯ ಕಾಲೇಜು:** ಬಜೆಟ್‌ನಲ್ಲಿ ಘೋಷಿಸಿದಂತೆ ದಕ್ಷಿಣ ಕನ್ನಡ ಜಿಲ್ಲೆಯ ವೈದ್ಯಕೀಯ ಕಾಲೇಜು ಪುತ್ತೂರಿನಲ್ಲಿಯೇ ನಿರ್ಮಾಣವಾಗಲಿದೆ ಈ ಬಗ್ಗೆ ಯಾರಿಗೂ ಅನುಮಾನ ಬೇಡವೆಂದು ಮುಖ್ಯಮಂತ್ರಿಗಳು ತಿಳಿಸಿದರು.

**ಸರ್ಕಾರ ಆರ್‌ಎಸ್‌ಎಸ್ ನಿಷೇಧ ಮಾಡಿಲ್ಲ:** ಸರ್ಕಾರ ಆರ್.ಎಸ್.ಎಸ್ ನಿಷೇಧ ಮಾಡಿಲ್ಲ. ಶಾಲಾ, ಕಾಲೇಜು ಆವರಣದಲ್ಲಿ ಸಂಘ ಸಂಸ್ಥೆಗಳು ಅನುಮತಿ ಪಡೆಯಬೇಕೆಂದು ಹೊರಡಿಸಿರುವ ಆದೇಶದಲ್ಲಿ ಆರ್.ಎಸ್.ಎಸ್ ಎಂದು ಎಲ್ಲಿಯೂ ಉಲ್ಲೇಖವಾಗಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಆದೇಶದಲ್ಲಿ ಯಾವುದೇ ಸಂಘ ಅಥವಾ ಸಂಸ್ಥೆ ಎಂದಿದೆ. ಬಿಜೆಪಿ ಸರ್ಕಾರ ಆದೇಶ ಮಾಡಿದ್ದನ್ನೇ ನಾವು ಪುನರುಚ್ಚರಿಸಿದ್ದೇವೆ. ಅವರು ಮಾಡಬಹುದು , ನಾವು ಮಾಡಬಾರದೇ ಎಂದು ಪ್ರಶ್ನಿಸಿದರು.

2013ರಲ್ಲಿ ಜಗದೀಶ ಶೆಟ್ಟರ್ ಅವರು ಮುಖ್ಯಮಂತ್ರಿಗಳಿದ್ದ ಸಂದರ್ಭದಲ್ಲಿ ಸಂಘ ಸಂಸ್ಥೆಗಳು ಶಾಲಾ ಕಾಲೇಜು ಆವರಣದಲ್ಲಿ ಚಟುವಟಿಕೆಗಳನ್ನು ಹಮ್ಮಿಕೊಳ್ಳುವುದನ್ನು ನಿಷೇಧಿಸಿದ್ದರು. ಜಗದೇಶ ಶೆಟ್ಟರ್ ಅವರು ಶಿಕ್ಷಣ ಇಲಾಖೆ ಮಾಡಿರುವುದು ನಾನಲ್ಲ ಎಂದಿದ್ದಾರೆ. ಇವರು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿಯೇ ಆದೇಶ ಹೊರಡಿಸಿದ್ದಾರೆ ಎಂದು ಹೇಳಿದರು.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹13,069 /Gram24ct ₹11,980/Gram22ct | ಬೆಳ್ಳಿ: ₹179.90/Gram

# ದೀಪಾವಳಿ ಆಚರಿಸಿ, ಆದ್ರೆ ಜಾಗರೂಕತೆಯಿಂದ ಪಟಾಕಿ ಸಿಡಿಸಿ: ಡಿಸಿಎಂ ಡಿಕೆ ಶಿವಕುಮಾರ್ ಮನವಿ

• ಉದಯವಾಹಿನಿ, ಬೆಂಗಳೂರು



ನಾಡಿನ ಸಮಸ್ತ ಜನತೆಗೆ ದೀಪಾವಳಿ ಹಬ್ಬದ ಶುಭಾಶಯಗಳು. ಆದಷ್ಟು ಜಾಗರೂಕತೆಯಿಂದ ಪಟಾಕಿ ಸಿಡಿಸಬೇಕು. ಹಸಿರು ಪಟಾಕಿಯನ್ನು ಮಾತ್ರ ಬಳಸಬೇಕು ಎಂದು ಡಿಸಿಎಂ ಡಿಕೆ ಶಿವಕುಮಾರ್ ಮನವಿ ಮಾಡಿದ್ದಾರೆ.

ಬೆಂಗಳೂರಿನಲ್ಲಿ ಸೋಮವಾರ ಮಾತನಾಡಿದ ಅವರು, ಈಗಾಗಲೇ ಸಣ್ಣಪುಟ್ಟ ಅವಘಡಗಳ ಸುದ್ದಿ ಕೇಳಿಬರುತ್ತಿದೆ. ಯಾವುದೇ ಸಿಡಿಮದ್ದುಗಳನ್ನು ಸಿಡಿಸುವ ಸಂದರ್ಭದಲ್ಲಿಯೂ ಎಚ್ಚರವಿರಲಿ. ಈ ವರ್ಷ ರಾಜ್ಯದಲ್ಲಿ ಉತ್ತಮವಾಗಿ ಮಳೆ ಬಂದಿದೆ. ಸಮೃದ್ಧಿಯಾಗಿ ಬೆಳೆ ಬಂದಿದೆ. ಪ್ರತಿವರ್ಷವೂ ಸಮೃದ್ಧಿಯಾಗಿರಲಿ ಎಂದು ಪ್ರಾರ್ಥಿಸಿದರು.

ನಾಡಿನಾದ್ಯಂತ ದೀಪಾವಳಿ ಹಬ್ಬವನ್ನು ಸಂಭ್ರಮದಿಂದ ಆಚರಣೆ ಮಾಡಲಾಗುತ್ತಿದೆ. ಈ ನಡುವೆ ದೀಪಾವಳಿ ಹಬ್ಬದ ಹಿನ್ನೆಲೆಯಲ್ಲಿ ಪಟಾಟಿ ಸಿಡಿಸಲಾಗುತ್ತಿದೆ. ಆದರೆ ಪಟಾಕಿಯಿಂದ ಕೆಲವು ಮಕ್ಕಳಿಗೆ ಗಾಯ ಆಗಿದೆ. ಈ ಹಿನ್ನೆಲೆಯಲ್ಲಿ ಎಚ್ಚರಿಕೆಯಿಂದ ಪಟಾಕಿ ಸಿಡಿಸುವಂತೆ ಡಿಸಿಎಂ ಡಿಕೆ ಶಿವಕುಮಾರ್ ಮನವಿ ಮಾಡಿದ್ದಾರೆ. ಬಿಹಾರ ಚುನಾವಣೆಯ ಹಿನ್ನೆಲೆಯಲ್ಲಿ ಕರ್ನಾಟಕದಿಂದ ಹಣ ಹೋಗುತ್ತಿದೆ ಎಂದು ಸಂಸದ ರಾಘವೇಂದ್ರ ಆರೋಪ ಮಾಡಿದ್ದರು. ಬಿಜೆಪಿಯ ಕೆಲವು ನಾಯಕರು ಇದೇ ರೀತಿಯ ಆರೋಪಗಳನ್ನು ಮಾಡಿದ್ದಾರೆ.

ಕೆಲವು ದಿನಗಳ ಹಿಂದೆ ಸಿಎಂ ಸಿದ್ದರಾಮಯ್ಯ ಅವರ ನಿವಾಸದಲ್ಲಿ ಸಚಿವರಿಗೆ ಔತಣಕೂಟವನ್ನು ಹಮ್ಮಿಕೊಳ್ಳಲಾಗಿತ್ತು. ಔತಣಕೂಟದಲ್ಲಿ ಬಿಹಾರ ಚುನಾವಣೆಯ ಬಗ್ಗೆಯೂ ಚರ್ಚೆ ನಡೆದಿತ್ತು. ಇದೇ ವಿಚಾರವನ್ನು ಮುಂದಿಟ್ಟುಕೊಂಡು ಬಿಜೆಪಿ ನಾಯಕರು ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸುತ್ತಿದ್ದಾರೆ. ಆದರೆ ಇದಕ್ಕೆ ಡಿಕೆ ಶಿವಕುಮಾರ್ ತಿರುಗೇಟು ನೀಡಿದ್ದಾರೆ. ಹಿಟ್ ಆಂಡ್ ರನ್ ರಾಜಕಾರಣ ಸರಿಯಲ್ಲ ಎಂದು ತಿರುಗೇಟು ನೀಡಿದ್ದಾರೆ.

**ರಾಘವೇಂದ್ರ ಅವರು ಹಿಟ್ ಅಂಡ್ ರನ್ ಬೇಡ**

ಸಂಸದ ರಾಘವೇಂದ್ರ ಅವರು ಹಿಟ್ ಅಂಡ್ ರನ್ ನಾಯಕರ ಪಟ್ಟಿಗೆ ಸೇರುವುದು ಬೇಡ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಸಲಹೆ ನೀಡಿದರು. ಬಿಹಾರ ಚುನಾವಣೆಗೆ ಕರ್ನಾಟಕದಿಂದ ಹಣ ಹೋಗುತ್ತಿದೆ. ಇದಕ್ಕಾಗಿ ಅಧಿಕಾರಿಗಳಿಗೆ ಕಿರುಕುಳ ಹೆಚ್ಚಾಗಿದೆ ಎನ್ನುವ ಸಂಸದ ಬಿ.ವೈ.ರಾಘವೇಂದ್ರ ಅವರ ಆರೋಪಕ್ಕೆ ಈ ರೀತಿಯಾಗಿ ಪ್ರತಿಕ್ರಿಯೆ ನೀಡಿದರು. ಈ ಕುರಿತಾಗಿ ರಾಘವೇಂದ್ರ ಅವರ ಬಳಿ ದಾಖಲೆಗಳಿದ್ದರೆ ಅದನ್ನು ಬಿಡುಗಡೆ ಮಾಡಿ ಆರೋಪ ಮಾಡಲಿ. ಹಿಟ್ ಅಂಡ್ ರನ್ ಮಾಡುವ ಒಂದಷ್ಟು ನಾಯಕರಿದ್ದಾರಲ್ಲಾ ಅವರಂತೆ ರಾಘವೇಂದ್ರ ಅವರು ಆಗುವುದು ಬೇಡ. ರಾಘವೇಂದ್ರ ಅವರ ಹೆಸರು ಸುಳ್ಳಿಗೆ ಮತ್ತೊಂದು ಉದಾಹರಣೆಯಂತಾಗುವುದು ಬೇಡ ಎಂದು ತಿರುಗೇಟು ನೀಡಿದರು.

## ದೀಪಾವಳಿ ಹಬ್ಬದ ದಿನವೇ ಜಿಟಿ ಮಾಲ್ ನಿಂದ ಬಿದ್ದು ಯುವಕ ಆತ್ಮಹತ್ಯೆ!

• ಉದಯವಾಹಿನಿ, ಬೆಂಗಳೂರು

ನಾಡಿನಾದ್ಯಂತ ದೀಪಾವಳಿ ಹಬ್ಬದ ಸಡಗರ, ಸಂಭ್ರಮ ಮನೆಮಾಡಿರುವಂತೆಯೇ ನಗರದ ಪ್ರತಿಷ್ಠಿತ ಮಾಲ್‌ಗಳಲ್ಲಿ ಒಂದಾದ ಮಾಗಡಿ ರಸ್ತೆಯ ಜಿಟಿ ಮಾಲ್ ನಿಂದ ಬಿದ್ದು ಯುವಕನೋರ್ವ ಮೃತಪಟ್ಟಿದ್ದಾನೆ. ಜಿಟಿ ವರ್ಲ್ಡ್ ಮಾಲ್‌ನ 3ನೇ ಅಂತಸ್ಥಿನಿಂದ ಬಿದ್ದು ಯುವಕ ಸಾವನ್ನಪ್ಪಿದ್ದಾನೆ. ಘಟನೆಯ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಮೃತ ಯುವಕನ ಗುರುತು ಇನ್ನೂ ಪತ್ತೆಯಾಗಿಲ್ಲ. ಸ್ಥಳಕ್ಕೆ ಮಾಗಡಿ ರಸ್ತೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಬೆಂಗಳೂರು ಸೇರಿದಂತೆ 9 ಜಿಲ್ಲೆಗಳಲ್ಲಿ ಭಾರೀ ಮಳೆ ಸಾಧ್ಯತೆ

• ಉದಯವಾಹಿನಿ, ಬೆಂಗಳೂರು

ದೀಪಾವಳಿಯ ಸಂಭ್ರಮಕ್ಕೆ ಮಳೆ ಅಡ್ಡಿಯಾಗುವ ಸಾಧ್ಯತೆಯಿದೆ. ರಾಜ್ಯದ ದಕ್ಷಿಣ ಒಳನಾಡು ಹಾಗೂ ಕರಾವಳಿ ಜಿಲ್ಲೆಗಳಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರಿಗೆ ಯೆಲ್ಲೋ ಅಲರ್ಟ್ ಜಾರಿಯಾಗಿದ್ದು ಮಧ್ಯಾಹ್ನ ಅಥವಾ ಸಂಜೆ ಮಳೆ ಸುರಿಯುವ ಸಾಧ್ಯತೆಯಿದೆ. ಬೆಂಗಳೂರು, ಬೆಂಗಳೂರು ಗ್ರಾಮಾಂತರ, ಮಂಡ್ಯ, ಮೈಸೂರು, ರಾಮನಗರ, ಕೋಲಾರ, ಹಾಸನ, ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ ಸೇರಿದಂತೆ ಕರಾವಳಿ ಹಾಗೂ ದಕ್ಷಿಣ ಒಳನಾಡಿನ ಎಲ್ಲಾ ಜಿಲ್ಲೆಗಳಿಗೂ ಯಲ್ಲೋ ಅಲರ್ಟ್ ಘೋಷಣೆಯಾಗಿದೆ. ಗಾಳಿಯು ಗಂಟೆಗೆ 30-40ಕಿ.ಮೀ ವೇಗದಲ್ಲಿ ಬೀಸುವ ಸಾಧ್ಯತೆಯಿದ್ದು ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಎಚ್ಚರಿಕೆ ನೀಡಲಾಗಿದೆ.

## ಕುಣಿಗಲ್ ಫ್ಲೈಓವರ್‌ನಲ್ಲಿ ಗುಂಡಿ ತಪ್ಪಿಸಲು ಹೋಗಿ ಕಾರು ಪಲ್ಟಿ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಗುಂಡಿ ತಪ್ಪಿಸಲು ಹೋಗಿ ಕಾರು ಎರಡು ಪಲ್ಟಿಯಾಗಿರುವ ಘಟನೆ ಬೆಂಗಳೂರು ಹೊರವಲಯ ನೆಲಮಂಗಲ ನಗರದ ಕುಣಿಗಲ್ ಬೈಪಾಸ್ ಫ್ಲೈಓವರ್ ರಸ್ತೆಯಲ್ಲಿ ನಡೆದಿದೆ. ಕಾರಿನಲ್ಲಿದ್ದ ಆರು ಮಂದಿ ಪವಾಡ ಎಂಬಂತೆ ಪಾರಾಗಿದ್ದು ಸಣ್ಣಪುಟ್ಟ ಗಾಯವಾಗಿ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ನೆಲಮಂಗಲ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ತುಮಕೂರು ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯ ರಸ್ತೆಯಲ್ಲಿ ಅಪಘಾತವಾಗಿ ಸಾವು ನೋವುಗಳ ಪ್ರಕರಣಗಳು ಸಂಭವಿಸುತ್ತಲೇ ಇದ್ದರೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಹಾಗೂ ಟೋಲ್ ಕಂಪನಿಯ ನಿರ್ಲಕ್ಷ್ಯಕ್ಕೆ ಅಮಾಯಕ ಜೀವಗಳು ತೊಂದರೆ ಅನುಭವಿಸುವಂತಾಗಿದೆ. ಇದೇ ರಸ್ತೆಯಲ್ಲಿ ಪ್ರತಿನಿತ್ಯ ಸಚಿವರು, ಶಾಸಕರು, ಅಧಿಕಾರಿಗಳು ಸಂಚಾರ ಮಾಡುತ್ತಿದ್ದು ಯಾರಿಗೂ ಅರಿವಿಗೆ ಬಾರದೇ ಇರುವುದು ನಮ್ಮ ಆಡಳಿತ ವ್ಯವಸ್ಥೆಗೆ ಹಿಡಿದ ಕನ್ನಡಿಯಾಗಿದೆ.

## ಕೆಆರ್ ಮಾರ್ಕೆಟ್‌ನಲ್ಲಿ ಬೆಳ್ಳಂಬೆಳಗ್ಗೆ ಹೂ, ಹಣ್ಣು ಖರೀದಿಗೆ ಜನ



• ಉದಯವಾಹಿನಿ, ಬೆಂಗಳೂರು

ನಾಡಿನಾದ್ಯಂತ ದೀಪಗಳ ಹಬ್ಬ ದೀಪಾವಳಿ ಸಂಭ್ರಮ ಜೋರಾಗಿದೆ. ದೀಪಾವಳಿ ಹಿನ್ನೆಲೆ ಬೆಂಗಳೂರಿನ ಕೆಆರ್ ಮಾರ್ಕೆಟ್‌ನಲ್ಲಿ ಬೆಳ್ಳಂಬೆಳಗ್ಗೆ ಹೂ, ಹಣ್ಣು ಖರೀದಿಗೆ ಜನ ಮುಗಿಬಿದ್ದಿದ್ದಾರೆ. ಕೆಆರ್ ಮಾರ್ಕೆಟ್‌ನಲ್ಲಿ ಭಾರೀ ಸಂಖ್ಯೆಯಲ್ಲಿ ಗ್ರಾಹಕರು ಸೇರಿದ್ದು, ವಿವಿಧ ಬಗೆಯ ಹೂ, ಹಣ್ಣುಗಳ ಖರೀದಿಯಲ್ಲಿ ಬ್ಯುಸಿಯಾಗಿದ್ದಾರೆ. ಅವೆನ್ಯೂ ರಸ್ತೆ ಸಂಪರ್ಕಿಸುವ ರಸ್ತೆ ಸಂಪೂರ್ಣ ಜನಮಯವಾಗಿದೆ. ಭಾರೀ ಜನಸಂಖ್ಯೆ ಹಿನ್ನೆಲೆ ಕೆಆರ್ ಮಾರ್ಕೆಟ್, ಹೂವಿನ ಮಾರ್ಕೆಟ್, ಅವೆನ್ಯೂ ರಸ್ತೆ ಸುತ್ತ ಟ್ರಾಫಿಕ್ ಜಾಮ್ ಉಂಟಾಗಿದೆ. ಅಲ್ಲದೇ ಕೆಆರ್ ಮಾರ್ಕೆಟ್ ಫ್ಲೈಓವರ್ ಮೇಲೂ ಕಿ.ಮೀ.ಗಟ್ಟಲೇ ಪಾರ್ಕಿಂಗ್‌ಗೆ ವ್ಯವಸ್ಥೆ ಕಲ್ಪಿಸಲಾಗಿದೆ. ಸತತ ಮಳೆ ಹಿನ್ನೆಲೆ ಹೂಗಳ ಬೆಲೆ ಏರಿಕೆಯಾಗಿದೆ. ದೀಪಾವಳಿ ಹಬ್ಬದ ಹಿನ್ನೆಲೆ ಕನಕಾಂಬರ, ಮಲ್ಲಿಗೆ, ಸೇವಂತಿಗೆ, ಸುಗಂಧರಾಜ, ಚೆಂಡು ಹೂಗಳ ಖರೀದಿ ಜೋರಾಗಿದೆ

## ನಮ್ಮ ಮೆಟ್ರೊಗೆ 14ರ ಸಂಭ್ರಮ: ವಿಶೇಷ ವೀಡಿಯೋ ಹಂಚಿಕೊಂಡ ಡಿಕೆಶಿ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೊ ಆರಂಭವಾಗಿ ಇಂದಿಗೆ 14 ವರ್ಷ ಪೂರೈಸಿದ್ದು, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ವಿಶೇಷ ಪೋಸ್ಟ್‌ವೊಂದನ್ನು ಹಂಚಿಕೊಂಡಿದ್ದಾರೆ. ಬೈಯಪ್ಪನಹಳ್ಳಿಯಿಂದ ಎಂ.ಜಿ. ರಸ್ತೆಯವರೆಗಿನ ಮೊದಲ 6.7 ಕಿ.ಮೀ ಪಯಣದಿಂದ, ಇಂದಿನ 96 ಕಿ.ಮೀಗೂ ಅಧಿಕ ಬೃಹತ್ ಜಾಲದವರೆಗೆ... ನಮ್ಮ ಮೆಟ್ರೊದ 14 ವರ್ಷಗಳ ಕ್ರಾಂತಿಕಾರಿ ಯಾನವಿದು' ಎಂದು ಪೋಸ್ಟ್‌ನಲ್ಲಿ ಬರೆದುಕೊಂಡಿದ್ದಾರೆ. 2011ರ ಅಕ್ಟೋಬರ್ 20 ಆರಂಭವಾದ ನಮ್ಮ ಮೆಟ್ರೊ, ಇಂದು ದಿನಕ್ಕೆ 10 ಲಕ್ಷಕ್ಕೂ ಹೆಚ್ಚು ಜನರ ಬದುಕನ್ನು ಸುಲಭಗೊಳಿಸಿ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಿದೆ. ಬೆಂಗಳೂರಿನ ಅಭಿವೃದ್ಧಿಯ 'ಗೇಮ್ ಚೇಂಜರ್' ಆಗಿದೆ' ಎಂದು ಹೇಳಿದ್ದಾರೆ.'ಬೆಂಗಳೂರು ಮೆಟ್ರೊ ರೈಲು ನಿಗಮ ನಿಯಮಿತ' (ಬಿಎಂಆರ್‌ಸಿಎಲ್) ಕೂಡ ಪೋಸ್ಟ್ ಹಂಚಿಕೊಂಡಿದ್ದು, ಎಲ್ಲಾ ಮೆಟ್ರೊ ಪ್ರಯಾಣಿಕರಿಗೆ ಧನ್ಯವಾದ ತಿಳಿಸಿದೆ.

**ನಮ್ಮ ಮೆಟ್ರೊ ಇತಿಹಾಸ:** 2003ರಲ್ಲಿ ವಿಸ್ತೃತ ಯೋಜನಾ ವರದಿ(ಡಿಪಿಆರ್) ಸಿದ್ದಪರಿಸಲಾಗಿತ್ತು. 2006ರಲ್ಲಿ ಕೇಂದ್ರದ ಅನುಮೋದನೆ ದೊರೆತಿದ್ದು, 2007ರಲ್ಲಿ ಬೈಯಪ್ಪನಹಳ್ಳಿಯಿಂದ ಎಂ.ಜಿ. ರಸ್ತೆಯವರೆಗೆ ಮೊದಲ ಹಂತದ ಕಾಮಗಾರಿ ಪ್ರಾರಂಭವಾಯಿತು. 2011 ಅಕ್ಟೋಬರ್ 20ರಂದು ಸಾರ್ವಜನಿಕರ ಪ್ರಯಾಣಕ್ಕೆ ಮುಕ್ತಗೊಳಿಸಲಾಯಿತು.

# ಸರ್ಕಾರದ ವಿರುದ್ಧ ನಿಖಿಲ್ ಕುಮಾರಸ್ವಾಮಿ ಕಿಡಿ

**ಕಾಂಗ್ರೆಸ್ ಲೂಟಿಯ ವಿರುದ್ಧ ಜೆಡಿಎಸ್ ಹೋರಾಡುತ್ತೇವೆ ಎಂದು ನಿಖಿಲ್ ಕುಮಾರಸ್ವಾಮಿ ಹೇಳಿಕೆ**

• ಉದಯವಾಹಿನಿ, ಬೆಂಗಳೂರು

ದೀಪಾವಳಿ ಕೊಡುಗೆ ನೆಪದಲ್ಲಿ ಬೆಂಗಳೂರು ಜನರಿಗೆ ಕಾಂಗ್ರೆಸ್ ಮಹಾ ದೋಖಾ ಮಾಡುತ್ತಿದೆ. ನೀವು ಹಬ್ಬವನ್ನು ಸಂತೋಷದಿಂದ ಆಚರಿಸಿ ಕಾಂಗ್ರೆಸ್ ಲೂಟಿಯ ವಿರುದ್ಧ ಜೆಡಿಎಸ್ ಹೋರಾಡುತ್ತೇವೆ ಎಂದು ನಿಖಿಲ್ ಕುಮಾರಸ್ವಾಮಿ ಅವರು ತಿಳಿಸಿದರು.

ಈ ಬಗ್ಗೆ ಟ್ವೀಟ್ ಮೂಲಕ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರುರಾಜ್ಯ ಕಾಂಗ್ರೆಸ್ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.

**ಟ್ವೀಟ್‌ನಲ್ಲಿ ಏನಿದೆ:** ಶುಭೋದಯ ಬೆಂಗಳೂರು ಎಲ್ಲಾರಿಗೂ ದೀಪಾವಳಿಯ ಶುಭಾಶಯಗಳು ನೀವು ದೀಪ ಹಚ್ಚುತ್ತಿರುವಾಗ, ಕಾಂಗ್ರೆಸ್ ಬಿ ಖಾತಾದಿಂದ ಎ ಖಾತಾ ಮಾಡಲು 5% ತೆರಿಗೆಯಿಂದ ಮಧ್ಯಮ ವರ್ಗವನ್ನು ಸುಟ್ಟು ಹಾಕುತ್ತಿದೆ, 7.5 ಲಕ್ಷ ಮನೆ ಮಾಲೀಕರು 100 ದಿನಗಳಲ್ಲಿ ಲಕ್ಷ ಲಕ್ಷ ಪಾವತಿಸುವಂತೆ ಒತ್ತಾಯಿಸುತ್ತಿದೆ ಎಂದು ವಾಗ್ದಾಳಿ ನಡೆಸಿದರು. ಆದ್ರೆ ಇದರ ಬಗ್ಗೆ ಚಿಂತಿಸಬೇಡಿ, ಜೆಡಿಎಸ್ ಪಕ್ಷವು ಪ್ರತಿಯೊಬ್ಬ ಬಿ ಖಾತಾ ಹೊಂದಿರುವವರ ಪರವಾಗಿ ಹೋರಾಡುತ್ತದೆ. ನಾವು ಪ್ರತಿಭಟನೆ ಮೂಲಕ ಮತ್ತು ನ್ಯಾಯಾಲಯದಲ್ಲಿ ನ್ಯಾಯಕ್ಕಾಗಿ ಹೋರಾಡುತ್ತೇವೆ.

ನಿಮ್ಮ ಹಬ್ಬವನ್ನು ಸಂತೋಷದಿಂದ ಆಚರಿಸಿ, ನಾವು ಕಾಂಗ್ರೆಸ್ ಲೂಟಿಯ ವಿರುದ್ಧ ಹೋರಾಡುತ್ತೇವೆ. ಈ



ಉದಯವಾಹಿನಿ ಚಿತ್ರ

ಬಗ್ಗೆ ನಾನು ಗುರುವಾರ ಪೂರ್ಣ ವಿವರಗಳೊಂದಿಗೆ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡುತ್ತೇನೆ ಎಂದು ನಿಖಿಲ್ ಕುಮಾರಸ್ವಾಮಿ ಅವರು ತಿಳಿಸಿದರು.

ಆದರೆ ಜೆಡಿಎಸ್ ಆರೋಪವನ್ನು ಸರ್ಕಾರ ಅಲ್ಲಗಳೆದಿದೆ. ಜನರಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಈ ಯೋಜನೆಯನ್ನು ಜಾರಿಗೆ ತರಲಾಗಿದೆ. ಇದರಿಂದ ಬೆಂಗಳೂರಿಗೆ ಜನರಿಗೆ ಸಾಕಷ್ಟು ಅನುಕೂಲ ಆಗಲಿದೆ ಎಂಬುವುದು ಸರ್ಕಾರದ ವಾದವಾಗಿದೆ. ಬಿಜೆಪಿ ಜೊತೆಗೆ ಮೈತ್ರಿ ಮಾಡಿಕೊಂಡಿರುವ ಜೆಡಿಎಸ್ ಇತ್ತೀಚಿಗೆ ಸಕ್ರಿಯವಾಗಿ ಯಾವುದೇ ಹೋರಾಟಗಳಲ್ಲಿ ಭಾಗಿಯಾಗುತ್ತಿರಲಿಲ್ಲ. ಇದೀಗ ನಿಖಿಲ್ ಕುಮಾರಸ್ವಾಮಿ ಅವರು ಸಕ್ರಿಯವಾಗಿದ್ದು, ಸರ್ಕಾರಕ್ಕೆ ಎಚ್ಚರಿಕೆ ನೀಡುವ ಕೆಲಸ ಮಾಡುತ್ತಿದ್ದಾರೆ. ಬಿ ಖಾತೆಯಿಂದ ಎ ಖಾತೆಗೆ ವರ್ಗಾವಣೆ ಮಾಡುವುದಕ್ಕೆ ತೆರಿಗೆ ಭಾರ ಹಾಕಿರುವುದು ಇದೀಗ ಸರ್ಕಾರದ ವಿರುದ್ಧದ ಹೋರಾಟಕ್ಕೆ ಜೆಡಿಎಸ್‌ಗೆ ಅಸ್ತ್ರವಾಗಿದೆ.

**ಏನಿದು ಗೊಂದಲ?**

ಬೆಂಗಳೂರಿನಲ್ಲಿ ಬಿ ಖಾತಾ ಆಸ್ತಿಯನ್ನು ಹೊಂದಿದ್ದರೆ, ಅದನ್ನು ಎ ಖಾತಾಗೆ ಬದಲಾಯಿಸಿಕೊಳ್ಳಲು ಅವಕಾಶ ನೀಡಲಾಗಿದೆ. ಹೀಗಾದಲ್ಲಿ ನಿಮ್ಮ ಆಸ್ತಿ ಕಾನೂನುಬದ್ದ ಎಂದು ಗುರುತಿಸಲ್ಪಡುತ್ತದೆ. ನಂತರದಲ್ಲಿ ನೀರು, ವಿದ್ಯುತ್ ಸಂಪರ್ಕ ಪಡೆಯಲು ಅರ್ಜಿ ಸಲ್ಲಿಸಬಹುದಾಗಿದೆ ಹಾಗೂ ವ್ಯಾಪಾರ ಮಾಡಲು ಪರವಾನಗಿಯನ್ನು ಪಡೆದುಕೊಳ್ಳಬಹುದು. ಬ್ಯಾಂಕ್‌ಗಳಲ್ಲಿ ಸಾಲ ಪಡೆಯಲು ಇದರಿಂದ ಸುಲಭವಾಗುತ್ತದೆ. ಆದರೆ ಇದಕ್ಕೆ ಹೆಚ್ಚಿನ ತೆರಿಗೆಯನ್ನು ಪಡೆಯಲಾಗುತ್ತದೆ ಎಂಬುವುದು ಇದೀಗ ವಿರೋಧಕ್ಕೆ ಕಾರಣವಾಗಿದೆ. ಈ ನಿಟ್ಟಿನಲ್ಲಿ ಜೆಡಿಎಸ್ ಬೆಂಗಳೂರಿನ ಜನರ ಪರವಾಗಿ ಹೋರಾಟಕ್ಕೆ ಮುಂದಾಗಿದೆ. ಇದರ ಮೂಲಕ ಸರ್ಕಾರಕ್ಕೂ ನಿಖಿಲ್ ಕುಮಾರಸ್ವಾಮಿ ಅವರು ಎಚ್ಚರಿಕೆಯನ್ನು ನೀಡಿದ್ದಾರೆ.

## ಊರಿಗೆ ತೆರಳಿದ ಜನ: ಮೆಜೆಸ್ಟಿಕ್ ಬಸ್‌ನಿಲ್ದಾಣ ಖಾಲಿ ಖಾಲಿ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ದೀಪಾವಳಿ ಹಬ್ಬದ ಹಿನ್ನೆಲೆ, ಮೆಜೆಸ್ಟಿಕ್ ಕೆಂಪೇಗೌಡ ಬಸ್ ನಿಲ್ದಾಣ ಖಾಲಿ ಖಾಲಿಯಾಗಿದೆ. ಶುಕ್ರವಾರ, ಶನಿವಾರ, ಭಾನುವಾರ ಹೆಚ್ಚಿನ ಸಂಖ್ಯೆಯಲ್ಲಿ ಜನರು ಬೇರೆ ಜಿಲ್ಲೆ, ರಾಜ್ಯಗಳಲ್ಲಿರುವ ಊರಿಗೆ ತೆರಳಿದ್ದರು. ಕಳೆದ 4 ದಿನಗಳಿಂದ ಬೆಂಗಳೂರಿನಿಂದ ತೆರಳುವ ಬಹುತೇಕ ಬಸ್ಸುಗಳು ಭರ್ತಿಯಾಗಿದ್ದವು. ಇಂದು ಬಸ್ಸುಗಳಲ್ಲಿ ಸಂಚರಿಸುತ್ತಿರುವ ಪ್ರಯಾಣಿಕರ ಸಂಖ್ಯೆ ಇಳಿಕೆಯಾಗಿದೆ. ಬೆಂಗಳೂರಿನಿಂದ ಹಾಸನಾಂಬ ದರ್ಶನಕ್ಕೆ ತೆರಳುವವರ ಸಂಖ್ಯೆ ಕೂಡ ಇಳಿಕೆಯಾಗಿದೆ. ಈ ಬಾರಿ ದೀಪಾವಳಿ ಬಂದಿರುವ ಕಾರಣ ಶನಿವಾರವೇ ಉದ್ಯೋಗಿಗಳು ಊರಿಗೆ ತೆರಳಿದ್ದರು.

ಈ ಶನಿವಾರ ಸಂಜೆ ಮತ್ತು ಭಾನುವಾರ ಊರಿಗೆ ತೆರಳಿರುವ ಪ್ರಯಾಣಿಕರು ಮರಳಿ ಬರಲಿರುವುದರಿಂದ ಬೆಂಗಳೂರು ಪ್ರವೇಶಿಸುವ ಮಾರ್ಗಗಳಾದ ಗೊರಗುಂಟೆಪಾಳ್ಯ ಸಿಗ್ನಲ್, ಎಲೆಕ್ಟ್ರಾನಿಕ್ ಸಿಟಿ ಸೇರಿದಂತೆ ಹಲವು ಕಡೆ ಭಾರೀ ಟ್ರಾಫಿಕ್ ಜಾಮ್ ಆಗುವ ಸಾಧ್ಯತೆಗಳಿವೆ.

## ಡೆತ್ ನೋಟ್ ಬರೆದು ಬೆಂಗಳೂರಿನಲ್ಲಿ ಓಲಾ ಇಂಜಿನಿಯರ್ ಆತ್ಮಹತ್ಯೆ

• ಉದಯವಾಹಿನಿ, ಬೆಂಗಳೂರು

ದೇಶದ ಪ್ರತಿಷ್ಠಿತ ಓಲಾ ಕಂಪನಿಗೆ ಸಂಕಷ್ಟ ಎದುರಾಗಿದ್ದು, ಸಂಸ್ಥೆಯ ಇಂಜಿನಿಯರ್ ಒಬ್ಬರು ಸಂಬಳ ನೀಡದೇ ಕಿರುಕುಳ ನೀಡಲಾಗುತ್ತಿದೆ ಎಂದು ಆರೋಪಿಸಿ ಆತ್ಮಹತ್ಯೆಗೆ ಶರಣಾಗಿದ್ದಾರೆ. ಓಲಾ ಸಂಸ್ಥೆಯ ಹೋಮೋಲೋಗೇಷನ್ ವಿಭಾಗದ ಅರವಿಂದ್ ಕೆ (38) ಅವರು ಬೆಂಗಳೂರಿನ ಚಿಕ್ಕಲಸಂದ್ರದಲ್ಲಿರುವ ಮಂಜುನಾಥ ನಗರದಲ್ಲಿರುವ ಅಪಾರ್ಟ್‌ಮೆಂಟ್‌ನಲ್ಲಿ ಸೆ.28 ರಂದು ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದರು. ಇದೀಗ ಅರವಿಂದ್ ಸಾವಿಗೆ ಸಂಸ್ಥೆಯ ಕಿರುಕುಳವೇ ಕಾರಣ ಎಂದು ಹೇಳಲಾಗಿದೆ. ಮೂಲಗಳ ಪ್ರಕಾರ ಅರವಿಂದ್ ಆತ್ಮಹತ್ಯೆ ಮಾಡಿಕೊಂಡ ಎರಡು ದಿನದ ಬಳಿಕ ಅರವಿಂದ್ ಬ್ಯಾಂಕ್ ಅಕೌಂಟ್‌ಗೆ 17.46 ಲಕ್ಷ ರೂ. ಹಣ ಜಮೆಯಾಗಿತ್ತು. ಹಣ ಜಮೆಯಾದ ಬಗ್ಗೆ ಅನುಮಾನದಿಂದ ಕಂಪನಿಯವರನ್ನ ಕುಟುಂಬಸ್ಥರು ಪ್ರಶ್ನಿಸಿದ್ದರು. ಆದರೆ ಕಂಪನಿಯಿಂದ ಸರಿಯಾದ ಸ್ಪಷ್ಟನೆ ಸಿಕ್ಕಿರಲಿಲ್ಲ. ಹೀಗಾಗಿ ಅನುಮಾನ ಹೆಚ್ಚಾದ





ಉದಯವಾಹಿನಿ ಚಿತ್ರ

ನಂತರ ಮನೆಯನ್ನು ಪರಿಶೀಲಿಸಿದಾಗ 28 ಪುಟಗಳ ಡೆತ್ ನೋಟ್ ಪತ್ತೆಯಾಗಿತ್ತು.

ಅಷ್ಟೇ ಅಲ್ಲದೇ ತನಗೆ ನೀಡಬೇಕಾಗಿರುವ ವೇತನ ಮತ್ತು ಇತರೆ ಭತ್ಯೆ ನೀಡದೇ ಕಿರುಕುಳ ನೀಡುತ್ತಿದ್ದರಿಂದ ತಾನು ಬೇಸತ್ತು ವಿಷ ಸೇವನೆ ಮಾಡಿ ಆತ್ಮಹತ್ಯೆ ಮಾಡಿಕೊಂಡಿರುವುದಾಗಿ ಅರವಿಂದ್ ಉಲ್ಲೇಖಿಸಿದ್ದಾರೆ. ಹೀಗಾಗಿ ತನ್ನ ತಮ್ಮನ ಆತ್ಮಹತ್ಯೆಗೆ ಕಾರಣರಾದವರ ವಿರುದ್ಧ ಕ್ರಮಕೈಗೊಳ್ಳಬೇಕೆಂದು ಅರವಿಂದ್ ಸಹೋದರ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

**ಓಲಾ ಮುಖ್ಯಸ್ಥರ ವಿರುದ್ಧವೂ ಪ್ರಕರಣ**

**ಸಂಬಳ ನೀಡದೇ ಕಿರುಕುಳ**

ಅರವಿಂದ್ ಡೆತ್ ನೋಟ್‌ನಲ್ಲಿ ಸಂಸ್ಥೆಯಲ್ಲಿನ ಕಿರುಕುಳದ ಕುರಿತು ಆರೋಪಿಸಿದ್ದಾರೆ ಎನ್ನಲಾಗಿದೆ. ಡೆತ್‌ನೋಟ್‌ನಲ್ಲಿ ಕಂಪನಿಯ ಹೆಡ್ ಆಫ್ ಹೋಮೋರೋಗೇಷನ್ ಎಂಜಿನಿಯರ್ ಸಂಬ್ರತ್ ಕುಮಾರ್ ದಾಸ್ ಮತ್ತು ಕಂಪನಿ ಮಾಲೀಕ ಬಾವೀಶ್ ಅಗರ್‌ವಾಲ್ ಕೆಲಸದಲ್ಲಿ ಒತ್ತಡ ನೀಡುತ್ತಿದ್ದಾರೆ.

ಡೆತ್ ನೋಟ್ ಆಧಾರದ ಮೇಲೆ ಅರವಿಂದ್ ಅವರ ಸಹೋದರ ಅಶ್ವಿನ್ ಅವರು ಸುಬ್ರಹ್ಮಣ್ಯಪುರ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದು ಎಫ್‌ಐಆರ್ ದಾಖಲಾಗಿದೆ.

ಆತ್ಮಹತ್ಯೆಗೆ ಪ್ರಚೋದನೆ ನೀಡಿದ ಆರೋಪದ ಅಡಿ ಸುಬ್ರತ್ ಕುಮಾರ್ ದಾಸ್ (ಎ1), ಭವೀಶ್ ಅಗರ್ವಾಲ್ (ಎ2), ಓಲಾ ಎಲೆಕ್ಟ್ರಿಕ್ ಕಂಪನಿ(ಎ3) ಆರೋಪಿಗಳನ್ನಾಗಿ ಮಾಡಲಾಗಿದೆ.

## ಹೆಬ್ಬಾಳದಲ್ಲಿ 4 ಟನ್ ತ್ಯಾಜ್ಯ ವಿಲೇವಾರಿ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಉತ್ತರ ವ್ಯಾಪ್ತಿಯ ಹೆಬ್ಬಾಳ ವಿಭಾಗದಲ್ಲಿ ನಡೆದ ಬೃಹತ್ ಸ್ವಚ್ಛತಾ ಅಭಿಯಾನದಲ್ಲಿ ನಾಲ್ಕು ಟನ್ ತ್ಯಾಜ್ಯ ವಿಲೇವಾರಿ ಮಾಡಲಾಯಿತು. ಡಾಲರ್ಸ್ ಕಾಲೋನಿ ಪೆಬಲ್ ಬೇ ಅಪಾರ್ಟ್‌ಮೆಂಟ್‌ಗಳಿಂದ ವಾರ್ಡ್ ಸಂಖ್ಯೆ 18ರ ಬೌಲೆವಾರ್ಡ್ ಪಾರ್ಕ್‌ವರೆಗೆ 1.5 ಕಿ.ಮೀ. ಪ್ರದೇಶವನ್ನು ಸ್ವಚ್ಛಗೊಳಿಸುವ ಅಭಿಯಾನವು ನಡೆಸಲಾಯಿತು.

- 2.5 ಟನ್ ಸಾಮಾನ್ಯ ತ್ಯಾಜ್ಯ ಮತ್ತು 1.5 ಟನ್ ಕಟ್ಟಡ ನಿರ್ಮಾಣ ಅವಶೇಷ ತೆರವುಗೊಳಿಸಲಾಗಿದೆ. ಮಣ್ಣು ಮತ್ತು ಘನತ್ಯಾಜ್ಯ ತೆಗೆಯುವ ಕಾರ್ಯಾಚರಣೆಗಾಗಿ ಒಟ್ಟು 40 ಪೌರಕಾರ್ಮಿಕರು, ಎರಡು ಟ್ರ್ಯಾಕ್ಟರ್‌ಗಳು, ಮೂರು ಆಟೋ-ಟಿಪ್ಪರ್‌ಗಳು ಮತ್ತು ಒಂದು ಕಾಂಪ್ಯಾಕ್ಟರ್ ಅನ್ನು ನಿಯೋಜಿಸಲಾಗಿತ್ತು ಎಂದು ಪ್ರಕಟಣೆ ತಿಳಿಸಿದೆ. ನಗರದ ಈ ಭಾಗದ ಆಕರ್ಷಣೆಯನ್ನು ಹೆಚ್ಚಿಸಲು ಗೋಡೆಗೆ ಬಣ್ಣ ಬಳಿಯಲಾಯಿತು. ಸ್ವಚ್ಛತೆಯನ್ನು ಕಾಪಾಡಿಕೊಳ್ಳಲು ನಗರ ನಿಗಮದೊಂದಿಗೆ ಕೈಜೋಡಿಸುವಂತೆ ಆಯುಕ್ತ ಪೊಮ್ಮಲ ಸುನಿಲ್ ಕುಮಾರ್ ನಾಗರಿಕರಲ್ಲಿ ಮನವಿ ಮಾಡಿದ್ದಾರೆ. ಅದೇ ರೀತಿ, ಬೆಂಗಳೂರು ಕೇಂದ್ರ ನಗರ ನಿಗಮ ವ್ಯಾಪ್ತಿಯಲ್ಲಿ ಸ್ವಚ್ಛತಾ ಅಭಿಯಾನವನ್ನು ಕೈಗೊಳ್ಳಲಾಯಿತು. ಚಿಕ್ಕಪೇಟೆ ವಿಭಾಗದಲ್ಲಿ, ಬಿಟಿಎಸ್



ಉದಯವಾಹಿನಿ ಚಿತ್ರ

ಮುಖ್ಯ ರಸ್ತೆಯಲ್ಲಿರುವ ನಾರಾಯಣಸ್ವಾಮಿ ಉದ್ಯಾನವನ ಮತ್ತು ಹೊಂಬೇಗೌಡ ನಗರದ ಇಂದಿರಾ ಕ್ಯಾಂಟೀನ್ ಬಳಿ ಅಭಿಯಾನ ನಡೆಯಿತು. ಶಾಂತಿನಗರ ವಿಭಾಗದಲ್ಲಿ, ಬನ್ನೇರುಘಟ್ಟ ರಸ್ತೆಯಲ್ಲಿರುವ ಪ್ರಮುಖ ಮಳೆನೀರು ಚರಂಡಿಯಿಂದ ಹೊಸೂರು ಮುಖ್ಯ ರಸ್ತೆಯವರೆಗೆ ಎರಡೂ ಬದಿಗಳಲ್ಲಿ ಶುಚಿಗೊಳಿಸುವ ಕಾರ್ಯಾಚರಣೆ ನಡೆಸಲಾಯಿತು. ಸಿ.ವಿ. ರಾಮನ್ ನಗರ ವಿಭಾಗದಲ್ಲಿ, ಫಿಲಿಪ್ಸ್ ಮಿಲೇನಿಯಂನಿಂದ ಸ್ವಾಮಿ ವಿವೇಕಾನಂದ ಮೆಟ್ರೋ ನಿಲ್ದಾಣದವರೆಗೆ ಎರಡೂ ಬದಿಗಳಲ್ಲಿ ಮತ್ತು ಸ್ವಾಮಿ ವಿವೇಕಾನಂದ ಮೆಟ್ರೋ ನಿಲ್ದಾಣದಿಂದ ಟಿನ್ ಫ್ಯಾಕ್ಟರಿಯವರೆಗೆ ಎರಡೂ ಬದಿಗಳಲ್ಲಿ ಸ್ವಚ್ಛತಾ ಕಾರ್ಯಾಚರಣೆ ನಡೆಸಲಾಯಿತು.

## ರಾಜ್ಯದಲ್ಲಿ PPP ಮಾದರಿಯಲ್ಲಿ ಎಂಟು ವೈದ್ಯಕೀಯ ಕಾಲೇಜುಗಳು

• ಉದಯವಾಹಿನಿ, ಬೆಂಗಳೂರು

ಕೋಲಾರ, ತುಮಕೂರು, ವಿಜಯಪುರ, ದಾವಣಗೆರೆ, ಉಡುಪಿ, ದಕ್ಷಿಣ ಕನ್ನಡ, ಬೆಂಗಳೂರು ಗ್ರಾಮಾಂತರ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಸರ್ಕಾರಿ-ಖಾಸಗಿ ಸಹಭಾಗಿತ್ವ ಮಾದರಿಯಲ್ಲಿ ಎಂಟು ಹೊಸ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ತೆರೆಯುವ ರಾಜ್ಯ ಸರ್ಕಾರದ ಪ್ರಸ್ತಾವನೆಯನ್ನು ನಗರ ಮೂಲದ ಶಿಕ್ಷಣ ತಜ್ಞರು ತೀವ್ರವಾಗಿ ಟೀಕಿಸಿದ್ದಾರೆ.

**ಸರ್ಕಾರದ ಪ್ರಸ್ತಾವನೆಗೆ ಶಿಕ್ಷಣ ತಜ್ಞರ ಆಕ್ಷೇಪ!**



PPP ಮಾದರಿ ವಂಚನೆ ಶಿಕ್ಷಣ ಮತ್ತು ಆರೋಗ್ಯದಂತಹ ಪ್ರಮುಖ ಕ್ಷೇತ್ರಗಳಿಗೆ ಸೂಕ್ತವಲ್ಲ ಎಂದು ಶಿಕ್ಷಣ ತಜ್ಞ ವಿ. ಪಿ. ನಿರಂಜನಾರಾಧ್ಯ ಹೇಳಿದ್ದಾರೆ. ಖಾಸಗಿ ಸಂಸ್ಥೆಗಳು ಹತೋಟಿ ತೆಗೆದುಕೊಂಡಾಗ, ಶಿಕ್ಷಣವು ಸಾಮಾಜಿಕ ಹಕ್ಕಿಗಿಂತ ವ್ಯಾಪಾರವಾಗುತ್ತದೆ. ಇದು ದುರ್ಬಲ ಸಮುದಾಯಗಳ ಪ್ರವೇಶವನ್ನು ಕಸಿದುಕೊಳ್ಳುತ್ತದೆ ಮತ್ತು ಕಲಿಕೆಯನ್ನು ಶ್ರೀಮಂತರ ಸವಲತ್ತುಗಳಾಗಿ ಪರಿವರ್ತಿಸುತ್ತದೆ. ಇದು ಅತ್ಯಂತ ಅಮಾನವೀಯ ಮತ್ತು ಸಂವಿಧಾನದ ಮೂಲ ತತ್ವಗಳಿಗೆ ವಿರುದ್ಧವಾಗಿದೆ. ಸ್ವಾಭಾವಿಕ ನ್ಯಾಯ ಎಲ್ಲಿದೆ? ಅವಕಾಶಗಳ ಸಮಾನತೆ ಎಲ್ಲಿದೆ? ಎಂದು ಪ್ರಶ್ನಿಸಿದ್ದಾರೆ.

ಖಾಸಗಿ-ಸಾರ್ವಜನಿಕ ಸಹಭಾಗಿತ್ವದ ವೈದ್ಯಕೀಯ ಕಾಲೇಜುಗಳ ಸರ್ಕಾರದ ಪ್ರಸ್ತಾಪವು ಖಂಡಿತವಾಗಿಯೂ ಖಾಸಗೀಕರಣಕ್ಕೆ ಕಾರಣವಾಗುತ್ತದೆ. ಅನುಮತಿ ನೀಡುವಾಗ ಶೇ. 50 ರಷ್ಟು ಸೀಟುಗಳನ್ನು ದುರ್ಬಲ ಸಮುದಾಯಗಳ ವಿದ್ಯಾರ್ಥಿಗಳಿಗೆ ಹಂಚುವುದು ಅಥವಾ ಸರ್ಕಾರಿ ಪ್ರವೇಶ ಪರೀಕ್ಷೆಯ ಶೇ. 50 ರಷ್ಟು ಮೀಸಲು ಮುಂತಾದ ಷರತ್ತುಗಳನ್ನು ವಿಧಿಸಬೇಕು ಎಂದು ಮಕ್ಕಳ ಹಕ್ಕುಗಳ ಕಾರ್ಯಕರ್ತ ವಾಸುದೇವ್ ಶರ್ಮಾ ಅಭಿಪ್ರಾಯಪಟ್ಟಿದ್ದಾರೆ. ಶಿಕ್ಷಣದ ಖಾಸಗೀಕರಣ ವಾಣಿಜ್ಯೀಕರಣದತ್ತ ಒಂದು ಹೆಜ್ಜೆಯಾಗಲಿದೆ ಎಂದು ಆಲ್ ಇಂಡಿಯಾ ಡೆಮಾಕ್ರಟಿಕ್ ಸ್ಟೂಡೆಂಟ್ಸ್ ಆರ್ಗನೈಸೇಶನ್ ಸದಸ್ಯರು ಆರೋಪಿಸಿದ್ದಾರೆ. PPP ಮಾದರಿಯು ಅಭಿವೃದ್ಧಿಯ ಹೆಸರಿನಲ್ಲಿ ಸಾರ್ವಜನಿಕ ಸಂಪನ್ಮೂಲಗಳನ್ನು ಖಾಸಗಿ ಲಾಭಕೋರರಿಗೆ ಹಸ್ತಾಂತರಿಸುವ ಸಾಧನವಾಗಿದೆ.

ವೈದ್ಯಕೀಯ ಶಿಕ್ಷಣದಲ್ಲಿ ಖಾಸಗೀಕರಣ ವಿದ್ಯಾರ್ಥಿಗಳಲ್ಲಿ ಲಾಭದಾಯಕ ಮನಸ್ಥಿತಿಯನ್ನು ಪ್ರೋತ್ಸಾಹಿಸುತ್ತದೆ. ಯಾರೇ ಆಗಲಿ ವೈದ್ಯಕೀಯ ಅಧ್ಯಯನವನ್ನು ಪೂರ್ಣಗೊಳಿಸಲು ಕೋಟಿಗಟ್ಟಲೆ ಖರ್ಚು ಮಾಡಿದಾಗ, ಜನರಿಗೆ ಸೇವೆ ಮಾಡುವ ಬದಲು ಆ ಹಣವನ್ನು ಹಿಂಪಡೆಯುವ ಉದ್ದೇಶ ಹೆಚ್ಚಾಗಿರುತ್ತದೆ. ಶಿಕ್ಷಣ ರಾಜ್ಯ ಸರ್ಕಾರದ ನಿರ್ವಹಣೆಯಾಗಿರಬೇಕು. ತಾರತಮ್ಯವಿಲ್ಲದೆ ಎಲ್ಲಾರಿಗೂ ದೊರೆಯುವಂತಾಗಬೇಕು. ಇಲ್ಲದಿದ್ದರೆ ಸಂಪೂರ್ಣ ವ್ಯವಸ್ಥೆಯೇ ಹದಗೆಟ್ಟು ಹೋಗುತ್ತದೆ. ಹಣ ಇಲ್ಲದವರು ಮೂಲಭೂತ ಹಕ್ಕುಗಳನ್ನು ಕಳೆದುಕೊಳ್ಳುವಂತಾಗುತ್ತದೆ ಎಂದು ಅವರು ಹೇಳಿದ್ದಾರೆ.

ಇಂತಹ ವ್ಯವಸ್ಥೆಗಳಿಂದ ಅತಿಯಾದ ಶುಲ್ಕ, ಶೈಕ್ಷಣಿಕ ಗುಣಮಟ್ಟ ಕುಸಿಯುವುದು, ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳ ವಿದ್ಯಾರ್ಥಿಗಳಿಗೆ ಪ್ರವೇಶ ನಿರಾಕರಣೆ ಮಾಡುತ್ತದೆ ಎಂದು ಸಂಘಟನೆ ಎಚ್ಚರಿಸಿದೆ.

## ಡಿಜಿಟಲ್ ಅರೆಸ್ಟ್: ವೃದ್ಧನಿಗೆ ರೂ.17.95 ಲಕ್ಷ ವಂಚನೆ

• ಉದಯವಾಹಿನಿ, ಬೆಂಗಳೂರು

ನಗರದ 67 ವರ್ಷದ ವೃದ್ಧರೊಬ್ಬರನ್ನು ಡಿಜಿಟಲ್ ಅರೆಸ್ಟ್ ಹೆಸರಿನಲ್ಲಿ ಬೆದರಿಸಿದ ಸೈಬರ್ ವಂಚಕ ರೂ.17.95 ಲಕ್ಷ ಸುಲಿಗೆ ಮಾಡಿರುವ ಘಟನೆ ನಡೆದಿದೆಕಾಕ್ಸ್ ಟೌನ್ ನಿವಾಸಿ ವಿಶ್ವನಾಥನ್ ದೂರಿನ ಮೇರೆಗೆ ಅಪರಿಚಿತ ವ್ಯಕ್ತಿಯ ವಿರುದ್ಧ ಸೆನ್ ಠಾಣೆಯ ಪೊಲೀಸರು ಪ್ರಕರಣ ದಾಖಲಿಸಿಕೊಂಡು, ತನಿಖೆ ಕೈಗೊಂಡಿದ್ದಾರೆ. ಅಕ್ಟೋಬರ್ 10ರಂದು ವಿಶ್ವನಾಥನ್ ಅವರಿಗೆ ಕರೆ ಮಾಡಿದ ಅಪರಿಚಿತ ವ್ಯಕ್ತಿ, ತಾನು ಮುಂಬೈನ ಕೊಲಾಬಾ ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ ಎಂದು ಪರಿಚಯಿಸಿಕೊಂಡಿದ್ದ. ಬಳಿಕ 'ಪಿಎಫ್‌ಐ ಜತೆ ನಂಟು ಹೊಂದಿರುವ ಸಂಸ್ಥೆಯ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ನಿಮ್ಮ ಹೆಸರು ಹಾಗೂ ಇತರೆ ವಿವರಗಳು ಪತ್ತೆಯಾಗಿವೆ' ಎಂದು ಬೆದರಿಸಿದ್ದಾನೆ.ಬಳಿಕ ಅಧಿಕಾರಿಗಳ ಸೋಗಿನಲ್ಲಿ ಹಲವರು ಕರೆ ಮಾಡಿ, ನಿಮ್ಮ ಆಧಾರ್ ಕಾರ್ಡ್ ದುರ್ಬಳಕೆಯಾಗಿದೆ ಎಂದು ಹೇಳಿದ್ದಾರೆ. ಎಫ್‌ಐಆರ್ ಪ್ರತಿ, ಪಿಎಫ್‌ಐ ಸದಸ್ಯರ ಭಾವಚಿತ್ರ, ಮುಂಬೈ ಪೊಲೀಸರ ಗುರುತಿನ ಚೀಟಿ ಹಾಗೂ ಸಂಬಂಧಪಟ್ಟ ದಾಖಲೆಗಳನ್ನು ವಿಶ್ವನಾಥನ್ ಅವರ ವಾಟ್ಸ್ ಆ್ಯಪ್‌ಗೆ ಕಳುಹಿಸಿದ್ದಾರೆ. ನಂತರ ಡಿಜಿಟಲ್ ಅರೆಸ್ಟ್' ಮಾಡುತ್ತಿರುವುದಾಗಿ ಹೇಳಿದ್ದಾರೆ. ಆಸ್ತಿಯ ಬಗ್ಗೆ ತನಿಖೆ ನಡೆಸಬೇಕಿದೆ. ತನಿಖೆ ಮುಗಿಯುವವರೆಗೂ ಖಾತೆಯಲ್ಲಿರುವ ಹಣವನ್ನು ವರ್ಗಾಯಿಸಬೇಕು. ಹಣವನ್ನು ತನಿಖೆ ಪೂರ್ಣವಾದ ಬಳಿಕ ಮರಳಿಸಲಾಗುವುದು' ಎಂದು ಹೇಳಿದ್ದಾರೆ.

# 2ನೇ ಏರ್‌ಪೋರ್ಟ್ ನಿರ್ಮಾಣ ಚುರುಕು, ಶೀಘ್ರದಲ್ಲೇ ಫೀಸಿಬಿಲಿಟಿ ರಿಪೋರ್ಟ್‌ಗೆ ಟೆಂಡರ್

**ಬೆಂಗಳೂರಿನಲ್ಲಿ 2ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣಕ್ಕೆ ರಾಜ್ಯ ಸರ್ಕಾರದಿಂದ ಪೂರ್ವಸಿದ್ಧತಾ ಕಾರ್ಯ**

• ಉದಯವಾಹಿನಿ, ಬೆಂಗಳೂರು

ರಾಜಧಾನಿ ಬೆಂಗಳೂರಿನಲ್ಲಿ ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಿಸುವ ಮಹತ್ವಾಕಾಂಕ್ಷಿ ಯೋಜನೆಗೆ ರಾಜ್ಯ ಸರ್ಕಾರ ಪೂರ್ವಸಿದ್ಧತಾ ಕಾರ್ಯಗಳನ್ನು ಆರಂಭಿಸಿದೆ. ಯೋಜನೆಯಲ್ಲಿ ಆಗಬಹುದಾದ ವಿಳಂಬವನ್ನು ತಪ್ಪಿಸಲು, ಸರ್ಕಾರ ತಾನು ಗುರುತಿಸಿದ ಮೂರು ಸಂಭಾವ್ಯ ಸ್ಥಳಗಳಲ್ಲಿ ಆರ್ಥಿಕ ಕಾರ್ಯಸಾಧ್ಯತಾ ವರದಿ (ಫೀಸಿಬಿಲಿಟಿ ರಿಪೋರ್ಟ್) ಸಿದ್ಧಪಡಿಸಲು ಮುಂದಾಗಿದೆ. ಈ ಸಂಬಂಧ ಶೀಘ್ರದಲ್ಲೇ ಟೆಂಡರ್ ಪ್ರಕ್ರಿಯೆ ಆರಂಭಿಸಲು ಉದ್ದೇಶಿಸಿದೆ.

ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರದ (ಎಎಐ) ತಾಂತ್ರಿಕ ತಂಡವು ಈಗಾಗಲೇ ಮೂರು ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರೂ, ತನ್ನ ಅಂತಿಮ ತೀರ್ಮಾನವನ್ನು ಇನ್ನೂ ಪ್ರಕಟಿಸಿಲ್ಲ. ಆದಾಗ್ಯೂ, ಎಎಐ ವರದಿಗಾಗಿ ಕಾಯದೆ,



ಉದಯವಾಹಿನಿ ಚಿತ್ರ

ಮೂರೂ ಜಾಗಗಳ ಆರ್ಥಿಕ ಕಾರ್ಯಸಾಧ್ಯತೆಗಳನ್ನು ಅಧ್ಯಯನ ಮಾಡಲು ರಾಜ್ಯ ಸರ್ಕಾರ ನಿರ್ಧರಿಸಿದೆ.

ಕನಕಪುರ ರಸ್ತೆಯ ಕಗ್ಗಲೀಪುರ - ಬಿಡದಿ ನಡುವಿನ ಪ್ರದೇಶ, ಹಾರೋಹಳ್ಳಿ ಸಮೀಪದ ಜಾಗ, ನೆಲಮಂಗಲದಿಂದ ಕುಣಿಗಲ್‌ಗೆ ಸಾಗುವ ರಾಷ್ಟ್ರೀಯ ಹೆದ್ದಾರಿ-75ಕ್ಕೆ ಹೊಂದಿಕೊಂಡಿರುವ ಜಾಗವನ್ನು ಸಂಭಾವ್ಯ ಸ್ಥಳಗಳೆಂದು ಗುರುತಿಸಲಾಗಿದೆ.

**ಯೋಜನೆಗೆ ವೇಗ ನೀಡಿದ ಅಂಶಗಳು**

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮೇಲಿನ ಒತ್ತಡ ದಿನೇ ದಿನೇ ಹೆಚ್ಚುತ್ತಿದೆ. 2033ರ ವೇಳೆಗೆ ಎರಡನೇ ವಿಮಾನ ನಿಲ್ದಾಣವನ್ನು ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ. ಹಾಲಿ ವಿಮಾನ ನಿಲ್ದಾಣದ 150 ಕಿ.ಮೀ. ವ್ಯಾಪ್ತಿಯಲ್ಲಿ 2035ರವರೆಗೆ ಮತ್ತೊಂದು ವಿಮಾನ ನಿಲ್ದಾಣ ನಿರ್ಮಿಸಲು ಅವಕಾಶವಿಲ್ಲ. ಈಗಿನಿಂದಲೇ ಪ್ರಕ್ರಿಯೆ ಆರಂಭಿಸಿದರೆ, ನಿಷೇಧದ ಅವಧಿ ಮುಗಿಯುತ್ತಿದ್ದಂತೆ ಹೊಸ ವಿಮಾನ ನಿಲ್ದಾಣ ಕಾರ್ಯಾರಂಭ ಮಾಡಲು ಸಾಧ್ಯವಾಗಲಿದೆ.

ಮೂಲಸೌಕರ್ಯ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳ ಪ್ರಕಾರ, ಎಎಐ ತಾಂತ್ರಿಕ ಅನುಮೋದನೆ ನೀಡಿದ ತಕ್ಷಣವೇ ಯೋಜನೆಯನ್ನು ಜಾಗತಿಕ ಟೆಂಡರ್‌ಗೆ ವಹಿಸಲು ಆರ್ಥಿಕ ಕಾರ್ಯಸಾಧ್ಯತಾ ವರದಿ ಅತ್ಯಗತ್ಯ. ಹೀಗಾಗಿ, ಈ ಬ್ಯಾಕ್ ಎಂಡ್ ಹೋಂವರ್ಕ್ ಅನ್ನು ಮೊದಲೇ ಪೂರ್ಣಗೊಳಿಸುವ ಮೂಲಕ ಸಮಯ ಉಳಿತಾಯ ಮಾಡುವುದು ಸರ್ಕಾರದ ಲೆಕ್ಕಾಚಾರವಾಗಿದೆ. ಇದೇ ವೇಳೆ, ಬೆಂಗಳೂರು ದಕ್ಷಿಣ ಭಾಗದ ಪ್ರಯಾಣಿಕರನ್ನು, ಕಾರ್ಗೋ ಪ್ರಮಾಣವನ್ನು ಗುರಿಯಾಗಿಸಿಕೊಂಡು ತಮಿಳುನಾಡು ಸರ್ಕಾರವು ಗಡಿಭಾಗದ ಹೊಸೂರಿನಲ್ಲಿ ವಿಮಾನ ನಿಲ್ದಾಣ ನಿರ್ಮಿಸಲು ಆಸಕ್ತಿ ತೋರಿದೆ. ಇದು ವಾರ್ಷಿಕ 3 ಕೋಟಿ ಪ್ರಯಾಣಿಕರನ್ನು ನಿಭಾಯಿಸುವ ಸಾಮರ್ಥ್ಯದ ಏರ್‌ಪೋರ್ಟ್ ಆಗಿರಲಿದೆ. ಈ ಸ್ಪರ್ಧಾತ್ಮಕ ಬೆಳವಣಿಗೆಯು ರಾಜ್ಯ ಸರ್ಕಾರ ತನ್ನ ಯೋಜನೆಯನ್ನು ಚುರುಕುಗೊಳಿಸಲು ಮತ್ತೊಂದು ಕಾರಣವಾಗಿದೆ.

# ಇಂಜಿನಿಯರಿಂಗ್ ಕಾಲೇಜು ಪ್ರಾರಂಭಕ್ಕೆ ನಂಜಾವಧೂತ ಸ್ವಾಮೀಜಿ ಸಲಹೆ

**ಒಕ್ಕಲಿಗರ ಸಂಘ, ಕೃಷ್ಣಪ್ಪ ರಂಗಮ್ಮ ಎಜುಕೇಷನ್ ಟ್ರಸ್ಟ್ ಸಹಯೋಗದೊಂದಿಗೆ ಒಕ್ಕಲಿಗ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭ**

• **ಉದಯವಾಹಿನಿ, ಮೈಸೂರು**

ರಾಜ್ಯ ಒಕ್ಕಲಿಗರ ಸಂಘದಲ್ಲಿ ಸುಮಾರು 700 ಕೋಟಿ ಹಣ ಇದ್ದು, ಸಾಕಷ್ಟು ಜಮೀನು ಸಹ ಇರುವುದರಿಂದ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಹೆಸರಲ್ಲಿ ಒಂದು ಮೆಡಿಕಲ್ ಕಾಲೇಜು ಮತ್ತು ಮಾಜಿ ವಿದೇಶಾಂಗ ಸಚಿವರಾದ ಎಸ್.ಎಂ.ಕೃಷ್ಣ ಅವರ ಹೆಸರಲ್ಲಿ ಒಂದು ಇಂಜಿನಿಯರಿಂಗ್ ಕಾಲೇಜು ಪ್ರಾರಂಭಿಸಬೇಕೆಂದು ಸ್ಪಟಿಕಪುರಿ ಮಹಾಸಂಸ್ಥಾನ ಮಠದ ಪೀಠಾಧಿಪತಿ ಶ್ರೀ ನಂಜಾವಧೂತ ಸ್ವಾಮೀಜಿ ರಾಜ್ಯ ಒಕ್ಕಲಿಗರ ಸಂಘಕ್ಕೆ ಸಲಹೆ ನೀಡಿದರು. ನಗರದ ಸಪ್ತಪದಿ ಕಲ್ಯಾಣ ಮಂಟಪದಲ್ಲಿ ರಾಜ್ಯ ಒಕ್ಕಲಿಗರ ಸಂಘ ಮತ್ತು ಕೃಷ್ಣಪ್ಪ ರಂಗಮ್ಮ ಎಜುಕೇಷನ್ ಟ್ರಸ್ಟ್ ಸಹಯೋಗದೊಂದಿಗೆ ಒಕ್ಕಲಿಗ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭದ ಸಾನಿಧ್ಯ ವಹಿಸಿ ಅವರು ಮಾತನಾಡಿದರು. ಒಕ್ಕಲಿಗರ ಸಂಘ ಸಮುದಾಯದ ಬಡ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳ ನೆರವಿಗೆ ನಿಲ್ಲಬೇಕು, ಚಿಕ್ಕಬಳ್ಳಾಪುರದಲ್ಲಿ ಪುಟ್ಟಬರ್ತಿಯ ಮಧುಸೂಧನ ಸಾಯಿ ಅವರು ಮೆಡಿಕಲ್ ಕಾಲೇಜು ಪ್ರಾರಂಭಿಸಿದ್ದಾರೆ. ಅಲ್ಲಿ ಒಂದು ವರ್ಷಕ್ಕೆ ಒಂದು ಮೆಡಿಕಲ್ ಸೀಟಿಗೆ ಕೇವಲ ಒಂದು ರೂಪಾಯಿ ಫೀಸು ಪಡೆದು ಶಿಕ್ಷಣ ನೀಡುವ ಮೂಲಕ ಸಮುದಾಯದ ಸೇವೆ ಸಲ್ಲಿಸುತ್ತಿದ್ದಾರೆ, ನೀವೇನು ಮಾಡುತ್ತಿದ್ದೀರಿ, ಮೆಡಿಕಲ್ ಕಾಲೇಜು ಮತ್ತು ಇಂಜಿನಿಯರಿಂಗ್ ಕಾಲೇಜಿನಲ್ಲಿ ಒಕ್ಕಲಿಗರ ಪ್ರತಿಭಾವಂತ ಮಕ್ಕಳಿಗೆ ಉಚಿತವಾಗಿ ಒಂದು ಸೀಟನ್ನೂ ಕೊಡುತ್ತಿಲ್ಲ, ಯಾವ ರೀತಿ ಸಮುದಾಯಕ್ಕೆ ಸೇವೆ ಸಲ್ಲಿಸುತ್ತಿದ್ದೀರಿ ಎಂದು ಟೀಕಿಸಿದರು. ಕನಿಷ್ಠ ಒಕ್ಕಲಿಗ ಸಮುದಾಯದ ನಾಯಕರಾದ ಹೆಚ್.ಡಿ.ದೇವೇಗೌಡರು ಮತ್ತು ಎಸ್.ಎಂ.ಕೃಷ್ಣ ಅವರ ಹೆಸರು ಶಾಶ್ವತವಾಗಿ ಉಳಿಯುವಂತೆ ಮಾಡಲು ಶಿಕ್ಷಣ ಸಂಸ್ಥೆಗಳಿಗೆ ಅವರ ಹೆಸರಿಡಿ ಎಂದರು. ಕಾರ್ಯಕ್ರಮವನ್ನು ಉದ್ಘಾಟಿಸಿದ ಶಾಸಕ ಜಿ.ಟಿ.ದೇವೇಗೌಡ ಮಾತನಾಡಿ, ಒಕ್ಕಲಿಗ ಸಮುದಾಯದ ಮಕ್ಕಳು ಉನ್ನತ ಶಿಕ್ಷಣ ಪಡೆಯಬೇಕು, ಪ್ರತಿಭಾವಂತ ಮಕ್ಕಳಿಗೆ ಸನ್ಮಾನಿಸಿ ಪ್ರತಿಭಾ ಪುರಸ್ಕಾರ ನಿಡುವ ಮೂಲಕ ಒಕ್ಕಲಿಗರ ಸಂಘ ಅವರಿಗೆ ಪ್ರೇರಣೆಯಾಗಿ ನಿಂತಿರುವುದು ಸ್ವಾಗತಾರ್ಹ ಎಂದರು.

ಕಾರ್ಯಕ್ರಮಕ್ಕೂ ಮುನ್ನ ಶ್ರೀ ಬಾಲಗಂಗಾಧರನಾಥ ಸ್ವಾಮೀಜಿ, ಕೆಂಪೇಗೌಡರ ಪುತ್ಥಳಿಗೆ ಪುಷ್ಪಾರ್ಚನೆ ಮಾಡಲಾಯಿತು.




> **ಮೈಸೂರು ಮಹಾನಗರಪಾಲಿಕೆ ಮಾಜಿ ಸದಸ್ಯರು ಮತ್ತು ಒಕ್ಕಲಿಗರ ಸಂಘದ ನಿರ್ದೇಶಕರಾದ ಕೆ.ವಿ.ಶ್ರೀಧರ್ ಮಾತನಾಡಿ, ಮೈಸೂರು ಚಾಮರಾಜನಗರ ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಉತ್ತಮ ಅಂಕಗಳನ್ನು ಪಡೆದ ನಮ್ಮ ಸಮುದಾಯದ 183 ವಿದ್ಯಾರ್ಥಿಗಳಿಗೆ ತಲಾ 5 ಸಾವಿರ ಹಣ ನೀಡಿ, ಮಕ್ಕಳನ್ನು ಗೌರವಿಸಲಾಗಿದೆ. ಈ ಮೂಲಕ ಒಕ್ಕಲಿಗರ ಸಂಘ ಸಮುದಾಯದ ಮಕ್ಕಳ ಶಿಕ್ಷಣಕ್ಕೆ ನೆರವು ನೀಡುತ್ತಿದೆ ಎಂದರು.**

> **ಒಕ್ಕಲಿಗರ ಸಂಘದ ಚುನಾವಣೆಯಲ್ಲಿ ಹಣದ ಹರಿವು ನಡೆಯುತ್ತದೆ, ಹಣ ಪಡೆದು ಓಟು ಹಾಕುವಂತಹ ಅನಿಷ್ಠ ಪದ್ದತಿ ನಿಲ್ಲಬೇಕು, ಸಮುದಾಯಕ್ಕೆ ನಿಸ್ವಾರ್ಥವಾಗಿ ಸೇವೆ ಸಲ್ಲಿಸುವವರಿಗೆ ಅವಕಾಶ ನೀಡಬೇಕು, ಅಲ್ಲದೇ ಒಕ್ಕಲಿಗರ ಸಂಘದಲ್ಲಿ ನಡೆಯುವ ಎಲ್ಲಾ ಕಾರ್ಯಕ್ರಮಗಳ ಬಗ್ಗೆ ಅಧ್ಯಕ್ಷರು ಸರಿಯಾದ ನಿರ್ಧಾರಗಳನ್ನು ಕೈಗೊಳ್ಳಬೇಕೆಂದು ಸಲಹೆ ನೀಡಿದರು.**
>
> ವಿಧಾನ ಪರಿಷತ್ ಮಾಜಿ ಉಪ ಸಭಾಪತಿ ಮರಿತಿಬ್ಬೇಗೌಡ

ಒಕ್ಕಲಿಗ ಸಮುದಾಯದ ಸಾಧಕರಾದ ವಿಧಾನ ಪರಿಷತ್ ಮಾಜಿ ಸದಸ್ಯ ಡಾ.ಡಿ.ಮಾದೇಗೌಡ, ನಿವೃತ್ತ ಡಿಐಜಿ ಕೆ.ಅರ್ಕೇಶ್, ಆರಕ್ಷಕ ಉಪ ಅಧೀಕ್ಷಕರಾದ ಶಾಂತಮಲ್ಲಪ್ಪ, ಕರಾಮುವಿವಿ ವಿಶ್ರಾಂತ ಕುಲಪತಿ ಡಾ.ಎಂ.ಎಸ್.ರಾಮೇಗೌಡ, ಯುಪಿಎಸ್‌ಸಿ ಸಾಧಕ ಶ್ರೇಯಸ್, ಪತ್ರಕರ್ತ ವಿನೋದ್ ಭೈರಪ್ಪ ಅವರನ್ನು ಸನ್ಮಾನಿಸಲಾಯಿತು.

## ಗ್ರಾಮೀಣ ರಸ್ತೆಗೆ ಬೇಕಿದೆ ಅಭಿವೃದ್ಧಿ ಭಾಗ್ಯ

• **ಉದಯವಾಹಿನಿ, ಶಿಡ್ಲಘಟ್ಟ**

ನಗರ ಪ್ರದೇಶ ದಾಟಿ ಗ್ರಾಮೀಣ ಭಾಗದತ್ತ ಮುಖ ಮಾಡಿದರೆ ಮೊದಲು ಆಹ್ವಾನಿಸುವುದು ಗುಂಡಿಬಿದ್ದ ರಸ್ತೆಗಳು. ಅಲ್ಲಲ್ಲಿ ಚೂರುಪಾರು ಡಾಂಬರು ಮೆತ್ತಿಕೊಂಡ ಕೊರಕಲು ಬಿದ್ದ ಮಣ್ಣಿನ ಮಾರ್ಗಗಳು. ಆ ರಸ್ತೆಯಲ್ಲೇ ಪ್ರಯಾಸಪಟ್ಟು ಸಾಗಬೇಕಾದ ಅನಿವಾರ್ಯತೆ ಗ್ರಾಮೀಣ ಜನರದ್ದು. ಇತ್ತೀಚೆಗೆ ತಾಲ್ಲೂಕಿನಾದ್ಯಂತ ಬೀಳುತ್ತಿರುವ ಮಳೆಯಿಂದಾಗಿ ಗ್ರಾಮೀಣ ಭಾಗದ ರಸ್ತೆಗಳು ಇನ್ನಷ್ಟು ಹದಗೆಟ್ಟಿವೆ. ಅಲ್ಲದೆ ಮಳೆ ನೀರು ಸರಾಗವಾಗಿ ಹರಿದು ಹೋಗಲು ರಸ್ತೆಯ ಇಕ್ಕೆಲಗಳಲ್ಲಿ ಸರಿಯಾದ ವ್ಯವಸ್ಥೆ ಇರದ ಕಾರಣ ಬಹುತೇಕ ಗ್ರಾಮೀಣ ರಸ್ತೆಗಳು ಕೊರಕಲು ಬಿದ್ದಿವೆ. ರಸ್ತೆ ಅಕ್ಕಪಕ್ಕ ಇರುವ ಕುರುಚಲು ಗಿಡಗಳು, ಜಾಲಿ ಗಿಡಗಳು ಹರಿಯುವ ನೀರನ್ನು ತಡೆಯುತ್ತವೆ. ಆಗ ಸಹಜವಾಗಿ ಕೊರಕಲು, ಗುಂಡಿಗಳ ಪ್ರಮಾಣ ಹೆಚ್ಚಾಗುತ್ತದೆ. ಕೆಲವೆಡೆ ಚರಂಡಿಗಳು ಇದ್ದರೂ ಅವುಗಳ ಸರಿಯಾದ ನಿರ್ವಹಣೆ ಇಲ್ಲದ ಕಾರಣ ರಸ್ತೆ ಮೇಲೆ ಮಳೆ ನೀರು ಹರಿದು ಮಾರ್ಗಗಳು ಹಾಳಾಗುತ್ತವೆ.

ವೈ.ಹುಣಸೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಾರಹುಣಸೇನಹಳ್ಳಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯಾಗಿಲ್ಲ. ಸಮರ್ಪಕ ರಸ್ತೆ ಇಲ್ಲ. ರಸ್ತೆ ಇಲ್ಲದ ಮೇಲೆ ಬಸ್ ಸಂಚಾರದ ಮಾತು ಇಲ್ಲವೇ ಇಲ್ಲ. ಸರಿಯಾದ ರಸ್ತೆ ಇಲ್ಲದ್ದರಿಂದ ಬಸ್ ಬರುವುದಿಲ್ಲ. ಶಾಲೆಗೆ ಹೋಗುವ ಮಕ್ಕಳು ದ್ವಿಚಕ್ರ ವಾಹನ ಅವಲಂಬಿಸಬೇಕು. ಮಳೆ ಬಿದ್ದರೆ ದ್ವಿಚಕ್ರ ವಾಹನದಲ್ಲಿ ಸಂಚರಿಸುವುದೂ ಕಷ್ಟ, ಒಂದು ರೀತಿಯಲ್ಲಿ ಸರ್ಕಾರದ ಸಂಪರ್ಕವನ್ನೆ ಕಳೆದುಕೊಂಡಂತೆ ವಾರಹುಣಸೇನಹಳ್ಳಿ ಅಭಿವೃದ್ಧಿಯಿಂದ ದೂರ ಉಳಿದುಬಿಟ್ಟಿದೆ ಎನ್ನುತ್ತಾರೆ ವಾರಹುಣಸೇನಹಳ್ಳಿ ಗ್ರಾಮಸ್ಥ ರಂಜಿತ್‌ಕುಮಾರ್. ರಸ್ತೆಗಳು ನರನಾಡಿಗಳಿದ್ದಂತೆ. ರಸ್ತೆ ಸಂಪರ್ಕದಿಂದ ಅಭಿವೃದ್ಧಿ ಸಾಧ್ಯ.

ಹಾಗಾಗಿ ತಾಲ್ಲೂಕಿನ ರಸ್ತೆ ಸಂಪರ್ಕ ವ್ಯವಸ್ಥೆಯನ್ನು ತುರ್ತಾಗಿ ಬಲಪಡಿಸಬೇಕಿದೆ. ತಾಲ್ಲೂಕಿನಲ್ಲಿ ಸುಮಾರು 200–220 ಹಳ್ಳಿಗಳಿವೆ. ತಾಲ್ಲೂಕು ಕೇಂದ್ರ ಸೇರಿದಂತೆ ಗ್ರಾಮೀಣ ಭಾಗದಲ್ಲಿ ರಸ್ತೆ ಸಂಪರ್ಕ ಸಂಪೂರ್ಣ ಹದಗೆಟ್ಟಿದೆ. ಕೆಲವು ಗ್ರಾಮಗಳ ರಸ್ತೆಗಳು ರಸ್ತೆ ಎನಿಸಿಕೊಳ್ಳುವ ಯೋಗ್ಯತೆ ಕಳೆದುಕೊಂಡಿವೆ. ಇದರಿಂದ ಗ್ರಾಮೀಣ ಭಾಗದಲ್ಲಿ ಸಂಚಾರ ಸಂಕಷ್ಟವಾಗಿದೆ. ಹಲವು ವರ್ಷಗಳಿಂದ ಸುಸಜ್ಜಿತ ರಸ್ತೆ ಗ್ರಾಮೀಣರಿಗೆ ಕನಸಾಗಿ ಪರಿಣಮಿಸಿದೆ.



## ಮಾಗಡಿ ಕೋಟೆ ಮೈದಾನದಲ್ಲಿ ಹಲವು ಅಭಿವೃದ್ಧಿ ಕಾಮಗಾರಿ

• **ಉದಯವಾಹಿನಿ, ಮಾಗಡಿ**

ಪಟ್ಟಣದ ಕೋಟೆ ಮೈದಾನದಲ್ಲಿ ಹಲವು ದಶಕಗಳಿಂದಲೂ ಪ್ರತಿ ನಡೆಯುತ್ತಿದ್ದ ಕುರಿ, ಕೋಳಿ, ಮೇಕೆ ಸಂತೆ ಭವಿಷ್ಯ ಈಗ ಅನಿಶ್ಚಿತವಾಗಿದೆ.

ಸರ್ಕಾರ ಮಾಗಡಿ ಕೋಟೆ ಪುನರುಜ್ಜೀವನ ಮತ್ತು ಅಭಿವೃದ್ಧಿಗೆ ರೂ.103 ಕೋಟಿ ಬಜೆಟ್ ಅನುಮೋದನೆ ನೀಡಿದೆ. ಈಗ ಸಂತೆಗೆ ಪರ್ಯಾಯ ಜಾಗದ ಹುಡುಕಾಟ ಪ್ರಾರಂಭವಾಗಿದೆ. ಕೋಟೆ ಮೈದಾನ ಪ್ರಾಚ್ಯ ವಸ್ತು ಸಂಗ್ರಹಾಲಯ ಇಲಾಖೆ ಆಸ್ತಿಯಾಗಿದೆ. ಆದರೆ, ದೀರ್ಘಕಾಲದಿಂದ ಪುರಸಭೆಯು ಈ ಜಾಗದಲ್ಲಿ ಸಂತೆಯನ್ನು ನಡೆಸಿಕೊಂಡು ಬಂದಿದೆ. ಅದರ ನಿರ್ವಹಣಾ ಹಕ್ಕನ್ನು ವಾರ್ಷಿಕ ಹರಾಜಿನ ಮೂಲಕ ಖಾಸಗಿಯವರಿಗೆ ನೀಡುತ್ತಿದೆ. 2025–26 ಆರ್ಥಿಕ ವರ್ಷಕ್ಕೆ ಈ ಹರಾಜನ್ನು ರೂ.8.50ಲಕ್ಷಕ್ಕೆ ನೀಡಲಾಗಿದೆ.

ಪುರಸಭೆ ಮುಖ್ಯಾಧಿಕಾರಿ ಶ್ರೀನಿವಾಸ್, ಕೋಟೆ ಕಾಮಗಾರಿ ಆರಂಭವಾದ ನಂತರ ಈ ಜಾಗದಲ್ಲಿ ಸಂತೆ ನಡೆಸಲು ಅವಕಾಶವಿರುವುದಿಲ್ಲ. ಆದರೆ, ಹರಾಜುದಾರರು ಪುರಸಭೆ ಗುರುತಿಸುವ ಹೊಸ ಜಾಗದಲ್ಲಿ ತಮ್ಮ ಒಪ್ಪಂದದ ಅವಧಿ ಮುಗಿಯುವವರೆಗೂ ಸಂತೆ ನಡೆಸಲು ಅವಕಾಶ ಪಡೆಯುತ್ತಾರೆ ಎಂದರು. ಈ ಸಮಸ್ಯೆ ಪರಿಹರಿಸಲು ಶಾಸಕ ಬಾಲಕೃಷ್ಣ ಹಸ್ತಕ್ಷೇಪ ಮಾಡಿದ್ದಾರೆ. ಅವರ ಮಾರ್ಗದರ್ಶನದಲ್ಲಿ ಪುರಸಭೆಯು ಪಟ್ಟಣದ ಸೋಮೇಶ್ವರ ಬಡಾವಣೆ ಸಮೀಪ ಸುಮಾರು ಎರಡು ಎಕರೆ ವಿಸ್ತೀರ್ಣದ ಸರ್ಕಾರಿ ಜಾಗವನ್ನು ಗುರುತಿಸುವ ಪ್ರಕ್ರಿಯೆಯಲ್ಲಿ ಈಗಾಗಲೇ ತೊಡಗಿದೆ.

ಈ ಜಾಗ ಲಭ್ಯವಾಗದಿದ್ದರೆ ಪುರಸಭೆಯು ಅಗತ್ಯವಿರುವ ಜಾಗವನ್ನು ಖರೀದಿಸುವ ಸಿದ್ಧತೆ ಮಾಡಲಿದೆ ಎಂದರು. ಸಂತೆಯನ್ನು ಪಟ್ಟಣದ ಹೊಸಪೇಟೆ ರಾಮನಗರದ ಖಾಸಗಿ ಜಾಗ ಅಥವಾ ಖಾಸಗಿ ಬಸ್ ನಿಲ್ದಾಣ ಬಳಿ ತಾತ್ಕಾಲಿಕವಾಗಿ ಸ್ಥಳಾಂತರಿಸಲಾಗುತ್ತದೆ.

ಈ ತಾತ್ಕಾಲಿಕ ಏರ್ಪಾಡಿನಿಂದ ಗ್ರಾಹಕರು ಮತ್ತು ರೈತರಿಗೆ ತೊಂದರೆ ಉಂಟಾಗಲಿದೆ ಎಂಬ ಅಭಿಪ್ರಾಯ ವ್ಯಕ್ತವಾಗಿದೆ.

ಪುರಸಭೆ ತಕ್ಷಣವೇ ಸ್ಥಿರ ಮತ್ತು ಶಾಶ್ವತವಾದ ಪರ್ಯಾಯ ಸ್ಥಳ ಗುರುತಿಸಿ ಘೋಷಿಸಬೇಕು ಎಂದು ರೈತರು ಮತ್ತು ನಾಗರಿಕರು ಒತ್ತಾಯಿಸಿದ್ದಾರೆ.



> **ಪ್ರತಿ ಶುಕ್ರವಾರ ಬೇರೆ ಬೇರೆ ಜಿಲ್ಲೆಗಳಿಂದಲೂ ಕುರಿ–ಕೋಳಿ ಮೇಕೆ ಕೊಂಡುಕೊಳ್ಳಲು ಸಾಕಷ್ಟು ರೈತರು ದಲ್ಲಾಳಿಗಳು ಇಲ್ಲಿಗೆ ಬರುತ್ತಾರೆ. ಈಗ ಕೋಟೆ ಕಾಮಗಾರಿ ಆರಂಭವಾದ ನಂತರ ಸಂತೆ ಮಾಡಲು ಅವಕಾಶವಿಲ್ಲ. ಪುರಸಭೆಯಿಂದ 2 ಎಕರೆ ಜಾಗ ಗುರುತಿಸುವಂತೆ ಪುರಸಭೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದು ಜಾಗ ಸಿಕ್ಕ ಕೂಡಲೇ ಕುರಿ–ಕೋಳಿ ಸಂತೆ ನಿಗದಿ ಮಾಡಲಾಗುವುದು.**
>
> **–ಎಚ್.ಸಿ.ಬಾಲಕೃಷ್ಣ, ಶಾಸಕ**

## ಟೂಡ ಅಧ್ಯಕ್ಷಗಾದಿ ನನೆಗುದಿಗೆ: ಶಾಸಕರ ನಿರ್ಲಕ್ಷ್ಯ ಆರೋಪ

• **ಉದಯವಾಹಿನಿ, ತಿಪಟೂರು**

ನಗರವು ವಾಣಿಜ್ಯ, ಶಿಕ್ಷಣ ಮತ್ತು ಕೈಗಾರಿಕಾ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿದ್ದು ದಿನದಿಂದ ದಿನಕ್ಕೆ ವೇಗವಾಗಿ ಬೆಳೆಯುತ್ತಿದ್ದರೂ, ಅಭಿವೃದ್ಧಿಗೆ ಅಗತ್ಯ ಯೋಜಿತ ವ್ಯವಸ್ಥೆಯ ಕೊರತೆ ಕಳೆದ ಹಲವು ವರ್ಷಗಳಿಂದ ಎದ್ದು ಕಾಣುತ್ತಿದೆ. ಕೆಲವು ವರ್ಷಗಳಿಂದ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಸದಸ್ಯರ ನೇಮಕಾತಿಗೆ ಕಾಲಕೂಡಿಲ್ಲ. 2015ರ ಫೆಬ್ರವರಿ 20ರಂದು ಅಸ್ತಿತ್ವಕ್ಕೆ ಬಂದ ಪ್ರಾಧಿಕಾರಕ್ಕೆ ಒಬ್ಬ ಅಧ್ಯಕ್ಷ, ಸ್ಥಳೀಯ ಸಂಸ್ಥೆಗಳ ಚುನಾಯಿತ ಸದಸ್ಯ ಹಾಗೂ ಮೂವರು ಸರ್ಕಾರದಿಂದ ನೇಮಿಸಲ್ಪಡುವ ಅಧಿಕಾರೇತರ ಸದಸ್ಯರನ್ನು ನೇಮಿಸಿ ನಗರ ಯೋಜನಾ ಸಹಾಯಕ ನಿರ್ದೇಶಕರನ್ನು ಸದಸ್ಯ ಕಾರ್ಯದರ್ಶಿಯಾಗಿ, ನಗರಸಭೆ ಮುಖ್ಯಾಧಿಕಾರಿಯನ್ನು ಪ್ರತಿನಿಧಿಯಾಗಿ ನಗರಾಭಿವೃದ್ಧಿ ಇಲಾಖೆ ಆದೇಶ ಮಾಡಬೇಕಿರುತ್ತದೆ.

ಆರಂಭದಲ್ಲಿ ಅಂದಿನ ಉಪವಿಭಾಗಧಿಕಾರಿ ಪ್ರಜ್ಞಾ ಅಮ್ಮೆಂಬಳ ಎರಡು ತಿಂಗಳು ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಿದ ನಂತರ 2015ರಲ್ಲಿ ಸಿ.ಬಿ.ಶಶಿಧರ್ 18 ತಿಂಗಳು ಮತ್ತು 2ನೇ ಅವಧಿಯಲ್ಲಿ 19 ತಿಂಗಳು ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದರು. ತದನಂತರ ಸರ್ಕಾರ ಯಾವ ವ್ಯಕ್ತಿಯನ್ನು ಪದನಾಮಗೊಳಿಸಿದ ಕಾರಣ ಈವರೆಗೆ ಹತ್ತು ಮಂದಿ ಉಪವಿಭಾಗಧಿಕಾರಿಗಳು ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದು ಪ್ರಸ್ತುತ ಸಪ್ತಶ್ರೀ ಬಿ.ಕೆ. ಆಡಳಿತ ವಹಿಸಿದ್ದಾರೆ. ನಗರವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವುದು, ವಸತಿ, ಕೈಗಾರಿಕೆ, ವ್ಯಾಪಾರ, ಸಾರಿಗೆ, ಒಳಚರಂಡಿ, ರಸ್ತೆ, ನೀರು, ಮುಂತಾದ ಮೂಲಸೌಕರ್ಯ ಅಭಿವೃದ್ಧಿಪಡಿಸುವುದು, ಅನಧಿಕೃತ ಕಟ್ಟಡ ನಿರ್ಮಾಣ, ಅಸಂಘಟಿತ ವಸತಿ ಪ್ರದೇಶಗಳನ್ನು ನಿಯಂತ್ರಿಸುವುದು, ಪರಿಸರ ಸ್ನೇಹಿ, ಮನೆ ಕಟ್ಟುವವರಿಗೆ ನಕ್ಷೆ ಅನುಮೋದನೆ, ಯೋಜನಾ ಅನುಮತಿ, ಭೂ ವಿನ್ಯಾಸಕ್ಕೆ ಸಂಬಂಧಿಸಿದ ಪ್ರಕ್ರಿಯೆಗಳು ಟೂಡಾದಿಂದ ಸುಗಮವಾಗಲಿವೆ. ಯೋಜನಾ ಪ್ರದೇಶದ ವ್ಯಾಪ್ತಿಯೊಳಗೆ ತಿಪಟೂರು, ಗೊರಗೊಂಡನಹಳ್ಳಿ, ಮಾರನಗೆರೆ, ಲಿಂಗದಹಳ್ಳಿ, ಮಾದಿಹಳ್ಳಿ, ಕಂಚಾಘಟ್ಟ, ಅಣ್ಣಾಪುರ, ಈಡೇನಹಳ್ಳಿ, ಹಳೇಪಾಳ್ಯ, ಅನಗೊಂಡನಹಳ್ಳಿ, ಬೈರನಾಯಕನಹಳ್ಳಿ, ಚಟ್ನಹಳ್ಳಿ ದೊಡ್ಡಮಾರ್ಪನಹಳ್ಳಿ, ಗೆದ್ದೇಹಳ್ಳಿ, ಹಾವೇನಹಳ್ಳಿ, ಹಿಂಡಿಸ್ಕೆರೆ, ಹೊನ್ನೇನಹಳ್ಳಿ, ಹೊಸಹಳ್ಳಿ, ಹುಚ್ಚಗೊಂಡನಹಳ್ಳಿ, ಹುಲ್ಲುಕಟ್ಟೆ, ಕೊಪ್ಪ, ಮಡೇನೂರು, ಮಿಸೆತಿಮ್ಮನಹಳ್ಳಿ, ರಾಮಶೆಟ್ಟಿಹಳ್ಳಿ, ಶಂಕರನಹಳ್ಳಿ ಗ್ರಾಮಗಳು ಒಳಪಟ್ಟಿವೆ. ಎಂಟು ವರ್ಷಗಳಿಂದ ಅಧ್ಯಕ್ಷ–ಸದಸ್ಯರ ನೇಮಕಾತಿ ಇಲ್ಲದೆ ದುರ್ಬಲವಾಗಿದ್ದು, ನಗರ ಯೋಜನಾ ಪ್ರಾಧಿಕಾರಕ್ಕೆ ಅಧ್ಯಕ್ಷರು ಹಾಗೂ ಸದಸ್ಯರ ನೇಮಕ ಮಾಡದೆ ಬಿಟ್ಟಿರುವುದು ವಿಷಾದನೀಯ. ನೇಮಕಾತಿ ಇಲ್ಲದಿರುವುದರಿಂದ ಪ್ರಾಧಿಕಾರದ ಕಾರ್ಯಗಳು ಸ್ಥಗಿತಗೊಂಡಿದ್ದು, ಅಭಿವೃದ್ಧಿ ಯೋಜನೆಗಳು ಕಾಗದಕ್ಕೆ ಸೀಮಿತವಾಗಿವೆ. ಪ್ರಾಧಿಕಾರಕ್ಕೆ ಯಾವುದೇ ಸರಿಯಾದ ಆಡಳಿತ ಮಂಡಳಿಯ ವ್ಯವಸ್ಥೆಯಿಲ್ಲ. ಕಾಯಂ ಸದಸ್ಯ ಕಾರ್ಯದರ್ಶಿಯನ್ನು ನೇಮಕ ಮಾಡದೆ, ವಾರಕ್ಕೆ ಎರಡು ದಿನ ಮಾತ್ರ ಜಿಲ್ಲಾ ಕೇಂದ್ರದಿಂದ ಯೋಜನಾಧಿಕಾರಿ ಬಂದು ಹೋಗುತ್ತಿದ್ದು, ಆರೇಳು ತಿಂಗಳಿಗೆ ಸಭೆ ಮಾಡುತ್ತಿದ್ದಾರೆ. ಪ್ರಾಧಿಕಾರದ ಕಚೇರಿ ಸಹ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿದೆ. ಸಾರ್ವಜನಿಕರಿಗೆ ಜಮೀನಿನ ನಕ್ಷೆ, ಭೂ ವಿನ್ಯಾಸ ಅನುಮತಿ ಹಾಗೂ ಕಟ್ಟಡ ನಿರ್ಮಾಣ ಸಂಬಂಧಿತ ಕಾರ್ಯಗಳು ವಿಳಂಬವಾಗುತ್ತಿದೆ. ಅಭಿವೃದ್ಧಿ ಯೋಜನೆಗಳ ಅನುಷ್ಠಾನಕ್ಕೆ ಅಧಿಕಾರಿಗಳಲ್ಲಿ ಸ್ಪಷ್ಟತೆ ಇಲ್ಲದಂತಾಗಿದೆ.




> **ಜಿಲ್ಲಾ ಪಂಚಾಯಿತಿ, ಎಪಿಎಂಸಿ, ನಗರಸಭೆ, ಗ್ರಾಮ ಪಂಚಾಯಿತಿ ಅವಧಿ ಮುಕ್ತಾಯವಾಗುತ್ತಿದ್ದು, ಸ್ಥಳೀಯ ಆಡಳಿತದ ಕನಸು ಗಗನ ಕುಸುಮವಾಗಿದೆ. ಕ್ಷೇತ್ರದಲ್ಲಿ ಬಿಜೆಪಿ ಅಧಿಕಾರದಲ್ಲಿದ್ದಾಗ ಟೂಡಾ ಸೇರಿದಂತೆ ಯಾವುದಕ್ಕೂ ನಾಮನಿರ್ದೇಶನ, ಸ್ಥಳೀಯ ಸಂಸ್ಥೆಗಳ ಚುನಾವಣೆ ಮಾಡಲಿಲ್ಲ. ಕಾಂಗ್ರೆಸ್ ನವರೂ ಮಾಡಲ್ಲ. ಶಾಸಕರದ್ದೇ ಪರಮಾಧಿಕಾರ ಎಂಬಂತಾಗಿದೆ. ಗ್ಯಾರಂಟಿ ಗುಲಾಮಗಿರಿಯಲ್ಲಿ ಅಭಿವೃದ್ಧಿ ಮರೀಚಿಕೆಯಾದರೂ ಯಾರು ಧ್ವನಿ ಎತ್ತುತ್ತಿಲ್ಲ.**
>
> –ಸಿಂಗ್ರಿದತ್ತಪ್ರಸಾದ್, ನಗರಸಭೆ ಮಾಜಿ ಸದಸ್ಯ

## ಅಗತಗೌಡನಹಳ್ಳಿಯಲ್ಲಿ ಪತ್ತೆಯಾಗದ ಹುಲಿ

• **ಉದಯವಾಹಿನಿ, ಗುಂಡ್ಲುಪೇಟೆ**

ಅಗತಗೌಡನಹಳ್ಳಿಯಲ್ಲಿ ಹುಲಿ ಪತ್ತೆ ಕಾರ್ಯಾಚರಣೆ ಶುರುವಾಗಿದೆ ಆದರೆ ಗಂಟೆಗಳೇ ಕಳೆದರೂ ಸಹ ಹುಲಿ ಕುರುಹು ಪತ್ತೆಯಾಗದ ಹಿನ್ನೆಲೆ ಪಾರ್ಥಸಾರಥಿ ಆನೆ ಸಹಾಯದೊಂದಿಗೆ ಇಂಗಲವಾಡಿ ಗ್ರಾಮದ ಕೆರೆ ಸುತ್ತ ಸರ್ಚಿಂಗ್ ಆಪರೇಷನ್ ಕಾರ್ಯವನ್ನ ಅರಣ್ಯ ಇಲಾಖೆ ಶುರುಮಾಡಿದೆ .

ಸೋಮವಾರ ಮುಂಜಾನೆ ಅಗತಗೌಡನಹಳ್ಳಿ ನಾಗಪ್ಪ ಎಂಬವರ ಜಮೀನಿನಲ್ಲಿ ಪ್ರತ್ಯಕ್ಷವಾಗಿದ್ದ ವ್ಯಾಘ್ರ ಹಸುವನ್ನ ಕೊಂದು ಹಾಕಿತ್ತು, ಗ್ರಾಮದ ಸನಿಹದಲ್ಲೇ ಹುಲಿ ಕಾಣಿಸಿಕೊಂಡ ಹಿನ್ನೆಲೆ ರೈತರು ಆತಂಕಕ್ಕೆ ಒಳಗಾಗಿದ್ದರು. ಸರಣಿ ವ್ಯಾಘ್ರ ದಾಳಿಯಿಂದ ಕಂಗೆಟ್ಟ ರೈತರು ಅರಣ್ಯ ಇಲಾಖೆ ವಿರುದ್ಧ ರೊಚ್ಚಿಗೆದ್ದ ಪರಿಣಾಮ ಹುಲಿಯನ್ನ ಪತ್ತೆಹಚ್ಚಲು ಪಾರ್ಥಸಾರಥಿ ಆನೆಯನ್ನ ಕರೆತಂದು ಜಮೀನು ಸುತ್ತ ತಲಾಶ್ ನಡೆಸಿದ್ರು, ಸಹ ಯಾವುದೇ ಪ್ರಯೋಜನವಾಗಿಲ್ಲ, ಗಂಟೆಗಟ್ಟಲೆ ಹುಡುಕಾಟ ನಡೆಸಿದ್ರು, ವ್ಯಾಘ್ರನ ಚಲನವಲನ ಪತ್ತೆಯಾಗದ ಹಿನ್ನೆಲೆ ಇಂಗಲವಾಡಿ ಗ್ರಾಮದ ಕೆರೆ ಸುತ್ತ ಸರ್ಚಿಂಗ್ ಪ್ರಾರಂಭಿಸಲಾಗಿದೆ , ಹುಲಿ ಪತ್ತೆ ಕಾರ್ಯಾಚರಣೆಗೆ ಡ್ರೋನ್ ಕ್ಯಾಮರಾ ಬಳಕೆ ಮಾಡಲಾಗ್ತಿದೆ ಶೀಘ್ರದಲ್ಲೇ ಹುಲಿಯನ್ನ ಪತ್ತೆಹಚ್ಚಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಅರಣ್ಯ ಇಲಾಖೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.



> **ವನ್ಯಮೃಗಗಳ ಕಾಟದಿಂದ ಹೈನುಗಾರಿಕೆ ನಂಬಿದ್ದ ರೈತರು ಆತಂಕಕ್ಕೊಳಗಾಗಿದ್ದಾರೆ, ಸರಣಿ ದಾಳಿ ನಡೆದರೂ ಸಹ ಅರಣ್ಯ ಇಲಾಖೆ ಮುಂಜಾಗೃತಾ ಕ್ರಮ ಕೈಗೊಳ್ಳುತ್ತಿಲ್ಲ , ಅವಘಡ ಸಂಭವಿಸಿದ ವೇಳೆ ರೈತರಿಗೆ ಕ್ಷಣಿಕ ಭರವಸೆ ನೀಡಿ ಪಲಾಯನ ಮಾಡುವ ಪ್ರವೃತ್ತಿ ಬೆಳೆಸಿಕೊಂಡಿದ್ದಾರೆ ಇದಕ್ಕೆ ಅಂಕುಶ ಹಾಕುವ ಕೆಲಸವಾಗಬೇಕಿದೆ ಇಲ್ಲವಾದಲ್ಲಿ ಕುಲಕಸುಬಿನ ಮೇಲೆ ಹೊಡೆತ ಬೀಳಲಿದೆ.**

## ಸುಳ್ಳು ದೂರು ನೀಡಲಾಗಿದೆ ಎಂದು ಠಾಣೆ ಎದುರು ಗ್ರಾಮಸ್ಥರ ಪ್ರತಿಭಟನೆ

• **ಉದಯವಾಹಿನಿ, ಗುಂಡ್ಲುಪೇಟೆ**

ತಾಲ್ಲೂಕಿನ ವೀರನಪುರ ಗ್ರಾಮದಲ್ಲಿ ದೇಗುಲ ಪ್ರವೇಶ ನಿರಾಕರಣೆ ಸಂಬಂಧ ಆಯೋಜಿಸಿದ್ದ ಶಾಂತಿ ಸಭೆಯಲ್ಲಿ ಜಾತಿನಿಂದನೆ ಹಾಗೂ ಕೊಲೆ ಬೆದರಿಕೆ ಹಾಕಲಾಗಿದೆ ಎಂದು ಗುಂಡ್ಲುಪೇಟೆ ಪೊಲೀಸ್ ಠಾಣೆಯಲ್ಲಿ 17 ಮಂದಿ ವಿರುದ್ಧ ಎಸ್‌ಸಿ, ಎಸ್‌ಟಿ ದೌರ್ಜನ್ಯ ತಡೆ ಕಾಯ್ದೆಯಡಿ ಪ್ರಕರಣ ದಾಖಲಾಗಿದೆ. ವೀರನಪುರ ಗ್ರಾಮದ ಶಿವಕುಮಾರ್ ನೀಡಿದ ದೂರಿನಂತೆ ಅದೇ ಗ್ರಾಮದ ಗುರುಪ್ರಸಾದ್, ನಾಗಸುಂದರ್, ಮಹದೇವಪ್ಪ, ಶಂಭಪ್ಪ, ಮಂಜು, ನಾಗರಾಜು, ಮಂಜುನಾಥ್, ಮಲ್ಲು ಕಮರಹಳ್ಳಿ, ಮಲ್ಲು, ಗಣೇಶ, ಮಣಿ, ನಾಗಪ್ಪ, ಕುಮಾರ, ಮಧುಮಲ್ಲಪ್ಪ, ಮಧು, ವೀರಭದ್ರೇಶ್ವರ ದೇಗುಲ ಅರ್ಚಕರಾದ ಸೋಮಶೇಖರ್ ಹಾಗೂ ಶಿವಮೂರ್ತಪ್ಪ ಅವರ ವಿರುದ್ಧ ಪ್ರಕರಣ ದಾಖಲಾಗಿದೆ.

**ಆರೋಪ ಏನು:** ವೀರನಪುರ ಗ್ರಾಮದಲ್ಲಿ ಅ.17ರಂದು ವೀರಭದ್ರಸ್ವಾಮಿ, ಸಿದ್ದಪ್ಪಾಜಿ, ಮಾರಮ್ಮ ದೇಗುಲಗಳ ಪ್ರವೇಶಕ್ಕೆ ನಿರಾಕರಣೆ ಮಾಡಲಾಗುತ್ತಿದೆ ಹಾಗೂ ದೇವಾಲಯದ ಆಸ್ತಿಯನ್ನು ಹರಾಜು ಹಾಕದೆ ಲಿಂಗಾಯತ ಸಮುದಾಯ ಅನುಭವಿಸುತ್ತಿದೆ ಎಂಬ ಆರೋಪದಡಿ ಗ್ರಾಮದ ಎಲ್ಲಾ ಸಮುದಾಯಗಳ ಮುಖಂಡರು ಶಾಂತಿ ಸಭೆ ನಡೆಸಿದ್ದರು. ಸಭೆಯಲ್ಲಿ ಜಾತಿನಿಂದನೆ ಹಾಗೂ ಕೊಲೆ ಬೆದರಿಕೆ ಹಾಕಲಾಗಿದೆ ಎಂದು ಶಿವಕುಮಾರ್ ದೂರಿನಲ್ಲಿ ತಿಳಿಸಿದ್ದಾರೆ.

ಮಂಟೇಸ್ವಾಮಿ (ಸಿದ್ದಪ್ಪಾಜಿ) ದೇವಾಲಯದ ಜೀರ್ಣೋದ್ಧಾರಕ್ಕೆ ಗ್ರಾಮದ ಎಲ್ಲಾ ಸಮುದಾಯದವರು ಭೂಮಿ ಪೂಜೆ ನೆರವೇರಿಸಲು ನಿರ್ಧರಿಸಿದ್ದರೂ ಗ್ರಾಮದ ಎನ್. ಶಿವಕುಮಾರ್ ನಿರ್ದಿಷ್ಟ ಸಮುದಾಯದ 17 ಮಂದಿ ವಿರುದ್ಧ ಜಾತಿ ನಿಂದನೆ ಮತ್ತು ಕೊಲೆ ಬೆದರಿಕೆ ದೂರು ನೀಡಿದ್ದಾರೆ. ತಹಶೀಲ್ದಾರ್, ಇನ್‌ಸ್ಪೆಕ್ಟರ್ , ರಾಜಸ್ವ ನಿರೀಕ್ಷಕರ ಸಮ್ಮುಖದಲ್ಲಿಯೇ ಗ್ರಾಮಸ್ಥರ ಸಭೆ ನಡೆದಿದ್ದು ಸಭೆಯ ಸಂಪೂರ್ಣ ವಿಡಿಯೋ ಚಿತ್ರೀಕರಣ ಮಾಡಲಾಗಿದೆ.

ಆದರೂ ಗ್ರಾಮದಲ್ಲಿ ಶಾಂತಿ ಕದಡಲು ಜಾತಿ ನಿಂದನೆ ಹಾಗೂ ಕೊಲೆ ಬೆದರಿಕೆ ಹಾಕಲಾಗಿದೆ ಎಂದು ಎನ್.ಶಿವಕುಮಾರ್ ದೂರು ನೀಡಿದ್ದು ನಂಜುಂಡಸ್ವಾಮಿ, ಸಿದ್ದಮಲ್ಲೇಶ್ವರ ಮತ್ತು ಮಲ್ಲೇಶ್ ಎಂಬುವರು ಪಿತೂರಿಯಲ್ಲಿ ಭಾಗಿಯಾಗಿದ್ದಾರೆ ಎಂದು ಗ್ರಾಮಸ್ಥರು ಆರೋಪಿಸಿದರು.

**ಜಾತಿನಿಂದನೆ ಹಾಗೂ ಕೊಲೆ ಬೆದರಿಕೆ**



> **ಶಿವಕುಮಾರ್ ನೀಡಿರುವ ದೂರಿನಲ್ಲಿ ಸತ್ಯಾಂಶವಿಲ್ಲ; ಆದರೂ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ ಎಂದು ಚಾಮರಾಜನಗರ ಟೌನ್ ಪೊಲೀಸ್ ಠಾಣೆ ಎದುರು ವೀರನಪುರದ ಹಲವು ಗ್ರಾಮಸ್ಥರು ಪ್ರತಿಭಟನೆ ನಡೆಸಿದರು.**

## ಕೈಗೂಡದ ಗ್ರೇಟರ್ ಮೈಸೂರು ಕನಸು: ಹಣದ ಕೊರತೆಯಿಂದ ಪ್ರಸ್ತಾವ ಕೈಬಿಟ್ಟ ಸರ್ಕಾರ

**ಸರ್ಕಾರ ಚಿಂತನೆ ನಡೆಸಿತ್ತು, ಈ ಸಂಬಂಧ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಸಹ ಹೆಚ್ಚು ಉತ್ಸಾಹ**

• **ಉದಯವಾಹಿನಿ, ಮೈಸೂರು**

ಆರ್ಥಿಕ ಇಲಾಖೆಯ ಅನುಮೋದನೆ ದೊರೆಯದ ಕಾರಣ, ಮೈಸೂರು ಮಹಾನಗರ ಪಾಲಿಕೆಯನ್ನು ಈ ಸಾಲಿಗೆ ಗ್ರೇಡ್–1 ಪಾಲಿಕೆಯಾಗಿಸುವ ಯೋಜನೆಯನ್ನು ಸರ್ಕಾರ ಕೈಬಿಟ್ಟಿದೆ.

ಮೈಸೂರನ್ನು ಬೆಂಗಳೂರಿನ ಬಿಬಿಎಂಪಿ ಮಾದರಿಯಲ್ಲಿ ಬೃಹತ್ ಮಹಾನಗರ ಪಾಲಿಕೆಯನ್ನಾಗಿ ಮಾಡಲು ಸರ್ಕಾರ ಚಿಂತನೆ ನಡೆಸಿತ್ತು, ಈ ಸಂಬಂಧ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಸಹ ಹೆಚ್ಚು ಉತ್ಸಾಹ ತೋರಿದ್ದರು.

**ಗ್ರೇಡ್–1 ಪಾಲಿಕೆ ರಚನೆಯ ಪ್ರಸ್ತಾವನೆ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗ್ರೇಡ್–1 ಪಾಲಿಕೆ ರಚನೆಗೆ ಒಲವು ತೋರಿದ್ದರು. ಈ ಹಿನ್ನೆಲೆಯಲ್ಲಿ ನಗರ ಪಾಲಿಕೆ ವ್ಯಾಪ್ತಿಗೆ 5 ನಗರ ಸ್ಥಳೀಯ ಸಂಸ್ಥೆಗಳು ಮತ್ತು 7 ಗ್ರಾಮ ಪಂಚಾಯಿತಿಗಳನ್ನು ಸೇರ್ಪಡೆಗೊಳಿಸಿ ಗ್ರೇಡ್–1 ಮಹಾನಗರ ಪಾಲಿಕೆ ರಚಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಆದರೆ, ಈಗ ಈ ಪ್ರಸ್ತಾವ ಮುಂದೂಡಲ್ಪಟ್ಟಿದೆ.

ರಾಜಧಾನಿ ಬೆಂಗಳೂರು ನಂತರ ಸಾಂಸ್ಕೃತಿಕ ನಗರಿ ಮೈಸೂರು ವೇಗವಾಗಿ ಬೆಳೆಯುತ್ತಿದ್ದು, ಅದನ್ನು ಬೃಹತ್ ಮೈಸೂರು ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿಸಬೇಕೆಂಬುದು ದಶಕದ ಕನಸಾಗಿತ್ತು. ಮೈಸೂರು–ಬೆಂಗಳೂರು ಹೈವೇ ರಸ್ತೆ, ವಿಮಾನ ನಿಲ್ದಾಣದ ರನ್ ವೇ ವಿಸ್ತರಣೆ, ಚಿತ್ರನಗರಿ ನಿರ್ಮಾಣ, ಪೆರಿಫೆರಲ್ ರಿಂಗ್ ರಸ್ತೆ ಅಂತಾರಾಷ್ಟ್ರೀಯ ಕ್ರೀಡಾಂಗಣ ಸೇರಿದಂತೆ ನಾನಾ ಯೋಜನೆಗಳ ಅನುಷ್ಠಾನದಿಂದ ಈ ಚರ್ಚೆ ಮತ್ತಷ್ಟು ಜೋರಾಗಿತ್ತು.

**ಹಿಂದಿನ ಗ್ರೇಟರ್ ಮೈಸೂರು ಯೋಜನೆ:** ಮೈಸೂರಿನ ಹೊರವಲಯದ ಹೂಟಗಳ್ಳಿ ನಗರಸಭೆ ಶ್ರೀರಾಂಪುರ, ರಮ್ಮನಹಳ್ಳಿ, ಬೋಗಾದಿ, ಕಡಕೊಳ ಪಟ್ಟಣ ಪಂಚಾಯಿತಿಯೊಂದಿಗೆ ಎಂಟು ಗ್ರಾಪಂಗಳನ್ನು ಸೇರಿಸಿಕೊಂಡು ಬೃಹತ್ ಪಾಲಿಕೆಯನ್ನಾಗಿ ರಚನೆ ಮಾಡಲು ಪ್ರಸ್ತಾವನೆ ತಯಾರಿಸಲಾಗಿತ್ತು.

ಆದರೆ, ಮೈಸೂರು 20 ಲಕ್ಷ ಜನಸಂಖ್ಯೆ ಹೊಂದಿಲ್ಲದ ಕಾರಣ ಈ ಯೋಜನೆ ಸಾಕಾರಗೊಂಡಿರಲಿಲ್ಲ. ಈಗ ಗ್ರೇಡ್–1 ಪಾಲಿಕೆಯಾಗಿಸುವ ಯೋಜನೆಯೂ ಕೈಗೂಡದಂತಾಗಿದೆ.




**ಪ್ರಮುಖ ಅಂಶಗಳು**

- ಮೈಸೂರು ಮಹಾನಗರ ಪಾಲಿಕೆ ಗ್ರೇಡ್–1 ಸ್ಥಾನಮಾನ ಪಡೆಯುವ ಯೋಜನೆ ಮುಂದೂಡಿಕೆ.
- ಆರ್ಥಿಕ ಇಲಾಖೆ ಅನುಮೋದನೆ ಮತ್ತು ಅನುದಾನ ಕೊರತೆ ಮುಖ್ಯ ಕಾರಣ.
- ಬೃಹತ್ ನಗರ ಪಾಲಿಕೆ ರಚನೆಗೆ 20 ಲಕ್ಷ ಜನಸಂಖ್ಯೆ ಅಗತ್ಯ, ಮೈಸೂರಿಗೆ ಕೊರತೆ.
- ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಒಲವು ತೋರಿದ್ದರು.
- 5 ನಗರ ಸ್ಥಳೀಯ ಸಂಸ್ಥೆಗಳು ಮತ್ತು 7 ಗ್ರಾಮ ಪಂಚಾಯಿತಿಗಳನ್ನು ಸೇರ್ಪಡೆಗೊಳಿಸುವ ಪ್ರಸ್ತಾವನೆ.
- ಮೈಸೂರಿನ ಹೊರವಲಯದ ಹೂಟಗಳ್ಳಿ, ಶ್ರೀರಾಂಪುರ, ರಮ್ಮನಹಳ್ಳಿ, ಬೋಗಾದಿ, ಕಡಕೊಳ ಸೇರ್ಪಡೆಯ ಪ್ರಸ್ತಾವನೆ ಹಿಂದೆಯೂ ವಿಫಲವಾಗಿತ್ತು.

## ಕಬಡ್ಡಿ ಪಂದ್ಯ: ಬಾಜಿ ಕಟ್ಟಿ ಹಣ ಕಳೆದುಕೊಂಡ ಸಚಿವ ಪರಮೇಶ್ವರ!

• **ಉದಯವಾಹಿನಿ, ತುಮಕೂರು**

ಕಬಡ್ಡಿ ಪಂದ್ಯದಲ್ಲಿ ವಿಜಯಪುರ ತಂಡ ಗೆಲ್ಲುತ್ತದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಜತೆಗೆ ಬಾಜಿ ಕಟ್ಟಿ ಜಿಲ್ಲಾ ಸಚಿವ ಜಿ.ಪರಮೇಶ್ವರ 500 ಕಳೆದುಕೊಂಡರು. ನಗರದಲ್ಲಿ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳ ರಾಜ್ಯ ಮಟ್ಟದ ಕಬಡ್ಡಿ ಪಂದ್ಯಾವಳಿ ಫೈನಲ್ ಪಂದ್ಯಗಳು ನಡೆದವು. ಬಾಲಕರ ವಿಭಾಗದ ಅಂತಿಮ ಪಂದ್ಯದಲ್ಲಿ ದಕ್ಷಿಣ ಕನ್ನಡ ಮತ್ತು ವಿಜಯಪುರ ತಂಡಗಳು ಮುಖಾಮುಖಿಯಾದವು. ದಕ್ಷಿಣ ಕನ್ನಡ ತಂಡವು 36–26 ಅಂಕಗಳಿಂದ ವಿಜಯಪುರ ತಂಡಕ್ಕೆ ಸೋಲುಣಿಸಿತು. ವಿಜೇತ ತಂಡಕ್ಕೆ ಪ್ರಶಸ್ತಿ ವಿತರಿಸಿದ ನಂತರ ಪರಮೇಶ್ವರ ಮಾತನಾಡಿದರು. ನಾನು 500 ಕಳೆದುಕೊಂಡು ಬಿಟ್ಟೆ. ವಿಜಯಪುರ ತಂಡ ಗೆಲ್ಲುತ್ತದೆ ಎಂದು ಜಿಲ್ಲಾಧಿಕಾರಿ ಜತೆ ಬೆಟ್ಟಿಂಗ್ ಮಾಡಿಕೊಂಡಿದ್ದೆ' ಎಂದರು.

## ಹಿರಿಯರ ರಕ್ಷಣೆ ಮತ್ತು ಹಕ್ಕುಗಳ ಕುರಿತು ಜಾಗೃತಿ ಅಗತ್ಯ

• **ಉದಯವಾಹಿನಿ, ಚನ್ನಪಟ್ಟಣ**

ಸಮಾಜದ ಅಮೂಲ್ಯ ಅಸ್ತಿ ಆಗಿರುವ ಹಿರಿಯರ ರಕ್ಷಣೆ ಮತ್ತು ಹಕ್ಕುಗಳ ಕುರಿತು ಜಾಗೃತಿ ಮೂಡಿಸುವುದು ಅಗತ್ಯ ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ವೆಂಕಟೇಶಪ್ಪ ಅಭಿಪ್ರಾಯಪಟ್ಟರು. ನಗರದಲ್ಲಿ ಭಾರತ ವಿಕಾಸ ಪರಿಷದ್ ಕಣ್ವ ಶಾಖೆ, ತಾಲ್ಲೂಕು ಕಾನೂನು ಸೇವಾ ಸಮಿತಿ ಹಾಗೂ ವಕೀಲರ ಸಂಘದ ಆಶ್ರಯದಲ್ಲಿ ನಡೆದ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಹಾಗೂ ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಪ್ರಸ್ತುತ ದಿನಗಳಲ್ಲಿ ಹಿರಿಯರಿಗೆ ಪ್ರೀತಿ ಮತ್ತು ಸಹಾನುಭೂತಿ ಸಿಗುತ್ತಿಲ್ಲ. ತಂದೆ, ತಾಯಿ, ಅಜ್ಜ, ಅಜ್ಜಿ ಸೇರಿದಂತೆ ಹಿರಿಯರ ಕಡೆಗಣನೆ ಸಾಮಾನ್ಯವಾಗಿದೆ. ಇದರಿಂದ ಮಾನಸಿಕ ಒತ್ತಡಕ್ಕೆ ಒಳಗಾಗುತ್ತಾರೆ. ಇದನ್ನು ತಡೆಗಟ್ಟುವುದು ಯುವ ಪೀಳಿಗೆ ಜವಾಬ್ದಾರಿಯಾಗಿದೆ. ವಯಸ್ಸಾದವರಿಗೆ ಪ್ರೀತಿ ಗೌರವ ನೀಡಿದರೆ ಅವರ ಜೀವನ ನೆಮ್ಮದಿಯಾಗಿ ಇರಲಿದೆ ಎಂದರು. ಸರ್ಕಾರಿ ಸಹಾಯಕ ಅಭಿಯೋಜಕಿ ಶಾರದ ಮಾತನಾಡಿ, ಹಿರಿಯ ನಾಗರಿಕರ ಕಾಯ್ದೆ ಜಾರಿಯಲ್ಲಿದೆ. ಮಕ್ಕಳಿಂದ ಅಥವಾ ಕುಟುಂಬದವರಿಂದ ತೊಂದರೆ ಎದುರಿಸಿದರೆ ಕಾನೂನು ನೆರವು ಪಡೆಯಬಹುದು. ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಿಂದ ಉಚಿತ ಕಾನೂನು ಸಹಾಯ ಸಿಗಲಿದೆ. ಇದನ್ನು ಹಿರಿಯರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

## ಆರ್‌ಎಸ್‌ಎಸ್ ನಿಷೇಧಿಸಲು ಸಾಧ್ಯವಿಲ್ಲ: ಎಸ್.ಮುನಿಸ್ವಾಮಿ

• **ಉದಯವಾಹಿನಿ, ಚಿಂತಾಮಣಿ**

ರಾಷ್ಟ್ರೀಯ ಸ್ವಯಂ ಸೇವಕ ಸಂಘ (ಆರ್‌ಎಸ್‌ಎಸ್) ನಿಷೇಧಿಸಲು ಯಾರಿಂದಲೂ ಸಾಧ್ಯವಿಲ್ಲ' ಎಂದು ಮಾಜಿ ಸಂಸದ ಎಸ್. ಮುನಿಸ್ವಾಮಿ ಹೇಳಿದರು. ನಗರದ ಸರ್ಕಾರಿ ಪಾಲಿಟೆಕ್ನಿಕ್ ಮೈದಾನದಲ್ಲಿ ಆಯೋಜಿಸಿದ್ದ ಆರ್‌ಎಸ್‌ಎಸ್ ಪಥಸಂಚಲನ ಕಾರ್ಯಕ್ರಮದಲ್ಲಿ ಮಾತನಾಡಿದರು. ರಾಜ್ಯ ಸರ್ಕಾರ ಅನಗತ್ಯವಾಗಿ ಸಮಸ್ಯೆಗಳನ್ನು ಸೃಷ್ಟಿಸಿ ಸಮುದಾಯಗಳ ನಡುವೆ ಕಂದಕ ಸೃಷ್ಟಿಸುತ್ತಿದೆ. ಉತ್ತಮ ಆಡಳಿತ, ಅಭಿವೃದ್ಧಿ ಕಡೆ ಗಮನಹರಿಸದೆ ಕ್ಷುಲ್ಲಕ ತಗಾದೆ ಹುಟ್ಟುಹಾಕುತ್ತಿದೆ. ಬಕ್ರೀದ್, ಈದ್ ಮಿಲಾದ್ ಸಂದರ್ಭಗಳಲ್ಲಿ ಮುಸ್ಲಿಮರು ಸರ್ಕಾರಿ ಸ್ಥಳಗಳಲ್ಲಿ, ರಸ್ತೆಗಳಲ್ಲಿ ಪ್ರಾರ್ಥನೆ, ಮೆರವಣಿಗೆ ಮಾಡುತ್ತಾರೆ. ಆರ್‌ಎಸ್‌ಎಸ್ ಎಂದಾದರೂ ಅದರ ಬಗ್ಗೆ ಆರೋಪ ಮಾಡಿದೆಯೇ ಅದನ್ನು ನಿಷೇಧ ಮಾಡಿ ಜನ ಒತ್ತಾಯಿಸಲು ಸರ್ಕಾರವೇ ಮಾರ್ಗ ತೋರಿದೆ ಎಂದರು. ಆರ್‌ಎಸ್‌ಎಸ್ 100 ವರ್ಷಗಳ ಸ್ಮರಣೆಗಾಗಿ ಪಥಸಂಚಲನ ನಡೆಸುತ್ತಿದೆ. ಸಚಿವ ಪ್ರಿಯಾಂಕ ಖರ್ಗೆ, ಸರ್ಕಾರ ಈ ವಿಷಯ ಪ್ರಸ್ತಾಪ ಮಾಡದಿದ್ದರೆ ಇಷ್ಟೊಂದು ಪ್ರಚಾರ ದೊರೆಯುತ್ತಿರಲಿಲ್ಲ. 100 ವರ್ಷಗಳ ಸಂಭ್ರಮದಲ್ಲಿ ಸಾವಿರಾರು ಅರ್‌ಎಸ್‌ಎಸ್ ಸ್ವಯಂಸೇವಕರು, ದೇಶಪ್ರೇಮಿಗಳು ಭಾಗವಹಿಸಿದ್ದು ಸಂಘಟನೆಯ ಬಲವನ್ನು ಪ್ರಚುರಪಡಿಸಿದಂತಾಗಿದೆ ಎಂದರು.

ಸಿದ್ದರಾಮಯ್ಯ, ಸಚಿವ ಸಂತೋಷ್ ಲಾಡ್, ಪ್ರಿಯಾಂಕ ಖರ್ಗೆ, ವಿಧಾನ ಪರಿಷದ್ ಸದಸ್ಯ ಹರಿಪ್ರಸಾದ್ ಮತ್ತಿತರರು ಸಂಘದ ಕುರಿತು ಲಘುವಾಗಿ ಮಾತನಾಡುವುದು, ಆಪಾದನೆ ಮಾಡುವುದು, ದೇಶದ್ರೋಹಿಗಳು ಎಂದು ಕರೆಯುವುದು ಖಂಡನೀಯ. ಸಂಘದ ದೇಶಪ್ರೇಮವನ್ನು ಹಿಯಾಳಿಸುವವರು ಪಾಕಿಸ್ತಾನದ ಏಜೆಂಟ್‌ಗಳು ಎಂದು ಜರಿದರು. ಪಾಲಿಟೆಕ್ನಿಕ್ ಆವರಣದಿಂದ ಗಜಾನನ ವೃತ್ತ, ಪಿಸಿಆರ್ ಕಾಂಪ್ಲೆಕ್ಸ್, ಚೇಳೂರು ವೃತ್ತ, ಬೆಂಗಳೂರು ವೃತ್ತ, ತಾಲ್ಲೂಕು ಕಚೇರಿ ವೃತ್ತದಿಂದ ಪಥಸಂಚಲನ ಸಾಗಿತು. ಸ್ಥಳೀಯ ಮುಖಂಡರು ಭಾಗವಹಿಸಿದರು.

## ಕೊಳಚೆ ನೀರಲ್ಲಿ ವ್ಯಾಪಾರ ವಹಿವಾಟು: ಸಂತೆ ಮೈದಾನದಲ್ಲಿ ಸೌಕರ್ಯ ಮರೀಚಿಕೆ


• **ಉದಯವಾಹಿನಿ, ಮಾಲೂರು**

ಎಲ್ಲಿ ನೋಡಿದರೂ ಕಸ. ಕುಡಿವ ನೀರಿಲ್ಲ. ಶೌಚಕ್ಕೆ ಶೌಚಾಲಯವಿಲ್ಲ. ಕಾಲಿಟ್ಟರೆ ಕೆಸರು... ಇದು ಪಟ್ಟಣದ ಹನುಮಂತ ನಗರದಲ್ಲಿನ ಮಾಲೂರು–ಕೋಲಾರ ರಸ್ತೆಯ ಬಳಿ ಇರುವ ಸಂತೆ ಮೈದಾನದ ದುಸ್ಥಿತಿ. ಒಂದೂವರೆ ಎಕರೆ ವಿಸ್ತೀರ್ಣದಲ್ಲಿರುವ ಸಂತೆ ಮೈದಾನದಲ್ಲಿ ನೂರಾರು ವರ್ಷಗಳಿಂದ ಲಕ್ಷಾಂತರ ರೂ. ವ್ಯಾಪಾರ ವಹಿವಾಟು ನಡೆಸುತ್ತಿದೆ. ಆದರೆ ಮೂಲ ಸೌಕರ್ಯ ಮಾತ್ರ ಮರೀಚಿಕೆಯಾಗಿದೆ. ಇದರಿಂದ ರೈತರು, ವರ್ತಕರು ಗ್ರಾಹಕರು ತೊಂದರೆ ಅನುಭವಿಸುವಂತಾಗಿದೆ. ಸಂತೆ ಮೈದಾನ ಅಭಿವೃದ್ಧಿಪಡಿಸುತ್ತೇವೆಂಬ ಜನಪ್ರತಿನಿಧಿಗಳ ಭರವಸೆ ಭರವಸೆಗಳಾಗಿಯೇ ಉಳಿದಿದೆ. ಆದರೆ ದುರಸ್ತಿಯಾಗಿಲ್ಲ. ಮಧ್ಯವರ್ತಿಗಳ ಹಾವಳಿ ಇಲ್ಲದೆ ತಾಜಾ ತರಕಾರಿ, ಸೊಪ್ಪು ಮುಂಜಾನೆ 4 ರಿಂದ ಬೆಳಗ್ಗೆ 8 ರವರೆಗೆ ವ್ಯಾಪಾರ ವಹಿವಾಟು ನಡೆಯುತ್ತದೆ. ಆದರೆ ಶೌಚಾಲಯವಿಲ್ಲ. ಸಂತೆ ಮೈದಾನ ಮಳೆ ಬಂದರೆ ಕಾಲಿಡಲು ಆಗದಂತೆ ಕೆಸರಾಗುತ್ತದೆ. ವರ್ತಕರು ಆ ಕೆಸರಲ್ಲೇ ವ್ಯಾಪಾರ ನಡೆಸಬೇಕಾದ ಅನಿವಾರ್ಯತೆ. ಸಂತೆಯಲ್ಲಿ 50 ರಿಂದ 70ಕ್ಕೂ ಅಧಿಕ ಅಂಗಡಿಗಳಿವೆ. ಇಲ್ಲಿ ಮಹಿಳಾ ವರ್ತಕರು ವ್ಯಾಪಾರ ನಡೆಸುತ್ತಿದ್ದು, ಶೌಚಕ್ಕೆ ಪರದಾಡುತ್ತಾರೆ. ನಗರಸಭೆಯಿಂದ ಕರ ವಸೂಲಿ ಮಾಡುತ್ತಾರೆ. ಆದರೆ, ಮೂಲ ಸೌಕರ್ಯ ಕಲ್ಪಿಸಿಲ್ಲ ಎಂಬುದು ವರ್ತಕರ ಆರೋಪ. ಸಂತೆಯಲ್ಲಿ ಸ್ವಚ್ಛತೆ ಇಲ್ಲದೆ ಕೊಳಚೆ ನೀರು ಹರಿಯುವುದರಿಂದ ಮಾಲೂರು–ಕೋಲಾರ ಮುಖ್ಯ ರಸ್ತೆ ಬದಿಯಲ್ಲಿ ವರ್ತಕರು ತರಕಾರಿ, ಸೊಪ್ಪನ್ನು ಮಾರಾಟ ಮಾಡುತ್ತಾರೆ. ಗ್ರಾಹಕರು ಖರೀದಿಗೆ ನಿಂತಾಗ ರಸ್ತೆಯಲ್ಲಿ ವಾಹನ ಓಡಾಟಕ್ಕೆ ತೊಂದರೆಯಾಗಿ ವಾಹನ ದಟ್ಟಣೆ ಉಂಟಾಗುತ್ತದೆ.

ಹಾಗಾಗಿ ಸಂತೆ ಮೈದಾನ ಸ್ವಚ್ಛಗೊಳಿಸಿ. ಸೌಕರ್ಯ ಕಲ್ಪಿಸಿದರೆ ಅನುಕೂಲವಾಗುತ್ತದೆ ಎಂಬುದು ವರ್ತಕರ ಮಾತಾಗಿದೆ.

ಅಂತರಾಳದಿಂದ...
EDITORIAL

# ಸುರಕ್ಷಿತ, ಪರಿಸರಸ್ನೇಹಿ ದೀಪಾವಳಿ ಸದಾಶಯ ಅನುಷ್ಠಾನಕ್ಕೂ ಬರಲಿ



ಪಟಾಕಿಗಳಿಂದ ದೂರ ಉಳಿದಾಗಷ್ಟೇ 'ಪರಿಸರಸ್ನೇಹಿ ದೀಪಾವಳಿ ಸಾಧ್ಯ. ಪಟಾಕಿಗಳ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸುವ ಆಂದೋಲನ ತೀವ್ರಗೊಳ್ಳಬೇಕಾಗಿದೆ.

ಹಸಿರು ಪಟಾಕಿಗಳಿಗೆ ಮಾತ್ರ ಅವಕಾಶ ಕಲ್ಪಿಸುವ ನಿರ್ಧಾರದ ಮೂಲಕ, 'ಪರಿಸರಸ್ನೇಹಿ ದೀಪಾವಳಿ ಆಚರಣೆಯ ದಾರಿಯಲ್ಲಿ ಕರ್ನಾಟಕ ಒಂದು ಮಹತ್ವದ ಹೆಜ್ಜೆಯಿಟ್ಟಿದೆ. ಹೆಚ್ಚು ಅಪಾಯಕಾರಿ ರಾಸಾಯನಿಕಗಳನ್ನು ಹೊಂದಿರುವ ಸಾಂಪ್ರದಾಯಿಕ ಪಟಾಕಿಗಳ ಬಳಕೆಯಿಂದ ಪರಿಸರ ಮಾಲಿನ್ಯ ಹೆಚ್ಚುತ್ತಿದೆ. ಸಾಂಪ್ರದಾಯಿಕ ಪಟಾಕಿಗಳಿಗಿಂಥ ಶೇ 30ರಷ್ಟು ಕಡಿಮೆ ಅಪಾಯಕರ ಎಂದು ಹೇಳಲಾಗುತ್ತಿರುವ ಹಸಿರು ಪಟಾಕಿಗಳ ಬಳಕೆಯಿಂದ ಪರಿಸರದ ಮೇಲಿನ ಒತ್ತಡ ಸ್ವಲ್ಪ ಮಟ್ಟಿಗೆ ಕಡಿಮೆ ಆದಂತಾಗುತ್ತದೆ. ದೀಪಾವಳಿ ಹಬ್ಬದ ಸಮಯದಲ್ಲಿನ ವಾಯು ಮಾದರಿಗಳಲ್ಲಿ ಮಾಲಿನ್ಯ ಕಣಗಳ ಪ್ರಮಾಣ ಹೆಚ್ಚಾಗಿ ಕಂಡುಬರುತ್ತಿರುವುದರ ಹಿನ್ನೆಲೆಯಲ್ಲಿ, ಪಟಾಕಿ ಬಳಕೆಗೆ ಕಡಿವಾಣ ಹಾಕುವ ಅಗತ್ಯದ ಮಾತುಕತೆ ಇತ್ತೀಚಿನ ವರ್ಷಗಳಲ್ಲಿ ಪ್ರತಿ ದೀಪಾವಳಿ ಸಂದರ್ಭದಲ್ಲೂ ನಡೆಯುತ್ತದೆ.

**ಈ ಎಲ್ಲಾ ಆಶಯವನ್ನು ಮಣ್ಣುಗೂಡಿಸುವಂತೆ ನಕಲಿ ಹಸಿರು ಪಟಾಕಿಗಳ ಮಾರಾಟ ದೊಡ್ಡ ಪ್ರಮಾಣದಲ್ಲಿ ನಡೆಯುತ್ತಿರುವ ಬಗ್ಗೆ ವರದಿಗಳು ಪ್ರಕಟವಾಗಿವೆ. ಸಾಂಪ್ರದಾಯಿಕ ಪಟಾಕಿ ಪೊಟ್ಟಣಗಳ ಮೇಲೆ 'ಹಸಿರಿನ ಗುರುತು' ಹಚ್ಚಿ ವಂಚಿಸಲಾಗುತ್ತಿದೆ; ನಕಲಿ ಲೋಗೊ, ಕ್ಯುಆರ್ ಕೋಡ್ ಬಳಸಿ ಅಪಾಯಕಾರಿ ಪಟಾಕಿಗಳನ್ನು ಮಾರಲಾಗುತ್ತಿದೆ ಎನ್ನಲಾಗುತ್ತಿದೆ. ಸರ್ಕಾರಿ ಆದೇಶವನ್ನು ಉಲ್ಲಂಘಿಸಿರುವ ನಕಲಿ ಹಸಿರು ಪಟಾಕಿಗಳ ತಯಾರಕರು ಮತ್ತು ಮಾರಾಟಗಾರರ ಮೇಲೆ ಸರ್ಕಾರ ಕಠಿಣ ಕ್ರಮ ಕೈಗೊಳ್ಳಬೇಕಾಗಿದೆ.**

ಪಟಾಕಿಗಳಿಂದ ವಾಯುಮಾಲಿನ್ಯ ಹೆಚ್ಚುತ್ತಿರುವ ಬಗ್ಗೆ ಸುಪ್ರೀಂ ಕೋರ್ಟ್ ಕೂಡ ಕಳವಳ ವ್ಯಕ್ತಪಡಿಸಿದೆ. ಪರಿಸರ ಕಾಳಜಿಗೆ ಸ್ಪಂದಿಸುವ ರೂಪದಲ್ಲಿ,ರಾಜ್ಯದಲ್ಲಿ ಹಸಿರು ಪಟಾಕಿಗಳಿಗಷ್ಟೇ ಅವಕಾಶ ಮಾಡಿ ಕೊಡುವಂತೆ ಜಿಲ್ಲಾಧಿಕಾರಿಗಳು ಮತ್ತು ಪೊಲೀಸರಿಗೆ 'ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ' ತಾಕೀತು ಮಾಡಿದೆ. ಆದರೆ, ಹಸಿರು ಪಟಾಕಿಗಳ ಮೂಲಕ ಪರಿಸರಸ್ನೇಹಿ ದೀಪಾವಳಿ' ಎನ್ನುವುದು ಅಂಶಿಕ ಸತ್ಯವನ್ನು ಒಳಗೊಂಡಿರುವ ಪರಿಕಲ್ಪನೆ.

ಪಟಾಕಿ ಬಳಕೆಯನ್ನು ಹಂತಹಂತವಾಗಿ ಕಡಿಮೆಗೊಳಿಸುತ್ತ, ಅಂತಿಮವಾಗಿ ಸಂಪೂರ್ಣವಾಗಿ ನಿಲ್ಲಿಸುವ ಮೂಲಕವಷ್ಟೇ ದೀಪಾವಳಿಯನ್ನು ಪರಿಸರಸ್ನೇಹಿ ಆಗಿಸುವುದು ಸಾಧ್ಯವಿದೆ. ಹಬ್ಬದ ಸಂದರ್ಭದಲ್ಲಿ ವಾಯುಮಾಲಿನ್ಯ ತೀವ್ರಗೊಳ್ಳದಂತೆ ತಡೆಯುವುದು ಕಾನೂನು ಕ್ರಮಗಳಿಂದಷ್ಟೇ ಸಾಧ್ಯವಿಲ್ಲ; ಸಾರ್ವಜನಿಕರ ಸಹಕಾರ ಇದ್ದಾಗಷ್ಟೇ ಪಟಾಕಿ ಬಳಕೆಗೆ ಕಡಿವಾಣ ಹಾಕಬಹುದು. ಮಕ್ಕಳು ಪಟಾಕಿ ಸಿಡಿಸುವ ಮೂಲಕ ದೀಪಾವಳಿಯನ್ನು ಸಂಭ್ರಮಿಸುವುದರಲ್ಲಿ ತಪ್ಪೇನೂ ಇಲ್ಲ. ಎಳೆಯರೊಂದಿಗೆ ಹಿರಿಯರೂ ಪಟಾಕಿ ಸುಡುವುದನ್ನು ವ್ಯಸನದಂತೆ ಹಚ್ಚಿಕೊಂಡಾಗ ಪರಿಸರದ ಮೇಲೆ ಹೆಚ್ಚಿನ ಒತ್ತಡ ಉಂಟಾಗುತ್ತದೆ: ವಾಯುಮಂಡಲಕ್ಕೆ ಮಾತ್ರವಲ್ಲದೆ, ಗಂಭೀರ ಆರೋಗ್ಯ ಸಮಸ್ಯೆಗಳೂ ಉಂಟಾಗುತ್ತವೆ. ಹಿರಿಯ ನಾಗರಿಕರು, ಎಳೆಯರು ಹಾಗೂ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿರುವವರು ಪಟಾಕಿಗಳ ವಿಷಾನಿಲ ಹಾಗೂ ಕಿವಿಗಡಚಿಕ್ಕುವ ಸದ್ದಿನಿಂದ ಅಸಹನೀಯ ತೊಂದರೆ ಅನುಭವಿಸುತ್ತಾರೆ. ಪಟಾಕಿಗಳ ಬೆಳಕು ಮತ್ತು ಸದ್ದಿಗೆ ಪ್ರಾಣಿಪಕ್ಷಿಗಳು ಕೂಡ ದಿಕ್ಕೆಡುತ್ತವೆ. ಪ್ರತಿ ದೀಪಾವಳಿಯ ಸಂದರ್ಭದಲ್ಲೂ ಪಟಾಕಿಗಳ ಸಿಡಿತದಿಂದ ಗಾಯಗೊಳ್ಳುವವರು, ದೃಷ್ಟಿಗೆ ಹಾನಿ ಮಾಡಿಕೊಳ್ಳುವವರು ಇದ್ದೇ ಇರುತ್ತಾರೆ.

ಈ ಅವಘಡಗಳನ್ನು ತಪ್ಪಿಸುವುದಕ್ಕೆ ಪಟಾಕಿಗಳಿಂದ ದೂರ ಇರುವುದೊಂದೇ ಮಾರ್ಗ. ಬೆಳಕಿನ ಹಬ್ಬವಾದ ದೀಪಾವಳಿ ಇಡೀ ದೇಶವನ್ನು ಆವರಿಸಿಕೊಂಡಿರುವ ಬಹು ದೊಡ್ಡ ಹಬ್ಬ. ಎಲ್ಲಾರ ಮನಸ್ಸುಗಳಲ್ಲಿ ಅರಿವಿನ ಹಣತೆ ಬೆಳಗುವ ಹಾಗೂ ಅಜ್ಞಾನದ ಅಂಧಕಾರವನ್ನು ನೀಗುವ ಆಶಯ ದೀಪಾವಳಿಯ ಹಿಂದಿದೆ. ಈ ಮಹತ್ತರ ಆಶಯಕ್ಕೂ ಪಟಾಕಿಗಳು ಪೂರಕವಾಗಿಲ್ಲ. ಪಟಾಕಿಗಳನ್ನು ಸುಡುವುದರಿಂದ ಮನಸ್ಸಿಗೆ ಸಂತೋಷ ಉಂಟಾಗುತ್ತದೆ ಎನ್ನುವುದನ್ನು ತಳ್ಳಿಹಾಕಲಾಗದು. ಆದರೆ, ಗಂಭೀರ ಅಪಾಯಗಳಿಗೆ ಹೋಲಿಸಿದರೆ ಪಟಾಕಿಗಳು ನೀಡುವ ಸಂತೋಷ ನಗಣ್ಯವಾದುದು. ಮಣ್ಣು, ನೀರು ಮತ್ತು ಗಾಳಿಯನ್ನು ಮಲಿನಗೊಳಿಸುವ ಆಚರಣೆಯಿಂದ ದೂರ ಉಳಿಯುವುದು ದೀಪಾವಳಿ ಆಚರಣೆಯನ್ನು ಅರ್ಥಪೂರ್ಣಗೊಳಿಸುವ ಮತ್ತು ಹಬ್ಬದ ಸೌಂದರ್ಯವನ್ನು ಮತ್ತಷ್ಟು ಹೆಚ್ಚಿಸುವ ಕ್ರಮವಾಗಿದೆ. ಸುರಕ್ಷಿತ ಮತ್ತು ಪರಿಸರಸ್ನೇಹಿ ದೀಪಾವಳಿ ಆಚರಣೆಯ ನಿಟ್ಟಿನಲ್ಲಿ ಸಾರ್ವಜನಿಕರಿಗೆ ಅರಿವು ಮೂಡಿಸುವ ಸರ್ಕಾರ ಹಾಗೂ ಸಂಘಸಂಸ್ಥೆಗಳ ಪ್ರಯತ್ನಗಳು, ಹಬ್ಬದ ಸಂದರ್ಭಕ್ಕೆ ಸೀಮಿತವಾಗದೆ ವರ್ಷಪೂರ್ತಿ ನಿರಂತರವಾಗಿ ನಡೆಯಬೇಕಾಗಿದೆ.

# ಬಲಿಪಾಡ್ಯ ದೀಪಾವಳಿ ಪಾಡ್ಯ

■ ಶ್ರೀ. ವಿನೋದ ಕಾಮತ್

• ಉದಯವಾಹಿನಿ, ವಿಶೇಷ


ಬಲಿರಾಜನು ಅತ್ಯಂತ ದಾನಶೂರನಾಗಿದ್ದನು. ಬಾಗಿಲಿಗೆ ಬಂದ ಅತಿಥಿಯು ಏನೇ ಬೇಡಿದರೂ ಅದನ್ನು ಅವನಿಗೆ ದಾನವೆಂದು ಕೊಡುತ್ತಿದ್ದನು.

ದಾನ ಕೊಡುವುದು ಒಂದು ಒಳ್ಳೆಯ ಗುಣವಾಗಿದ್ದರೂ ಗುಣದ ಅತಿರೇಕವು ದೋಷವೇ ಆಗಿದೆ. ಯಾರಿಗೆ ಏನು, ಯಾವಾಗ ಮತ್ತು ಎಲ್ಲಿ ದಾನ ಕೊಡಬೇಕು ಎನ್ನುವುದನ್ನು ಶಾಸ್ತ್ರ ಮತ್ತು ಭಗವದ್ಗೀತೆಯಲ್ಲಿ ಸ್ಪಷ್ಟವಾಗಿ ಹೇಳಲಾಗಿದೆ. ಸತ್ಪಾತ್ರರಿಗೆ ದಾನ ಕೊಡಬೇಕು, ಅಪಾತ್ರರಿಗೆ ಕೊಡಬಾರದು. ಅಪಾತ್ರರಿಗೆ ಸಂಪತ್ತನ್ನು ದಾನ ಮಾಡಿದರೆ ಅವರು ಮದೋನ್ಮತ್ತರಾಗಿ ಮನಬಂದಂತೆ ವರ್ತಿಸುತ್ತಾರೆ. ಬಲಿರಾಜನು ಯಾರಿಗಾದರೂ, ಯಾವಾಗ ಬಂದರೂ ಮತ್ತು ಅವರು ಏನು ಕೇಳಿದರೂ ದಾನವೆಂದು ಕೊಡುತ್ತಿದ್ದನು. ಆಗ ಭಗವಾನ ಶ್ರೀವಿಷ್ಣುವು ವಟುವಿನ ಅವತಾರ (ವಾಮನಾವತಾರ) ತಾಳಿದನು. ವಟುವು ಚಿಕ್ಕವನಾಗಿರುತ್ತಾನೆ ಮತ್ತು 'ಓಂ ಭವತಿ ಭಿಕ್ಷಾಂ ದೇಹಿ।' ಅಂದರೆ 'ಭಿಕ್ಷೆ ಕೊಡಿ' ಎಂದು ಕೇಳುತ್ತಾನೆ. ವಾಮನನು ಬಲಿರಾಜನ ಬಳಿ ಹೋಗಿ ಭಿಕ್ಷೆಯನ್ನು ಕೇಳಿದಾಗ, ಬಲಿರಾಜನು ಏನು ಬೇಕು ಎಂದು ಕೇಳಿದನು. ಆಗ ವಾಮನನು ಮೂರು ಹೆಜ್ಜೆ ಭೂಮಿಯನ್ನು ದಾನವಾಗಿ ಕೇಳಿದನು. ವಾಮನನು ಯಾರು ಮತ್ತು ಆ ದಾನದಿಂದ ಏನಾಗಲಿದೆ' ಎನ್ನುವುದರ ಜ್ಞಾನವಿಲ್ಲದ ಬಲಿರಾಜನು ದಾನಕೊಡಲು ಒಪ್ಪಿಕೊಂಡನು. ವಾಮನನು ವಿರಾಟರೂಪವನ್ನು ತಾಳಿ ಒಂದು ಕಾಲಿನಿಂದ ಸಂಪೂರ್ಣ ಭೂಮಿಯನ್ನು ವ್ಯಾಪಿಸಿದನು. ಎರಡನೆಯ ಕಾಲಿನಿಂದ ಇಡಿ ಅಂತರಿಕ್ಷವನ್ನು ವ್ಯಾಪಿಸಿಕೊಂಡನು ಹಾಗೂ ಅವನು 'ಮೂರನೆಯ ಕಾಲನ್ನು ಎಲ್ಲಿಡಲಿ?' ಎಂದು ಬಲಿರಾಜನನ್ನು ಕೇಳಿದನು. ಆಗ ಬಲಿರಾಜನು, 'ಮೂರನೆಯ ಕಾಲನ್ನು ನನ್ನ ತಲೆಯ ಮೇಲೆ ಇಡಿ' ಎಂದು ಹೇಳಿದನು. ಆಗ ಮೂರನೆಯ ಪಾದವನ್ನು ಆತನ ತಲೆಯ ಮೇಲಿಟ್ಟು ಆತನನ್ನು ಪಾತಾಳಕ್ಕೆ ತಳ್ಳುವುದೆಂದು ನಿರ್ಧರಿಸಿ ವಾಮನನು, 'ನಿನಗೆ ಏನಾದರೂ ವರ ಕೇಳುವುದಿದ್ದರೆ ಕೇಳು' ಎಂದನು. ಆಗ ಬಲಿರಾಜನು 'ಪೃಥ್ವಿಯ ಮೇಲಿನ ನನ್ನ ಎಲ್ಲಾ ರಾಜ್ಯವು ಮುಕ್ತಾಯವಾಗಲಿದೆ ಮತ್ತು ನೀವು ನನ್ನನ್ನು ಪಾತಾಳಕ್ಕೆ ತಳ್ಳುವವರಿದ್ದೀರಿ. ಆದುದರಿಂದ ಈ ಮೂರು ಪಾದ ಭೂಮಿದಾನದಿಂದ ಘಟಿಸಿದಂತಹ ಪೃಥ್ವಿಯ ರಾಜ್ಯವು ಪ್ರತಿವರ್ಷವೂ ಮೂರು ದಿನಗಳ ಕಾಲವಾದರೂ ನನ್ನ ರಾಜ್ಯವೆಂದು ಗುರುತಿಸಲ್ಪಡಲಿ.

ಪ್ರಭೂ, ಯಮನ ಪ್ರೀತ್ಯರ್ಥವಾಗಿ ದೀಪದಾನವನ್ನು ಮಾಡುವವರಿಗೆ ಯಮಯಾತನೆಯಾಗದಿರಲಿ, ಅವರಿಗೆ ಅಪಮೃತ್ಯು ಬರದಿರಲಿ ಅವರ ಮನೆಯಲ್ಲಿ ಲಕ್ಷ್ಮೀಯು ನಿರಂತರವಾಗಿ ವಾಸಿಸಲಿ' ಎಂದು ವರವನ್ನು ಬೇಡಿದನು. ಆ ಮೂರು ದಿನಗಳೆಂದರೆ ಆಶ್ವಯುಜ ಕೃಷ್ಣ ಚತುರ್ದಶಿ, ಅಮಾವಾಸ್ಯೆ ಮತ್ತು ಕಾರ್ತಿಕ ಶುಕ್ಲ ಪ್ರತಿಪದಾ. ಇದಕ್ಕೆ ಬಲಿರಾಜ್ಯವೆನ್ನುತ್ತಾರೆ.

ಇದು ಮೂರೂವರೆ ಮುಹೂರ್ತಗಳಲ್ಲಿನ ಅರ್ಧ ಮುಹೂರ್ತವಾಗಿದೆ. ಇದನ್ನು 'ವಿಕ್ರಮ ಸಂವತ್ಸರ' ಕಾಲಗಣನೆಯ ವರ್ಷಾರಂಭದ ದಿನವೆಂದು ಆಚರಿಸಲಾಗುತ್ತದೆ. ಬಲಿಪಾಡ್ಯದಂದು ನೆಲದ ಮೇಲೆ 5 ಬಣ್ಣಗಳ ರಂಗೋಲಿಯಿಂದ ಬಲಿ ಮತ್ತು ಅವನ ಪತ್ನಿ ವಿಂಧ್ಯಾವಲಿಯ ಚಿತ್ರಗಳನ್ನು ಬಿಡಿಸಿ ಅವರ ಪೂಜೆಯನ್ನು ಮಾಡುತ್ತಾರೆ. ನಂತರ ಬಲಿಪ್ರೀತ್ಯರ್ಥ ದೀಪ ಮತ್ತು ವಸ್ತ್ರಗಳ ದಾನವನ್ನು ಮಾಡುತ್ತಾರೆ. ಈ ದಿನ ಪ್ರಾತಃಕಾಲ ಅಭ್ಯಂಗಸ್ನಾನ ಮಾಡಿದ ನಂತರ ಸ್ತ್ರೀಯರು ತಮ್ಮ ಪತಿಗೆ ಆರತಿಯನ್ನು ಬೆಳಗುತ್ತಾರೆ. ಮಧ್ಯಾಹ್ನ ಬ್ರಾಹ್ಮಣರಿಗೆ ಭೋಜನವನ್ನು ನೀಡುತ್ತಾರೆ. ಈ ದಿನ ಪಕ್ವಾನ್ನದ ಭೋಜನ ಮಾಡುತ್ತಾರೆ. 'ಬಲಿರಾಜ್ಯದಲ್ಲಿ ಶಾಸ್ತ್ರದಲ್ಲಿ ಹೇಳಿದ ನಿಷಿದ್ಧ ಕರ್ಮಗಳನ್ನು ಬಿಟ್ಟು ಜನರು ತಮ್ಮ ಮನಸ್ಸಿಗೆ ಬಂದಂತೆ ವರ್ತಿಸಬೇಕೆಂದು' ಧರ್ಮಶಾಸ್ತ್ರವು ಹೇಳುತ್ತದೆ. ಅಭಕ್ಷ್ಯಭಕ್ಷಣ, ಅಪೇಯಪಾನ ಮತ್ತು ಅಗಮ್ಯಾಗಮನ ಇವು ನಿಷಿದ್ಧ ಕರ್ಮಗಳಾಗಿವೆ; ಶಾಸ್ತ್ರದ ಸಮ್ಮತಿ ಇರುವುದರಿಂದ ಜನರು ಪರಂಪರೆಯಂತೆ ವಿನೋದವಿಲಾಸ ಮಾಡುತ್ತಾರೆ.

ಈ ದಿನ ಜನರು ಹೊಸ ಬಟ್ಟೆಬರೆಗಳನ್ನು ಧರಿಸಿ ಇಡೀ ದಿನವನ್ನು ಆನಂದದಲ್ಲಿ ಕಳೆಯುತ್ತಾರೆ. ಈ ದಿನ ಗೋವರ್ಧನ ಪೂಜೆಯನ್ನು ಮಾಡುವ ಪದ್ಧತಿಯಿದೆ. ಇದಕ್ಕಾಗಿ ಸೆಗಣಿಯ ಪರ್ವತವನ್ನು ಮಾಡಿ ಅದರ ಮೇಲೆ ಗರಿಕೆ ಮತ್ತು ಹೂವುಗಳನ್ನು ಚುಚ್ಚುತ್ತಾರೆ. ಕೃಷ್ಣ, ಇಂದ್ರ, ಹಸು ಮತ್ತು ಕರುಗಳ ಚಿತ್ರ ಅಥವಾ ಮೂರ್ತಿಗಳನ್ನು ಜೊತೆಗಿಟ್ಟು, ಅವುಗಳನ್ನು ಪೂಜಿಸಿ ಮೆರವಣಿಗೆ ಮಾಡುತ್ತಾರೆ. ಬಲಿಪಾಡ್ಯದಂದು ಬಲಿಯ ಪೂಜೆಯನ್ನು ಮಾಡುತ್ತಾರೆ. ಬಲಿಯು ರಾಕ್ಷಸ ಕುಲದಲ್ಲಿ ಜನ್ಮತಾಳಿದ್ದರೂ ಅವನ ಪುಣ್ಯದಿಂದಾಗಿ ಅವನ ಮೇಲೆ ವಾಮನದೇವರ ಕೃಪೆಯಾಯಿತು.





ಅವನು ಈಶ್ವರೀ ಕಾರ್ಯವೆಂದು ಜನರ ಸೇವೆಯನ್ನು ಮಾಡಿದನು. ಅವನು ಸಾತ್ವಿಕ ವೃತ್ತಿಯ ಮತ್ತು ದಾನಿರಾಜನಾಗಿದ್ದನು. ಪ್ರತಿಯೊಬ್ಬ ಮನುಷ್ಯನು ಪ್ರಾರಂಭದಲ್ಲಿ ಅಜ್ಞಾನಿಯಾಗಿರುವುದರಿಂದ ಅವನಿಂದ ಅಯೋಗ್ಯ ಕೃತಿಗಳು ಘಟಿಸುತ್ತಿರುತ್ತವೆ. ಆದರೆ ಜ್ಞಾನ ಮತ್ತು ಈಶ್ವರೀಕೃಪೆಯಿಂದ ಅವನು ದೇವತ್ವವನ್ನು ಪ್ರಾಪ್ತಮಾಡಿ ಕೊಳ್ಳಬಹುದು ಎಂಬುದು ಈ ಉದಾಹರಣೆಯಿಂದ ಸ್ಪಷ್ಟವಾಗುತ್ತದೆ. ಇಂತಹ ನಿರ್ಭಯತೆಯಿಂದ ಸತ್ಯಕರ್ಮವನ್ನು ಮಾಡಿದರೆ ಅವನಿಗೆ ಮೃತ್ಯುವಿನ ಭಯವೇ ಇರುವುದಿಲ್ಲ. ಯಮನೂ ಕೂಡಾ ಅವನ ಮಿತ್ರ ಅಥವಾ ಬಂಧುವಾಗುತ್ತಾನೆ.

ಭಗವಂತನು ವಾಮನ ಅವತಾರದಲ್ಲಿ 'ಭಗವಂತನು ಸರ್ವಸ್ವವನ್ನು ಅರ್ಪಿಸುವವನ ದಾಸನಾಗುವ ತಯಾರಿಯನ್ನೂ ಇಟ್ಟುಕೊಂಡಿರುತ್ತಾನೆ ಎಂಬುದನ್ನು ತೋರಿಸಿಕೊಟ್ಟಿದ್ದಾನೆ. ಬಲಿಯು ವಾಸ್ತವದಲ್ಲಿ ಅಸುರರ ಕುಲದವನಾಗಿದ್ದರೂ ಅವನ ಉದಾರ ತತ್ತ್ವದಿಂದಾಗಿ ಮತ್ತು ಅವನು ಭಗವಂತನಿಗೆ ಶರಣಾಗಿ ತನ್ನ ಸರ್ವಸ್ವವನ್ನು ಅರ್ಪಿಸಿದ್ದರಿಂದ ಭಗವಂತನು ಅವನಿಗೆ ಯೋಗ್ಯ ಮಾರ್ಗದರ್ಶನ ಮಾಡಿ ಅವನ ಜೀವನಕ್ಕೆ ಹೊಸ ಸ್ವರೂಪವನ್ನು ನೀಡಿದನು ಮತ್ತು ಅವನ ಉದ್ಧಾರವನ್ನು ಮಾಡಿದನು.

ಅವನ ರಾಜ್ಯದಲ್ಲಿದ್ದ ಅಸುರವೃತ್ತಿಗೆ ಪೋಷಕವಾಗಿರುವ ಭೋಗಮಯ ವಿಚಾರಗಳನ್ನು ತೆಗೆದುಹಾಕಿ, ಅಲ್ಲಿ ತ್ಯಾಗಭಾವನೆಯನ್ನು ಅಂಕುರಿಸಿ, ಜನತೆಗೆ ದೈವೀವಿಚಾರಗಳನ್ನು ನೀಡಿ ಸುಖ ಮತ್ತು ಸಮೃದ್ಧಿಯ ಜೀವನವನ್ನು ಪ್ರದಾನಿಸಿದನು.'

(ಆಧಾರ : ಸನಾತನ ಸಂಸ್ಥೆ ನಿರ್ಮಿಸಿದ ಗ್ರಂಥ ಹಬ್ಬಗಳನ್ನು ಆಚರಿಸುವ ಯೋಗ್ಯ ಪದ್ಧತಿ ಮತ್ತು ಶಾಸ್ತ್ರ'')

# ಬೆಳಕಿನ ಹಬ್ಬ ದೀಪಾವಳಿ

• ಉದಯವಾಹಿನಿ, ವಿಶೇಷ





ಸಾಮಾಜಿಕ ಕಳಕಳಿ
ಹೆಚ್.ಎಸ್. ಪ್ರತಿಮಾ
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ
ಶಿಕ್ಷಕಿ, ಹಾಸನ

ದೀಪಾವಳಿ ಭಾರತದಾದ್ಯಂತ
ಆಚರಿಸುತಲಿ ಸಂಭ್ರಮದಲಿ
ಕತ್ತಲೆಯಿಂದ ಬೆಳಕಿನೆಡೆಗೆ
ಬಾಳಿನ ಸಂಭ್ರಮದೊಳಗೆ....
ಹರಡಲಿ ಬೆಳಕಿನ ಸಂತಸವ
ಸಡಗರವು ನಮಗಿದು ಚಂದದಲಿ
ಮಣ್ಣಿನ ದೀಪವ ಹಚ್ಚುತಲಿ
ರಂಗು ರಂಗಿನ ರಂಗೋಲಿ ಬಿಡುಸುತಲಿ....
ರಾಮನು ರಾವಣನನು
ಸಂಹಾರ ಮಾಡಿದ ಜಯದ ದಿನ
ವನವಾಸ ಮುಗಿಸಿ ಬಂದ ಕ್ಷಣ
ಎಲ್ಲೆಡೆ ಬೆಳಕು ತುಂಬಿಹುದ ಮನ...
ಮನೆಯನು ಸ್ವಚ್ಛವ ಮಾಡಿರಲು
ಲಕ್ಷ್ಮಿ, ಗಣೇಶನ ಪೂಜಿಸಲು
ಹೊಸ ಉಡುಪನು ದರಿಸುತಲಿ
ಪಟಾಕಿಯ ಸಿಡಿಸುತ ಸಂಭ್ರಮಿಸುತಲಿ....
ದ್ವೇಷ ಅಸೂಯೆ ತೊರೆಯುತಲಿ
ನಾವೆಲ್ಲ ಒಂದು ಎನ್ನುತಲಿ
ಸಂಭ್ರಮಿಸುತ ಸಂಸ್ಕೃತಿಯ ಉಳಿಸುತ
ವಿಧವಿಧ ಅಡುಗೆಯ ಸವಿಯುತಲಿ....
ಪರಿಸರದ ಕಾಳಜಿಯ ಹೊಂದುತಲಿ
ಹೆಚ್ಚು ಪಟಾಕಿ ಹಚ್ಚದಲೆ ಆಚರಿಸೋಣ
ಎಲ್ಲಾರೂ ಸಂಭ್ರಮಿಸೋಣ ಜೊತೆಯಲಿ
ಆಚರಿಸುತ ಸಂಭ್ರಮದಿ ಬೆಳಕಿನಹಬ್ಬ
ದೀಪಾವಳಿ....

# ಕ ವ ನ

## ದೀಪಾವಳಿ





ವಿ.ಎಂ.ಎಸ್.ಗೋಪಿ

• ಉದಯವಾಹಿನಿ, ವಿಶೇಷ

ಬಂತೋ.. ಬಂತೋ.. ದೀಪಾವಳಿ
ಬಂತೋ..
ತಂತೋ.. ತಂತೋ.. ಸಡಗರ ತಂತೋ..
ಸಿರಿ ತಂದಿತಪ್ಪ ಈ ಬೆಳಕಿನ ಹಬ್ಬ
ಸಂತಸದ ರೂಪ ಈ ದೀಪಾವಳಿ ಹಬ್ಬ
ಮನೆಯ ಅಂಗಳದಿ ಬಣ್ಣದ ರಂಗೋಲಿ
ಮನೆಯ ಬಾಗಿಲು ಮಾವಿನ ತೋರಣ
ಸಾಲು ಸಾಲು ಹಣತೆಯ ದೀಪ
ಅಂಗಳ ತುಂಬಿ ಬೆಳಗಿತೇ ದೀಪ
ಊರ ತುಂಬೇಲ್ಲಾ ಹೊಸತು ನೋಡಾ
ನಾಡಿನ ಜನದ ಹಿಗ್ಗು ನೋಡಾ
ಹಬ್ಬದ ಸಿರಿಗೆ ತುಪ್ಪದ ಘಮ ಘಮ
ಹಸಿರಿನ ಗರಿಗೆ ಸಂಭ್ರಮದ ಸಮ ಸಮ
ಹರಿಯುವ ನೀರಲ್ಲಿ ತಲೆ ಎಣ್ಣೆ ಸ್ನಾನ
ನಾರಿಯರ ಮುಡಿ ತುಂಬ ಮಲ್ಲಿಗೆ
ತರ ತರಹದ ಪಟಾಕಿ
ಬೆಳಕು ಬೀರಿ ಸಿಡಿಯುತ್ತೆ
ದೀಪಗಳ ಸಾಲು ಈ ದೀಪಾವಳಿ ಹಬ್ಬ
ಸಂತಸದ ರೂಪ ಈ ದೀಪಾವಳಿ ಹಬ್ಬ.

# ಸಮೀಕ್ಷೆಯಲ್ಲಿ ಭಾಗವಹಿಸಲು ಜನರ ನಿರಾಸಕ್ತಿ

• ಉದಯವಾಹಿನಿ, ಬೆಂಗಳೂರು

ಶೇ. 15 ಕ್ಕಿಂತ ಹೆಚ್ಚು ಮನೆಗಳು ಸಮೀಕ್ಷೆಯಲ್ಲಿ ಭಾಗವಹಿಸಲು ನಿರಾಕರಿಸುತ್ತಿರುವುದರಿಂದ ಬೆಂಗಳೂರಿನಲ್ಲಿ ಸಾಮಾಜಿಕ-ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ನಡೆಸುತ್ತಿರುವ ಸರ್ಕಾರಿ ನೌಕರರ ತಂಡಕ್ಕೆ ನಿರಾಸಕ್ತಿ ಮೂಡಿದೆ.

ಬನಶಂಕರಿಯಲ್ಲಿ, 30 ಫ್ಲಾಟ್‌ಗಳಲ್ಲಿ, ಕೇವಲ ಇಬ್ಬರು ಮಾತ್ರ ಸಹಕರಿಸಿದ್ದಾರೆ. ಇದು ಕೇವಲ ಒಂದು ಘಟನೆಯಲ್ಲ, ಇದು ನಗರದಾದ್ಯಂತ ನಡೆಯುತ್ತಿರುವ ಒಂದು ಮಾದರಿಯಾಗಿದೆ. ನಾವು ಕೆಲವು ಮನೆಗಳಿಗೆ ನಾಲ್ಕೈದು ಬಾರಿ ಭೇಟಿ ನೀಡಿದ್ದೇವೆ. ಅವರು ಬಾಗಿಲು ತೆರೆಯುವುದಿಲ್ಲ. ಕೆಲವರು ಅವಮಾನ ವ್ಯಕ್ತಪಡಿಸುತ್ತಾರೆ. ಆದರೆ ನಾವು ನಮ್ಮ ಕೆಲಸವನ್ನು ಮಾತ್ರ ಮಾಡುತ್ತಿದ್ದೇವೆ ಎಂದು ದಣಿದ ಗಣತಿದಾರರು ಹೇಳಿದರು.




ಕೆಲವು ಗಣತಿದಾರರ ವಿರುದ್ಧ ಜನರು ತೀವ್ರ ದ್ವೇಷ ಕಾರಿದ್ದಾರೆ. ವಿಶೇಷವಾಗಿ ರಾಜ್ಯದ ಹೊರಗಿನಿಂದ ಕರ್ನಾಟಕದಲ್ಲಿ ನೆಲೆಸಿರುವವರಿಂದ, ರಾಜ್ಯದ ಅಭಿವೃದ್ಧಿಯಲ್ಲಿ ಯಾವುದೇ ಸ್ಪಷ್ಟ ಪಾಲು ಇಲ್ಲ. ಹೀಗಾಗಿ ನಿಮ್ಮ ಸರ್ಕಾರಕ್ಕೆ ಕೆಲಸವಿಲ್ಲ, ಮತ್ತು ನಿಮಗೂ ಕೆಲಸವಿಲ್ಲ ಅದಕ್ಕಾಗಿಯೇ ನೀವು ನಮಗೆ ತೊಂದರೆ ನೀಡುತ್ತಿದ್ದೀರಿ ಎಂದು ಒಬ್ಬ ವ್ಯಕ್ತಿ ಗಣತಿದಾರರ ಮೇಲೆ ಗುಡುಗಿದ್ದಾರೆ ಎಂದು ವರದಿಯಾಗಿದೆ. ಬೆಂಗಳೂರಿನಲ್ಲಿ ಶೇ.40 ಕ್ಕಿಂತ ಕಡಿಮೆ ಕೆಲಸ ಪೂರ್ಣಗೊಂಡಿರುವುದರಿಂದ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಕ್ಟೋಬರ್ 24 ರಿಂದ 31 ರವರೆಗೆ ಗಡುವನ್ನು ವಿಸ್ತರಿಸಿದ್ದಾರೆ. ದೀಪಾವಳಿಗೆ ಅಕ್ಟೋಬರ್ 21 ರಿಂದ 23 ರವರೆಗೆ ಸಣ್ಣ ವಿರಾಮವನ್ನು ಸಹ ಘೋಷಿಸಲಾಗಿದೆ.

ತಾಂತ್ರಿಕ ದೋಷಗಳು ಮತ್ತು ಸಮೀಕ್ಷೆಯ ಮಧ್ಯದ ಸಾಫ್ಟ್‌ವೇರ್ ಬದಲಾವಣೆಗಳನ್ನು ಸಹ ಸಮೀಕ್ಷಕರು ವಿಳಂಬಕ್ಕೆ ಕಾರಣವೆಂದು ತಿಳಿಸಿದ್ದಾರೆ. ಮೂವತ್ತು ವರ್ಷಗಳ ಹಿಂದೆ, ಸುಪ್ರೀಂ ಕೋರ್ಟ್‌ನ ಒಂಬತ್ತು ನ್ಯಾಯಾಧೀಶರ ಪೀಠವು ಹಿಂದುಳಿದ ವರ್ಗಗಳನ್ನು ಗುರುತಿಸಲು ರಾಜ್ಯಗಳನ್ನು ಕೇಳಿತು. ನಾಗರಿಕರು ಸಹಕರಿಸದಿದ್ದರೆ ನಾವು ಅದನ್ನು ಹೇಗೆ ಮಾಡಬಹುದು ಎಂದು ಸಮೀಕ್ಷಕರೊಬ್ಬರು ಪ್ರಶ್ನಿಸಿದ್ದಾರೆ.

ನ್ಯಾಯಮೂರ್ತಿ ನಾಗಮೋಹನ್ ದಾಸ್ ನಾಗರಿಕರಿಗೆ ತಮ್ಮ ಜವಾಬ್ದಾರಿಯನ್ನು ನೆನಪಿಸಿ, ಇದು ಸಮಗ್ರ ಅಭಿವೃದ್ಧಿಗಾಗಿ ಸಮೀಕ್ಷೆ. ಭಾಗವಹಿಸುವುದು ನಾಗರಿಕ ಕರ್ತವ್ಯ ಎಂದು ಹೇಳಿದ್ದಾರೆ.

# ರಾಮಾಯಣ



ಮಾರೀಚನು ಮಾಯಾ ಮೃ ಗರೂ ಪದಿಂದ ಸೀತಾದೇವಿಯ ಬಳಿಗೆ ಬಂದದ್ದು

• ಹಿಂದಿನ ಸಂಚಿಕೆಯಿಂದ

## 120 ನೆಯ ಅಧ್ಯಾಯ

ಅಧರ್ಮಮಾರ್ಗಪ್ರವರ್ತಕನಾದ ನಿನಗೆ ಏಕೆ ಬುದ್ಧಿ ಹೇಳದಿದ್ದಾರೋ ತಿಳಿಯಲಿಲ್ಲ. ಲೋಕದಲ್ಲಿ ಪ್ರಧಾನನಾದವನು ದುರ್ವತ್ರನದಲ್ಲಿ ನಡೆಯುವ ಅರಸನನ್ನು ನಿಗ್ರಹಿಸಿಯಾದರೂ ಬುದ್ಧಿಯನ್ನು ಹೇಳಬೇಕು. ನೀನು ಧರ್ಮರಹಸ್ಯವನ್ನು ಗ್ರಹಿಸಲಾರದೆ ಮನಸ್ಸು ಬಂದಂತೆ ನಡೆಯುತ್ತಿದ್ದೀಯೆ. ನೀನು ಧರ್ಮಾರ್ಥ ಕಾಮಕೀರ್ತಿಗಳನ್ನು ಬಯಸದೆ ದುರ್ವತ್ರನದಲ್ಲಿ ನಡೆಯುತ್ತಿದ್ದೀಯೆ. ಆದಕಾರಣ ಪ್ರಧಾನರು ನಿನಗೆ ವಿಪತ್ತುಗಳು ಬಾರದಂತೆ ಕಾಲಕಾಲದಲ್ಲಿ ಬುದ್ಧಿ ಹೇಳಬೇಕು. ಕ್ರೂರ ಬುದ್ಧಿಯುಳ್ಳ ಅರಸನು ರಾಜ್ಯಪರಿಪಾಲನವನ್ನು ಮಾಡಲಾರನು. ರಾವಣೇಶ್ವರ, ಪ್ರಜೆಗಳಿಗೆ ಪ್ರತಿಕೂಲವಾಗಿ ನಡೆಯುತ್ತ ಕೀರ್ತಿಮಾರ್ಗವನ್ನು ಬಿಟ್ಟು ನಡೆಯುವ ಅರಸನಿಗೆ ರಾಜ್ಯಭೋಗವು ನಿಲ್ಲಲಾರದು. ಅರಸನು ಹೇಳುವ ಹಾಗೆ ಮಾಡುವ ಪ್ರಧಾನಿಗಳು ಆ ಅರಸನನ್ನು ಕೆಡಿಸುವುದಲ್ಲದೆ, ಹಳ್ಳತಿಟ್ಟುಗಳನ್ನು ನೋಡಿ ರಥವನ್ನು ನಡೆಯಿಸದೆ ರಥಿಕನನ್ನೂ ರಥವನ್ನೂ ಕೆಡಿಸುವ ಸಾರಥಿಯಂತೆ ತಾವೂ ಕೆಡುವರು. ಧರ್ಮಪ್ರವರ್ತಕರಾದ ಸತ್ಪುರುಷರಾಗಿದ್ದರೂ ಅಪರಾಧಮಾಡಿದವರ ಸಹವಾಸದಿಂದ ಕೆಟ್ಟವರು ಬಹುಮಂದಿಯುಂಟು. ಪ್ರಜೆಗಳಿಗೆ ಪ್ರತಿಕೂಲನಾಗಿ ಕ್ರೂರಬುದ್ಧಿಯುಳ್ಳ ಅರಸನಿಂದ ಆತನ ರಾಜ್ಯದಲ್ಲಿರುವ ಪ್ರಜೆಗಳು ನರಿಯನ್ನನುಸರಿಸುವ ಕುರಿಗಳಂತೆ ನಾಶವನ್ನೆದುವರು. ರಾವಣ, ಕಾಮುಕನಾಗಿ ದುರ್ಬುದ್ಧಿಯಿಂದ ಕ್ರೂರಕರ್ಮವನ್ನು ಮಾಡುವ ನಿನ್ನಿಂದ ಅವಶ್ಯವಾಗಿ ಸಮಸ್ತ ರಾಕ್ಷಸರೂ ನಾಶವನ್ನೋದುವರು. ನಾನು ಶ್ರೀರಾಮನ ಶಸ್ತ್ರಹತಿಯಿಂದ ಮರಣವತ್ತೈದುವುದು ನಿಶ್ಚಯ. ನನಗೆ ವಿಪತ್ತುಬರುವುದೆಂದು ನಾನು ದುಃಖಪಡುವುದಿಲ್ಲ. ಸಮಸ್ತ ಸೇನಾಸಮೇತನಾದ ನೀನು ಶ್ರೀರಾಮನ ಬಾಣಗಳಿಂದ ನಾಶವನ್ನೆದುವೆಯೆಂದು ದುಃಖಪಡುತ್ತೇನೆ. ಆತನು ನನ್ನನ್ನು ಕೊಲ್ಲಲಿ. ನನಗೆ ಅದರ ವಿಚಾರವಿಲ್ಲ. ನಾನು ನಿನ್ನ ಮಾತನ್ನು ಕೇಳಿ ಹತನಾಗಿ ನಿನ್ನ ಕಾರ್ಯವನ್ನು ಆಗಮಾಡುತ್ತೇನೆ. ನೀನು ಕಪಟದಿಂದ ಸೀತಾದೇವಿಯನ್ನು ಅಪಹರಿಸಿಕೊಂಡು ಬಂದರೆ ಸಮಸ್ತ ಬಂಧುಜನಸಹಿತನಾಗಿ ಮರಣವನ್ನೈದುವೆ. ಇದನ್ನು ನೀನೇ ವಿಚಾರಿಸಿಕೊ. ಇನ್ನು ಮೇಲೆ, ನಾನು ನೀನು, ಲಂಕಾನಗರ ರಾಕ್ಷಸರು ಯಾರೂ ಉಳಿಯುವುದಿಲ್ಲ. ಆಯುಸ್ಸು ಕ್ಷಯವಾಗಿ ಮರಣಕಾಲವು ಸಂನಿಹಿತವಾಗಿರು ವವನು ಆಪ್ತರ ವಾಕ್ಯವನ್ನು ಕೇಳದೆ ಲಯವನ್ನೆದುವನು. ನಿನ್ನ ಮಿತ್ರನಾದ ನನ್ನ ಹಿತವಾಕ್ಯವನ್ನು ಕೇಳದಿದ್ದರೆ ನೀನು ಲಯವಾಗುವೆ. ಸಂದೇಹವಿಲ್ಲ ಎಂದು ಅತ್ಯಂತ ನಿಷ್ಟುರವಾಗಿ ನುಡಿದನು.

**ಮಾರೀಚನು ಮಾಯಾ ಮೃ ಗರೂ ಪದಿಂದ ಸೀತಾದೇವಿಯ ಬಳಿಗೆ ಬಂದದ್ದು**

ಈ ಪ್ರಕಾರ ಮಾರೀಚನು ರಾವಣನಿಗೆ ಅನೇಕ ವಿಧವಾಗಿ ಹಿತೋಪದೇಶ ಮಾಡಿದರೂ ರಾವಣನು ಕೇಳಲಿಲ್ಲ.

**ಮುಂದುವರಿಯುವುದು...**

# ಜೇನುತುಪ್ಪಕ್ಕೆ ಕರಿಮೆಣಸು ಸೇರಿಸಿ ಸೇವಿಸಿದ್ರೆ...

ಜೇನುತುಪ್ಪವನ್ನು ಕಾಳು ಮೆಣಸಿನ ಪುಡಿಯೊಂದಿಗೆ ಪ್ರತಿದಿನ ಬೆಳಗ್ಗೆ ಖಾಲಿ ಹೊಟ್ಟೆಯಲ್ಲಿ ಸೇವಿಸೋದ್ರಿಂದ ಹಲವಾರು ಪ್ರಯೋಜನಗಳಿವೆ. ತಿಳಿದ್ರೆ ನೀವೂ ತಿನ್ನಲು ಆರಂಭಿಸುತ್ತೀರಾ. ಮಕ್ಕಳಿಂದ ಹಿಡಿದು ವಯಸ್ಸಾದವರಿಗೂ ಉತ್ತವಾಗಿದೆ. ಜೇನುತುಪ್ಪ ಕರಿಮೆಣಸು ಎರಡೂ ಔಷಧೀಯ ಗುಣಗಳಿಂದ ಸಮೃದ್ಧವಾಗಿದೆ. ಹಾಗಾಗಿ ಇದನ್ನು ಆಯುರ್ವೇದದಲ್ಲಿ ಹೆಚ್ಚಾಗಿ ಬಳಸಲಾಗುತ್ತದೆ. ಪ್ರತಿದಿನ ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಒಂದು ಚಮಚ ಜೇನುತುಪ್ಪದ ಜೊತೆಗೆ ಚಿಟಿಕೆ ಕರಿಮೆಣಸನ್ನು ಸೇವಿಸಿದರೆ ಅವು ದೇಹವನ್ನು ಅನೇಕ ಗಂಭೀರ ಕಾಯಿಲೆಗಳಿಂದ ರಕ್ಷಿಸಲು ಸಹಾಯ ಮಾಡುತ್ತದೆ. ಈ ಮನೆಮದ್ದು ದೇಹದ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುವುದಲ್ಲದೆ ಜೀರ್ಣಕ್ರಿಯೆ, ಶೀತ, ತೂಕ ನಷ್ಟ ಮತ್ತು ಇತರ ಸಮಸ್ಯೆಗಳಿಗೆ ಪ್ರಯೋಜನಕಾರಿಯಾಗಿದೆ.

**ರೋಗನಿರೋಧಕ ಶಕ್ತಿಯನ್ನು ಬಲಪಡಿಸುತ್ತದೆ:** ಜೇನುತುಪ್ಪ, ಕರಿಮೆಣಸು ಎರಡೂ ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧವಾಗಿವೆ.

ಅವು ದೇಹದ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತವೆ, ಇದು ಕಾಲೋಚಿತ ಕಾಯಿಲೆಗಳು, ಸೋಂಕುಗಳು ಮತ್ತು ಅಲರ್ಜಿಗಳನ್ನು ತಡೆಯುತ್ತದೆ. ಇದು ದೇಹದ ಜೀವ ಕೋಶಗಳನ್ನು ಫ್ರೀ ರಾಡಿಕಲ್‌ಗಳಿಂದ ರಕ್ಷಿಸುತ್ತದೆ. ನಿಮಗೆ ಸುಸ್ತಾದಂತೆ ಭಾಸವಾದಾಗ ಇದನ್ನು ಸೇವಿಸೋದು ದೇಹಕ್ಕೆ ಶಕ್ತಿಯನ್ನು ನೀಡುತ್ತದೆ.

**ಶೀತ ಮತ್ತು ಕೆಮ್ಮಿನಿಂದ ಪರಿಹಾರ :** ಜೇನುತುಪ್ಪವು ನೈಸರ್ಗಿಕ ಬ್ಯಾಕ್ಟೀರಿಯಾ ವಿರೋಧಿ ಗುಣವನ್ನು ಹೊಂದಿದ್ದು, ಕರಿಮೆಣಸು ಪೈಪರಿನ್ ಎಂಬ ಅಂಶವನ್ನು ಹೊಂದಿರುತ್ತದೆ. ಇದು ಉಸಿರಾಟದ ವ್ಯವಸ್ಥೆಯನ್ನು ತೆರೆಯುತ್ತದೆ ಮತ್ತು ಸೋಂಕಿನ ವಿರುದ್ಧ ಹೋರಾಡುತ್ತದೆ. ಬೆಳಿಗ್ಗೆ ಇದನ್ನು ಸೇವಿಸುವುದರಿಂದ ಗಂಟಲು ನೋವು,ಕಫ ಮತ್ತು ಕೆಮ್ಮಿನಿಂದ ಪರಿಹಾರ ಸಿಗುತ್ತದೆ. ಶೀತವನ್ನು ತ್ವರಿತವಾಗಿ ಗುಣಪಡಿಸುತ್ತದೆ. ಈ ಮಿಶ್ರಣವು ಮಕ್ಕಳು ಮತ್ತು ವೃದ್ಧರಿಗೆ ಪ್ರಯೋಜನಕಾರಿಯಾಗಿದೆ.



**ಜೀರ್ಣಕ್ರಿಯೆ ಚೆನ್ನಾಗಿರುತ್ತದೆ:** ಕರಿಮೆಣಸು ಹೊಟ್ಟೆಯಲ್ಲಿ ಕಿಣ್ವಗಳ ಸ್ರವಿಸುವಿಕೆಯನ್ನು ಹೆಚ್ಚಿಸುವ ಮೂಲಕ ಜೀರ್ಣಕ್ರಿಯೆಯನ್ನು ವೇಗಗೊಳಿಸುತ್ತದೆ, ಜೇನುತುಪ್ಪವು ಕರುಳನ್ನು ಸ್ವಚ್ಛಗೊಳಿಸಲು ಸಹಾಯ ಮಾಡುತ್ತದೆ. ಅನಿಲ, ಅಜೀರ್ಣ, ಮಲಬದ್ಧತೆ ಅಥವಾ ಆಮ್ಲೀಯತೆಯಿಂದ ಬಳಲುತ್ತಿರುವವರಿಗೆ ಇದರ ಸೇವನೆ ಒಳ್ಳೆಯದು. ಇದು ಹೊಟ್ಟೆಯನ್ನು ಹಗುರವಾಗಿರಿಸುತ್ತದೆ ಮತ್ತು ಹಸಿವನ್ನು ನಿಯಂತ್ರಿಸುತ್ತದೆ.

**ಕೀಲು ನೋವು ಮತ್ತು ಊತದಲ್ಲಿ ಪರಿಹಾರ:** ಕರಿಮೆಣಸು ಉರಿಯೂತ ಮತ್ತು ನೋವನ್ನು ಕಡಿಮೆ ಮಾಡುವ ಉರಿಯೂತದ ಗುಣಗಳನ್ನು ಹೊಂದಿದೆ. ಜೇನುತುಪ್ಪದೊಂದಿಗೆ ಇದನ್ನು ಸೇವಿಸುವುದರಿಂದ ಸಂಧಿವಾತ, ಕೀಲು ಬಿಗಿತ ಮತ್ತು ನೋವಿನಿಂದ ಪರಿಹಾರ ಸಿಗುತ್ತದೆ. ಇದು ದೇಹಕ್ಕೆ ಒಳಗಿನಿಂದ ಉಷ್ಣತೆಯನ್ನು ನೀಡುತ್ತದೆ, ಇದು ನೋವನ್ನು ನಿವಾರಿಸಲೂ ಸಹಾಯ ಮಾಡುತ್ತದೆ.

**ತೂಕ ಇಳಿಸಿಕೊಳ್ಳಲು ಸಹಾಯ ಮಾಡುತ್ತದೆ**

**ಕರಿಮೆಣಸು ಚಯಾಪಚಯ ಕ್ರಿಯೆಯನ್ನು ವೇಗಗೊಳಿಸುತ್ತದೆ ಮತ್ತು ಕೊಬ್ಬನ್ನು ಕರಗಿಸಲು ಸಹಾಯ ಮಾಡುತ್ತದೆ. ಜೇನುತುಪ್ಪವು ನೈಸರ್ಗಿಕ ಸಕ್ಕರೆಯನ್ನು ಹೊಂದಿದ್ದು ಇದು ದೇಹಕ್ಕೆ ಶಕ್ತಿಯನ್ನು ನೀಡುತ್ತದೆ. ಪ್ರತಿದಿನ ಬೆಳಿಗ್ಗೆ ಇದನ್ನು ಸೇವಿಸುವುದರಿಂದ ದೇಹದಲ್ಲಿ ಸಂಗ್ರಹವಾದ ಕೊಬ್ಬನ್ನು ಕ್ರಮೇಣ ಕಡಿಮೆ ಮಾಡುತ್ತದೆ. ಇದು ಹೊಟ್ಟೆಯ ಕೊಬ್ಬನ್ನು ಕಡಿಮೆ ಮಾಡುವಲ್ಲಿ ಸಹಕಾರಿಯಾಗಿದೆ.**

# ಮಂತ್ರಾಲಯ ಶ್ರೀಗಳಿಂದ ಜಲಪೂರ್ಣ ತ್ರಯೋದಶಿಯ ಪ್ರಯುಕ್ತ ಗಂಗಾ ಪೂಜಾ

• ಉದಯವಾಹಿನಿ, ಬೆಂಗಳೂರು

ಜಯನಗರದ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರು,ಸಂಚಾರ ನಿಮಿತ್ತ ತಮಿಳುನಾಡಿನ ಶ್ರೀ ರಂಗಂನ ಶ್ರೀರಂಗನಾಥನ ಕ್ಷೇತ್ರದಿಂದ ಬೆಂಗಳೂರಿನ ರಾಯರ ಸನ್ನಿಧಿಗೆ ಆಗಮಿಸಿದರು. ಶ್ರೀ ಪಾದರಿಗೆ ಶ್ರೀಮಠದ ವ್ಯವಸ್ಥಾಪಕರಾದ ಆರ್ ಕೆ ವಾದಿಂದ್ರಾಚಾರ್ಯರು ಮಾಲಾರ್ಪಣೆ ಮಾಡುವ ಮೂಲಕ ಬರಮಾಡಿ ಕೊಂಡರು. ತದನಂತರ ಪರಮಪೂಜ್ಯ ಶ್ರೀಪಾದಂಗಳವರು ತಮ್ಮ ಅಮೃತ ಹಸ್ತದಿಂದ ಲೋಕಕಲ್ಯಾಣಕ್ಕಾಗಿ ಶ್ರೀಗುರು ರಾಘವೇಂದ್ರ ಸ್ವಾಮಿಗಳಲ್ಲಿ ದೀಪಾವಳಿ ಹಬ್ಬದ ಪ್ರಯುಕ್ತ ಪ್ರಾರ್ಥಿಸಿ, ದೀಪಗಳನ್ನು ಪ್ರಜ್ವಲಿಸಿ ಶ್ರೀಮನ್ಮೂಲ ರಾಮಚಂದ್ರದೇವರ ಮುಂಭಾಗದಲ್ಲಿ ಗಂಗಾ ಪೂಜೆಯನ್ನು ನೆರವೇರಿಸಿ ಭಕ್ತರಿಗೆ ಅನುಗ್ರಹ ಸಂದೇಶವನ್ನು ನೀಡಿ ಫಲಮಂತ್ರಾಕ್ಷತೆಯನ್ನು ಕೊಟ್ಟು ಆಶೀರ್ವದಿಸಿ ನಂತರ ಮಂತ್ರಾಲಯ ಕ್ಷೇತ್ರಕ್ಕೆ ಪ್ರಯಾಣ ಬೆಳೆಸಿದರು.

ನರಕ ಚತುರ್ದಶಿಯ ಪ್ರಯುಕ್ತ ಶ್ರೀ ರಾಘವೇಂದ್ರ ಸ್ವಾಮಿಗಳ ಮೂಲ ಬೃಂದಾವನಕ್ಕೆ ತೈಲ ಅಭ್ಯಂಜನವನ್ನು ನೆರವೇರಿಸಲಿದ್ದಾರೆ.

ಈ ಜಲ ಪೂರಣ ಹಬ್ಬದ ಸಂಭ್ರಮದ ಸಂದರ್ಭದಲ್ಲಿ ಪರಮ ಪೂಜ್ಯ ಶ್ರೀ ಶ್ರೀಪಾದಂಗಳವರ ಪೂರ್ವಾಶ್ರಮದ ಮಾತ್ರ ಶ್ರೀ ಯವರಾದ ಶ್ರೀಮತಿ ಮಂಜುಳಾ ಬಾಯಿಯವರುಮತ್ತು ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಆರ್ ,ಕೆ ವಾದಿಂದ್ರಾಚಾರ್ಯರು ಉಪಸ್ಥಿತರಿದ್ದರು, ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದರು ಜಲ ಪೂರಣ ಹಬ್ಬದ ಸಂಭ್ರಮದಲ್ಲಿ ಶ್ರೀಮಠದ ಸಿಬ್ಬಂದಿಗಳು ಭಕ್ತರು ಭಾಗವಹಿಸಿ ಶ್ರೀಗಳಿಂದ ಫಲ ಮಂತ್ರಾಕ್ಷತೆಯನ್ನು ಸ್ವೀಕರಿಸಿ ಗುರುರಾಯರ ಅನುಗ್ರಹಕ್ಕೆ ಪಾತ್ರರಾದರು.



## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** ಮಾನಸಿಕ ಶಾಂತಿಗಾಗಿ ದಾನ ಧರ್ಮಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಸಹೋದರ-ಸಹೋದರಿಯರ ಸಹಾಯದಿಂದ ಇಂದು ನೀವು ಆರ್ಥಿಕವಾಗಿ ಲಾಭವನ್ನು ಪಡೆಯಬಹುದು.

**ವೃಷಭ** ಇತ್ತೀಚೆಗೆ ನಿಮಗೆ ಹತಾಶೆಯೆನಿಸುತ್ತಿದ್ದಲ್ಲಿ ಇಂದು ಸರಿಯಾದ ಆಲೋಚನೆಗಳು ಹಾಗೂ ಕಾರ್ಯಗಳು ನಿಮಗೆ ಅಗತ್ಯವಿರುವ ಸಮಾಧಾನವನ್ನು ತರುತ್ತವೆ ಎಂದು ನೀವು ನೆನಪಿಡಬೇಕು.

**ಮಿಥುನ** ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ನೀವು ಇಂದು ನಿಮಗೆ ನೀಡಲಾದ ಹೂಡಿಕೆಯ ಯೋಜನೆಗಳ ಬಗ್ಗೆ ಚೆನ್ನಾಗಿ ಆಲೋಚಿಸಬೇಕು.

**ಕರ್ಕಾಟಕ** ಹಣದ ಬಗ್ಗೆ ಕುಟುಂಬ ಸದಸ್ಯರಲ್ಲಿ ಗೊಂದಲ ಉಂಟಾಗಬಹುದು. ಹಣಕಾಸಿನ ವಿಷಯದ ಬಗ್ಗೆ ನೀವು ಕುಟುಂಬದ ಎಲ್ಲಾ ಸದಸ್ಯರಿಗೆ ಸ್ಪಷ್ಟವಾಗಿರಲು ಸಲಹೆ ನೀಡಬೇಕು.

**ಸಿಂಹ** ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ಮತ್ತು ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ.

**ಕನ್ಯಾ** ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ.

**ತುಲಾ** ಆರೋಗ್ಯಕ್ಕೆ ಆದ್ಯತೆ ನೀಡಬೇಕು. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ನಿಮ್ಮ ಜೊತೆಗಿರುವ ಯಾರಾದರೂ ನಿಮ್ಮ ಇತ್ತೀಚಿನ ಕ್ರಮಗಳಿಂದ ಕಿರಿಕಿರಿಗಳ್ಳಬಹುದು.

**ವೃಶ್ಚಿಕ** ನಿಮ್ಮ ಚೈತನ್ಯವನ್ನು ಪುನಃ ಸಂಪಾದಿಸಲು ವಿಶ್ರಾಂತಿ ತೆಗೆದುಕೊಳ್ಳಿ. ನಿಮ್ಮ ಕೋಪವನ್ನು ನಿಯಂತ್ರಿಸಿ, ಕಚೇರಿಯಲ್ಲಿ ಎಲ್ಲರೊಂದಿಗೆ ಉತ್ತಮವಾಗಿ ವರ್ತಿಸಿ., ಆಗೇ ನೀವು ಮಾಡದಿದ್ದರೆ ನಿಮ್ಮ ಕೆಲಸ ಹೋಗಬಹುದು.

**ಧನಸ್ಸು** ನಿಮ್ಮ ಸಂಗಾತಿ ನಿಮ್ಮ ಸ್ಥಾನವನ್ನು ತಿಳಿದುಕೊಳ್ಳುವಂತೆ ಮಾಡಲು ನೀವು ತೊಂದರೆ ಹೊಂದಿರುತ್ತೀರಿ. ಮೋಸದಿಂದ ನಿಮ್ಮನ್ನು ಕಾಪಾಡಿಕೊಳ್ಳಲು ವ್ಯವಹಾರದಲ್ಲಿ ಎಚ್ಚರದಿಂದಿರಿ.

**ಮಕರ** ಉದಾರತೆ ಸ್ವಲ್ಪ ಮಟ್ಟಿಗೆ ಒಳ್ಳೆಯದಾದರೂ ಅದು ಒಂದು ಮಿತಿ ದಾಟಿದರೆ ಸಮಸ್ಯೆಗಳನ್ನು ಸೃಷ್ಟಿಸಬಹುದೆಂದು ನೀವು ನೆನಪಿನಲ್ಲಿಟ್ಟುಕೊಳ್ಳಬೇಕು. ಇಂದು ನಿಮ್ಮ ಯಾವುದೇ ಭರವಸೆಯನ್ನು ಪೂರೈಸಲು ಸಾಧ್ಯವಾಗುವುದಿಲ್ಲ.

**ಕುಂಭ** ಒಬ್ಬ ದೂರದ ಸಂಬಂಧಿಯಿಂದ ಅನಿರೀಕ್ಷಿತ ಸುದ್ದಿ ನಿಮ್ಮ ಇಡೀ ದಿನವನ್ನು ಉಜ್ವಲಗೊಳಿಸುತ್ತದೆ. ನಿಮ್ಮ ಸಂಗಾತಿಯ ಕುಟುಂಬದ ಸದಸ್ಯರ ಅಡ್ಡಿಯ ಕಾರಣದಿಂದ ನಿಮ್ಮ ದಿನ ಸ್ವಲ್ಪ ಏರುಪೇರಾಗಬಹುದು.

**ಮೀನ** ಸೃಜನಶೀಲ ಆಸಕ್ತಿಗಳು ನಿಮ್ಮನ್ನು ಶಾಂತವಾಗಿರಿಸುತ್ತವೆ. ಆರ್ಥಿಕ ಜೀವನದಲ್ಲಿ ಇಂದು ಸಂತೋಷ ಉಳಿದಿರುತ್ತದೆ. ಇದರೊಂದಿಗೆ ನೀವು ಇಂದು ಸಾಲಗಳಿಂದ ಮುಕ್ತರಾಗಬಹುದು.

---

• ರಾಜ್ಯ ಸರ್ಕಾರದ ವಿರುದ್ಧ ತಲೆಯ ಮೇಲೆ ಕೊಳೆತ ಬೆಳೆ ಹೊತ್ತು ಪ್ರತಿಭಟನೆ

# ಬೆಳೆ ಹಾನಿ ಪರಿಹಾರ ಬಿಡುಗಡೆಗೆ 10 ದಿನಗಳ ಗಡುವು

• ಉದಯವಾಹಿನಿ ಔರಾದ್

ಅತಿವೃಷ್ಟಿಯಿಂದ ಬೆಳೆ ಹಾನಿ ಸಂಭವಿಸಿ ಸಂಕಷ್ಟದಲ್ಲಿರುವ ರೈತರಿಗೆ ಪರಿಹಾರ ವಿತರಿಸಲು ವಿಳಂಬ ಮಾಡುತ್ತಿರುವ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ವತಿಯಿಂದ ಬೃಹತ್ ಪ್ರತಿಭಟನೆ ನಡೆಯಿತು. ಪಟ್ಟಣದ ಎಪಿಎಂಸಿ ವೃತ್ತದ ಬಳಿ ಆರಂಭಗೊಂಡ ಪ್ರತಿಭಟನಾ ಮೆರವಣಿಗೆಯು ಬಸ್ ನಿಲ್ದಾಣ ಮಾರ್ಗವಾಗಿ ಬಸವೇಶ್ವರ ವೃತ್ತದಲ್ಲಿ ಬಂದು ಕೊನೆಗೊಂಡಿತು. ಶಾಸಕರು, ಪಕ್ಷದ ಮುಖಂಡರು ಹಾಗೂ ರೈತರು ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರವನ್ನು ತಹಶೀಲ್ದಾರರಿಗೆ ಸಲ್ಲಿಸಿದರು. ಎತ್ತಿನ ಬಂಡಿಗಳು, ತಮಟೆ, ಬ್ಯಾಂಡ್ ತಂಡಗಳ ಸದ್ದಿಗೆ ಹೆಜ್ಜೆಯಿಡುತ್ತಾ ಕಾರ್ಯಕರ್ತರು, ರೈತರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.

ಶಾಸಕ ಪ್ರಭು ಬಿ.ಚವ್ಹಾಣ ಅವರು ಎತ್ತಿನ ಗಾಡಿಯನ್ನು ಹತ್ತಿ, ಕೊಳೆತ ಸೋಯಾ, ತೊಗರಿ ಬೆಳೆಯನ್ನು ತಲೆಯ ಮೇಲೆ ಹೊತ್ತು ಗಮನ ಸೆಳೆದರು. ಪ್ರತಿಭಟನೆಯಲ್ಲಿ ಭಾಗವಹಿಸಿದ ಎಲ್ಲರೂ ಕೈಗೆ ಕಪ್ಪು ಪಟ್ಟಿಯನ್ನು ಧರಿಸಿ ಸರ್ಕಾರದ ರೈತ ವಿರೋಧಿ ನಡೆಯನ್ನು ಖಂಡಿಸಿದರು.

ಈ ಸಂದರ್ಭದಲ್ಲಿ ಶಾಸಕರಾದ ಪ್ರಭು ಚವ್ಹಾಣ ಅವರು ಮಾತನಾಡಿ, ರೈತರ ನಾಯಕ, ಬಡವರ ನಾಯಕರೆಂದು ಹೇಳಿಕೊಳ್ಳುವ ಮುಖ್ಯಮಂತ್ರಿಗಳೇ ಎಲ್ಲಿದ್ದೀರಿ ? ಬೀದರ ಜಿಲ್ಲೆಯಲ್ಲಿ ಹೆಲಿಕಾಪ್ಟರ್ ಮೂಲಕ ಸರ್ವೇ ಮಾಡಿದ್ದೀರಿ. ಹಾಳಾದ ಸೋಯಾ, ಉದ್ದು, ಹೆಸರು ಮೇಲಿಂದ ಹೇಗೆ ಕಾಣಲು ಸಾಧ್ಯ ಎಂದು ಪ್ರಶ್ನಿಸಿದರು. ರೈತರು ತೀವ್ರ ಸಂಕಷ್ಟದಲ್ಲಿದ್ದಾರೆ. ಆದರೂ ರೈತರ ಜಮೀನುಗಳಿಗೆ ಯಾರೂ ಬಂದು ನೋಡಿಲ್ಲ. ರೈತರ ಗೋಳು ಕೇಳಿಸಿಕೊಂಡಿಲ್ಲ. ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಅವರು ದೀಪಾವಳಿ ಹಬ್ಬದೊಳಗಾಗಿ ರೈತರ ಖಾತೆಗೆ ಪರಿಹಾರ ಮೊತ್ತ ಪಾವತಿಸುವುದಾಗಿ ತಿಳಿಸಿದ್ದರು. ಆದರೆ ಇಲ್ಲಿವರೆಗೆ ದುಡ್ಡು ಹೋಗಿಲ್ಲ. ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಸರ್ಕಾರದ ಬಗ್ಗೆ ಮಾತನಾಡುವ ತಾವು ರೈತರ ಖಾತೆಗಳಿಗೆ ದುಡ್ಡು ಹಾಕಿಸಬೇಕು. ಇಲ್ಲವೇ ಕುರ್ಚಿ ಖಾಲಿ ಮಾಡಬೇಕೆಂದು ಆಗ್ರಹಿಸಿದರು.


ಉದಯವಾಹಿನಿ ಚಿತ್ರ

**ಸರ್ಕಾರದ ವಿರುದ್ಧ ಘೋಷಣೆ**

> ರೈತರಿಗೆ ಸರ್ಕಾರ ಸುಳ್ಳು ಆಶ್ವಾಸನೆಗಳನ್ನು ನೀಡುತ್ತಾ ಬಂದಿದೆ. ಮಳೆಯಿಂದಾಗಿ ರಸ್ತೆ, ಸೇತುವೆ, ಮನೆಗಳು ಮುಳುಗಡೆಯಾದರೂ ಹಣ ಬಂದಿಲ್ಲ. ನಾನು ಮುಖ್ಯಮಂತ್ರಿಗಳು, ಕೃಷಿ ಸಚಿವರನ್ನು ಭೇಟಿ ಮಾಡಿ ಅತಿವೃಷ್ಟಿಯಿಂದ ಉಂಟಾಗಿರುವ ಹಾನಿಯ ಬಗ್ಗೆ ಮನವರಿಕೆ ಮಾಡಿಕೊಟ್ಟಿದ್ದೇನೆ. ವಿಧಾನಸಭಾ ಅಧಿವೇಶನದಲ್ಲಿಯೂ ಗಮನ ಸೆಳೆದಿದ್ದೇನೆ. ಯಾವುದೇ ಪ್ರತಿಕ್ರಿಯೆ ಸಿಕ್ಕಿಲ್ಲ. ಕೃಷಿ ಸಚಿವರು, ಕಂದಾಯ ಸಚಿವರು ಜಿಲ್ಲೆಗೆ ಭೇಟಿ ನೀಡಿಲ್ಲ. ಇನ್ನಾದರೂ ಸರ್ಕಾರ ರೈತರ ಬಗ್ಗೆ ಕಾಳಜಿ ವಹಿಸಬೇಕು. ಇಲ್ಲವಾದರೆ ಉಗ್ರ ಸ್ವರೂಪದ ಹೋರಾಟ ಮಾಡುತ್ತೇವೆ. ಭಾಲ್ಕಿ ತುಂಬಾ ಘೇರಾವ್ ಹಾಕಲಾಗುತ್ತದೆ -ಪ್ರಭು ಚವ್ಹಾಣ

**ಎಲ್ಲಾ ಬೆಳೆಗಳು ನಾಶ**

ದಸರಾ ಹಬ್ಬವು ಸಂಕಷ್ಟದಲ್ಲೇ ಕಳೆಯಿತು. ಉದ್ದು, ಹೆಸರು ಎಲ್ಲಾ ಬೆಳೆಗಳು ನಾಶವಾಗಿವೆ. ರೈತರು ಊಟಕ್ಕೂ ಸಮಸ್ಯೆ ಎದುರಿಸುತ್ತಿದ್ದಾರೆ. ಪ್ರತಿ ಎಕರೆಗೆ ಕನಿಷ್ಠ 25 ಸಾವಿರ ಪರಿಹಾರಧನ ಪಾವತಿಸಬೇಕು. ರೈತರು ದೀಪಾವಳಿ ಹಬ್ಬವನ್ನಾದರೂ ಸಂತೋಷದಿಂದ ಮಾಡಲಿ ಹಾಗಾಗಿ 10 ದಿನದೊಳಗಾಗಿ ರೈತರ ಖಾತೆಗಳಿಗೆ ಹಣ ಜಮೆಯಾಗಬೇಕು. ಇಲ್ಲವಾದಲ್ಲಿ ತಮ್ಮ ಮನೆ ಮುಂದೆಯೇ ಧರಣಿ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಗ್ಯಾರಂಟಿ ಆಮಿಷ ತೋರಿಸಿ ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದಿದೆ. ಎರಡುವರೆ ವರ್ಷವಾಯಿತು. ಅಭಿವೃದ್ಧಿಗಿಂತ ಒಳಜಗಳ ಹೆಚ್ಚಾಗಿವೆ. ಇದಕ್ಕೆ ನಮ್ಮದೇನು ತಕರಾರಿಲ್ಲ. ಆದರೆ ರಾಜ್ಯದಲ್ಲಿ ಎಲ್ಲಾ ರೈತರು ನೊಂದಿದ್ದಾರೆ. ನಂದಿ ಬಿಜಲಗಾಂವ, ಹೊಕ್ರಾಣಾ, ಕಮಲನಗರ, ಸಾವಳಿ ಸೇರಿದಂತೆ ಎಲ್ಲಾ ಕಡೆಗಳಲ್ಲಿ ಮಣ್ಣು ಸಮೇತ ಹೊಲಗಳು ಕೊಚ್ಚಿಕೊಂಡು ಹೋಗಿವೆ. ಇಂತಹ ಸಂದರ್ಭದಲ್ಲಿ ಸರ್ಕಾರ ಕಣ್ಣು, ಕಿವಿ ಇಲ್ಲದಂತೆ ವರ್ತಿಸುತ್ತಿದೆ. ಇದಕ್ಕಾಗಿ ರೈತರೆಲ್ಲರೂ ಒಗ್ಗಟ್ಟಾಗಬೇಕು ಎಂದು ಹೇಳಿದರು.

ಬಿಜೆಪಿ ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ ಮಾತನಾಡಿ, ಅತಿವೃಷ್ಟಿ ಸಂದರ್ಭದಲ್ಲಿ ಪಕ್ಕದ ಮಹಾರಾಷ್ಟ್ರ ಸರ್ಕಾರ ರೈತರಿಗೆ ಉತ್ತಮ ಸ್ಪಂದನೆ ನೀಡಿದೆ. ಬೆಳೆ ಹಾನಿಯಾದ ಎಲ್ಲಾ ರೈತರಿಗೆ ಪರಿಹಾರ ನೀಡಿದೆ. ಮಣ್ಣು, ಜಾನುವಾರುಗಳಿಗೂ ಪರಿಹಾರ ನೀಡಲಾಗಿದೆ. ಮುಂದೆ ರೈತರ ಸಾಲ ಮನ್ನಾ ಮಾಡಲಾಗುವುದೆಂದು ಅಲ್ಲಿನ ಮುಖ್ಯಮಂತ್ರಿ ಹೇಳಿದ್ದಾರೆ. ಆದರೆ ಕರ್ನಾಟಕದಲ್ಲಿರುವ ಸರ್ಕಾರ ರೈತರು ನೋವಿನಲ್ಲಿದ್ದರೂ ನಿದ್ರೆಯಲ್ಲಿದೆ ಎಂದು ಆರೋಪಿಸಿದರು.

---

## 16 ಕೃತಿಗಳು ನೀಡಿದ ಅಪರೂಪದ ಸಾಹಿತಿ ಬಸವರಾಜ ಐನೋಳ್ಳಿ: ಪ್ರೊ.ಶೋಭಾದೇವಿ ಚೆಕ್ಕಿ

• ಉದಯವಾಹಿನಿ,ಚಿಂಚೋಳಿ

ಶಿಕ್ಷಣ ಕ್ಷೇತ್ರದಲ್ಲಿ ಸಾರ್ಥಕ ಜೀವನ ಸಲ್ಲಿಸಿ ಮೌಲಿಕವಾದ ಹದಿನಾರು ಕೃತಿಗಳನ್ನು ನೀಡಿದ ಅಪರೂಪದ ಲೇಖಕ ಶಿಕ್ಷಕ ಸಾಹಿತಿ ಬಸವರಾಜ ಐನೋಳಿಯವರಾಗಿದ್ದಾರೆ ಎಂದು ನಿವೃತ್ತ ಪ್ರಾಧ್ಯಾಪಕಿ,ಸಾಹಿತಿ,ಪ್ರೊ.ಶೋಭಾದೇವಿ ಚೆಕ್ಕಿ ಸೇಡಂರವರು ಹೇಳಿದರು.

ಪಟ್ಟಣದ ಚಂದಾಪುರ ಬಸವನಗರದ ಕಾಯಕ ನಿಲಯದಲ್ಲಿ ಜಿಲ್ಲಾ ಸಿರಿಗನ್ನಡ ವೇದಿಕೆ ಹಾಗೂ ಕಲ್ಬುರ್ಗಿ ಸಾಕ್ಷಿ ಪ್ರತಿಷ್ಠಾನದ ವತಿಯಿಂದ ಏರ್ಪಡಿಸಿದ ಸಾಹಿತ್ಯ ಸಮಾಗಮ 03 ಉಪನ್ಯಾಸ ಮಾಲಿಕೆ ಕಾರ್ಯಕ್ರಮದಲ್ಲಿ ಬಸವರಾಜ ಐನೋಳಿಯವರ ಬದುಕು ಬರಹ ಕುರಿತು ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಅವರು,ಬಸವರಾಜ ಐನೋಳ್ಳಿ ಬರವಣಿಗೆ ವಿಶಾಲ ದೃಷ್ಟಿಕೋನ ಹೊಂದಿದೆ ಶಿಕ್ಷಕರಾದವರು ಶಿಕ್ಷಣ ಕ್ಷೇತ್ರದಲ್ಲಿ ಕೆಲಸ ಮಾಡುವ ಅನೇಕರು ಶೈಕ್ಷಣಿಕ ಸಮಸ್ಯೆಗಳು ಹೇಳುತ್ತಾರೆ,ಅವುಗಳಿಗೆ ಪರಿಹಾರ ನೀಡುವವರು ಬಹಳ ಕಡಿಮೆ ತಮ್ಮ ಬರಹದಲ್ಲಿ ಐನೋಳಿಯವರು ಸಮಸ್ಯೆಗಳಿಗೆ ಪರಿಹಾರವನ್ನು ತಿಳಿಸಿದ್ದಾರೆ,ಗಡಿನಾಡಿನಲ್ಲಿದ್ದು ಕನ್ನಡ ಕಟ್ಟುವ ಕೆಲಸದಲ್ಲೂ ಪ್ರಮುಖ ಪಾತ್ರವಹಿಸಿದ್ದು ಸಾಂಸ್ಕೃತಿಕ ಕ್ಷೇತ್ರದ ಸಂಘಟಕರಾಗಿದ್ದಾರೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಸಿರಿಗನ್ನಡ ವೇದಿಕೆ ಕಲ್ಬುರ್ಗಿ ಜಿಲ್ಲಾ ಘಟಕದ ಅಧ್ಯಕ್ಷ ಡಾ.ಗವಿಸಿದ್ದಪ್ಪ ಪಾಟೀಲ ಮಾತನಾಡಿ ಶಿಕ್ಷಕರು ಸಾಹಿತ್ಯ ಕ್ಷೇತ್ರಕ್ಕೆ ಅಪಾರವಾದ ಕೊಡುಗೆ ನೀಡಿದ್ದಾರೆ,ಅಂಥವರ ಸಾಲಿನಲ್ಲಿ ಬಸವರಾಜ ಐನೋಳಿಯವರು ಒಬ್ಬರಾಗಿದ್ದಾರೆ.

ಅವರ ಶಿಸ್ತು ಸರಳತೆ,ಸಾತ್ವಿಕ ವ್ಯಕ್ತಿತ್ವ ಅನುಕರಣೀಯವಾಗಿದೆ ಅವರು ಬದುಕಿದಂತೆ ಬರೆದಿದ್ದಾರೆ ಎಂದರು.

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಗೌರವಾಧ್ಯಕ್ಷ ಪ್ರಾಚಾರ್ಯ ಮಲ್ಲಿಕಾರ್ಜುನ ಪಾಲಾಮೂರ ಗಾಳಿಯಲ್ಲಿ ತೇಲಿ ಹಾರಾಡುವ ಗಾಳಿಪಟ ಎಲ್ಲರಿಗೂ ಕಾಣುತ್ತದೆ,ಆ ಗಾಳಿಪಟ ಬಾನಲ್ಲಿ ತೇಲುವಂತೆ ಮಾಡುವುದೇ ಒಂದು ತೆಳುವಾದ ದಾರ,ಆ ದಾರದಂತೆ ಬದುಕಿದವರು ಬಸವರಾಜ ಐನೋಳಿಯವರು ಆಗಿದ್ದಾರೆ ಎಂದರು.

ಬಸವರಾಜ ಐನೋಳ್ಳಿ ಮಾತನಾಡಿ ಕಲಬುರ್ಗಿಯ ಎಸ್.ಬಿ.ಕಾಲೇಜಿನಲ್ಲಿ ಓದುವಾಗ ಅಲ್ಲಿನ ಸಾಹಿತ್ತಿಕ ಸಾಂಸ್ಕೃತಿಕ ವಾತಾವರಣ ನನ್ನನ್ನು ಓದುಗನನ್ನಾಗಿ ರೂಪಿಸಿತು ಎಂದು,ತಮ್ಮ ವಿದ್ಯಾರ್ಥಿ ಜೀವನದ ಅನುಭವಗಳನ್ನು ಮೆಲುಕು ಹಾಕಿದರು.


ಉದಯವಾಹಿನಿ ಚಿತ್ರ

**ಸಾಹಿತ್ಯ ಸಮಾಗಮ ಉಪನ್ಯಾಸ ಮಾಲಿಕೆ**

---

## ಪತ್ತೇಪುರ ಶ್ರೀಬಲಭೀಮೇಶ್ವರ ಜಾತ್ರಾ ಮಹೋತ್ಸವ


ಉದಯವಾಹಿನಿ ಚಿತ್ರ

• ಉದಯವಾಹಿನಿ ಕೆಂಭಾವಿ

ಪಟ್ಟಣದ ಪತ್ತೇಪುರ ಗ್ರಾಮದ ಶ್ರೀಬಲಭೀಮೇಶ್ವರ ಜಾತ್ರಾ ಮಹೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಜಾತ್ರಾ ಮಹೋತ್ಸವದ ಅಂಗವಾಗಿ ಇಂದು ಮಂಗಳವಾರ ದೀಪಾವಳಿಯ ಅಮಾವಾಸ್ಯೆ ದಿನದಂದು ಬೆಳಗ್ಗೆ ಗ್ರಾಮದಲ್ಲಿ ದೇವರ ಪಲ್ಲಕ್ಕಿ ಮೆರವಣಿಗೆ ಮೂಲಕ ಮುದನೂರ್ ಗ್ರಾಮಕ್ಕೆ ತೆರಳಿ ಗಂಗಾ ಸ್ನಾನ ಮಾಡಲಾಗುವುದು. ನಂತರ ರಾತ್ರಿ 10 ಗಂಟೆಗೆ ಗರ್ಭಗುಡಿಯನ್ನು ಪ್ರವೇಶಿಸುಲಾಗುವುದು. ಹಾಗೂ ಜಾತ್ರಾ ಮಹೋತ್ಸವದ ಅಂಗವಾಗಿ ಭಜನಾ ಕಾರ್ಯಕ್ರಮ ಹಾಗೂ ಸಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ. ಪಟ್ಟಣದ ಸುತ್ತಮುತ್ತಲಿನ ಭಕ್ತರು ಆಗಮಿಸಬೇಕೆಂದು ಆಂಜನೇಯ ದೇವಸ್ಥಾನದ ಅರ್ಚಕರಾದ ಶ್ರೀ ರಾಮಣ್ಣ ಪೂಜಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭ್ರಷ್ಟಾಚಾರದ ಹಣ ಬಿಹಾರ ಚುನಾವಣೆಗೆ ಸಂಸದ ಜಗದೀಶ ಶೆಟ್ಟರ್ ಆರೋಪ

• ಉದಯವಾಹಿನಿ, ಹುಬ್ಬಳ್ಳಿ

'ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಚಿವರ ಜೊತೆ ಡಿನ್ನರ್ ಪಾರ್ಟಿ ನಡೆಸಿ, ಇಲಾಖೆಯಿಂದ ಕಮಿಷನ್ ಫಿಕ್ಸ್ ಮಾಡಿ, ಬಿಹಾರ ಚುನಾವಣೆಗೆ ನೀಡುವಂತೆ ಸೂಚಿಸಿದ್ದಾರೆ' ಎಂದು ಸಂಸದ ಜಗದೀಶ ಶೆಟ್ಟರ್ ಆರೋಪಿಸಿದ್ದಾರೆ.

ದೇಶದಲ್ಲಿಯೇ ಅತಿಹೆಚ್ಚು ಆದಾಯವಿರುವ ರಾಜ್ಯ ಕರ್ನಾಟಕವಾಗಿದ್ದು, ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಎಟಿಎಂ ಇದ್ದಂತೆ. ಪ್ರತಿಯೊಂದು ಇಲಾಖೆಯಿಂದ ಇಂತಿಷ್ಟು ಕಮಿಷನ್ ನೀಡಬೇಕೆಂದು ಸಚಿವರಿಗೆ ಹೇಳಿದ್ದಾರೆ' ಎಂದು ಸೋಮವಾರ ಮಾಧ್ಯಮದವರಿಗೆ ತಿಳಿಸಿದರು.

'ಪ್ರತಿಯೊಂದು ಇಲಾಖೆಯಲ್ಲೂ ಕಮಿಷನ್ ವ್ಯವಹಾರ ಆರಂಭವಾಗಿದೆ. ಕಟ್ಟಡ ನಿರ್ಮಾಣಕ್ಕೆ ಅನುಮತಿ ಸೇರಿದಂತೆ ಇತರೆ ಪ್ರಮಾಣಪತ್ರ ಪಡೆಯಬೇಕೆಂದರೆ ಸರ್ಕಾರದ ಶುಲ್ಕದ ಜೊತೆಗೆ, ಭ್ರಷ್ಟಾಚಾರದ ಶುಲ್ಕ ನೀಡಲೇಬೇಕು. ಪ್ರತಿಯೊಂದಕ್ಕೂ ಒಂದೊಂದು ದರ ನಿಗದಿಪಡಿಸಲಾಗಿದೆ' ಎಂದು ಆರೋಪಿಸಿದರು.

'ಆರ್‌ಎಸ್‌ಎಸ್ ಪಥಸಂಚಲನದಲ್ಲಿ ಪಾಲ್ಗೊಂಡಿದ್ದಾರೆ ಎಂದು ಲಿಂಗಸೂರು ಗ್ರಾ.ಪಂ.ನ ಪಿಡಿಒ ಅವರನ್ನು ಅಮಾನತು ಮಾಡಿದ್ದು ಖಂಡನೀಯ. ಸರ್ಕಾರದ ಸುತ್ತೋಲೆ ಇಲ್ಲದೆ ಕಾನೂನು ಬಾಹಿರವಾಗಿ ಸರ್ಕಾರಿ ನೌಕರರನ್ನು ಅಮಾನತು ಮಾಡಲಾಗಿದೆ. ತಕ್ಷಣ ಅಮಾನತು ಆದೇಶ ಹಿಂಪಡೆಯಬೇಕು' ಎಂದು ಆಗ್ರಹಿಸಿದರು.

---

## ಸಾರ್ವಜನಿಕರಿಗೆ ಹೃದಯಘಾತ ಬಗ್ಗೆ ಅರಿವು ಮೂಡಿಸುವುದು ಅಗತ್ಯ

• ಉದಯವಾಹಿನಿ, ಬಳ್ಳಾರಿ

ಇತ್ತೀಚಿನ ದಿನಗಳಲ್ಲಿ ಹೃದಯಘಾತದಿಂದ ಹೆಚ್ಚಾಗಿ ಯುವಕರು ಮತ್ತು ಸಾರ್ವಜನಿಕರು ಮರಣ ಹೊಂದುತ್ತಿದ್ದಾರೆ. ಸಾರ್ವಜನಿಕರಿಗೆ ಹೃದಯಘಾತ ಬಗ್ಗೆ ಅರಿವು ಮೂಡಿಸುವುದರಿಂದ ಜೀವವನ್ನು ಉಳಿಸಿಕೊಳ್ಳಬಹುದು ಎಂದು ಬಳ್ಳಾರಿ ಜಿಲ್ಲಾ ಶಾಖೆಯ ಭಾರತೀಯ ರೆಡ್‌ಕ್ರಾಸ್ ಸಂಸ್ಥೆಯ ಜಿಲ್ಲಾ ಕಾರ್ಯದರ್ಶಿ.ಎಂ.ಎ.ಷಕೀಬ್ ಅವರು ಹೇಳಿದರು.

ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ ಹಾಗೂ ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ರಾಷ್ಟ್ರೀಯ ಸಿ.ಪಿ.ಆರ್ ಸಪ್ತಾಹ ನಿಮಿತ್ತ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಸಾರ್ವಜನಿಕರಿಗೆ ಮತ್ತು ಡಿಪೋ ಕಾರ್ಮಿಕರಿಗೆ ಹಾಗೂ ವಾಹನ ಚಾಲಕರಿಗೆ ಸಿಪಿಆರ್ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಮಾತನಾಡಿದರು.

ಹೃದಯಘಾತ ಅಥವಾ ಎದೆ ನೋವು ನಮಗೆ ಅನೇಕ ರೀತಿಯಿಂದ ತೊಂದರೆ ಉಂಟುಮಾಡುತ್ತದೆ. ಇಂಥಹ ಸಂದರ್ಭದಲ್ಲಿ ಹೃದಯ ನೋವಿನಿಂದ ಬಳಲುತ್ತಿರುವ ವ್ಯಕ್ತಿಗೆ ಆಸ್ಪತ್ರೆಗೆ ಸೇರಿಸುವ ಮುನ್ನ ಅವರ ಉಸಿರಾಟದ ತೊಂದರೆ ಆದಾಗ ಇವರಿಗೆ ಸಿಪಿಆರ್ ಮಾಡುವುದರ ಮೂಲಕ ಆಸ್ಪತ್ರೆಗೆ ಸೇರಿಸಿ ಅಮೂಲ್ಯವಾದ ಜೀವವನ್ನು ಉಳಿಸಲು ಪ್ರಯತ್ನಿಸಬಹುದು ಎಂದು ಅಣಕು ಪ್ರದರ್ಶನ ಮೂಲಕ ಸಾರ್ವಜನಿಕರಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಕೆಎಸ್‌ಆರ್‌ಟಿಸಿಯ ವಿಭಾಗೀಯ ನಿಯಂತ್ರಣಾಧಿಕಾರಿ ಅಹಮಿದಿನ್ ಬಗಾನ್, ಡಿಪೋ ಹಿರಿಯ ಮ್ಯಾನೇಜರ್, ಕೆಎಸ್‌ಆರ್‌ಟಿಸಿ ಸಂಸ್ಥೆಯ ಕಾರ್ಮಿಕರು ಮತ್ತು ವಾಹನ ಚಾಲಕರು, ಸಾರ್ವಜನಿಕರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

---

## ಚೆಕ್ ಜಾಲ: ವಂಚಿಸುತ್ತಿದ್ದ ಮಹಿಳೆ ಬಂಧನ

• ಉದಯವಾಹಿನಿ, ಮಂಗಳೂರು

ಚೆಕ್ ಮತ್ತು ಆಭರಣ ಮಳಿಗೆಗಳನ್ನ ಗುರಿಯಾಗಿಸಿಕೊಂಡು ಅಮಾನ್ಯ ಚೆಕ್ಗಳ ಮೂಲಕ ಲಕ್ಷಾಂತರ ರೂಪಾಯಿ ಮೌಲ್ಯದ ವಸ್ತುಗಳನ್ನು ವಂಚಿಸಿದ್ದ ಮಹಿಳೆಯೊಬ್ಬಳನ್ನು ಮಂಗಳೂರು ಬರ್ಕೆ ಪೊಲೀಸರು ಬಂಧಿಸಿದ್ದಾರೆ. ಆರೋಪಿಯಾಗಿರುವ ಫರೀದಾ ಬೇಗಂ (28) ವಿರುದ್ಧ ಮಂಗಳೂರು, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಒಟ್ಟು 9 ವಂಚನೆ ಪ್ರಕರಣಗಳು ದಾಖಲಾಗಿವೆ. ಎಂಪೈರ್ ಮಾಲ್ನಲ್ಲಿರುವ ಲ್ಯಾಪ್ಟಾಪ್ ಬಜಾರ್ ಅಂಗಡಿಯಿಂದ ರೂ1.98 ಲಕ್ಷ ಮೌಲ್ಯದ ಮ್ಯಾಕ್ಬುಕ್ ಮತ್ತು ಡೆಲ್ ಲ್ಯಾಪ್ಟಾಪ್ಗಳನ್ನು ಖರೀದಿಸಿ ಬೌನ್ಸ್ ಆದ ಚೆಕ್ ನೀಡಿದ ಪ್ರಕರಣದಡಿ ದೂರುದಾರ ಜಯರಾಯ ಅವರು ಪ್ರಕರಣ ದಾಖಲಿಸಿದ್ದರು.

ಮಂಗಳೂರಿನ ಎಂಪೈರ್ ಮಾಲ್ನಲ್ಲಿರುವ ಲ್ಯಾಪ್ಟಾಪ್ ಬಜಾರ್ ಎಂಬ ಲ್ಯಾಪ್ಟಾಪ್ ಮಾರಾಟ ಮತ್ತು ಸೇವಾ ಅಂಗಡಿಯನ್ನು ಹೊಂದಿರುವ ಜಯರಾಯ ಎಂಬ ದೂರುದಾರ, ಫರೀದಾ ತನ್ನ ಪರಿಚಿತ ಸಹವರ್ತಿಯ ಮೂಲಕ ತನ್ನ ಅಂಗಡಿಯಿಂದ ಮೂರು ಪ್ರೀಮಿಯಂ ಲ್ಯಾಪ್ಟಾಪ್ಗಳನ್ನು ಖರೀದಿಸಿದ್ದಾರೆ ಎಂದು ವರದಿ ಮಾಡಿದ್ದಾರೆ.

ಆ ವಸ್ತುಗಳಲ್ಲಿ ಆಪಲ್ ಮ್ಯಾಕ್ಬುಕ್ ಪ್ರೊ ಎನ್ 2141, ಕೋರ್ ಐ 513ನೇ ಜನರೇಷನ್ ಪ್ರೊಸೆಸರ್ ಮತ್ತು 16th ಹೊಂದಿರುವ ಡೆಲ್ 5440, ಮತ್ತು ಆಪಲ್ ಮ್ಯಾಕ್ಬುಕ್ ಪ್ರೊ 2442 ಸೇರಿವೆ.

ಲ್ಯಾಪ್ಟಾಪ್ಗಳ ಒಟ್ಟು ಮೌಲ್ಯ 1,98,000 ರೂ.ಗಳಾಗಿದ್ದು, ಫರೀದಾ ಚೆಕ್ಗಳನ್ನು ನೀಡಿದ ನಂತರ ಅದನ್ನು ಪಾವತಿಸಲು ವಿಫಲರಾದರು, ನಂತರ ಅವು ಮಂಜೂರಾಗಿಲ್ಲ ಎಂದು ಕಂಡುಬಂದಿತು. ತ್ವರಿತವಾಗಿ ಕಾರ್ಯನಿರ್ವಹಿಸಿದ ಬರ್ಕೆ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಮೋಹನ್ ಕೊಟ್ಟಾರಿ ನೇತೃತ್ವದ ತಂಡ, ತನಿಖಾಧಿಕಾರಿ ವಿನಾಯಕ್ ತೋರಗಲ್ ಮತ್ತು ಮಹಿಳಾ ಕಾನ್ಸ್ಟೆಬಲ್ಗಳ ಸಹಾಯದಿಂದ ಆರೋಪಿಯನ್ನು ಪತ್ತೆಹಚ್ಚಿ ವಶಕ್ಕೆ ತೆಗೆದುಕೊಂಡರು. ಅಕ್ಟೋಬರ್ 19 ರಂದು ಫರೀದಾ ಅವರನ್ನು ಬಂಧಿಸಿ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಯಿತು. ನ್ಯಾಯಾಲಯವು ಅವರನ್ನು ನ. 3 ರವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ. ಮುತ್ತೂರು ಗ್ರಾಮದ ಫರೀದಾ ಕುಪ್ಪೆಪದವು ನಿವಾಸಿಯಾಗಿದ್ದು, ರಮೀಜ್ ರಾಜ್ ಎಂಬುವವರನ್ನು ವಿವಾಹವಾಗಿದ್ದಾರೆ. ತನಿಖೆಯಿಂದ ಇದು ಆಕೆಯ ಏಕೈಕ ಅಪರಾಧವಲ್ಲ ಎಂದು ತಿಳಿದುಬಂದಿದೆ. ಫರೀದಾ ಒಟ್ಟು 9 ವಂಚನೆ ಪ್ರಕರಣಗಳಲ್ಲಿ ಭಾಗಿಯಾಗಿದ್ದು, ಪ್ರತಿಯೊಂದೂ ಒಂದೇ ರೀತಿಯ ವಂಚನೆ ಪ್ರಕರಣಗಳನ್ನು ಒಳಗೊಂಡಿದೆ.



---

# ತಾಲ್ಲೂಕ ಕಛೇರಿಗಳ ಸ್ಥಾಪನೆಗೆ ಆಗ್ರಹ: ಮನವಿ

• ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಅವರಿಗೆ ಒತ್ತಾಯ

• ಉದಯವಾಹಿನಿ, ವಿಜಯಪುರ

ಜಿಲ್ಲೆಯ ಬಸವನ ಬಾಗೇವಾಡಿ ತಾಲ್ಲೂಕಿನಿಂದ ಪ್ರತ್ಯೇಕವಾಗಿ ರಚನೆಗೊಂಡಿರುವ ನಿಡಗುಂದಿ ತಾಲ್ಲೂಕ ಕೇಂದ್ರದಲ್ಲಿ ಈವರೆಗೂ ತಾಲ್ಲೂಕ ಕಛೇರಿಗಳನ್ನು ತೆರೆದಿಲ್ಲ. ಆಡಳಿತದ ಹಿತದೃಷ್ಟಿಯಿಂದ ಶೀಘ್ರವೇ ತಾಲ್ಲೂಕ ಕಛೇರಿಗಳನ್ನು ಆರಂಭಿಸುವಂತೆ ಆಗ್ರಹಿಸಿ ನಿಡಗುಂದಿ ತಾಲ್ಲೂಕ ಅಭಿವೃದ್ಧಿ ಹೋರಾಟ ಸಮಿತಿ ನೇತೃತ್ವದಲ್ಲಿ ಬಸವನಬಾಗೇವಾಡಿ ವಿಧಾನಸಭಾ ಕ್ಷೇತ್ರವನ್ನು ಪ್ರತಿನಿಧಿಸುತ್ತಿರುವ ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಅವರಿಗೆ ಮನವಿ ಸಲ್ಲಿಸಿತು.

ವಿಜಯಪುರ ನಗರದಲ್ಲಿ ನಿಡಗುಂದಿ ತಾಲ್ಲೂಕ ಅಭಿವೃದ್ಧಿ ಹೋರಾಟ ಸಮಿತಿ ನೇತೃತ್ವದಲ್ಲಿ ಸಚಿವರಾದ ಶಿವಾನಂದ ಪಾಟೀಲ ಅವರನ್ನು ಭೇಟಿಯಾದ ನಿಡಗುಂದಿ ಪಟ್ಟಣ ಪಂಚಾಯತ್ ಸದಸ್ಯರು, ತಾಲ್ಲೂಕಿನ ಪ್ರಮುಖರು, ಆಡಳಿತ ಹಿತದೃಷ್ಟಿಯಿಂದ ಬಸವನಬಾಗೇವಾಡಿ ತಾಲ್ಲೂಕಿನಿಂದ ಪ್ರತ್ಯೇಕಗೊಂಡು ನಿಡಗುಂದಿ ತಾಲ್ಲೂಕು ರಚನೆಯಾಗಿದೆ. ಆದರೆ ಆಡಳಿತನ ನಿರ್ವಹಣೆಗೆ ತಹಶಿಲ್ದಾರರ ಕಛೇರಿ ಹೊರತಾಗಿ ಇತರೆ ಇಲಾಖೆಗಳ ಕಛೇರಿ ಇಲ್ಲದ ಕಾರಣ ತಾಲ್ಲೂಕಿನ ಜನರು ಸಂಕಷ್ಟ ಎದುರಿಸುವಂತಾಗಿದೆ ಎಂದು ಸಚಿವರಿಗೆ ಸಮಸ್ಯೆ ನಿವೇದಿಸಿಕೊಂಡರು.

ನಿಡಗುಂದಿ ತಾಲ್ಲೂಕಿನ ಆಡಳಿತಕ್ಕೆ ವೇಗನೀಡಲು ಮಿನಿ ವಿಧಾನಸೌಧ, ಸಬ್ ರಿಜಿಸ್ಟರ್ ಕಛೇರಿ, ಎಪಿಎಂಸಿ, ಬಸ್ ಡೀಪೋ, ಬಿಇಓ ಕಛೇರಿ, ತಾಲ್ಲೂಕ ಆರೋಗ್ಯಾಧಿಕಾರಿ ಕಛೇರಿ ಸೇರಿದಂತೆ ಬಹುತೇಕ ಕಛೇರಿಗಳು ತಾಲ್ಲೂಕ ಕೇಂದ್ರದಲ್ಲಿ ಇಲ್ಲ ಎಂದು ತಾವು ಸಲ್ಲಿಸಿದ ಮನವಿ ಪತ್ರದಲ್ಲಿ ವಿವರಿಸಿದ್ದಾರೆ.

ನಿಡಗುಂದಿ ತಾಲ್ಲೂಕಿನಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆ ಸಂತ್ರಸ್ತರೇ ಹೆಚ್ಚಿನ ಸಂಖ್ಯೆಯಲ್ಲಿ, ತಾಲ್ಲೂಕ ಕೇಂದ್ರದ ಸುತ್ತಲೂ ಹತ್ತಾರು ಪುನರ್ವಸತಿ ಗ್ರಾಮಗಳಿವೆ. ತಾಲ್ಲೂಕ ಕೇಂದ್ರದ ಕಛೇರಿಗಳು ಇಲ್ಲದ ಕಾರಣ ಸಂತ್ರಸ್ತರು ಹಲವು ರೀತಿಯಲ್ಲಿ ಸಮಸ್ಯೆ ಎದುರಿಸುವಂತಾಗಿದೆ ಎಂದು ಸಮಸ್ಯೆಗಳನ್ನು ಸಚಿವರ ಎದುರು ಬಿಚ್ಚಿಟ್ಟರು.

ಹೀಗಾಗಿ ಬರುವ ಒಂದು ತಿಂಗಳೊಳಗೆ ನಿಡಗುಂದಿ ತಾಲ್ಲೂಕ ಮಟ್ಟದ ಕಛೇರಿಗಳನ್ನು ತೆರೆಯುವ ಕುರಿತು ಕಂದಾಯ ಗ್ರಾಮದಲ್ಲಿ ವ್ಯಾಪ್ತಿಯಲ್ಲಿ ಸ್ಥಳಗಳನ್ನು ಗುರುತಿಸುವಂತೆ ಮನವಿ ಮಾಡಿದರು.

4.85 ಕೋಟಿ ರೂ. ವೆಚ್ಚದಲ್ಲಿ ನಿಡಗುಂದಿ ಪಟ್ಟಣದಲ್ಲಿ ಎಸ್‌ಎಫ್‌ಸಿ. ವಿಶೇಷ ಅನುದಾನದಲ್ಲಿ ಮೆಗಾ ಮಾರುಕಟ್ಟೆ ಕಾಮಗಾರಿ ಪ್ರಗತಿಯಲ್ಲಿದೆ. ತಾಲ್ಲೂಕ ಪಂಚಾಯತ್ ಹಾಗೂ ಪಶು ಆಸ್ಪತ್ರೆ, ಸರ್ಕಾರಿ ಐಐಟಿ ಕಾಲೇಜು ಕಾರ್ಯಾರಂಭ ಮಾಡಿವೆ. ಅಗ್ನಿಶಾಮಕ ಠಾಣೆ ಮಂಜೂರಾಗಿದ್ದು, ಅಮೃತ 2.0 ಯೋಜನೆ ಅಡಿಯಲ್ಲಿ ಪಟ್ಟಣದ ಕುಡಿಯುವ ನೀರಿನ ಆಂತರಿಕ ಕೊಳವೆ ಮಾರ್ಗ ನಿರ್ಮಾಣಕ್ಕೆ 34.20 ಕೋಟಿ ರೂ. ಅನುದಾನದಲ್ಲಿ ಕಾಮಗಾರಿಗೆ ಟಂಡರ್ ಕರೆದು, ಕಾರ್ಯಾದೇಶ ನೀಡಲಾಗಿದೆ ಎಂದು ವಿವರಿಸಿದರು.

ಉಳಿದಂತೆ ತಮ್ಮ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತಂದು ತ್ವರಿತ ಕ್ರಮ ಕೈಗೊಳ್ಳುವ ಭರವಸೆ ನೀಡಿದರು. ಈ ಸಂದರ್ಭದಲ್ಲಿ ನಿಡಗುಂದಿ ಪ್ರಮುಖರಾದ ಸಂಗಣ್ಣ ಕೋತಿನ, ಶಿವಾನಂದ ಮುಚ್ಚಂಡಿ, ಎಸ್.ಜಿ. ನಾಗಠಾಣ, ಶಂಕ್ರಪ್ಪ ರೇವಡಿ, ತಮ್ಮಣ್ಣ ಬಂಡಿವಡ್ಡರ, ಶೇಖರ ದೊಡಮನಿ, ಬಸವರಾಜ ಕುಂಬಾರ, ಶಿವಾನಂದ ಅವಟಿ, ಸಂಗಮೇಶ ಗೂಗ್ಯಾಳ, ಬಸಯ್ಯ ಪತ್ರಿಮಠ, ಬಸವರಾಜ ವಂದಾಲ, ಸುರೇಶ ಬಾಗೇವಾಡಿ, ಹನುಮಂತ ಬೇವಿನಕಟ್ಟಿ, ಈರಪ್ಪ ಗೋನಾಳ ಸೇರಿದಂತೆ ಇತರರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

> ನಿಡಗುಂದಿ ನಾಗರಿಕರ ಬೇಡಿಕೆಗಳನ್ನು ಸಮಚಿತ್ತದಿಂದ ಆಲಿಸಿದ ಸಚಿವ ಶಿವಾನಂದ ಪಾಟೀಲ ಅವರು, ನಮ್ಮ ಸರ್ಕಾರ ಬಜೆಟ್‌ನಲ್ಲಿ ನಿಡಗುಂದಿ ತಾಲ್ಲೂಕಿನ ಪ್ರಜಾಸೌಧ ನಿರ್ಮಾಣಕ್ಕೆ 8.60 ಕೋಟಿ ಅನುದಾನ ಒದಗಿಸಿದೆ. ಈಗಾಗಲೇ ಅನುಮೋದನೆಗಾಗಿ ಸಮಗ್ರ ಯೋಜನಾ ವರದಿ ಸಲ್ಲಿಸಲಾಗಿದ್ದು, ಶೀಘ್ರವೇ ಯೋಜನೆಗೆ ಚಾಲನೆ ನೀಡುವುದಾಗಿ ಭರವಸೆ ನೀಡಿದರು. ತಾಲ್ಲೂಕ ಪ್ರಜಾಸೌಧ ನಿರ್ಮಾಣದ ಬಳಿಕ ತಾಲ್ಲೂಕ ಆಡಳಿತಕ್ಕೆ ಅಗತ್ಯ ಇರುವ ಕಛೇರಿಗಳು ಕಾರ್ಯಾರಂಭ ಮಾಡಲಿವೆ -ಶಿವಾನಂದ ಪಾಟೀಲ

**ಮನವಿ**

ತಾಲ್ಲೂಕಿನ ಅಭಿವೃದ್ಧಿ ಹಿತದೃಷ್ಟಿಯಿಂದ ನಿಡಗುಂದಿ ತಾಲ್ಲೂಕ ಕೇಂದ್ರದಲ್ಲಿ ತುರ್ತಾಗಿ ತಾಲ್ಲೂಕ ಕಛೇರಿಗಳನ್ನು ಪ್ರಾರಂಭಿಸುವುದು ಅಗತ್ಯವಾಗಿದೆ. ಈ ಕುರಿತು ನಿಡಗುಂದಿ ಪಟ್ಟಣ ಪಂಚಾಯತ್ ಸರ್ವ ಸದಸ್ಯರು ಹಾಗೂ ಪಕ್ಷಾತೀತವಾಗಿ ಎಲ್ಲಾ ಮುಖಂಡರು ಪಟ್ಟಣದ ರುದ್ರೇಶ್ವರ ಮಠದಲ್ಲಿ ಸಭೆ ಸೇರಿ ತಾಲ್ಲೂಕ ಮಟ್ಟದ ಕಛೇರಿಗಳನ್ನು ತೆರೆಯುವಂತೆ ಆಗ್ರಹಿಸಿ ಮನವಿ ಮಾಡಿಕೊಳ್ಳಲು ನಿರ್ಧರಿಸಿದ್ದಾಗಿ ಹೇಳಿದರು.

---

## ಎಸ್‌ಎಸ್‌ಎಲ್‌ಸಿ , ಪಿಯುಸಿ ತೇರ್ಗಡೆಗೆ ಕನಿಷ್ಠ ಅಂಕ 33ಕ್ಕೆ ಇಳಿಕೆ ಸರಿಯಲ್ಲ

• ಉದಯವಾಹಿನಿ, ಉಡುಪಿ

ಎಸ್‌ಎಸ್‌ಎಲ್ಸಿ ಹಾಗೂ ಪಿಯುಸಿ ತೇರ್ಗಡೆಗೆ ಕನಿಷ್ಠ ಅಂಕ 33ಕ್ಕೆ ಇಳಿಕೆ ಮಾಡಿರುವ ಶಾಲಾ ಶಿಕ್ಷಣ ಮಂತ್ರಿಗಳ ಈ ನಿರ್ಧಾರದ ಬಗ್ಗೆ ಚರ್ಚೆಯಾಗುತ್ತಿದೆ. ಮುಖ್ಯಮಂತ್ರಿಗಳು ಮಾಹಿತಿಗಳನ್ನು ಪಡೆದುಕೊಂಡಿದ್ದಾರೆ. 35 ಅಂಕ ಇರುವುದನ್ನು 33ಕ್ಕೆ ಇಳಿಸಿದ್ದಾರೆ ಈ ಬಗ್ಗೆ ಇನ್ನಷ್ಟು ಚರ್ಚೆಗಳು ಆಗಬೇಕು ಎಂಬ ಅಭಿಪ್ರಾಯವಿದೆ. ಶಾಲಾ ಶಿಕ್ಷಣ ಮಂತ್ರಿಗಳು ಯಾವ ಉದ್ದೇಶ ಇಟ್ಟುಕೊಂಡು ಇದನ್ನು ಮಾಡಿದ್ದಾರೆ ಎಂಬ ಮಾಹಿತಿ ಇಲ್ಲ. ಈ ರೀತಿ ಅಂಕ ಕಡಿಮೆ ಮಾಡಿರುವುದು ಸರಿಯಲ್ಲ. ಸಂಪುಟ ಸಭೆಯಲ್ಲಿ ಈ ಬಗ್ಗೆ ಚರ್ಚೆ ಮಾಡಲಾಗಿದೆ. ಈ ಬಗ್ಗೆ ಸರಿಯಾದ ಅಧ್ಯಯನ ಮಾಡಬೇಕು ಎಂದು ಉನ್ನತ ಶಿಕ್ಷಣ ಸಚಿವ ಎಂ.ಸಿ.ಸುಧಾಕರ್ ಹೇಳಿದ್ದಾರೆ.

ಉಡುಪಿಯಲ್ಲಿಂದು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಬೇರೆ ಬೇರೆ ರಾಜ್ಯಗಳಲ್ಲಿ ಆರ್‌ಎಸ್‌ಎಸ್ ಮೇಲೆ ಕ್ರಮಗಳನ್ನು ಕೈಗೊಳ್ಳಲಾಗಿದೆ. ಸಾರ್ವಜನಿಕ ಸ್ಥಳದಲ್ಲಿ ಎಲ್ಲಾ ಜಾತಿ ಧರ್ಮದ ಜನ ಇರುತ್ತಾರೆ. ಕೆಲವು ಕಾರ್ಯ ಚಟುವಟಿಕೆಗಳಿಗೆ ವಿರೋಧ ಬರುವ ಸಾಧ್ಯತೆ ಇದೆ. ಯಾರೇ ಕೂಡ ಸಾರ್ವಜನಿಕವಾಗಿ ಕಾರ್ಯಕ್ರಮ ಮಾಡುವುದಾದರೆ ಅನುಮತಿ ತೆಗೆದುಕೊಳ್ಳಬೇಕು. ಎಲ್ಲರಲ್ಲೂ ಶಿಸ್ತು ಇರಬೇಕೆಂಬ ಉದ್ದೇಶಕ್ಕೆ ಈ ಆದೇಶ ಮಾಡಲಾಗಿದೆ ಎಂದರು.


ಉದಯವಾಹಿನಿ ಚಿತ್ರ

---


## ರಮೇಶ ಕತ್ತಿ ವಿರುದ್ಧ ಜಾತಿ ನಿಂದನೆ ಪ್ರಕರಣ ದಾಖಲು

• ಉದಯವಾಹಿನಿ, ಬೆಳಗಾವಿ

ವಾಲ್ಮೀಕಿ ಸಮುದಾಯಕ್ಕೆ ಅಶ್ಲೀಲ ಪದ ಬಳಸಿ ಅವಹೇಳನ ಮಾಡಿದ್ದಾರೆ ಎಂದು ಆರೋಪಿಸಿ ಮಾಜಿ ಸಂಸದ, ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ರಮೇಶ ಕತ್ತಿ ವಿರುದ್ಧ ಜಾತಿ ನಿಂದನೆ ಪ್ರಕರಣ ದಾಖಲಿಸಲಾಗಿದೆ.

ನಗರದಲ್ಲಿ ಭಾನುವಾರ ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ಸ್ಥಾನಗಳಿಗೆ ಮತದಾನ ನಡೆದಿತ್ತು. ತಮ್ಮ ಬೆಂಬಲಿಗರೊಂದಿಗೆ ಮಾತನಾಡುತ್ತಿದ್ದ ರಮೇಶ ಕತ್ತಿ ಅವರು, ಜಾರಕಿಹೊಳಿ ಸಹೋದರರನ್ನು ಟೀಕಿಸುವ ಭರದಲ್ಲಿ ಇಡೀ ವಾಲ್ಮೀಕಿ ಸಮುದಾಯಕ್ಕೆ ಅವಾಚ್ಯ ಪದ ಬಳಸಿದ್ದಾರೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಇದರ ವಿಡಿಯೋ ತುಣುಕು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿದೆ. ಅದನ್ನು ಆಧಾರವಾಗಿಟ್ಟುಕೊಂಡು ಸಮಾಜದ ಮುಖಂಡ ರಾಜಶೇಖರ ತಳವಾರ ಕ್ಯಾಂಪ್ ಠಾಣೆಗೆ ದೂರು ನೀಡಿದ್ದಾರೆ.



---

## ವಾರದೊಳಗೆ ಪರಿಷ್ಕೃತ ಕ್ರಿಯಾಯೋಜನೆ ಸಲ್ಲಿಸಿ: ಜಿ.ಪಂ ಸಿಇಒ ಸೂಚನೆ

• ಉದಯವಾಹಿನಿ, ಕಾರವಾರ

ಕುಡಿಯುವ ನೀರಿನ ಯೋಜನೆಗೆ ಸಂಬಂಧಿಸಿ ಸಿದ್ಧಪಡಿಸಿದ ಕ್ರಿಯಾಯೋಜನೆ ಪಟ್ಟಿ ಪರಿಷ್ಕರಿಸಿ, ಮರು ವರದಿ ಸಲ್ಲಿಸುವಂತೆ ಜಿಲ್ಲಾ ಪಂಚಾಯಿತಿ ಸಿಇಒ ಡಾ.ದಿಲೀಷ್ ಶಶಿ ಸೂಚನೆ ನೀಡಿದರು. ಇಲ್ಲಿನ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಶನಿವಾರ ಜಿಲ್ಲಾ ನೀರು ಮತ್ತು ನೈರ್ಮಲ್ಯ ಸಮಿತಿ ಸಭೆ ನಡೆಸಿದ ಅವರು ಮರುವರದಿ ಸಲ್ಲಿಕೆಗೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ಒಂದು ವಾರದ ಗಡುವು ನೀಡಿದರು. ಯೋಜನೆಯ ಅಗತ್ಯತೆ ಬಗ್ಗೆ ಸ್ಥಳ ಪರಿಶೀಲನೆ ನಡೆಸಿದಂತೆ ಕಾಣಿಸುತ್ತಿಲ್ಲ. ನಿಯಮಾವಳಿಗಳನ್ನು ಪಾಲಿಸದೆ ಮತ್ತು ಸಂಬಂಧಪಟ್ಟ ಅನುಮೋದಿತ ದಾಖಲೆಗಳನ್ನು ಒದಗಿಸಿಲ್ಲ' ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಬೇಸಿಗೆ ಸಮಯದಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಸಮರ್ಪವಾಗಿ ನಿರ್ವಹಿಸಲು ಅನುಕೂಲವಾಗುವಂತೆ ರೂ.2 ಕೋಟಿ ವೆಚ್ಚದ ಕಾಮಗಾರಿ ಕೈಗೊಳ್ಳಲು ಮಂಜೂರಾತಿ ನೀಡಬೇಕಿದೆ. 118 ಕಾಮಗಾರಿಗಳ ಕ್ರಿಯಾ ಯೋಜನೆಯನ್ನು ಸಮರ್ಪಕವಾಗಿ ಸಿದ್ಧಪಡಿಸಿ. ಅನುದಾನ ಅನಗತ್ಯ ಪೋಲಾಗುವುದನ್ನು ತಡೆಗಟ್ಟಿ' ಎಂದರು. ಜಲ ಜೀವನ್ ಮಿಷನ್ ಕಾಮಗಾರಿಗಳಲ್ಲಿ ಜಲಮೂಲದ ಸ್ಥಳ ಬದಲಾವಣೆ, ಹೆಚ್ಚಿನ ಮನೆಗಳಿಗೆ ಸಂಪರ್ಕ ನೀಡಬೇಕಾದ ಸಂದರ್ಭದಲ್ಲಿ ಕಾಮಗಾರಿಗಳ ಪರಿಮಾಣಗಳಲ್ಲಿ ಉಂಟಾಗುವ ವ್ಯತ್ಯಾಸಗಳ ಕುರಿತು ವಿಳಂಬ ಮಾಡದೆ ಪ್ರಸ್ತಾವ ಸಲ್ಲಿಸಿ ಎಂದು ಸೂಚಿಸಿದರು.

ಪಾಮ್ ಬೀಚ್ ಏರ್‌ಪೋರ್ಟ್ ಬಳಿ ಏರ್ ಫೋರ್ಸ್ ಒನ್‌ಗೆ ಗುರಿಯಿಡಬಹುದಾದ ಸ್ಥಳದಲ್ಲಿ ಹಂಟಿಂಗ್ ಸ್ಟ್ಯಾಂಡ್ ಪತ್ತೆ

# ಅಮೆರಿಕ ಅಧ್ಯಕ್ಷ ಟ್ರಂಪ್ ಹತ್ಯೆಗೆ ಮತ್ತೊಂದು ಪ್ರಯತ್ನ

**ವಾಷಿಂಗ್ಟನ್:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹತ್ಯೆಗೆ ಮತ್ತೊಂದು ಯತ್ನ ನಡೆದಿರುವ ಶಂಕೆ ವ್ಯಕ್ತವಾಗಿದೆ. ಪಾಮ್ ಬೀಚ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಬಳಿ ಅಧ್ಯಕ್ಷೀಯ ವಿಮಾನ 'ಏರ್ ಫೋರ್ಸ್ ಒನ್' ಇಳಿಯುವ ಸ್ಥಳಕ್ಕೆ ನೇರ ಗುರಿಯಿಡಬಹುದಾದ ಜಾಗದಲ್ಲಿ ಬೇಟೆಗಾಗಿ ನಿರ್ಮಿಸಲಾಗಿದ್ದ ಎತ್ತರದ ಸ್ಟ್ಯಾಂಡ್ (ಹಂಟಿಂಗ್ ಸ್ಟ್ಯಾಂಡ್) ಒಂದನ್ನು ಸೀಕ್ರೆಟ್ ಸರ್ವೀಸ್ ಅಧಿಕಾರಿಗಳು ಪತ್ತೆ ಮಾಡಿದ್ದಾರೆ. ಈ ಹಿನ್ನೆಲೆಯಲ್ಲಿ ಅಧ್ಯಕ್ಷರ ಭದ್ರತೆಯನ್ನು ಹೆಚ್ಚಿಸಲಾಗಿದೆ.

**ಕಳೆದ ವರ್ಷ ಎರಡು ಹತ್ಯೆ ಯತ್ನ**

**ಅಧ್ಯಕ್ಷ ಟ್ರಂಪ್ ಅವರು ಕಳೆದ ಎರಡು ವರ್ಷಗಳಿಂದ ನಿರಂತರವಾಗಿ ಹತ್ಯೆ ಬೆದರಿಕೆಗಳನ್ನು ಎದುರಿಸುತ್ತಿದ್ದಾರೆ. ಕಳೆದ ವರ್ಷವೊಂದರಲ್ಲೇ ಅವರ ಮೇಲೆ ಎರಡು ಬಾರಿ ಹತ್ಯೆ ಯತ್ನ ನಡೆದಿತ್ತು.**

ಈ ಹಿನ್ನೆಲೆಯಲ್ಲಿ ಪಾಮ್ ಬೀಚ್ ವಿಮಾನ ನಿಲ್ದಾಣದಲ್ಲಿ 'ಏರ್ ಫೋರ್ಸ್ ಒನ್' ವಿಮಾನವನ್ನು ಏರಲು ಅಧ್ಯಕ್ಷ ಟ್ರಂಪ್ ಅವರು ಸಣ್ಣ ಮೆಟ್ಟಿಲುಗಳನ್ನು ಬಳಸಿದರು. 'ಹೆಚ್ಚುವರಿ ಭದ್ರತಾ ಕ್ರಮ'ಗಳ ಭಾಗವಾಗಿ ಈ ಬದಲಾವಣೆ ಮಾಡಲಾಗಿದೆ ಎಂದು ಶ್ವೇತಭವನದ ಅಧಿಕಾರಿಯೊಬ್ಬರು ಫಾಕ್ಸ್ ನ್ಯೂಸ್‌ಗೆ ಖಚಿತಪಡಿಸಿದ್ದಾರೆ.

- **ಪಾಮ್ ಬೀಚ್ ಏರ್‌ಪೋರ್ಟ್ ಬಳಿ 'ಏರ್ ಫೋರ್ಸ್ ಒನ್'ಗೆ ಗುರಿಯಿಡಬಹುದಾದ ಸ್ಥಳದಲ್ಲಿ ಶಂಕಿತ ಹಂಟಿಂಗ್ ಸ್ಟ್ಯಾಂಡ್ ಪತ್ತೆ**
- **ಭದ್ರತೆ ಹೆಚ್ಚಳ, ವಿಮಾನ ಏರಲು ಸಣ್ಣ ಮೆಟ್ಟಿಲುಗಳನ್ನು ಬಳಸಿದ ಅಧ್ಯಕ್ಷ ಡೊನಾಲ್ಡ್ ಟ್ರಂಪ್**
- **ಸ್ಥಳದಲ್ಲಿ ಯಾರೂ ಪತ್ತೆಯಾಗಿಲ್ಲ, ಯಾವುದೇ ಬಂಧನವಾಗಿಲ್ಲ, ಎಫ್‌ಬಿಐನಿಂದ ತನಿಖೆ ಆರಂಭ**
- **ಕಳೆದ ವರ್ಷ ಟ್ರಂಪ್ ಮೇಲೆ ನಡೆದಿದ್ದ ಎರಡು ಪ್ರತ್ಯೇಕ ಹತ್ಯೆ ಯತ್ನಗಳ ಬೆನ್ನಲ್ಲೇ ನಡೆದ ಘಟನೆ**

ಸೀಕ್ರೆಟ್ ಸರ್ವೀಸ್ ಅಧಿಕಾರಿಗಳು ವಿಮಾನ ನಿಲ್ದಾಣದ ಬಳಿ ಈ ಶಂಕಿತ ಹಂಟಿಂಗ್ ಸ್ಟ್ಯಾಂಡ್ ಅನ್ನು ಪತ್ತೆಹಚ್ಚಿದ್ದರು. ಆದರೆ, ಸ್ಥಳದಲ್ಲಿ ಯಾರೂ ಇರಲಿಲ್ಲ ಮತ್ತು ಯಾರನ್ನೂ ಬಂಧಿಸಿಲ್ಲ ಎಂದು ತಿಳಿದು ಬಂದಿದೆ. ಸೀಕ್ರೆಟ್ ಸರ್ವೀಸ್ ಮುಖ್ಯಸ್ಥ ಆಂಥೋನಿ ಗುಗ್ಲಿಮ್ಮಿ ಕೂಡ



ಎಫ್‌ಬಿಐ ಮತ್ತು ಸ್ಥಳೀಯ ಪಾಮ್ ಬೀಚ್ ಕೌಂಟಿ ಕಾನೂನು ಜಾರಿ ಸಂಸ್ಥೆಗಳೊಂದಿಗೆ ನಿಕಟವಾಗಿ ಸಂಪರ್ಕದಲ್ಲಿ ಇರುವುದನ್ನು ದೃಢಪಡಿಸಿದ್ದಾರೆ. ಭದ್ರತಾ ಸಿದ್ಧತೆಗಳ ಭಾಗವಾಗಿ ಏಜೆಂಟರು ಈ ಸ್ಟ್ಯಾಂಡ್ ಅನ್ನು ಪತ್ತೆ ಹಚ್ಚಿದ್ದಾರೆ. ಇದರಿಂದ ಅಧ್ಯಕ್ಷರ ಪ್ರಯಾಣಕ್ಕೆ ಯಾವುದೇ ಅಡ್ಡಿಯಾಗಿಲ್ಲ, ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಜುಲೈ 2024ರಲ್ಲಿ ಪೆನ್ಸಿಲ್ವೇನಿಯಾದ ಬಟ್ಲರ್‌ನಲ್ಲಿ ನಡೆದ ಪ್ರಚಾರ ರ‍್ಯಾಲಿ ವೇಳೆ 20 ವರ್ಷದ ಥಾಮಸ್ ಕ್ರೂಕ್ಸ್ ಎಂಬಾತ ಕಟ್ಟಡದ ಮೇಲ್ಛಾವಣಿಯಿಂದ ಟ್ರಂಪ್ ಅವರ ಮೇಲೆ ಗುಂಡು ಹಾರಿಸಿದ್ದ. ಸೀಕ್ರೆಟ್ ಸರ್ವೀಸ್ ಏಜೆಂಟರು ಆತನನ್ನು ಸ್ಥಳದಲ್ಲೇ ಹೊಡೆದುರುಳಿಸಿದ್ದರು. ಸೆಪ್ಟೆಂಬರ್ 2024ರಲ್ಲಿ ಫ್ಲೋರಿಡಾದ ವೆಸ್ಟ್ ಪಾಮ್ ಬೀಚ್‌ನಲ್ಲಿ ಟ್ರಂಪ್ ಗಾಲ್ಫ್ ಆಡುತ್ತಿದ್ದಾಗ, 59 ವರ್ಷದ ರಯಾನ್ ರೂತ್ ಪೊದೆಯೊಂದರಲ್ಲಿ ಅಡಗಿ ಕುಳಿತು ಹತ್ಯೆಗೆ ಸಂಚು ರೂಪಿಸಿದ್ದ. ಟ್ರಂಪ್ ಸ್ಥಳಕ್ಕೆ ಬರುವ ಮುನ್ನವೇ ಸೀಕ್ರೆಟ್ ಸರ್ವೀಸ್ ಅಧಿಕಾರಿಗಳು ಆತನನ್ನು ಪತ್ತೆಹಚ್ಚಿ ಬಂಧಿಸಿದ್ದರು.

**ಹಂಟಿಂಗ್ ಸ್ಟ್ಯಾಂಡ್ ಪತ್ತೆ**

**ಎಫ್‌ಬಿಐನಿಂದ ತನಿಖೆ ಚುರುಕು**

**ಘಟನೆಯ ತನಿಖೆಯನ್ನು ಎಫ್‌ಬಿಐ (ಫೆಡರಲ್ ಬ್ಯೂರೋ ಆಫ್ ಇನ್ವೆಸ್ಟಿಗೇಷನ್) ಕೈಗೆತ್ತಿಕೊಂಡಿದೆ ಎಂದು ನಿರ್ದೇಶಕ ಕಾಶ್ ಪಟೇಲ್ ತಿಳಿಸಿದ್ದಾರೆ. ಅಧ್ಯಕ್ಷರ ಆಗಮನಕ್ಕೂ ಮುನ್ನ, 'ಏರ್ ಫೋರ್ಸ್ ಒನ್' ಲ್ಯಾಂಡಿಂಗ್ ವಲಯವನ್ನು ನೋಡಬಹುದಾದ ಸ್ಥಳದಲ್ಲಿ ಬೇಟೆ ಸ್ಟ್ಯಾಂಡ್ ಇರುವುದನ್ನು ಸೀಕ್ರೆಟ್ ಸರ್ವೀಸ್ ಪತ್ತೆಹಚ್ಚಿದೆ. ಸ್ಥಳದಿಂದ ಸಾಕ್ಷ್ಯಗಳನ್ನು ಸಂಗ್ರಹಿಸಲು ಮತ್ತು ಸೆಲ್ ಫೋನ್ ವಿಶ್ಲೇಷಣೆ ನಡೆಸಲು ಎಫ್‌ಬಿಐ ತನ್ನ ಸಂಪನ್ಮೂಲಗಳನ್ನು ಬಳಸಿಕೊಳ್ಳುತ್ತಿದೆ, ಎಂದು ಅವರು ಹೇಳಿದ್ದಾರೆ.**

ಕೆಲವೇ ವಾರಗಳ ಹಿಂದೆ, ಗಾಲ್ಫ್ ಕೋರ್ಸ್ ಬಳಿ ಹತ್ಯೆಗೆ ಯತ್ನಿಸಿದ ಪ್ರಕರಣದಲ್ಲಿ ರಯಾನ್ ರೂತ್ ದೋಷಿ ಎಂದು ನ್ಯಾಯಾಲಯ ತೀರ್ಪು ನೀಡಿತ್ತು. ಈ ಎಲ್ಲಾ ಘಟನೆಗಳ ಬೆನ್ನಲ್ಲೇ ಮತ್ತೊಂದು ಶಂಕಿತ ಹತ್ಯೆ ಯತ್ನದ ಪ್ರಕರಣ ಬೆಳಕಿಗೆ ಬಂದಿದ್ದು, ಅಧ್ಯಕ್ಷರ ಭದ್ರತಾ ವ್ಯವಸ್ಥೆಯನ್ನು ಮತ್ತಷ್ಟು ಬಿಗಿಗೊಳಿಸಲಾಗಿದೆ.

## ಫ್ರಾನ್ಸ್‌ನ ವಿಶ್ವಪ್ರಸಿದ್ಧ ಲೌವ್ರೆ ಮ್ಯೂಸಿಯಂನಲ್ಲಿ ನೆಪೋಲಿಯನ್ ಕಾಲದ ಅಮೂಲ್ಯ ಆಭರಣಗಳ ಕಳವು

**ಪ್ಯಾರಿಸ್:** ವಿಶ್ವದ ಅತಿ ಹೆಚ್ಚು ಜನಪ್ರಿಯವಾದ ವಸ್ತುಸಂಗ್ರಹಾಲಯಗಳಲ್ಲಿ ಒಂದಾದ ಪ್ಯಾರಿಸ್‌ನ ಲೌವ್ರೆ ಮ್ಯೂಸಿಯಂನಿಂದ ನೆಪೋಲಿಯನ್ ಯುಗದ ಅಮೂಲ್ಯ ಆಭರಣಗಳನ್ನು ಕಳ್ಳತನ ಮಾಡಲಾಗಿದೆ. ಸಿನಿಮೀಯ ರೀತಿಯಲ್ಲಿ ನಡೆದ ಈ ಕಳ್ಳತನ ಎಲ್ಲರನ್ನೂ ಬೆಚ್ಚಿ ಬೀಳಿಸಿದೆ. ಪ್ರತಿನಿತ್ಯ ಸಾವಿರಾರು ಜನರು ಸೇರುವ ಈ ಮ್ಯೂಸಿಯಂನಲ್ಲಿ ಕಳ್ಳರು ಕೇವಲ ಏಳು ನಿಮಿಷದಲ್ಲಿ ತಮ್ಮ ಕೈಚಳಕ ತೋರಿಸಿದ್ದಾರೆ. ಮೋನಾಲಿಸಾ ಸೇರಿದಂತೆ ವಿಶ್ವದ ಕೆಲವು ಅತ್ಯಂತ ಐತಿಹಾಸಿಕ ಕಲಾಕೃತಿಗಳ ನೆಲೆಯಾಗಿರುವ ಈ ಐತಿಹಾಸಿಕ ವಸ್ತುಸಂಗ್ರಹಾಲಯವನ್ನು ಈ ಘಟನೆಯ ನಂತರ ದಿನಕ್ಕೆ ಮುಚ್ಚಲಾಗಿದೆ.

ಯುರೋಪಿನ ಕಾಲಮಾನ ಬೆಳಗ್ಗೆ 9.30ರ ಸುಮಾರಿಗೆ ಕಳ್ಳತನ ನಡೆದಿದೆ. ಕಳ್ಳರು ನಿರ್ಮಾಣ ಹಂತದಲ್ಲಿರುವ ಸೀನ್-ಮುಖದ ಮುಂಭಾಗದ ಮೂಲಕ ಪ್ರವೇಶಿಸಿದರು ಮತ್ತು ಅಪೊಲೊ ಗ್ಯಾಲರಿಯನ್ನು ತಲುಪಲು ಹೈಡ್ರಾಲಿಕ್ ಏಣಿ ಅಥವಾ 'ಬಾಸ್ಕೆಟ್ ಲಿಫ್ಟ್' ಬಳಸಿಕೊಂಡು ಅಪೋಲೋ ಗ್ಯಾಲರಿಯನ್ನು ತಲುಪಿದ್ದಾರೆ ಎಂದು ಫ್ರೆಂಚ್ ದಿನಪತ್ರಿಕೆ ಲೆ ಪ್ಯಾರಿಸಿಯನ್ ವರದಿ ಮಾಡಿದೆ. ಮೂರು ಅಥವಾ ನಾಲ್ಕು ಕಳ್ಳರು ಈ ಕೃತ್ಯ ಎಸಗಿದ್ದಾರೆ ಮತ್ತು ಅವರು ಮೊದಲೇ ವಸ್ತುಸಂಗ್ರಹಾಲಯದ



ಬಗ್ಗೆ ಮಾಹಿತಿ ಸಂಗ್ರಹಿಸಿರುವುದು ಸ್ಪಷ್ಟವಾಗಿದೆ.

ವಿಶ್ವದ ಅತಿ ಹೆಚ್ಚು ಭೇಟಿ ನೀಡುವ ವಸ್ತು ಸಂಗ್ರಹಾಲಯ ಲೌವ್ರೆ ವಿಶ್ವದ ಅತಿ ಹೆಚ್ಚು ಭೇಟಿ ನೀಡುವ ವಸ್ತುಸಂಗ್ರಹಾಲಯವಾಗಿದ್ದು, ದಿನಕ್ಕೆ 30,000 ಜನರು ಇಲ್ಲಿಗೆ ಭೇಟಿ ನೀಡುತ್ತಾರೆ. ಇದು ಪುರಾತನ ವಸ್ತುಗಳು, ಶಿಲ್ಪಗಳು ಮತ್ತು ವರ್ಣಚಿತ್ರಗಳು ಸೇರಿದಂತೆ 33,000ಕ್ಕೂ ಹೆಚ್ಚು ಕಲಾಕೃತಿಗಳನ್ನು ಹೊಂದಿದೆ. ವೀನಸ್ ಡಿ ಮಿಲೋ ಮತ್ತು ವಿಂಗ್ಡ್ ವಿಕ್ಟರಿ ಆಫ್ ಸಮೋತ್ರೇಸ್ ಜೊತೆಗೆ ವಿಶ್ವದ ಅತ್ಯಂತ ಪ್ರಸಿದ್ಧ ಕಲಾಕೃತಿಯಾದ ಮೋನಾಲಿಸಾ ಪ್ರಮುಖ ಆಕರ್ಷಣೆಯಾಗಿದೆ.

**ಯಾವೆಲ್ಲಾ ವಸ್ತುಗಳ ಕಳವು?**

**ಅಪೊಲೊ ಗ್ಯಾಲರಿಯಲ್ಲಿ ಆಯ್ದ ಫ್ರೆಂಚ್ ಕಿರೀಟ ಆಭರಣಗಳನ್ನು ಪ್ರದರ್ಶನ ಏರ್ಪಡಿಸಲಾಗಿತ್ತು. ಆದರೆ, ಬೆಳಿಗ್ಗೆ ಲೌವ್ರೆ ಮ್ಯೂಸಿಯಂ ತೆರೆಯುವ ಸಮಯದಲ್ಲಿ ದರೋಡೆ ನಡೆದಿದೆ. ಚೈನ್ಸಾಗಳನ್ನು ಹೊತ್ತ ಸ್ಕೂಟರ್‌ಗಳಲ್ಲಿದ್ದ ಅಪರಿಚಿತ ಸಂಖ್ಯೆಯ ಕಳ್ಳರು ಪ್ರಮುಖ ಅಪೊಲೊ ಗ್ಯಾಲರಿಗೆ ನುಗ್ಗಿ ನೆಪೋಲಿಯನ್ ಮತ್ತು ಸಾಮ್ರಾಜ್ಞಿಯವರ ಆಭರಣ ಸಂಗ್ರಹದಿಂದ ಒಂಬತ್ತು ವಸ್ತುಗಳನ್ನು ಕದ್ದು ಸಿನಿಮೀಯ ರೀತಿಯಲ್ಲಿ ಪರಾರಿಯಾಗಿದ್ದಾರೆ. ಕಳವು ಮಾಡಿದ ಆಭರಣಗಳಲ್ಲಿ ಒಂದಾದ ಎಂಪ್ರೆಸ್ ಯುಜೇನಿಯ ರದ್ದು ಎಂದು ನಂಬಲಾದ ಒಂದು ಆಭರಣವು ವಸ್ತುಸಂಗ್ರಹಾಲಯದ ಹೊರಗೆ ಪತ್ತೆಯಾಗಿದ್ದು, ಹಾನಿಗೊಳಗಾಗಿದೆ ಎಂದು ಪತ್ರಿಕೆ ವರದಿ ಮಾಡಿದೆ.**

## ಪಾಕಿಸ್ತಾನಕ್ಕೆ ದುಃಸ್ವಪ್ನವಾಗಿರುವ 800ಕಿ.ಮಿ. ವ್ಯಾಪ್ತಿಯ ಬ್ರಹ್ಮೋಸ್ ಕ್ಷಿಪಣಿ ಪರೀಕ್ಷೆ ಯಶಸ್ವಿ

**ನವದೆಹಲಿ:** ಭಾರತ ಮತ್ತು ರಷ್ಯಾ ಜಂಟಿಯಾಗಿ ಅಭಿವೃದ್ಧಿಪಡಿಸಿರುವ ಬ್ರಹೋಸ್ ಸೂಪರ್ ಸಾನಿಕ್ ಕ್ಷಿಪಣಿ ಪಾಕಿಸ್ತಾನದ ನಿದ್ದೆಗೆಡಿಸಿದೆ. ಈಗಾಗಲೇ ಆಪರೇಷನ್ ಸಿಂಧೂರ್‌ನಲ್ಲಿ ಬಳಸಲಾಗಿದ್ದ ಬ್ರಹೋಸ್ ಕ್ಷಿಪಣಿ ಇಡೀ ವಿಶ್ವವೇ ಭಾರತದ ಸೇನಾ ಬತ್ತಳಿಕೆಯ ಹೊಸ ಅಸ್ತ್ರದ ಬಗ್ಗೆ ಚಕಿತಗೊಂಡಿತ್ತು. ಕಡಿಮೆ ಅಂತರದ ನಿರ್ದಿಷ್ಟ ಗುರಿಯನ್ನು ತಲುಪಬಹುದಾದ ಬ್ರಹೋಸ್ ಸೂಪರ್ ಸಾನಿಕ್ ಕ್ಷಿಪಣಿ ಅಭಿವೃದ್ಧಿಗೆ (450 ಕಿ.ಮೀ.) ಭಾರತದ ವಿಜ್ಞಾನಿಗಳು ಸತತ ಪ್ರಯತ್ನ ನಡೆಸಿ ಯಶಸ್ವಿಯಾಗಿದ್ದರು. ಈಗ 800 ಕಿಲೋಮೀಟರ್ ದೂರ ಕ್ರಮಿಸಬಹುದಾದ ಕ್ಷಿಪಣಿ ಪರೀಕ್ಷೆಯನ್ನು ಆರಂಭಿಸಿದೆ. ಕೇವಲ ಎರಡೇ ವರ್ಷದಲ್ಲಿ ಹೊಸ ಆವೃತ್ತಿಯ ಬ್ರಹೋಸ್ ಕ್ಷಿಪಣಿಗಳ ಸರಣಿಯನ್ನು ಅಭಿವೃದ್ಧಿಪಡಿಸಿಕೊಳ್ಳಲಿದೆ ಎಂದು ಹೇಳಲಾಗುತ್ತಿದೆ.

ವಾಯುಪಡೆಯಲ್ಲಿ ಬಳಸಬಹುದಾದ 200 ಕಿಮೀ. ರೇಂಜಿನ ಅಸ್ತ್ರಕ್ಷಿಪಣಿಯನ್ನು ಕೂಡ ಮುಂದಿನ 2026-27ರ ನಡುವೆ ಸಿದ್ಧಗೊಳ್ಳಲಿದೆ ಎಂದು ಮೂಲಗಳು ತಿಳಿಸಿವೆ. ಈಗಾಗಲೇ ಪಾಕಿಸ್ತಾನದ



ಪ್ರತಿಯೊಂದು ಜಾಗವನ್ನು ಮುಟ್ಟುವ ಸಾಮರ್ಥ್ಯ ಹೊಂದಿರುವ ಬ್ರಹೋಸ್ ಕ್ಷಿಪಣಿ ಸಿದ್ಧವಾಗಿದ್ದು, ಈಗ ದೂರಗಾಮಿ ಆವೃತ್ತಿಯನ್ನು ಅಭಿವೃದ್ಧಿಪಡಿಸುವತ್ತ ಹೆಚ್ಚಿನ ಚಿತ್ತಹರಿಸಲಾಗಿದೆ. ಮುಂದಿನ 2027ರ ವೇಳೆಗ ಬ್ರಹೋಸ್ ಸೂಪರ್ ಸಾನಿಕ್ ಸರಣಿ ಕ್ಷಿಪಣಿಗಳು ಸಿದ್ಧಗೊಳ್ಳಲಿದ್ದು, ನೆರೆಯ ಪಾಕಿಸ್ತಾನಕ್ಕೆ ನಡುಕ ಹುಟ್ಟಿಸಿದೆ. ಮಾಹಿತಿಯ ಪ್ರಕಾರ, ಉಪಗ್ರಹ ಆಧಾರಿತ ಉಡಾವಣಾ ವ್ಯವಸ್ಥೆಯನ್ನು ಕೂಡ ಅಭಿವೃದ್ಧಿಪಡಿಸಲಾಗುತ್ತಿದೆ. ಪ್ರಸ್ತುತ ಇದರ ಬಗ್ಗೆ ಹಲವು ಪರೀಕ್ಷೆಗಳು ನಡೆಯಬೇಕಾಗಿದೆ.


ಕಳೆದ ಆಪರೇಷನ್ ಸಿಂಧೂರ್ ವೇಳೆ ಸುಖೋಯ್ 30 ಎಂಕೆಐ ಸಮರ ವಿಮಾನದ ಮೂಲಕ 450 ಕಿಲೋಮೀಟರ್ ರೇಂಜಿನ ಬ್ರಹೋಸ್ ಕ್ಷಿಪಣಿಯನ್ನು ಬಳಸಲಾಗಿತ್ತು.

## ಕಾಶ್ಮೀರಿ ಪಂಡಿತರ ಮರೆತ ಬಿಜೆಪಿ: ಸಿರ್ವಾಲ್

**ಜಮ್ಮು:** ತಮ್ಮ ಪಕ್ಷವು ಸ್ಥಳಾಂತರಗೊಂಡ ಕಾಶ್ಮೀರಿ ಪಂಡಿತರನ್ನು ರಾಜಕೀಯ ಲಾಭಕ್ಕಾಗಿ ಬಳಸುತ್ತಿದೆ ಎಂದು ಆರೋಪಿಸಿರುವ ಬಿಜೆಪಿ ನಾಯಕ ಜಹಾನ್‌ಜೈಬ್ ಸಿರ್ವಾಲ್ ಅವರು, ದೀರ್ಘಕಾಲದ ಅನ್ಯಾಯವನ್ನು ಪರಿಹರಿಸಲು ಅರ್ಥಪೂರ್ಣ ಕ್ರಮಗಳನ್ನು ತೆಗೆದುಕೊಳ್ಳಬೇಕೆಂದು ತಮ್ಮ ಪಕ್ಷದ ನಾಯಕತ್ವಕ್ಕೆ ಕರೆ ನೀಡಿದ್ದಾರೆ.ಈ ಸಮುದಾಯವು ಬಿಜೆಪಿಗೆ ಅತ್ಯಂತ ದೃಢವಾದ ಪ್ರಚಾರಕರಲ್ಲಿ ಒಂದಾಗಿದೆ.

ಅವರ ನೋವನ್ನು ಬಿಜೆಪಿ ನಾಯಕತ್ವವು ರಾಜಕೀಯ ಲಾಭಕ್ಕಾಗಿ ಸಂಸತ್ತಿನಲ್ಲಿ 500 ಕ್ಕೂ ಹೆಚ್ಚು ಬಾರಿ ಉಲ್ಲೇಖಿಸಿದೆ ಮತ್ತು ಪ್ರತಿ ರಾಜಕೀಯ ವಿರೋಧಿಯ ವಿರುದ್ಧ ಸಾಧನವಾಗಿ ಬಳಸಿದೆ ಎಂದು ಕಾಂಗ್ರೆಸ್ ತೊರೆದ ನಂತರ ಕಳೆದ ವರ್ಷ ಏಪ್ರಿಲ್‌ನಲ್ಲಿ ಬಿಜೆಪಿಗೆ ಸೇರಿದ ಸಿರ್ವಾಲ್ ಹೇಳಿದರು. ಕಾಶ್ಮೀರಿ ಪಂಡಿತ ಸಮುದಾಯದೊಂದಿಗೆ ದೀರ್ಘಕಾಲದ ಅನ್ಯಾಯವನ್ನು ಪರಿಹರಿಸಲು ನಿರ್ಣಾಯಕ ಮತ್ತು ಅರ್ಥಪೂರ್ಣ ಕ್ರಮಗಳನ್ನು ತೆಗೆದುಕೊಳ್ಳಬೇಕೆಂದು ನಾನು ಪಕ್ಷದ ನಾಯಕತ್ವವನ್ನು ಕೋರುತ್ತೇನೆ. ಅವರು ಸಾಂಕೇತಿಕ ಸನ್ನೆಗಳು ಅಥವಾ ಸಂಸತ್ತಿನ ಚರ್ಚೆಗಳಲ್ಲಿ ಪುನರಾವರ್ತಿತ ಉಲ್ಲೇಖಗಳಿಗಿಂತ ಹೆಚ್ಚಿನದನ್ನು ಅರ್ಹರು ಎಂದು ಅವರು ಹೇಳಿದರು. ಇದಕ್ಕೂ ಮೊದಲು, ಅಕ್ಟೋಬರ್ 3 ರಂದು, ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ ಮುಸ್ಲಿಮರ ವಿರುದ್ಧದ ಸ್ವೀಕಾರಾರ್ಹವಲ್ಲದ ಹೇಳಿಕೆಗಳು ಮತ್ತು ಅಲ್ಪಸಂಖ್ಯಾತ ಸಮುದಾಯದ ಬಗ್ಗೆ ರಾಜ್ಯ ಪೊಲೀಸರ ಪ್ರತಿಕಾರಾತ್ಮಕ ಮನೋಭಾವವನ್ನು ಉಲ್ಲೇಖಿಸಿ ಸಿರ್ವಾಲ್ ಪಕ್ಷಕ್ಕೆ ರಾಜೀನಾಮೆ ನೀಡುವುದಾಗಿ ಬೆದರಿಕೆ ಹಾಕಿದ್ದರು. ಕಾಶ್ಮೀರಿ ಪಂಡಿತರು ತಮ್ಮ ತಾಯ್ನಾಡಿಗೆ ಸುರಕ್ಷಿತವಾಗಿ ಮರಳುವುದನ್ನು ಖಚಿತಪಡಿಸಿಕೊಳ್ಳುವ, ಅವರ ಹಕ್ಕುಗಳನ್ನು ಪುನಃಸ್ಥಾಪಿಸುವ ಮತ್ತು ಅವರಿಗೆ ದೀರ್ಘಕಾಲದಿಂದ ನಿರಾಕರಿಸಲ್ಪಟ್ಟ ಭದ್ರತೆ ಮತ್ತು ಅವಕಾಶಗಳನ್ನು ಒದಗಿಸುವ ನೀತಿಗಳಿಗೆ ನಾಯಕತ್ವ ಆದ್ಯತೆ ನೀಡಬೇಕು ಎಂದು ಬಿಜೆಪಿ ಮುಖಂಡರು ಹೇಳಿದರು.

**ಅನ್ಯಾಯವನ್ನು ಪರಿಹರಿಸಲು ನಾಯಕತ್ವಕ್ಕೆ ಕರೆ**



## ದೀಪಾವಳಿ ಮೊದಲ ದಿನವೇ ದೆಹಲಿಯಲ್ಲಿ ಹೆಚ್ಚಿದ ವಾಯುಮಾಲಿನ್ಯ

**ನವದೆಹಲಿ:** ಬೆಳಕಿನ ಹಬ್ಬ ದೀಪಾವಳಿ ಮೊದಲ ದಿನವೇ ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ವಾಯು ಮಾಲಿನ್ಯ ಹದಗೆಟ್ಟಿದೆ. ಕಳೆದ ಏಳು ದಿನಗಳಿಂದ ನಿರಂತರವಾಗಿ ಹೆಚ್ಚುತ್ತಿರುವ ವಾಯು ಮಾಲಿನ್ಯ ಸದ್ಯ ಎಕ್ಯೂಐ 400ರ ಗಡಿ ದಾಟಿದೆ. ಮುಂದಿನ ಒಂದು ವಾರದಲ್ಲಿ ಈ ಪ್ರಮಾಣ 600 ಗಡಿ ದಾಟಬಹುದು ಎಂದು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ ಎಚ್ಚರಿಕೆ ನೀಡಿದೆ.

ದೆಹಲಿಯ 38 ಮೇಲ್ವಿಚಾರಣಾ ಕೇಂದ್ರಗಳ ಪೈಕಿ 24 ಕೇಂದ್ರಗಳಲ್ಲಿ ಗಾಳಿಯ ಗುಣಮಟ್ಟ ತುಂಬಾ ಕಳಪೆ ಮಟ್ಟವನ್ನು ದಾಖಲಿಸಿವೆ ಎಂದು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ ತಿಳಿಸಿದೆ. ಇಂದು ಬೆಳಗ್ಗೆ, ಆನಂದ್ ವಿಹಾರ್ ನಗರದಲ್ಲಿ ಅತ್ಯಂತ ವಿಷಕಾರಿ ಗಾಳಿಯನ್ನು ವರದಿ ಮಾಡಿದೆ, ಎಕ್ಯೂಐ 417 ರೊಂದಿಗೆ, ಇದು ತೀವ್ರ ಕಳಪೆ ವರ್ಗಕ್ಕೆ ಇಳಿದಿದೆ. ವಜೀರ್‌ಪುರ (364), ವಿವೇಕ್ ವಿಹಾರ್ (351), ದ್ವಾರಕಾ (335), ಮತ್ತು ಆರ್‌ಕೆ ಪುರಂ (323) ಸೇರಿದಂತೆ 12 ನಿಲ್ದಾಣಗಳು ಗಾಳಿಯ ಗುಣಮಟ್ಟವನ್ನು ತುಂಬಾ ಕಳಪೆ ವ್ಯಾಪ್ತಿಯಲ್ಲಿ ವರದಿ ಮಾಡಿವೆ.

ಸಿಪಿಸಿಬಿ ದತ್ತಾಂಶದ ಪ್ರಕಾರ, ಸಿರಿ ಫೋರ್ಟ್, ದಿಲ್ಶಾದ್ ಗಾರ್ಡನ್ ಮತ್ತು ಜಹಾಂಗೀರ್‌ಪುರಿ ಮುಂತಾದ ಇತರ ಪ್ರದೇಶಗಳು 318 ಎಕ್ಯೂಐ ದಾಖಲಿಸಿವೆ. ಪಂಜಾಬಿ ಬಾಗ್ 313, ನೆಹರು ನಗರ 310, ಅಶೋಕ್ ವಿಹಾರ್ 305 ಮತ್ತು ಬವಾನಾ 304ರ ವಾಯು ಗುಣಮಟ್ಟ ಸೂಚ್ಯಂಕವನ್ನು ದಾಖಲಿಸಿವೆ.

ದೆಹಲಿಯಲ್ಲಿ ಮಾಲಿನ್ಯ ಹೆಚ್ಚುತ್ತಿರುವ ಹಿನ್ನಲೆಯಲ್ಲಿ



**ಹಸಿರು ಪಟಾಕಿಗಳನ್ನು ಮಾತ್ರ ಸಿಡಿಸುವಂತೆ ಮನವಿ**

**ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ದೀಪಾವಳಿಯ ಸಂದರ್ಭದಲ್ಲಿ ರಾಷ್ಟ್ರ ರಾಜಧಾನಿಯ ನಿವಾಸಿಗಳಿಗೆ ಶುಭ ಹಾರೈಸಿದರು ಮತ್ತು ಸುಪ್ರೀಂ ಕೋರ್ಟ್ ಆದೇಶದಂತೆ ಎಲ್ಲರೂ ಹಸಿರು ಪಟಾಕಿಗಳನ್ನು ಮಾತ್ರ ಸಿಡಿಸುವಂತೆ ಮನವಿ ಮಾಡಿದ್ದಾರೆ. ಸುಪ್ರೀಂ ಕೋರ್ಟ್ ಆದೇಶದ ಪ್ರಕಾರ, ಪಟಾಕಿಗಳನ್ನು ಬೆಳಿಗ್ಗೆ 6ರಿಂದ 7ರವರೆಗೆ ಮತ್ತು ನಂತರ ರಾತ್ರಿ 8ರಿಂದ ರಾತ್ರಿ 10ರವರೆಗೆ ಮಾತ್ರ ಮಾರಾಟ ಮಾಡಲು ಅವಕಾಶವಿರುತ್ತದೆ ಮತ್ತು ಅಕ್ಟೋಬರ್ 18 ರಿಂದ 20ರವರೆಗೆ ಮಾರಾಟ ಮಾಡಲಾಗುತ್ತದೆ.**

ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲಾಗಿದೆ. ದೆಹಲಿ-ಎನ್‌ಸಿಆರ್ ಪ್ರದೇಶದಲ್ಲಿ ಗ್ರೇಡೆಡ್ ರೆಸ್ಪಾನ್ಸ್ ಆಕ್ಷನ್ ಪ್ಲಾನ್ ರಚಿಸಲಾಗಿದೆ. ಆಕ್ಷನ್ ಕ್ವಾಲಿಟಿ ಇಂಡೆಕ್ಸ್ 301 ರಿಂದ 400ರವರೆಗಿನ ಅತ್ಯಂತ ಕಳಪೆ ವರ್ಗಕ್ಕೆ ಸೇರಿದಾಗ ಇದನ್ನು ಜಾರಿಗೊಳಿಸಲಾಗುತ್ತದೆ.

ಈ ನಿಯಮಗಳ ಪ್ರಕಾರ ಮಾಲಿನ್ಯ ನಿಯಂತ್ರಣಕ್ಕೆ ಬರುವವರೆಗೂ ಕಟ್ಟಡ ನಿರ್ಮಾಣ ಕಾಮಗಾರಿಗಳ ನಿಲ್ಲಿಸಬೇಕಾಗುತ್ತದೆ. ಹೋಟೆಲ್‌ಗಳು, ರೆಸ್ಟೋರೆಂಟ್‌ಗಳು ಮತ್ತು ಓಪನ್ ಈಟರಿಗಳಲ್ಲಿ ತಂದೂರ್‌ಗಳಲ್ಲಿ ಕಲ್ಲಿದ್ದಲು ಬಳಕೆ ನಿಷೇಧ ಮಾಡಲಾಗುತ್ತದೆ. ಅಗತ್ಯ ಸೇವೆಗಳನ್ನು ಹೊರತುಪಡಿಸಿ ಡೀಸೆಲ್ ಜನರೇಟರ್‌ಗಳ ಬಳಕೆಯನ್ನು ನಿರ್ಬಂಧಿಸಲಾಗುತ್ತದೆ.

ಅಂತರ್ ರಾಜ್ಯ ಬಸ್‌ಗಳ ಪ್ರವೇಶವನ್ನು , ಎಲೆಕ್ಟ್ರಿಕ್ ಅಥವಾ ಡೀಸೆಲ್ ಇಂಧನದಕ್ಕೆ ಮಾತ್ರ ಸೀಮಿತಗೊಳಿಸುವುದು. ದೆಹಲಿಯಲ್ಲಿ ಸಾರ್ವಜನಿಕ ಸಾರಿಗೆಯನ್ನು ಬಲಪಡಿಸುವುದು, ಮತ್ತು ಎಲೆಕ್ಟ್ರಿಕ್ ಬಸ್‌ಗಳನ್ನು ಹೆಚ್ಚಿಸುವುದು, ಮೆಟ್ರೋ ಸೇವೆಗಳ ಆಪರೇಷನ್ ಫ್ರೀಕ್ವೆನ್ಸಿಯನ್ನು ಹೆಚ್ಚಿಸುವುದು, ಖಾಸಗಿ ವಾಹನಗಳನ್ನು ತಡೆಯಲು ಪಾರ್ಕಿಂಗ್ ಶುಲ್ಕಗಳನ್ನು ಹೆಚ್ಚಿಸಲಾಗುವುದು.

ದೀಪಗಳನ್ನು ಬೆಳಗಿಸುವ ಮೂಲಕ, ರಂಗೋಲಿ ಬಿಡಿಸುವ ಮೂಲಕ ಮತ್ತು ಸಿಹಿತಿಂಡಿಗಳನ್ನು ಹಂಚಿಕೊಳ್ಳುವ ಮೂಲಕ ಸಾಂಪ್ರದಾಯಿಕ ರೀತಿಯಲ್ಲಿ ಬೆಳಕಿನ ಹಬ್ಬವನ್ನು ಆಚರಿಸಲು ಜನರಿಗೆ ಅವರು ಕರೆ ನೀಡಿದ್ದಾರೆ.

## 2029ರ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸುತ್ತೇನೆ, ಆದರೆ ಝಾನ್ಸಿಯಿಂದ ಮಾತ್ರ

**ಭೋಪಾಲ್:** ಪಕ್ಷದ ನಾಯಕರು ಹೇಳಿದರೆ 2029 ರ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸುವುದಾಗಿ ನಾರಿ ಬಂಕಿ ಚೆಂಡು,ಬಿಜೆಪಿಯ ಹಿರಿಯ ನಾಯಕಿ ಉಮಾ ಭಾರತಿ ಹೇಳಿದ್ದಾರೆ. ಉತ್ತರ ಪ್ರದೇಶದ ಝಾನ್ಸಿ ಕ್ಷೇತ್ರದಿಂದ ಮಾತ್ರ ಎಂದು ಷರತ್ತು ಮುಂದಿಟ್ಟಿದ್ದಾರೆ. ಮಧ್ಯಪ್ರದೇಶದ ಮಾಜಿ ಸಿಎಂ ಬಿಜೆಪಿ ಕೇಂದ್ರ ಮತ್ತು ಸಂಸದೀಯ ನಾಯಕರಿಗೆ ಈ ಕುರಿತು ಮನವರಿಕೆ ಮಾಡಿದ್ದಾರೆ. ಪಕ್ಷ ಕೇಳಿದರೆ, ನಾನು ಖಂಡಿತವಾಗಿಯೂ 2029 ರ ಚುನಾವಣೆಯಲ್ಲಿ ಸ್ಪರ್ಧಿಸುತ್ತೇನೆ, ಆದರೆ ಝಾನ್ಸಿ ಲೋಕಸಭಾ ಸ್ಥಾನದಿಂದ ಮಾತ್ರ ಎಂದು ಈಗಾಗಲೆ ಲಲಿತಪುರದಲ್ಲಿ ಮಾಧ್ಯಮ ಸ್ನೇಹಿತರಿಗೆ ಹೇಳಿದ್ದೇನೆ ಎಂದು ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಸಂವಾದದ ಸಂದರ್ಭದಲ್ಲಿ, ಝಾನ್ಸಿ ಸೇರಿರುವ ಬುಂದೇಲ್‌ಖಂಡ್‌ತನ್ನ ಭಾವನಾತ್ಮಕ ನಾನು ಜನರೊಂದಿಗೆ ಆಳವಾದ ಬಾಂಧವ್ಯವನ್ನು



ಹಂಚಿಕೊಳ್ಳುತ್ತೇನೆ. ಪಕ್ಷ ಕೇಳಿದರೆ, ಖಂಡಿತವಾಗಿಯೂ ಮತ್ತೆ ಚುನಾವಣೆಯಲ್ಲಿ ಸ್ಪರ್ಧಿಸುತ್ತೇನೆ ಎಂದು ತಿಳಿಸಿದ್ದರು. 2014ರ ಲೋಕಸಭಾ ಚುನಾವಣೆಯಲ್ಲಿ ಝಾನ್ಸಿ ಕ್ಷೇತ್ರದಿಂದ ಗೆದ್ದ ಭಾರತಿ, ಈ ವರ್ಷದ ಆಗಸ್ಟ್‌ನಲ್ಲಿ ತಾನು ರಾಜಕೀಯದಿಂದ ದೂರವಿಲ್ಲ ಮತ್ತು ಸೂಕ್ತ ಸಮಯದಲ್ಲಿ ಚುನಾವಣಾ ಕ್ಷೇತ್ರಕ್ಕೆ ಮರಳುತ್ತೇನೆ ಎಂದು ಹೇಳಿದರು. ಕಳೆದ ಮೂರು ಲೋಕಸಭಾ ಚುನಾವಣೆಗಳಲ್ಲಿ ಬಿಜೆಪಿ ಝಾನ್ಸಿ ಸ್ಥಾನವನ್ನು ಗೆದ್ದಿದೆ. ಈ ಕ್ಷೇತ್ರವನ್ನು ಪ್ರಸ್ತುತ ಬಿಜೆಪಿಯ ಅನುರಾಗ್ ಶರ್ಮಾ ಪ್ರತಿನಿಧಿಸುತ್ತಿದ್ದಾರೆ, ಅವರು ಸಂಸತ್ ಸದಸ್ಯರಾಗಿ ಎರಡನೇ ಅವಧಿಗೆ ಸೇವೆ ಸಲ್ಲಿಸುತ್ತಿದ್ದಾರೆ.

# ಆರ್‌ಜೆಡಿ-ಕಾಂಗ್ರೆಸ್ ಕಾಲೆಳೆದ ಚಿರಾಗ್ ಪಾಸ್ವಾನ್

● ಬಿಹಾರ ವಿಧಾನಸಭೆ ಚುನಾವಣೆಗಾಗಿ ಮಹಾಘಟಬಂಧನ್ ಸೀಟು ಹಂಚಿಕೆ ಗೊಂದಲ

**ಪಾಟ್ನಾ:** ಬಿಹಾರ ವಿಧಾನಸಭೆ ಚುನಾವಣೆಗೆ ಮಹಾಘಟಬಂಧನ್ ಸೀಟು ಹಂಚಿಕೆ ಕಗ್ಗಂಟು ಈಗಲೂ ಮುಂದುವರೆದಿದೆ. ಚುನಾವಣೆ ಘೋಷಣೆಯಾಗಿ, ಮೊದಲ ಹಂತದ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಮುಗಿದರೂ, ವಿಪಕ್ಷ ಮೈತ್ರಿಕೂಟ ತನ್ನ ಸೀಟು ಹಂಚಿಕೆಯ ಸ್ಪಷ್ಟ ಯೋಜನೆಯನ್ನು ಜನರ ಮುಂದಿಟ್ಟಿಲ್ಲ.

ಮಹಾಘಟ ಬಂಧನ್ ಮೈತ್ರಿಯ ಪ್ರಮುಖ ಪಾಲುದಾರ ಪಕ್ಷಗಳಾದ ಆರ್‌ಜೆಡಿ ಮತ್ತು ಕಾಂಗ್ರೆಸ್ ನಡುವೆ ಸೀಟು ಹಂಚಿಕೆ ವಿಚಾರದಲ್ಲಿ ಒಮ್ಮತ ಮೂಡುತ್ತಿಲ್ಲ ಎಂದು ಹೇಳಲಾಗುತ್ತಿದೆ. ಅಲ್ಲದೇ ಆರ್‌ಜೆಡಿ ಪಕ್ಷವು ಕಾಂಗ್ರೆಸ್ ವಿರೋಧದ ಹೊರತಾಗಿಯೂ 143 ಕ್ಷೇತ್ರಗಳಿಗೆ ತನ್ನ ಅಭ್ಯರ್ಥಿಗಳನ್ನು ಘೋಷಿಸಿದೆ.

ತನ್ನ ಈ ನಡೆಯನ್ನು ಸಮರ್ಥಿಸಿಕೊಂಡಿರುವ ಆರ್‌ಜೆಡಿ, ನಾವು ಕೆಲವು ಕ್ಷೇತ್ರಗಳಲ್ಲಿ ಫ್ರೆಂಡ್ಲಿ ಫೈಟ್ ನಡಸುತ್ತೇವೆ ಎಂದು ಹೇಳಿದೆ. ಆರ್‌ಜೆಡಿಯ ಈ ಹೇಳಿಕೆಗೆ ಕುಹುಕವಾಡಿರುವ ಲೋಕ ಜನಶಕ್ತಿ ಪಕ್ಷ (ರಾಮ್ ವಿಲಾಸ್)ದ ಮುಖ್ಯಸ್ಥ ಚಿರಾಗ್ ಪಾಸ್ವಾನ್, ರಾಜಕಾರಣದಲ್ಲಿ ಫ್ರೆಂಡ್ಲಿ ಫೈಟ್ ಇರುವುದಿಲ್ಲ ಎಂದು ಹೇಳಿದ್ದಾರೆ.

ಬಿಹಾರದಲ್ಲಿ ವಿರೋಧ ಪಕ್ಷದ ಮಹಾಮೈತ್ರಿಕೂಟವನ್ನು ಟೀಕಿಸಿರುವ ಕೇಂದ್ರ ಸಚಿವ ಚಿರಾಗ್ ಪಾಸ್ವಾನ್, ರಾಜಕೀಯದಲ್ಲಿ ಫ್ರೆಂಡ್ಲಿ ಫೈಟ್ ಎಂಬುದು ಇರುವುದಿಲ್ಲ. ಅಲ್ಲೇನಿದ್ದರೂ ಗೆಲುವಿಗಾಗಿ ತೀವ್ರ ಹೋರಾಟ ನಡೆಯುತ್ತದೆ. ಮಹಾಘಟಬಂಧನ್ ಮೈತ್ರಿಕೂಟವು ತನ್ನ ಸೀಟು ಹಂಚಿಕೆ ವಿವಾದದಿಂದ ಹೊರಬರಲಾರದೇ, ಅನೇಕ ಕ್ಷೇತ್ರಗಳಲ್ಲಿ ಎನ್‌ಡಿಎಗೆ ಸುಲಭ ಗೆಲುವನ್ನು ಖಾತರಿಪಡಿಸಿದೆ ಎಂದು ಚಿರಾಗ್ ಪಾಸ್ವಾನ್ ವಿಪಕ್ಷ ಮೈತ್ರಿಕೂಟದ ಕಾಲೆಳೆದಿದ್ದಾರೆ. ಇಷ್ಟು ದೊಡ್ಡ ಮೈತ್ರಿಕೂಟ ವಿಭಜನೆಯ ಅಂಚಿನಲ್ಲಿರುವ ಚುನಾವಣೆಯನ್ನು ನಾನು ಎಂದಿಗೂ ನೋಡಿಲ್ಲ. ಸ್ಥಾನಗಳ ಆಯ್ಕೆಯ ಬಗ್ಗೆ ವಿವಾದ ಇರುವುದನ್ನು ಒಪ್ಪಿಕೊಳ್ಳಬಹುದು. ಆದರೆ ಮಹಾಘಟಬಂಧನ್ ಮೈತ್ರಿಕೂಟಕ್ಕೆ ಇದುವರೆಗೂ ಸ್ಥಾನಗಳ ಸಂಖ್ಯೆಯನ್ನು ನಿರ್ಧರಿಸಲು ಸಹ ಸಾಧ್ಯವಾಗಿಲ್ಲ ಎನ್ನುವುದು ಹಾಸ್ಯಾಸ್ಪದ ಎಂದು ಚಿರಾಗ್ ಪಾಸ್ವಾನ್ ವ್ಯಂಗ್ಯವಾಡಿದರು. ಬಿಹಾರ ವಿಧಾನಸಭೆ ಚುನಾವಣೆಯಲ್ಲಿ ಮಹಾಘಟಬಂಧನ್ ಗೆಲ್ಲುವ ಛಲ ತೋರುತ್ತಿಲ್ಲ ಎಂಬ ಅವರ ಹೇಳಿಕೆ ಚರ್ಚೆಗೆ ಗ್ರಾಸವಾಗಿದೆ.

**ಫ್ರೆಂಡ್ಲಿ ಫೈಟ್ ಅಂದ್ರೆ ಏನು ಸ್ವಾಮಿ?**





ಆರ್‌ಜೆಡಿ ಒಟ್ಟು 143 ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಘೋಷಿಸಿದೆ. ಈ ಪೈಕಿ ನಾಲ್ಕು ಕ್ಷೇತ್ರಗಳಿಗೆ ಈಗಾಗಲೇ ಕಾಂಗ್ರೆಸ್ ತನ್ನ ಅಭ್ಯರ್ಥಿಗಳನ್ನು ಘೋಷಿಸಿದೆ. ಇದು ಮೈತ್ರಿಕೂಟದಲ್ಲಿ ಗೊಂದಲಕ್ಕೆ ಕಾರಣವಾಗಿದ್ದು, ಆಡಳಿತಾರೂಢ ಎನ್‌ಡಿಎ ಈ ಅವಕಾಶವನ್ನು ಚೆನ್ನಾಗಿ ಬಳಸಿಕೊಳ್ಳುತ್ತಿದೆ.

243 ಸದಸ್ಯ ಬಲದ ಬಿಹಾರ ವಿಧಾನಸಭೆಗೆ ನವೆಂಬರ್ 6 ಮತ್ತು 11 ರಂದು ಚುನಾವಣೆ ನಡೆಯಲಿದ್ದು, ಎರಡನೇ ಹಂತದ ಮತದಾನಕ್ಕೆ (ಅ.20 -ಸೋಮವಾರ) ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದೆ. ಮಹಾಘಟಬಂಧನ್ ಮಿತ್ರಪಕ್ಷಗಳು ಹಲವಾರು ಸ್ಥಾನಗಳ ಕುರಿತು ಒಪ್ಪಂದಕ್ಕೆ ಬರಲು ವಿಫಲವಾದ ಕಾರಣ, ಈ ಕ್ಷೇತ್ರಗಳಲ್ಲಿ ಅವರು ಪರಸ್ಪರ ಸ್ಪರ್ಧಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಇಂತಹ ಹೋರಾಟಗಳು ವಿರೋಧ ಪಕ್ಷದ ಮತಗಳ ವಿಭಜನೆಗೆ ಕಾರಣವಾಗಬಹುದು ಎನ್‌ಡಿಎ ಅಭ್ಯರ್ಥಿಗಳಿಗೆ ಪ್ರಯೋಜನವನ್ನು ನೀಡಬಹುದು.

ಆರ್‌ಜೆಡಿ 143 ಅಭ್ಯರ್ಥಿಗಳ ಪಟ್ಟಿ ಬಿಡುಗಡೆ ಮಾಡುವುದರ ಮೂಲಕ, ಮಹಾಘಟಬಂಧನ್‌ನ ಸೀಟು ಹಂಚಿಕೆ ಸೂತ್ರವು ಆರ್‌ಜೆಡಿ (143), ಕಾಂಗ್ರೆಸ್ (55), ಸಿಪಿಐಎಂಎಲ್ (20), ಸಿಪಿಐ (6), ಸಿಪಿಎಂ (4) ಮತ್ತು ವಿಐಪಿ (15) ಆಗಿದೆ. ಕುತೂಹಲಕಾರಿಯಾಗಿ, ಕಾಂಗ್ರೆಸ್ ಈಗಾಗಲೇ 60 ಸ್ಥಾನಗಳಿಗೆ ಅಭ್ಯರ್ಥಿಗಳನ್ನು ಘೋಷಿಸಿದೆ.

- **ಬಿಹಾರ ವಿಧಾನಸಭೆ ಚುನಾವಣೆಗಾಗಿ ಮಹಾಘಟಬಂಧನ್ ಸೀಟು ಹಂಚಿಕೆ ಗೊಂದಲ.**
- **ನಾಲ್ಕು ಕ್ಷೇತ್ರಗಳಲ್ಲಿ ಫ್ರೆಂಡ್ಲಿ ಫೈಟ್‌ಗೆ ಸಿದ್ಧ ಎಂದ ಆರ್‌ಜೆಡಿ-ಕಾಂಗ್ರೆಸ್.**
- **ಬಿಹಾರ ರಾಜಕಾರಣದಲ್ಲಿ ಫ್ರೆಂಡ್ಲಿ ಫೈಟ್‌ಗೆ ಜಾಗವಿಲ್ಲ ಎಂದು ಕಾಲೆಳೆದ ಚಿರಾಗ್ ಪಾಸ್ವಾನ್.**

## ಮಿನಿ ನ್ಯೂಸ್

### ಎಸ್‌ಡಿಪಿಐ-ಸಿಪಿಐ ನಡುವೆ ಘರ್ಷಣೆ

**ತಿರುವನಂತಪುರಂ:** ಕೇರಳದ ನೆಡುಮಂಗಾಡ್‌ನಲ್ಲಿ ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ ಮತ್ತು ಸಿಪಿಐ(ಎಂ) ಕಾರ್ಯಕರ್ತರ ನಡುವಿನ ಘರ್ಷಣೆ ನಡೆದು ಆ್ಯಂಬ್ಯುಲೆನ್ಸ್‌ಗೆ ಬೆಂಕಿ ಹಚ್ಚಲಾಗಿದೆ. ನೆಡುಮಂಗಾಡ್ ಪೊಲೀಸರ ಪ್ರಕಾರ, ಸ್ಥಳೀಯ ಸಿಪಿಐ(ಎಂ) ನಾಯಕನ ಮೇಲೆ ನಿನ್ನೆ ಸಂಜೆ ಎಸ್‌ಡಿಪಿಐ ಕಾರ್ಯಕರ್ತರು ದಾಳಿ ನಡೆಸಿದ್ದರು. ಹೀಗಾಗಿ ಅಪರಿಚಿತ ವ್ಯಕ್ತಿಗಳು ಎಸ್‌ಡಿಪಿಐ ಕಾರ್ಯಕರ್ತರ ಮನೆಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿದ್ದಾರೆ ಎನ್ನಲಾಗಿದೆ. ಮುಖವಾಡ ಧರಿಸಿದ ವ್ಯಕ್ತಿಗಳು ತಡರಾತ್ರಿ ಆಂಬ್ಯುಲೆನ್ಸ್ ಮತ್ತು ಎಸ್‌ಡಿಪಿಐ ಕಾರ್ಯಕರ್ತನ ಒಡೆತನದ ಕಾರಿಗೆ ಹಾನಿ ಮಾಡಿರುವುದು ಕಂಡುಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಸಂದೇಹವಾದ ಪ್ರತೀಕಾರದ ಕ್ರಮದಲ್ಲಿ, ಸರ್ಕಾರಿ ಆಸ್ಪತ್ರೆಯ ಬಳಿ ನಿಲ್ಲಿಸಲಾಗಿದ್ದ ಸಿಪಿಐ(ಎಂ) ಯುವ ಘಟಕವಾದ ಡೆಮಾಕ್ರಟಿಕ್ ಯೂತ್ ಫೆಡರೇಶನ್ ಆಫ್ ಇಂಡಿಯಾ (ಡಿವೈಎಫ್‌ಐ) ನಡೆಸುತ್ತಿದ್ದ ಆಂಬ್ಯುಲೆನ್ಸ್ಗೆ ಇಂದು ಮುಂಜಾನೆ ಬೆಂಕಿ ಹಚ್ಚಲಾಗಿದೆ.

ಈ ದಾಳಿಗಳು ಹಿಂದಿನ ಘರ್ಷಣೆಯ ಪರಿಣಾಮವೇ ಎಂದು ಖಚಿತಪಡಿಸಿಕೊಳ್ಳಲು ಮತ್ತು ಭಾಗಿಯಾಗಿರುವವರನ್ನು ಗುರುತಿಸಲು ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

### ಬಿಜೆಪಿ ಸಂಸದನ ಮೇಲೆ ದಾಳಿ ಯತ್ನ

**ಕೋಲ್ಕತ್ತಾ:** ಪಶ್ಚಿಮ ಬಂಗಾಳದಲ್ಲಿ ಮತ್ತೊಬ್ಬ ಬಿಜೆಪಿ ಸಂಸದರ ಮೇಲೆ ದಾಳಿ ಯತ್ನ ನಡೆದಿದೆ. ಬಿಜೆಪಿ ಸಂಸದ ರಾಜು ಬಿಸ್ತಾ ಅವರು ಡಾರ್ಜಿಲಿಂಗ್‌ನ ಮಸ್ಗುರಾ ಪ್ರದೇಶದ ಮೂಲಕ ಹಾದುಹೋಗುವಾಗ ತಮ್ಮ ಬೆಂಗಾವಲು ಪಡೆಯ ಮೇಲೆ ದಾಳಿ ನಡೆಸಲಾಗಿದೆ ಎಂದು ಹೇಳಿಕೊಂಡಿದ್ದು, ಪೊಲೀಸರು ತನಿಖೆ ಆರಂಭಿಸಿದ್ದಾರೆ.

ಈ ಸಂಬಂಧ ಬಿಜೆಪಿ ಜೋರೆಬಂಗ್ಲೋ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಇಂದು ಸುಖಿಯಾ ಪೋಖಾರಿ ಬಳಿಯ ಮಸ್ಗುರಾದಲ್ಲಿ,

ನನ್ನ ಬೆಂಗಾವಲು ಪಡೆಯ ಮೇಲೆ ಅಪರಿಚಿತ ದುಷ್ಕರ್ಮಿಗಳು ದಾಳಿ ನಡೆಸಿದ್ದಾರೆ. ಆ ಹೇಡಿಗಳು ನನ್ನ ಮೇಲೆ ದಾಳಿ ಮಾಡಿದ್ದರೂ, ದಾಳಿಯ ಬಲವು ನನ್ನ ಹಿಂದಿನ ವಾಹನದ ಮೇಲೆ ಬಿದ್ದಿತು ಎಂದಿದ್ದಾರೆ.

ಕೋಲ್ಕತ್ತಾಗೆ ನಿಷ್ಠರಾಗಿರುವವರು ಇಂತಹ ದಾಳಿಗಳಿಂದ ನಾವು ಭಯಭೀತರಾಗುತ್ತೇವೆ ಎಂದು ಭಾವಿಸಿದರೆ, ಅದು ತಪ್ಪು. ನಾವು ಹೆದರುವುದಿಲ್ಲ ಮತ್ತು ಅಂತಹ ಹೇಡಿತನದ ದಾಳಿಗಳು ನಮ್ಮ ಉತ್ಸಾಹವನ್ನು ಹೆಚ್ಚಿಸುತ್ತವೆ ಎಂದು ಅವರು ಹೇಳಿದರು. ಬಿಸ್ತಾ ಅವರ ಆಪ್ತ ಸಹಾಯಕ ಮತ್ತು ಬಿಜೆಪಿ ಕಾರ್ಯಕರ್ತ ಸಂಜೀವ್ ಲಾಮಾ ಕುಳಿತಿದ್ದ ವಾಹನಕ್ಕೆ ಕಲ್ಲು ತಗುಲಿದ ಘಟನೆ ನಡೆದಿದೆ ಎಂದು ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ.

### ರನ್‌ವೇಯಿಂದ ಸಮುದ್ರಕ್ಕೆ ಜಾರಿದ ಸರಕು ವಿಮಾನ, ಇಬ್ಬರು ಸಾವು

**ಹಾಂಗ್ ಕಾಂಗ್:** ಸರಕು ವಿಮಾನವೊಂದು ಹಾಂಗ್ ಕಾಂಗ್‌ನ ವಿಮಾನ ನಿಲ್ದಾಣದಲ್ಲಿ ಇಂದು ಮುಂಜಾನೆ ಇಳಿಯುವಾಗ ರನ್‌ವೇಯಿಂದ ಜಾರಿ ಸಮುದ್ರಕ್ಕೆ ಬಿದ್ದು ಇಬ್ಬರು ಸಾವನ್ನಪ್ಪಿದ್ದಾರೆ. ಯುನೈಟೆಡ್ ಅರಬ್ ಎಮಿರೇಟ್ಸ್‌ನ ದುಬೈನಿಂದ ಆಗಮಿಸುತ್ತಿದ್ದ ವಿಮಾನವು ಬೆಳಗಿನ ಜಾವ 3.50 ರ ಸುಮಾರಿಗೆ ಹಾಂಗ್ ಕಾಂಗ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಇಳಿಯುತ್ತಿದ್ದಾಗ ಈ ಘಟನೆ ನಡೆದಿದೆ ಎಂದು ಹಾಂಗ್ ಕಾಂಗ್ ವಿಮಾನ ನಿಲ್ದಾಣ ಪ್ರಾಧಿಕಾರಸ ಅಧಿಕಾರಿ ತಿಳಿಸಿದ್ದಾರೆ.

ವಿಮಾನದಲ್ಲಿದ್ದ ನಾಲ್ವರು ಸಿಬ್ಬಂದಿಯನ್ನು ರಕ್ಷಿಸಿ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆದರೆ ವಿಮಾನ ನಿಲ್ದಾಣದಲ್ಲಿ ವಾಹನದಲ್ಲಿದ್ದ ಇಬ್ಬರು ಸಾವನ್ನಪ್ಪಿದ್ದಾರೆ ಎಂದು ಪೊಲೀಸರ ಆರಂಭಿಕ ವರದಿಗಳು ತಿಳಿಸಿವೆ. ಏಷ್ಯಾದ ಅತ್ಯಂತ ಜನನಿಬಿಡಿಯಲ್ಲಿ ಒಂದಾದ ಹಾಂಗ್ ಕಾಂಗ್ ವಿಮಾನ ನಿಲ್ದಾಣದ ಉತ್ತರ ರನ್‌ವೇಯನ್ನು ಪ್ರಸ್ತುತ ಮುಚ್ಚಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆದರೆ ವಿಮಾನ ನಿಲ್ದಾಣದಲ್ಲಿ ಇತರ ಎರಡು ರನ್‌ವೇಗಳು ಕಾರ್ಯನಿರ್ವಹಿಸುತ್ತಲೇ ಇವೆ.

ಬೋಯಿಂಗ್ 747 ಸರಕು ವಿಮಾನವು ಟರ್ಕಿಶ್ ಏರ್ ಕಾರ್ಗೋ ವಾಹಕ ಏರ್‌ಎಸಿಟಿ ವಿಮಾನವಾಗಿದ್ದು, ಎಮಿರೇಟ್ಸ್ ಸ್ಕೈಕಾರ್ಗೋಗೆ ಹಾರಾಟ ನಡೆಸುತ್ತಿದ್ದು, ವಿಮಾನ ಸಂಖ್ಯೆ 9788. ಇದು ಅಲ್ ಮಕ್ತೌಮ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಹಾರಾಟ ನಡೆಸುತ್ತಿತ್ತು ಎಂದು ಗೊತ್ತಾಗಿದೆ. ಹಾಂಗ್ ಕಾಂಗ್‌ನ ನಾಗರಿಕ ವಿಮಾನಯಾನ ಇಲಾಖೆಯು ವಿಮಾನಯಾನ ಸಂಸ್ಥೆ ಮತ್ತು ಅಪಘಾತದಲ್ಲಿ ಭಾಗಿಯಾಗಿರುವ ಇತರರ ವಿರುದ್ಧ ಮುಂದಿನ ಕ್ರಮ ಕೈಗೊಳ್ಳುವುದಾಗಿ ಹೇಳಿಕೆಯಲ್ಲಿ ತಿಳಿಸಿದೆ.


### 54 ವರ್ಷಗಳ ನಂತರ ತೆರೆದ ಮಥುರಾ ದೇಗುಲದ ಖಜಾನೆ

**ಮಥುರಾ:** ನಾವು ಕಳೆದ ಕೆಲವು ವರ್ಷಗಳ ಹಿಂದೆ, ಅಂದರೆ, 2011ರಲ್ಲಿ ಕೇರಳದ ತಿರುವನಂತಪುರದ ಅನಂತಪದ್ಮನಾಭ ದೇವಸ್ಥಾನದ ಕೆಳಗಡೆ ಇರುವ ಗುಪ್ತ ಕೋಣೆಗಳನ್ನು ತೆರೆಯುವಂತೆ ನ್ಯಾಯಾಲಯ ಆದೇಶಿಸಿದ್ದನ್ನು ಇಲ್ಲಿ ಸ್ಮರಿಸಬಹುದು. ಅಲ್ಲಿ ಜಗತ್ತಿನ ಯಾವುದೇ ದೇವಾಲಯ ಅಥವಾ ಪ್ರಾರ್ಥನಾ ಸ್ಥಳಗಳಲ್ಲಿ ಇಲ್ಲದಂಥ ಬೆಲೆಕಟ್ಟಲಾಗದ ವಜ್ರ, ವೈಢೂರ್ಯಗಳು, ಅಮೂಲ್ಯವಾದ ರತ್ನಗಳ ಬಂಢಾರವೇ ಇದೆ ಎಂದು ಹೇಳಲಾಗಿದೆ. ಈಗ, ಉತ್ತರ ಪ್ರದೇಶದ ಬಂಕಿ ಬಿಹಾರಿ ದೇವಾಲಯದ ಸರದಿ. ಈ ದೇವಾಲಯದ ಸಂಪತ್ತಿನ ಕೋಶಗಳನ್ನು 54 ವರ್ಷಗಳ ನಂತರ ತೆರೆಯುವಂತೆ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಗಳ ತ್ರಿಸದಸ್ಯ ಪೀಠ ಆದೇಶಿಸಿದೆ. ಅದರಂತೆ ಇದೇ ದಾಂತೇರಸ್ ದಿನದಂದು ಆ ಕೋಶಗಳನ್ನು ತೆರೆಯುವಂತೆ ಆದೇಶಿಸಲಾಗಿದೆ.

**ಏನಿತ್ತು ಅಲ್ಲಿ?:** ದೇವಸ್ಥಾನದ ಅರ್ಚಕರಾದ ದಿನೇಶ್ ಗೋಸ್ವಾಮಿ, ಒಂದು ಚಿನ್ನದ ಬಿಸ್ಕತ್, ಮೂರು ಬೆಳ್ಳಿ ಬಿಸ್ತತ್ತು ಸಿಕ್ಕಿದೆ. ತೋಷಖಾನಾದಲ್ಲಿ ಇಡಲಾಗಿದ್ದ ದೊಡ್ಡದಾದ ಪೆಟ್ಟಿಗೆಯಿಂದ ಇದು ಸಿಕ್ಕಿದೆ. ಪ್ರತಿಯೊಂದು ಚಿನ್ನ ಹಾಗೂ ಬೆಳ್ಳಿಯ ಬಿಸ್ಕತ್ತು 3ರಿಂದ 4 ಅಡಿ ಉದ್ದವಿದೆ. ಇದಲ್ಲದೆ, ಕೆಂಪು, ಹಸಿರು ಬಣ್ಣದ ಪಚ್ಚೆ- ವೈಢೂರ್ಯ, ಅಮೂಲ್ಯವಾದ ಕಾಣಿಕೆಗಳು, ವಿಭಿನ್ನವಾದ ಲೋಹಗಳನ್ನು ಪಡೆಯಲಾಗಿದೆ ಎಂದು ಹೇಳಿದ್ದಾರೆ.

ಶನಿವಾರ ನಡೆದ ಪರಿಶೀಲನೆಯ ಮೊದಲ ದಿನದಂದು, ಕೇವಲ ಕೆಲವು ಹಿತ್ತಾಳೆ ಪಾತ್ರೆಗಳು ಮತ್ತು ಕೆಲವು ಮರದ ವಸ್ತುಗಳು ಮಾತ್ರ ಪತ್ತೆಯಾಗಿವೆ. ಈ ಸಂಪತ್ತಿನ ಕೋಶಗಳು, ಕೊನೆಯದಾಗಿ 1971 ರಲ್ಲಿ ಆಭರಣಗಳನ್ನು ಬ್ಯಾಂಕ್ ಲಾಕರ್‌ಗೆ ಸ್ಥಳಾಂತರಿಸಲು ತೆರೆಯಲಾಗಿತ್ತು. ಇದು ನವಿಲಿನ ಆಕಾರದ ಪಚ್ಚೆಹಾರ, ಬೆಳ್ಳಿ ಶೇಷನಾಗ, ನವರತ್ನಗಳಿರುವ ಬಂಗಾರದ ಕಲಶ, ಭರತ್‌ಪುರ, ಕರೌಲಿ ಮತ್ತು ಗ್ವಾಲಿಯರ್‌ನಿಂದ ಬಂದ ರಾಜಮನೆತನದ ಕಾಣಿಕೆಗಳು, ಹಳೆಯ ಭೂ ದಾಖಲೆಗಳು, ಮೊಹರು ಮಾಡಿದ ಪತ್ರಗಳು ಮತ್ತು 19ನೇ ಶತಮಾನದ ದೇವಾಲಯದ ಉಡುಗೊರೆಗಳನ್ನು ಒಳಗೊಂಡಿರುವ ಅಪರೂಪದ ನಿಧಿಗಳನ್ನು ಹೊಂದಿದೆ ಎಂದು ಹೇಳಲಾಗಿದೆ. 1864 ರಲ್ಲಿ ನಿರ್ಮಿಸಲಾದ ಈ ಖಜಾನೆಯು ಸುದೀರ್ಘ ಇತಿಹಾಸವನ್ನು ಹೊಂದಿದೆ.

## ಕಾಂತಾರ ಚಾಪ್ಟರ್ 1 8 ದಿನಕ್ಕೆ 765 ಕೋಟಿ ಕಲೆಕ್ಷನ್




**ಬಹುಭಾಷೆಯಲ್ಲಿ ಏಕಕಾಲಕ್ಕೆ ತೆರೆಗೆ**

ಕಾಂತಾರ ಚಾಪ್ಟರ್-1 ಅಕ್ಟೋಬರ್ 2ರಂದು ವಿಶ್ವದಾದ್ಯಂತ ತೆರೆಕಂಡು ಭರ್ಜರಿ ರೆಸ್ಪಾನ್ಸ್ ಪಡೆದುಕೊಂಡಿದೆ. ಕೇವಲ ಪ್ರಾದೇಶಿಕವಾಗಿ ಅಲ್ಲದೇ ಪ್ರಪಂಚ ತುಂಬ ಮೆಚ್ಚುಗೆಯ ಮಹಾಪೂರ ಹರಿದು ಬಂದಿದೆ.

ಸಿನಿಮಾ ನೋಡಿ ತಮ್ಮ ಅಭಿಪ್ರಾಯ ಹಂಚಿಕೊಂಡಿದೆ ಅಭಿಮಾನಿ ವರ್ಗ. ಬಹುಭಾಷೆಯಲ್ಲಿ ಏಕಕಾಲಕ್ಕೆ ತೆರೆಕಂಡ ಕಾಂತಾರ ಚಾಪ್ಟರ್-1 ಸಿನಿಮಾಗೆ ಅಭೂತಪೂರ್ವ ಪ್ರತಿಕ್ರಿಯೆ ಸಿಕ್ಕಿದೆ. ಮೂರನೇ ವಾರದಲ್ಲೂ ಕಾಂತಾರ ಸಿನಿಮಾದ ಗಳಿಕೆ ಕುಗ್ಗಿಲ್ಲ. ಸಾಲು ಸಾಲು ರಜಾ ದಿನಗಳ ಜೊತೆ ಹಬ್ಬ ಇರುವ ಕಾರಣ ಚಿತ್ರ ನೋಡಲು ಥಿಯೇಟರ್‌ಗೆ ಜನ ಬರುತ್ತಿದ್ದಾರೆ. 800 ಕೋಟಿ ರೂ. ಸನಿಹದಲ್ಲಿರುವ ಕಾಂತಾರ 18 ದಿನಗಳಲ್ಲಿ ವಿಶ್ವದಾದ್ಯಂತ 765 ಕೋಟಿ ರೂ. ಗಳಿಕೆ ಮಾಡಿದೆ. ಕಾಂತಾರ ಚಾಪ್ಟರ್-1 ಸಿನಿಮಾಗೆ ಪ್ರೇಕ್ಷಕರು ನೀಡಿದ ಅಭೂತಪೂರ್ವ ಯಶಸ್ಸಿನ ಬೆನ್ನಲ್ಲೇ ಚಿತ್ರತಂಡ ತೀರ್ಥಯಾತ್ರೆ ಕೈಗೊಂಡಿದೆ. ರಿಷಬ್ ಶೆಟ್ಟಿ ಉತ್ತರ ಧ್ರುವದಿಂದ ದಕ್ಷಿಣ ಧ್ರುವಕ್ಕೂ ಎಲ್ಲಾ ದೇವಾಲಯಗಳಿಗೆ ಭೇಟಿ ದೇವರ ಆಶೀರ್ವಾದ ಪಡೆಯುತ್ತಿದ್ದಾರೆ. ಯಶಸ್ಸಿಗೆ ಕಾರಣವಾದ ದೇವರ ಹರಕೆ ತೀರಿಸುತ್ತಿದ್ದಾರೆ. ಜೊತೆಗೆ ಜನರಿಗೆ ಈ ಮೂಲಕ ಧನ್ಯವಾದಗಳನ್ನ ತಿಳಿಸಿದೆ ಚಿತ್ರತಂಡ.



## ದರ್ಶನ್ ಪಾಲಿಗೆ ಬೆಳಕಿಲ್ಲದ ದೀಪಾವಳಿ



ರೇಣುಕಾಸ್ವಾಮಿ ಕೊಲೆ ಕೇಸಲ್ಲಿ ಜೈಲು ಪಾಲಾಗಿರೊ ನಟ ದರ್ಶನ್‌ಗೆ ಈ ಬಾರಿ ಬೆಳಕಿಲ್ಲದದೀಪಾವಳಿಯಾಗಿದೆ. ಇತ್ತ ಬೆನ್ನು ನೋವು ಹಿನ್ನೆಲೆ ಫಿಸಿಯೋಥೆರಪಿ ನೀಡಲು ಜೈಲಿನ ವೈದ್ಯರು ಪತ್ರ ಬರೆದಿದ್ದಾರೆ. ಪ್ರತೀ ಭಾರೀ ಕುಟುಂಬದ ಜೊತೆ ದೀಪಾವಳಿ ಆಚರಣೆ ಮಾಡ್ತಿದ್ದ ನಟನಿಗೆ ಜೈಲಿನ ಕತ್ತಲು ಬೆಳಕನ್ನ ಕಸಿದಿದೆ. ರೇಣುಕಾಸ್ವಾಮಿ ಕೊಲೆಗೂ ಮುನ್ನ ದರ್ಶನ್ ಅದ್ದೂರಿ ದೀಪಾವಳಿ ಆಚರಿಸ್ತಿದ್ರು. ಈ ಬಾರಿ ದರ್ಶನ್ ಬದುಕಿನಲ್ಲಿ ಬೆಳಕಿರದ ಕತ್ತಲೆಯ ದೀಪಾವಳಿಯಾಗಿದೆ. ಕಳೆದ ಬಾರಿ ದೀಪಾವಳಿ ಟೈಂಗೆ ಬಳ್ಳಾರಿ ಜೈಲಿಂದ ರಿಲೀಸ್ ಆಗಿ ಮನೆಯಲ್ಲೇ ರೆಸ್ಟ್ ಮಾಡುವಂತಾಗಿತ್ತು. ಆದ್ರೀಗ ಮತ್ತೆ ಸೆಂಟ್ರಲ್ ಜೈಲಿನಲ್ಲಿರೋ ದರ್ಶನ್‌ಗೆ ದೀಪಾವಳಿ ಬೆಳಕನ್ನ ಕಸಿದುಕೊಂಡಿದ್ದು, ದರ್ಶನ್ ಈಗ ಸೆಲ್‌ನಲ್ಲಿ ಬೆಳಕು ನೋಡುವಂತಾಗಿದೆ. ಹಾಸಿಗೆ ದಿಂಬಿಲ್ಲ, ಕ್ವಾರಂಟೈನ್ ಸೆಲ್‌ನಲ್ಲೇ ಇರುವ ಅನಿವಾರ್ಯ ಸ್ಥಿತಿಯಲ್ಲಿದ್ದು, ಕನಿಷ್ಟ ಸೌಲಭ್ಯದ ವ್ಯವಸ್ಥೆ ಸರಿಯಿದೆ ಎಂದು ಕಾನೂನು ಸೇವಾ ಪ್ರಾಧಿಕಾರ ಕೊಟ್ಟಿರೋ ವರದಿಯಿಂದ ಬೇಸರಗೊಂಡಿದ್ದಾರೆ ಎನ್ನಲಾಗಿದೆ. ಇನ್ನೂ ಜೈಲಿನಲ್ಲಿ ದರ್ಶನ್‌ಗೆ ಈಗಾಗ್ಲೇ ಬೆನ್ನು ನೋವಿಗೆ ಹೀಟಿಂಗ್ ಬೆಲ್ಟ್ ಹಾಗೂ ಚೇರ್ ನೀಡಲಾಗಿದೆ. ಈ ನಡುವೆ ಕೇಂದ್ರ ಕಾರಾಗೃಹ ಆಸ್ಪತ್ರೆ ಮುಖ್ಯ ವೈದ್ಯರು, ಸಿ.ವಿ ರಾಮನ್ ನಗರ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕರಿಗೆ ಪತ್ರ ಬರೆದಿದ್ದಾರೆ. ಇತ್ತೀಚಿಗೆ ಜೈಲಿನಲ್ಲಿ ಬೆನ್ನುನೋವಿಗೆ ಒಳಗಾಗಿದ್ದ ನಟ ದರ್ಶನ್‌ಗೆ ಮೊದಲು ಜೈಲಿನ ವೈದ್ಯರ ತಂಡ ಚಿಕಿತ್ಸೆ ನೀಡಿತ್ತು. ಬಳಿಕ ಸಿ.ವಿ ರಾಮನ್ ಆಸ್ಪತ್ರೆ ಫಿಸಿಯೋಥೆರಪಿ ತಂಡದಿಂದ ಚಿಕಿತ್ಸೆ ನೀಡಲಾಗಿತ್ತು. ಇದೀಗ ಚಿಕಿತ್ಸೆ ಅಗತ್ಯ ಇರುವವರೆಗೂ ಕಾರಾಗೃಹಕ್ಕೆ ವೈದ್ಯರ ತಂಡ ನಿಯೋಜಿಸಲು ಹಾಗೂ ಹೀಟಿಂಗ್ ಬೆಲ್ಟ್ ನೀಡಲು ಮನವಿ ಮಾಡಲಾಗಿದೆ. ಕಾನೂನು ಸೇವಾ ಪ್ರಾಧಿಕಾರದ ವರದಿಯಲ್ಲಿ ಬೆನ್ನು ನೋವಿನ ಬಗ್ಗೆಯೂ ಉಲ್ಲೇಖವಾಗಿದ್ದು, ಚಿಕಿತ್ಸೆ ಮುಂದುವರೆಸಲಾಗಿದೆ. ಮತ್ತೊಂದೆಡೆ ದರ್ಶನ್ ಕಾನೂನಿನ ಹೋರಾಟಕ್ಕೆ ಪತ್ನಿ ವಿಜಯಲಕ್ಷ್ಮಿ ಬಿಟ್ಟು ಯಾರಿಂದಲೂ ಸಹಾಯದ ಮಾತಿಲ್ಲವಂತೆ.

## ದೇವರ ಮಕ್ಕಳ ಜೊತೆ ದೀಪಾವಳಿ ಆಚರಿಸಿದ ನಟಿ ಸಮಂತಾ



**ಅನಾರೋಗ್ಯದ ವಿರುದ್ಧ ನಿತ್ಯ ಹೋರಾಟ**

ಟಾಲಿವುಡ್ ನಟಿ ಸಮಂತಾ ರುತ್‌ಪ್ರಭು ಸಿನಿಮಾಗಳ ಜೊತೆ ಸಾಮಾಜಿಕ ಕಾರ್ಯಗಳಲ್ಲಿ ತಮ್ಮನ್ನ ತೊಡಗಿಸಿಕೊಂಡಿದ್ದಾರೆ. ತಮ್ಮ ಹುಟ್ಟುಹಬ್ಬ ಹಾಗೂ ಹಬ್ಬದ ಆಚರಣೆ ವೇಳೆ ಎನ್‌ಜಿಓಗಳಿಗೆ ಭೇಟಿ ನೀಡಿ, ಅರ್ಥಪೂರ್ಣ ಆಚರಣೆ ಮಾಡುತ್ತಾರೆ. ಇದೀಗ ದೀಪಾವಳಿ ಹಬ್ಬವನ್ನ ಅನಾಥಾಶ್ರಮದ ಮಕ್ಕಳ ಜೊತೆ ಆಚರಣೆ ಮಾಡಿ ಸಂಭ್ರಮಿಸಿದ್ದಾರೆ.


ದೇವರ ಮಕ್ಕಳ ಜೊತೆ ದೀಪಾವಳಿ ಆಚರಿಸಿರುವ ನಟಿ ಸಮಂತಾ, ಸರಳವಾಗಿ ಅನಾಥಾಶ್ರಮದಲ್ಲಿ ದೀಪ ಹಚ್ಚಿ ದೀಪಾವಳಿ ಆಚರಿಸಿದ್ದಾರೆ. ಮಕ್ಕಳ ಜೊತೆ ಕೆಲಹೊತ್ತು ಕಾಲ ಕಳೆದಿದ್ದಾರೆ. ಈ ವೇಳೆ ದೀಪಾವಳಿ ಉಡುಗೊರೆ ನೀಡಿ ಅವ್ರ ಮುಖದಲ್ಲಿ ಸಂತಸ ಮೂಡಲು ಕಾರಣರಾಗಿದ್ದಾರೆ. ವಿಚ್ಛೇದನದ ನಂತರ ಸಾಕಷ್ಟು ಸವಾಲುಗಳನ್ನ ಎದುರಿಸುತ್ತಿರುವ ಸಮಂತಾ ಈಗ ಇಂಡಿಪೆಂಡೆಂಟ್ ಉಮೆನ್. ಕಳೆದ ವರ್ಷ ತಂದೆಯನ್ನೂ ಕಳೆದುಕೊಂಡಿರುವ ಸಮಂತಾ, ಅನಾರೋಗ್ಯದ ವಿರುದ್ಧ ನಿತ್ಯ ಹೋರಾಟ ನಡೆಸಿದ್ದಾರೆ. ಸ್ಫೂರ್ತಿ ಫೌಂಡೇಶನ್, ಹ್ಯಾಪಿ ಹೋಮ್ಸ್ ಹಾಗೂ ಡಿಸೈರ್ ಸೊಸೈಟಿ ಎನ್‌ಜಿಓಗಳ ಸಹಯೋಗದಲ್ಲಿ ಕಾರ್ಯಕ್ರಮ ಆಯೋಜನೆ ಮಾಡಲಾಗಿತ್ತು. ಸಮಂತಾ ಪ್ರತಿ ವರ್ಷವೂ ಅತಿಥಿಯಾಗಿ ಬಂದು ಮಕ್ಕಳ ಜೊತೆ ದೀಪಾವಳಿ ಆಚರಣೆ ಮಾಡುತ್ತಾರೆ. ಅದರಂತೆ ಈ ವರ್ಷವೂ ಹಬ್ಬದ ಆಚರಣೆ ಮಾಡಿದ್ದಾರೆ.

## ಗಂಡು ಮಗುವಿಗೆ ಜನ್ಮ ನೀಡಿದ ನಟಿ ಪರಿಣಿತಿ ಚೋಪ್ರಾ

ನಟಿ ಪರಿಣಿತಿ ಚೋಪ್ರಾ ಮತ್ತು ರಾಜಕಾರಣಿ ರಾಘವ್ ಚಡ್ಡಾ ದಂಪತಿಗೆ ಗಂಡು ಮಗು ಜನಿಸಿದ್ದು, ರಾಘವ್ ಚಡ್ಡಾ ಈ ಸಂತೋಷದ ಸುದ್ದಿಯನ್ನು ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡಿದ್ದಾರೆ. ಅಭಿಮಾನಿಗಳಿಂದ ಮತ್ತು ಸೆಲೆಬ್ರಿಟಿಗಳಿಂದ ಶುಭಾಶಯಗಳು ಹರಿದುಬರುತ್ತಿವೆ. ದೆಹಲಿಯ ಆಸ್ಪತ್ರೆಯಲ್ಲಿ ಮಗುವಿಗೆ ಜನ್ಮ ನೀಡಿದ ಪರಿಣಿತಿ, ಹೊಸ ಜೀವನದ ಸಂತೋಷದಲ್ಲಿದ್ದಾರೆ. ಬಾಲಿವುಡ್ ನಟಿ ಪರಿಣಿತಿ ಚೋಪ್ರಾ ಮತ್ತು ರಾಜಕಾರಣಿ ರಾಘವ್ ಚಡ್ಡಾ ತಮ್ಮ ಮಗುವಿನ ಆಗಮನದ ಬಗ್ಗೆ ಪೋಸ್ಟ್ ಹಂಚಿಕೊಂಡಿದ್ದರು. ಪರಿಣಿತಿ ಪ್ರೆಗ್ನೆಂಟ್ ಎಂಬ ವಿಚಾರ ಇದರಲ್ಲಿ ಇತ್ತು. ಈಗ ಪರಿಣಿತಿ ತಾಯಿಯಾಗಿದ್ದು ಗಂಡು ಮಗುವಿಗೆ ಜನ್ಮ ನೀಡಿದ್ದಾರೆ. ರಾಘವ್ ಚಡ್ಡಾ ಸಾಮಾಜಿಕ ಮಾಧ್ಯಮದಲ್ಲಿ ಸಂತೋಷದ ಸುದ್ದಿಯನ್ನು ಹಂಚಿಕೊಂಡಿದ್ದಾರೆ. ಭಾನುವಾರ ಬೆಳಿಗ್ಗೆ ಪರಿಣಿತಿ ಅವರನ್ನು ದೆಹಲಿಯ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂಬ ಸುದ್ದಿ ಬಂದಿತ್ತು. ಇದು ಅಭಿಮಾನಿಗಳಿಗೆ ಅವರ ಆರೋಗ್ಯದ ಬಗ್ಗೆ ಚಿಂತೆ ಮೂಡಿಸಿತು. ಈಗ, ಅಂತಿಮವಾಗಿ, ಅವರ ಮನೆಗೆ ಗಂಡು ಮಗುವಿನ ಆಗಮನ ಆಗಿದೆ. ಸಾಮಾಜಿಕ ಮಾಧ್ಯಮದಲ್ಲಿ ಈ ಅಭಿಮಾನಿಗಳಿಂದ ಅಭಿನಂದನೆಗಳ ಮಹಾಪೂರವೇ ಹರಿದು ಬರುತ್ತಿದೆ. 'ಕೊನೆಗೂ, ನಮ್ಮ ಮಗ ಬಂದಿದ್ದಾನೆ. ಈ ಪುಟ್ಟ ಅತಿಥಿ ಬರುವ ಮೊದಲು ಜೀವನ ಹೇಗಿತ್ತು ಎಂದು ನಮಗೆ ನಿಜವಾಗಿಯೂ ನೆನಪಿಲ್ಲ.

## 'ಸೇಲ್ಸ್‌ಮೆನ್' ತರ ನೋಡ್ತಿದ್ರು

**ಕನ್ನಡದ ಖ್ಯಾತಿಗೆ ಯಶ್**





ತೆಲುಗು ಚಿತ್ರರಂಗದಲ್ಲಿ ಪ್ಯಾನ್ ಇಂಡಿಯಾ ಸಿನಿಮಾಗಳು ಬಂದಿವೆ ನಿಜ. ಈ ಕಾರಣದಿಂದ ತೆಲುಗು ಚಿತ್ರರಂಗದಿಂದ ಒಂದು ದೊಡ್ಡ ಸಿನಿಮಾ ಬರುತ್ತದೆ ಎಂದರೆ ಅದನ್ನು ಪ್ಯಾನ್ ಇಂಡಿಯಾ ಮಟ್ಟದಲ್ಲಿ ರಿಲೀಸ್ ಮಾಡಲು ಅನೇಕರು ಕಾದಿರುತ್ತಾರೆ. ಆದರೆ, 'ಕೆಜಿಎಫ್'ಗೂ ಮೊದಲು ಆ ರೀತಿ ಇರಲಿಲ್ಲ. ಅನೇಕರಿಗೆ ಕನ್ನಡದ ಸಿನಿಮಾಗಳ ಬಗ್ಗೆ ಗೊತ್ತೇ ಇರಲಿಲ್ಲ. ಯಶ್ ಎಲ್ಲವನ್ನೂ ಬದಲಸಿದರು.

ಯಶ್ ಅವರು 'ಕೆಜಿಎಫ್' ಚಿತ್ರವನ್ನು ವಿಶ್ವ ಮಟ್ಟಕ್ಕೆ ತೆಗೆದುಕೊಂಡು ಹೋದರು. ಈ ಚಿತ್ರವನ್ನು ಕೇವಲ ಕನ್ನಡದಲ್ಲಿ ಮಾತ್ರ ರಿಲೀಸ್ ಮಾಡುವ ಆಲೋಚನೆ ಪ್ರಶಾಂತ್ ನೀಲ್ ಹಾಗೂ ಹೊಂಬಾಳೆ ಫಿಲ್ಮ್ಸ್‌ಗೆ ಇತ್ತು ಎನ್ನಲಾಗಿತ್ತು. ಆದರೆ, ಇದನ್ನು ದೊಡ್ಡ ಹಂತಕ್ಕೆ ತೆಗೆದುಕೊಂಡು ಹೋಗಿದ್ದು ಯಶ್. ಈ ಬಗ್ಗೆ ಅವರು ಈ ಮೊದಲು ಮಾತನಾಡಿದ್ದರು. ಅವರ ಕೆಲಸವನ್ನು, ಅವರು ಹಾಕಿದ ಶ್ರಮವನ್ನು ಎಲ್ಲರೂ ಹೊಗಳಲೇ ಬೇಕು. ತೆಲುಗು ಚಿತ್ರರಂಗದಲ್ಲಿ ಪ್ಯಾನ್ ಇಂಡಿಯಾ ಸಿನಿಮಾಗಳು ಬಂದಿವೆ ನಿಜ. ಅನೇಕರಿಗೆ ಕನ್ನಡದ ಸಿನಿಮಾಗಳ ಬಗ್ಗೆ ಗೊತ್ತೇ ಇರಲಿಲ್ಲ.

ಯಶ್ ಕೆಜಿಎಫ್‌ನ ಪ್ಯಾನ್ ಇಂಡಿಯಾ ಮಾಡ್ತೀನಿ ಎಂದು ಹೋದಾಗ, ಸೇಲ್ಸ್‌ಮೆನ್ ರೀತಿ ನೋಡುತ್ತಿದ್ದರಂತೆ. ಆದರೆ, ಅದನ್ನು ಮತ್ತೊಂದು ಹಂತಕ್ಕೆ ತೆಗೆದುಕೊಂಡು ಹೋದ ಖ್ಯಾತಿ ಅವರಿಗೆ ಇದೆ. ಆಗ ಎದುರಾದ ಸಮಸ್ಯೆಗಳ ಬಗ್ಗೆ ಹೇಳಿದ್ದರು. 'ಕೆಜಿಎಫ್‌ನ ಪ್ಯಾನ್ ಇಂಡಿಯಾ ಎಂದು ತೆಗೆದುಕೊಂಡು ಹೋದಾಗ, ಸೇಲ್ಸ್ ಮೆನ್ ಬಂದಾಗ ಬೇಡ ನಮಗೆ ಅಂತಾರಲ್ಲ ಆ ರೀತಿ ಬೇಡ ಅಂತಿದ್ರು. ಕ್ರೆಡಿಟ್ ಕಾರ್ಡ್‌ಗೆ ಕರೆ ಮಾಡಿದ ತರ ಫೀಲ್. ಆದರೆ, ಈಗ ಮೆಂಬರ್‌ಶಿಪ್ ತರ ಈಗ ಕೇಳ್ತಾ ಇದಾರೆ' ಎಂದು ಯಶ್ ಹೇಳಿದ್ದರು. ಇದು ನಿಜವಾಗಿದೆ. 'ಕಾಂತಾರ: ಚಾಪ್ಟರ್ 1' ಸಿನಿಮಾ ಪ್ಯಾನ್ ಇಂಡಿಯಾ ಮಟ್ಟದಲ್ಲಿ ಬಿಡುಗಡೆ ಆಗಿ ಗಮನ ಸೆಳೆದಿದೆ. ಇಷ್ಟೇ ಅಲ್ಲ, 'ಸು ಫ್ರಮ್ ಸೋ' ಹೆಸರಿನ ಸಾಧಾರಣ ಬಜೆಟ್ ಚಿತ್ರ ಕೂಡ 100 ಕೋಟಿ ರೂಪಾಯಿ ಗಳಿಸಿದೆ.

## ಟೀಮ್ ಇಂಡಿಯಾ ಪಂದ್ಯದ ಟಿಕೆಟ್ ಬೆಲೆ ಕೇವಲ 60 ರೂ. ಮಾತ್ರ..!





ಭಾರತ ಮತ್ತು ಸೌತ್ ಆಫ್ರಿಕಾ ನಡುವಣ ಮೊದಲ ಟೆಸ್ಟ್ ಪಂದ್ಯದ ಟಿಕೆಟ್ ಮಾರಾಟ ಪ್ರಾರಂಭವಾಗಿದೆ. ಕೊಲ್ಕತ್ತಾದ ಈಡನ್ ಗಾರ್ಡನ್ಸ್ ಮೈದಾನದಲ್ಲಿ ನಡೆಯಲಿರುವ ಈ ಪಂದ್ಯದ ಟಿಕೆಟ್‌ಗಳನ್ನು ಬಂಗಾಳ ಕ್ರಿಕೆಟ್ ಸಂಸ್ಥೆ ಆನ್‌ಲೈನ್ ಮೂಲಕ ಮಾರಾಟ ಮಾಡುತ್ತಿದ್ದು, ಆಸಕ್ತರು ಅಧಿಕೃತ ವೆಬ್‌ಸೈಟ್ ಮೂಲಕ ಖರೀದಿಸಬಹುದು. ಭಾರತ ಮತ್ತು ಆಸ್ಟ್ರೇಲಿಯಾ ನಡುವಣ ಸರಣಿ ಮುಕ್ತಾಯದ ಬೆನ್ನಲ್ಲೇ ಟೀಮ್ ಇಂಡಿಯಾ ಮತ್ತೆ ರೆಡ್ ಬಾಲ್ ಕ್ರಿಕೆಟ್‌ನತ್ತ ಮರಳಲಿದೆ. ಅದು ಸಹ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್‌ನ ಹಾಲಿ ಚಾಂಪಿಯನ್ ಸೌತ್ ಆಫ್ರಿಕಾ ವಿರುದ್ಧದ ಸರಣಿಯೊಂದಿಗೆ. ಈ ಸರಣಿಯ ಮೊದಲ ಪಂದ್ಯದ ಟಿಕೆಟ್ ಬೆಲೆ ಕೇವಲ 60 ರೂ. ಎಂದರೆ ನಂಬಲೇಬೇಕು. ನವೆಂಬರ್ 14 ರಂದು ಕೊಲ್ಕತ್ತಾದ ಈಡನ್ ಗಾರ್ಡನ್ಸ್ ಮೈದಾನದಲ್ಲಿ ನಡೆಯಲಿರುವ ಭಾರತ ಮತ್ತು ಸೌತ್ ಆಫ್ರಿಕಾ ನಡುವಣ ಮೊದಲ ಟೆಸ್ಟ್ ಪಂದ್ಯದ ಟಿಕೆಟ್ ಮಾರಾಟ ಪ್ರಾರಂಭವಾಗಿದೆ. ಈ ಟಿಕೆಟ್ ದರಗಳು ಕೇವಲ 60 ರೂ.ನಿಂದ ಪ್ರಾರಂಭವಾಗುತ್ತಿರುವುದು ವಿಶೇಷ. ಅಂದರೆ ಒಂದು ದಿನದಾಟದ ಟಿಕೆಟ್ ಬೆಲೆ ಕೇವಲ 60 ರೂ. ಇನ್ನು ಐದು ದಿನದಾಟಗಳವರೆಗಿನ ಟಿಕೆಟ್ ಕೇವಲ 300 ರೂ.ಗೆ ಸಿಗಲಿದೆ. ಇನ್ನು ಮೇಲ್ದರ್ಜೆಯ ಗ್ಯಾಲರಿ ಟಿಕೆಟ್‌ಗಳನ್ನು 250 ರೂ.ಗೆ ಮಾರಾಟ ಮಾಡಲಾಗುತ್ತಿದೆ. ಅದರಂತೆ ಐದು ದಿನಗಳವರೆಗಿನ ಟಿಕೆಟ್ ಅನ್ನು 1250 ರೂ.ಗೆ ಖರೀದಿಸಬಹುದು.

ಭಾರತ ಮತ್ತು ಸೌತ್ ಆಫ್ರಿಕಾ ನಡುವಣ ಮೊದಲ ಟೆಸ್ಟ್ ಪಂದ್ಯವು ನವೆಂಬರ್ 14 ರಿಂದ ಕೊಲ್ಕತ್ತಾದ ಈಡನ್ ಗಾರ್ಡನ್ಸ್ ಮೈದಾನದಲ್ಲಿ ಶುರುವಾಗಲಿದೆ. ಇದಾದ ಬಳಿಕ ನವೆಂಬರ್ 22 ರಂದು ದ್ವಿತೀಯ ಟೆಸ್ಟ್ ಪಂದ್ಯ ಆರಂಭವಾಗಲಿದೆ. ಈ ಪಂದ್ಯವು ಗುವಾಹಟಿಯಲ್ಲಿ ನಡೆಯಲಿದೆ.

ಈ ಎರಡು ಟೆಸ್ಟ್ ಪಂದ್ಯಗಳ ನಡುವೆ ಭಾರತ ಮತ್ತು ಸೌತ್ ಆಫ್ರಿಕಾ ನಡುವೆ ಮೂರು ಏಕದಿನ ಪಂದ್ಯಗಳು ನಡೆಯಲಿದೆ. ಈ ಸರಣಿಯು ನವೆಂಬರ್ 30 ರಿಂದ ಶುರುವಾಗಲಿದೆ. ಇದಾದ ಬಳಿಕ ಡಿಸೆಂಬರ್ 9 ರಿಂದ 5 ಪಂದ್ಯಗಳ ಟಿ20 ಸರಣಿ ಆರಂಭವಾಗಲಿದೆ.

## ಬಿಹಾರ ಚುನಾವಣೆಯಲ್ಲಿ ರಾರಾಜಿಸಲಿದ್ದಾರೆ ವೈಭವ್



**ಭವಿಷ್ಯದ ಮತದಾರರ ಐಕಾನ್**

14 ವರ್ಷದ ಯುವ ಕ್ರಿಕೆಟಿಗ ವೈಭವ್ ಸೂರ್ಯವಂಶಿ, ಬಿಹಾರ ವಿಧಾನಸಭಾ ಚುನಾವಣೆಗೆ ಚುನಾವಣಾ ಆಯೋಗದಿಂದ 'ಭವಿಷ್ಯದ ಮತದಾರರ ಐಕಾನ್' ಆಗಿ ನೇಮಕಗೊಂಡಿದ್ದಾರೆ. ಯುವಜನರಲ್ಲಿ ಮತದಾನದ ಬಗ್ಗೆ ಜಾಗೃತಿ ಮೂಡಿಸುವುದು ಇದರ ಮುಖ್ಯ ಉದ್ದೇಶವಾಗಿದೆ. ವೈಭವ್ ಅವರು ಜನರಲ್ಲಿ ಪ್ರಜಾಪ್ರಭುತ್ವವನ್ನು ಬಲಪಡಿಸಲು ಮತ ಚಲಾಯಿಸುವಂತೆ ವಿಶೇಷ ಮನವಿ ಮಾಡಿದ್ದಾರೆ, ಇದು ಬಿಹಾರದಲ್ಲಿ ಮತದಾನದ ಪ್ರಮಾಣ ಹೆಚ್ಚಿಸಲು ಸಹಾಯಕವಾಗಿದೆ. ಭಾರತದ ಯುವ ಬ್ಯಾಟ್ಸ್‌ಮನ್ ವೈಭವ್ ಸೂರ್ಯವಂಶಿ ಚಿಕ್ಕ ವಯಸ್ಸಿನಲ್ಲಿಯೇ ತಮ್ಮದೇ ಆದ ಛಾಪು ಮೂಡಿಸಿಕೊಂಡಿದ್ದಾರೆ. ಕೇವಲ 14 ವರ್ಷ ವಯಸ್ಸಿನಲ್ಲೇ, ಅತ್ಯಂತ ಅನುಭವಿ ಬೌಲರ್‌ಗಳ ಮೇಲೂ ಸಿಕ್ಸರ್‌ಗಳನ್ನು ಸಿಡಿಸುವುದರಲ್ಲಿ ಹೆಸರುವಾಸಿಯಾಗಿರುವ ವೈಭವ್ ತಮ್ಮ ಬ್ಯಾಟಿಂಗ್ ಪರಾಕ್ರಮದಿಂದ ಈಗಾಗಲೇ ವಿಶ್ವ ಕ್ರಿಕೆಟ್‌ನಲ್ಲಿ ಸಂಚಲನ ಮೂಡಿಸಿದ್ದಾರೆ.

ಇದಕ್ಕೆ ಪೂರಕವಾಗಿ ಕೆಲವೇ ದಿನಗಳ ಹಿಂದೆ ಆರಂಭವಾಗಿರುವ ದೇಶಿ ಟೂರ್ನಿ ರಣಜಿಯಲ್ಲಿ ಬಿಹಾರ ತಂಡದ ಉಪನಾಯಕತ್ವವಹಿಸಿಕೊಂಡಿರುವ ವೈಭವ್ ಸೂರ್ಯವಂಶಿಗೆ ಇದೀಗ ಬಿಹಾರದಲ್ಲಿ ದೊಡ್ಡ ಜವಾಬ್ದಾರಿ ಸಿಕ್ಕಿದೆ. ಈ 14 ವರ್ಷದ ಪೋರನನ್ನು ಮುಂಬರುವ ಬಿಹಾರ ವಿಧಾನಸಭಾ ಚುನಾವಣೆಗೆ ಚುನಾವಣ ಐಕಾನ್ ಆಗಿ ನೇಮಕ ಮಾಡಲಾಗಿದೆ.

ವೈಭವ್ ಸೂರ್ಯವಂಶಿಗೆ ದೊಡ್ಡ ಜವಾಬ್ದಾರಿ ಬಿಹಾರ ವಿಧಾನಸಭಾ ಚುನಾವಣೆಯ ಬಗ್ಗೆ ಯುವಜನರಲ್ಲಿ ಜಾಗೃತಿ ಮೂಡಿಸಲು ಚುನಾವಣಾ ಆಯೋಗವು ಒಂದು ಪ್ರಮುಖ ಹೆಜ್ಜೆ ಇಟ್ಟಿದೆ. ಯುವ ಕ್ರಿಕೆಟಿಗ ವೈಭವ್ ಸೂರ್ಯವಂಶಿ ಅವರನ್ನು ''ಭವಿಷ್ಯದ ಮತದಾರರ ಐಕಾನ್'' ಆಗಿ ಆಯ್ಕೆ ಮಾಡಲಾಗಿದೆ. ಬಿಹಾರ ವಿಧಾನಸಭಾ ಚುನಾವಣೆ ಎರಡು ಹಂತಗಳಲ್ಲಿ ನಡೆಯಲಿದ್ದು, ಮೊದಲ ಹಂತ ನವೆಂಬರ್ 6 ರಂದು ಮತ್ತು ಎರಡನೇ ಹಂತ ನವೆಂಬರ್ 11 ರಂದು ನಡೆಯಲಿದೆ. ಮತದಾನದ ಮಹತ್ವವನ್ನು ಎತ್ತಿ ತೋರಿಸಲು ಮತ್ತು ಸಾರ್ವಜನಿಕ ಜಾಗೃತಿ ಮೂಡಿಸಲು ಚುನಾವಣಾ ಆಯೋಗವು ಪ್ರಮುಖ ವ್ಯಕ್ತಿಗಳನ್ನು ತನ್ನ ಐಕಾನ್‌ಗಳಾಗಿ ಬಳಸುತ್ತದೆ. ಅದಕ್ಕಾಗಿಯೇ ವೈಭವ್ ಸೂರ್ಯವಂಶಿ ಅವರಿಗೆ ಈ ಬಾರಿ ಈ ಜವಾಬ್ದಾರಿಯನ್ನು ನೀಡಲಾಗಿದೆ. ವಿಶೇಷ ಮನವಿ ಮಾಡಿದ ವೈಭವ್ ಚುನಾವಣಾ ಆಯೋಗ ಮತ್ತು ಪತ್ರಿಕಾ ಮಾಹಿತಿ ಬ್ಯೂರೋ ಕೂಡ ವೈಭವ್ ಸೂರ್ಯವಂಶಿ ಅವರ ವೀಡಿಯೊವನ್ನು ಹಂಚಿಕೊಂಡಿದ್ದಾರೆ.

## ಪಾಕಿಸ್ತಾನ್ ಪರ 38 ವರ್ಷದ ಆಟಗಾರನ ಪಾದಾರ್ಪಣೆ

**ಬ್ಯಾನ್ ಆಗಿದ್ದ ಅಫ್ರಿದಿ**



ಸೌತ್ ಆಫ್ರಿಕಾ ವಿರುದ್ಧದ 2ನೇ ಟೆಸ್ಟ್ ಪಂದ್ಯದಲ್ಲಿ ಟಾಸ್ ಗೆದ್ದಿರುವ ಪಾಕಿಸ್ತಾನ್ ತಂಡದ ನಾಯಕ ಶಾನ್ ಮಸೂದ್ ಬ್ಯಾಟಿಂಗ್ ಆಯ್ದುಕೊಂಡಿದ್ದಾರೆ. ಇದಕ್ಕೂ ಮುನ್ನ ನಡೆದ ಮೊದಲ ಟೆಸ್ಟ್ ಪಂದ್ಯದಲ್ಲಿ ಸೌತ್ ಆಫ್ರಿಕಾ ತಂಡಕ್ಕೆ 93 ರನ್‌ಗಳ ಸೋಲುಣಿಸುವಲ್ಲಿ ಪಾಕ್ ಪಡೆ ಯಶಸ್ವಿಯಾಗಿತ್ತು. ಪಾಕಿಸ್ತಾನ್ ಹಾಗೂ ಸೌತ್ ಆಫ್ರಿಕಾ ನಡುವಣ ದ್ವಿತೀಯ ಟೆಸ್ಟ್ ಪಂದ್ಯ ಶುರುವಾಗಿದೆ. ರಾವಲ್ಪಿಂಡಿಯಲ್ಲಿ ನಡೆಯುತ್ತಿರುವ ಈ ಪಂದ್ಯದ ಮೂಲಕ 38 ವರ್ಷದ ಆಸಿಫ್ ಅಫ್ರಿದಿ ಪಾಕಿಸ್ತಾನ್ ಪರ ಪಾದಾರ್ಪಣೆ ಮಾಡಿದ್ದಾರೆ.

ಈ ಮೂಲಕ ಪಾಕ್ ಪರ ಚೊಚ್ಚಲ ಪಂದ್ಯದಲ್ಲಿ ಕಣಕ್ಕಿಳಿದ 2ನೇ ಹಿರಿಯ ಆಟಗಾರ ಎನಿಸಿಕೊಂಡಿದ್ದಾರೆ. ಪಾಕಿಸ್ತಾನ್ ಪರ ಪಾದಾರ್ಪಣೆ ಮಾಡಿದ ಅತ್ಯಂತ ಹಿರಿಯ ಆಟಗಾರನ ದಾಖಲೆ ಮಿರಾನ್ ಬಕ್ಷ್ ಹೆಸರಿನಲ್ಲಿದೆ. 1955 ರಲ್ಲಿ ಭಾರತದ ವಿರುದ್ಧ ಕಣಕ್ಕಿಳಿದಾಗ ಮಿರಾನ್ ಬಕ್ಷ್ ಅವರ ವಯಸ್ಸು 47 ವರ್ಷ, 284 ದಿನಗಳು. ಈ ಮೂಲಕ ಪಾಕಿಸ್ತಾನ್ ಪರ ಪಾದಾರ್ಪಣೆ ಮಾಡಿದ ಅತ್ಯಂತ ಹಿರಿಯ ಆಟಗಾರ ಎನಿಸಿಕೊಂಡಿದ್ದರು. ಇದೀಗ 38ನೇ ವಯಸ್ಸಿನಲ್ಲಿ ಕಣಕ್ಕಿಳಿಯುವ ಮೂಲಕ ಆಸಿಫ್ ಅಫ್ರಿದಿ ಈ ಪಟ್ಟಿಯಲ್ಲಿ ದ್ವಿತೀಯ ಸ್ಥಾನ ಪಡೆದುಕೊಂಡಿದ್ದಾರೆ. ಆಸಿಫ್ ಅಫ್ರಿದಿ ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ ಅಸಾಧಾರಣ ಪ್ರದರ್ಶನ ನೀಡಿದ್ದಾರೆ. ಈವರೆಗೆ 57 ಪಂದ್ಯಗಳಲ್ಲಿ ಕಣಕ್ಕಿಳಿದಿರುವ ಅವರು ಒಟ್ಟು 198 ವಿಕೆಟ್‌ಗಳನ್ನು ಕಬಳಿಸಿದ್ದಾರೆ. ಇದರ ನಡುವೆ 13 ಬಾರಿ ಐದು ವಿಕೆಟ್‌ಗಳನ್ನು ಪಡೆದಿದ್ದಾರೆ.

ಹಾಗೆಯೇ 83 ಲಿಸ್ಟ್ ಎ ವಿಕೆಟ್‌ಗಳು ಮತ್ತು 78 ಟಿ20 ವಿಕೆಟ್ ಗಳನ್ನು ಹೊಂದಿದ್ದಾರೆ. ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ ಒಂದು ಶತಕವನ್ನೂ ಬಾರಿಸಿರುವ ಆಸಿಫ್ ಅಫ್ರಿದಿ, ಕಳೆದ ಕೆಲ ವರ್ಷಗಳಿಂದ ಪಾಕ್ ದೇಶೀಯ ಟೂರ್ನಿಗಳಲ್ಲಿ ಉತ್ತಮ ಪ್ರದರ್ಶನ ನೀಡಿತ್ತಾ ಬಂದಿದ್ದಾರೆ. ಹೀಗಾಗಿ 38ನೇ ವಯಸ್ಸಿನಲ್ಲಿ ಅಫ್ರಿದಿಗೆ ಪಾಕ್ ಟೆಸ್ಟ್ ತಂಡದಲ್ಲಿ ಸ್ಥಾನ ನೀಡಲಾಗಿತ್ತು. ಇದೀಗ 38ನೇ ವಯಸ್ಸಿನಲ್ಲಿ ಚೊಚ್ಚಲ ಟೆಸ್ಟ್ ಪಂದ್ಯವಾಡಲು ಕಣಕ್ಕಿಳಿದಿದ್ದಾರೆ. ಈ ಮೂಲಕ ಪಾಕ್ ಪರ ಟೆಸ್ಟ್ ಪಂದ್ಯವಾಡಿದ 2ನೇ ಹಿರಿಯ ಆಟಗಾರ ಎನಿಸಿಕೊಂಡಿದ್ದಾರೆ.

## ಎಲ್ಲಾ ಮಾದರಿಯ ಕ್ರಿಕೆಟ್‌ಗೆ ನಿವೃತ್ತಿ



ಟೀಂ ಇಂಡಿಯಾ ಆಟಗಾರ ಪರ್ವೇಜ್ ರಸೂಲ್ 36ನೇ ವಯಸ್ಸಿಗೆ ಕ್ರಿಕೆಟ್‌ಗೆ ವಿದಾಯ ಹೇಳಿದ್ದಾರೆ. ಜಮ್ಮು ಮತ್ತು ಕಾಶ್ಮೀರದಿಂದ ಭಾರತವನ್ನು ಪ್ರತಿನಿಧಿಸಿದ ಮೊದಲ ಕ್ರಿಕೆಟಿಗ ರಸೂಲ್. 1 ಏಕದಿನ ಹಾಗೂ 1 ಟಿ20 ಪಂದ್ಯ ಮಾತ್ರ ಆಡಿದರೂ, ದೇಶೀಯ ಕ್ರಿಕೆಟ್‌ನಲ್ಲಿ ಭಾರಿ ಯಶಸ್ಸು ಗಳಿಸಿದ್ದಾರೆ. ರಣಜಿ ಟ್ರೋಫಿಯಲ್ಲಿ ಗಮನಾರ್ಹ ಪ್ರದರ್ಶನ ನೀಡಿದ್ದ ಅವರು, ಜಮ್ಮು-ಕಾಶ್ಮೀರ ಕ್ರಿಕೆಟ್ ಬೆಳವಣಿಗೆಗೆ ನೀಡಿದ ಕೊಡುಗೆಯ ಬಗ್ಗೆ ತೃಪ್ತಿ ವ್ಯಕ್ತಪಡಿಸಿದ್ದಾರೆ. ಟೀಂ ಇಂಡಿಯಾ ಪ್ರಸ್ತುತ ಆಸ್ಟ್ರೇಲಿಯಾ ಪ್ರವಾಸದಲ್ಲಿದ್ದು, ಎರಡೂ ತಂಡಗಳು ಏಕದಿನ ಸರಣಿಯನ್ನು ಆಡುತ್ತಿವೆ. ಈ ಸರಣಿಯ ನಡುವೆ, ಭಾರತೀಯ ಆಟಗಾರನೊಬ್ಬ ಇದ್ದಕ್ಕಿದ್ದಂತೆ ನಿವೃತ್ತಿ ಘೋಷಿಸಿದ್ದಾರೆ. ಜೂನ್ 15, 2014 ರಂದು ಭಾರತದ ಪರ ಅಂತರರಾಷ್ಟ್ರೀಯ ಕ್ರಿಕೆಟ್‌ಗೆ ಪಾದಾರ್ಪಣೆ ಮಾಡಿದ್ದ ಮತ್ತು ಜಮ್ಮು ಮತ್ತು ಕಾಶ್ಮೀರದಿಂದ ಭಾರತದ ಪರ ಆಡಿದ ಮೊದಲ ಕ್ರಿಕೆಟಿಗ ಎಂಬ ಖ್ಯಾತಿ ಪಡೆದಿದ್ದ ಪರ್ವೇಜ್ ರಸೂಲ್ ತಮ್ಮ ವೃತ್ತಿಜೀವನಕ್ಕೆ ವಿದಾಯ ಹೇಳಿದ್ದಾರೆ. ಆದಾಗ್ಯೂ, ಟೀಂ ಇಂಡಿಯಾದಲ್ಲಿ ಪರ್ವೇಜ್‌ಗೆ ಹೆಚ್ಚಿನ ಅವಕಾಶಗಳು ಸಿಗಲಿಲ್ಲ. ಭಾರತ ಏಕದಿನ ಹಾಗೂ ಟಿ20 ತಂಡದಲ್ಲಿ ತಲಾ ಒಂದೊಂದು ಪಂದ್ಯವನ್ನಾಡಿದ ಅವರಿಗೆ ಆ ಬಳಿಕ ತಂಡದಲ್ಲಿ ಆಡುವ ಅವಕಾಶ ಸಿಗಲಿಲ್ಲ. 36ನೇ ವಯಸ್ಸಿಗೆ ಪರ್ವೇಜ್ ರಸೂಲ್ ನಿವೃತ್ತಿ ಭಾರತ ಪರ ಏಕದಿನ ಪಂದ್ಯ ಆಡಿದ ಜಮ್ಮು ಮತ್ತು ಕಾಶ್ಮೀರದ ಮೊದಲ ಕ್ರಿಕೆಟಿಗ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದ ಪರ್ವೇಜ್ ರಸೂಲ್, ಎಲ್ಲಾ ರೀತಿಯ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿದ್ದಾರೆ.

ಅಕ್ಟೋಬರ್ 18 ರಂದು ಬಿಸಿಸಿಐ ತಮ್ಮ ನಿರ್ಧಾರವನ್ನು ತಿಳಿಸಿರುವ ರಸೂಲ್, ಜೂನ್ 15, 2014 ರಂದು ಮಿರ್ಪುರದಲ್ಲಿ ನಡೆದಿದ್ದ ಬಾಂಗ್ಲಾದೇಶ ವಿರುದ್ಧದ ಏಕದಿನ ಪಂದ್ಯದಲ್ಲಿ ಟೀಂ ಇಂಡಿಯಾ ಪರ ತಮ್ಮ ಮೊದಲ ಏಕದಿನ ಪಂದ್ಯವನ್ನು ಆಡಿದ್ದರು. ಆ ಪಂದ್ಯದಲ್ಲಿ, ಅವರು 10 ಓವರ್‌ಗಳಲ್ಲಿ 60 ರನ್ ನೀಡಿ ಎರಡು ವಿಕೆಟ್‌ಗಳನ್ನು ಪಡೆದಿದ್ದರು.

## 88 ರನ್ ಬಾರಿಸಿಯೂ ಸೋಲಿನ ಹೊಣೆ ಹೊತ್ತ ಸ್ಮೃತಿ



ಮಹಿಳಾ ವಿಶ್ವಕಪ್‌ನಲ್ಲಿ ಭಾರತ ಮಹಿಳಾ ತಂಡವು ಇಂಗ್ಲೆಂಡ್ ವಿರುದ್ಧ ಸೋಲನುಭವಿಸಿದೆ. 289 ರನ್‌ಗಳ ಗುರಿ ಬೆನ್ನಟ್ಟುವಾಗ ಸ್ಮೃತಿ ಮಂಧಾನಾ ಅವರ ವಿಕೆಟ್ ಪ್ರಮುಖ ತಿರುವು ನೀಡಿತು. ಪಂದ್ಯದ ನಂತರ ಮಂಧಾನ, ತಮ್ಮ ಕಳಪೆ ಶಾಟ್ ಆಯ್ಕೆಯೇ ಸೋಲಿಗೆ ಕಾರಣವೆಂದು ಒಪ್ಪಿಕೊಂಡರು. ನಾಯಕಿ ಹರ್ಮನ್‌ಪ್ರೀತ್ ಕೌರ್ ಕೂಡ ಇದೇ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ತಂಡದ ವೈಫಲ್ಯಕ್ಕೆ ಮಂಧಾನಾ ಜವಾಬ್ದಾರಿ ವಹಿಸಿಕೊಂಡರು.

ಮಹಿಳಾ ವಿಶ್ವಕಪ್ 2025 ರ ಸ್ಪರ್ಧಿ ಎಂದು ಪರಿಗಣಿಸಲಾದ ಟೀಂ ಇಂಡಿಯಾ, ಸತತ ಮೂರು ಪಂದ್ಯಗಳಲ್ಲಿ ಸೋಲು ಅನುಭವಿಸುವ ಮೂಲಕ ದೊಡ್ಡ ಹಿನ್ನಡೆ ಅನುಭವಿಸಿದೆ. ದಕ್ಷಿಣ ಆಫ್ರಿಕಾ ಮತ್ತು ಆಸ್ಟ್ರೇಲಿಯಾ ವಿರುದ್ಧ ಸೋತಿದ್ದ ಟೀಂ ಇಂಡಿಯಾ ಇದೀಗ ಇಂಗ್ಲೆಂಡ್ ವಿರುದ್ಧವೂ ಸೋಲನುಭವಿಸಿದೆ. ಭಾನುವಾರ ಇಂದೋರ್‌ನ ಹೋಳ್ಕರ್ ಕ್ರೀಡಾಂಗಣದಲ್ಲಿ ನಡೆದ ಪಂದ್ಯವನ್ನು ಟೀಂ ಇಂಡಿಯಾ ಸುಲಭವಾಗಿ ಗೆಲ್ಲಬಹುದಿತ್ತು, ಆದರೆ ಸ್ಮೃತಿ ಮಂಧಾನ ಔಟಾದ ನಂತರ ಪರಿಸ್ಥಿತಿ ಸಂಪೂರ್ಣವಾಗಿ ಬದಲಾಯಿತು. ಅಂತಿಮವಾಗಿ ತಂಡಕ್ಕೆ 5 ರನ್‌ಗಳ ಸೋಲು ಎದುರಾಯಿತು. ಪಂದ್ಯದ ಬಳಿಕ ಮಾತನಾಡಿದ ನಾಯಕಿ ಹರ್ಮನ್‌ಪ್ರೀತ್ ಕೌರ್, ಸೋಲಿಗೆ ಕಳಪೆ ಶಾಟ್ ಆಯ್ಕೆಯೇ ಕಾರಣ ಎಂದು ದೂಷಿಸಿದರು ಮತ್ತು ಸ್ಮೃತಿ ಮಂಧಾನ ಅವರ ಹೆಸರನ್ನು ಉಲ್ಲೇಖಿಸಿದರು. ಸ್ಮೃತಿ ಮಂಧಾನ ವಿಕೆಟ್ ಪತನದ ಬಳಿಕ ಪಂದ್ಯ ನಮ್ಮ ಕೈಜಾರಿತು ಎಂದಿದ್ದಾರೆ. ಹಾಗೆಯೇ ಸ್ಮೃತಿ ಕೂಡ ಈ ಸೋಲಿಗೆ ನಾನಾ ಕಾರಣ ಎಂದಿದ್ದಾರೆ. ಇಂಗ್ಲೆಂಡ್ ನೀಡಿದ 289 ರನ್‌ಗಳ ಗುರಿಯನ್ನು ಬೆನ್ನಟ್ಟಿದ ಭಾರತ ಒಂದು ಹಂತದಲ್ಲಿ ಉತ್ತಮ ಸ್ಥಾನದಲ್ಲಿತ್ತು. ಆದರೆ ಕೊನೆಯಲ್ಲಿ ಗೆಲ್ಲುವ ಪಂದ್ಯವನ್ನು ಕೈಚೆಲ್ಲಿತು. ತಂಡದ ಪರ ಅತ್ಯಧಿಕ 88 ರನ್‌ಗಳ ಇನ್ನಿಂಗ್ಸ್ ಆಡಿದ ಮಂಧಾನ, ನಾಯಕಿ ಹರ್ಮನ್ಪ್ರೀತ್ ಕೌರ್ ಅವರೊಂದಿಗೆ 125 ಮತ್ತು ದೀಪ್ತಿ ಶರ್ಮಾ ಅವರೊಂದಿಗೆ 67 ರನ್‌ಗಳ ಪಾಲುದಾರಿಕೆಯನ್ನು ಹಂಚಿಕೊಂಡರು. ಆದಾಗ್ಯೂ, ತನ್ನ ಕಳಪೆ ಶಾಟ್ ಆಯ್ಕೆಯೇ ಸೋಲಿಗೆ ಕಾರಣ ಎಂದಿದ್ದಾರೆ. ಈ ಬಗ್ಗೆ ಮಾತನಾಡಿರುವ ಮಂಧಾನ, 'ನಮ್ಮ ಶಾಟ್ ಆಯ್ಕೆಯಲ್ಲಿ ನಾವು ಉತ್ತಮವಾಗಿ ಕಾರ್ಯನಿರ್ವಹಿಸಬಹುದಿತ್ತು ಎಂದು ನಾನು ಭಾವಿಸುತ್ತೇನೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966